ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಸೆಪ್ಟೆಂಬರ್ 5 ಶುಕ್ರವಾರ 2025

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 139 | ಪುಟಗಳು: 12

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ವಿಶ್ವ ಇಂಜಿನಿಯರ್‌ಗಳ ದಿನ, ಸರ್‌ಎಂವಿ ಜನ್ಮದಿನದ ಪ್ರಯುಕ್ತ

ನೂತನ ತಂತ್ರಜ್ಞಾನದ ಮೂಲಕ ಸರ್‌ಎಂವಿ ಅವರ ಬೃಹತ್ ಭಾವಚಿತ್ರ ರಚಿಸಿ ದಾಖಲೆ ನಿರ್ಮಿಸಲು ನಿರ್ಧಾರ



ಸರ್ ಎಂ.ವಿಶ್ವೇಶ್ವರಯ್ಯ

- **80x100 ಮೀಟರ್ ವಿಸ್ತೀರ್ಣದ ಭಾವಚಿತ್ರ ನಿರ್ಮಾಣ ಕಾರ್ಯ ವೀಕ್ಷಿಸಲು ಅವಕಾಶ**
- **ಸೆ.16ರಿಂದ ಎಂಐಟಿಯಲ್ಲಿ ಸಾರ್ವಜನಿಕ ಪ್ರದರ್ಶನ**

ಮೈಸೂರು, ಸೆ.4(ಜಿಎ)–ಮಹಾರಾಜ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ವಿಶ್ವ ಎಂಜಿನಿಯರ್‌ಗಳ ದಿನ ಹಾಗೂ ಸರ್ ಎಂ.ವಿಶ್ವೇಶ್ವರಯ್ಯನವರ ಜನ್ಮದಿನ ಪ್ರಯುಕ್ತ ಸೆ.15ರಂದು ಸರ್.ಎಂ. ವಿಶ್ವೇಶ್ವರಯ್ಯನವರ ಬೃಹತ್ ಭಾವಚಿತ್ರವನ್ನು ನೂತನ ತಂತ್ರಜ್ಞಾನದ ನೆರವಿನೊಂದಿಗೆ ರಚಿಸಿ, ವಿಶ್ವದಾಖಲೆ ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ಸಿವಿಲ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ.ಸಿ.ರಾಮಕೃಷ್ಣೇಗೌಡ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಲೇಜಿನ ಕ್ರೀಡಾಂಗಣದಲ್ಲಿ ಇದು 80X100 ಮೀಟರ್ ವಿಸ್ತೀರ್ಣದ್ದಾಗಿದ್ದು, ಐದು ವಿಭಿನ್ನ ವಿಭಾಗಗಳಲ್ಲಿ ವಿಶ್ವ ದಾಖಲೆ ನಿರ್ಮಿಸುವ ಉದ್ದೇಶ ಹೊಂದಿದೆ. ಈ ರೀತಿ ಮೈಸೂರು ಸಂಸ್ಥಾನದ ದಿವಾನರಾಗಿದ್ದ ಎಸ್.ಎಂ.ವಿ. ಅವರಿಗೆ ವಿಶೇಷ ರೀತಿಯ ಗೌರವ ಸಲ್ಲಿಸಲಾಗುತ್ತಿದೆ ಎಂದರು.

ಇದೇ ಮೊದಲ ಬಾರಿಗೆ ಕಾಲೇಜಿನ ವತಿಯಿಂದ ಸಿವಿಲ್ ಇಂಜಿನಿಯರಿಂಗ್ ವಿಭಾಗ 120ಕ್ಕೂ ಹೆಚ್ಚಿನ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ ಭಾವಚಿತ್ರ ನಿರ್ಮಾಣ ಮಾಡುತ್ತಿದ್ದು, ಅವರೊಂದಿಗೆ 35ಕ್ಕೂ ಹೆಚ್ಚಿನ ಉಪನ್ಯಾಸಕರು ಕೈ ಜೋಡಿಸಲಿದ್ದಾರೆ ಎಂದು ತಿಳಿಸಿದರು.

ಈ ಬೃಹತ್ ಭಾವಚಿತ್ರ ನಿರ್ಮಾಣಕ್ಕಾಗಿ ಮರಳು(ಎಂ ಸ್ಯಾಂಡ್) 40 ಮಿಮೀ ಅಳತೆಯ ಜಲ್ಲಿ ಕಲ್ಲು, ನೈಲಾನ್ ದಾರ ಹಾನಿಕಾರಕವಲ್ಲದ ಬಣ್ಣ ಹಾಗೂ ಮಣ್ಣು ಬಳಸಲಾಗುವುದು. ಇದಕ್ಕಾಗಿ ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗಿದ್ದು, 5 ದಿನಗಳ ಕಾಲ ಚಿತ್ರ ನಿರ್ಮಾಣ ಮಾಡಲಿದ್ದೇವೆ. ಇದಕ್ಕಾಗಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಹಾಗೂ ಡ್ರೋನ್ ಕ್ಯಾಮೆರಾ ಸ್ಕ್ಯಾನಿಂಗ್ ಮೂಲಕ ಚಿತ್ರ ರಚಿಸಲಾಗುವುದು. ಚಿತ್ರದ ಗುರುತಿಗಾಗಿ ಮೊಳೆಗಳನ್ನು ಬಳಸಲಾಗುವುದು ಎಂದು ಹೇಳಿದರು.

ಭಾವಚಿತ್ರ ನಿರ್ಮಾಣದಿಂದಾಗಿ ಯುವ ಇಂಜಿನಿಯರ್ ವಿದ್ಯಾರ್ಥಿಗಳಿಗೆ ಸೃಜನಶೀಲತೆ, ತಾಂತ್ರಿಕ ಕೌಶಲ್ಯ ಮತ್ತು ಸಾಮೂಹಿಕವಾಗಿ ತಂಡವಾಗಿ ಕಾರ್ಯ ನಿರ್ವಹಿಸಲು ಸಹಕಾರಿಯಾಗುತ್ತದೆ. ಸಾರ್ವಜನಿಕವಾಗಿ ಪ್ರದರ್ಶನವನ್ನು ಸೆ.16ರಂದು ಏರ್ಪಡಿಸಿದ್ದು, ನಿರ್ಮಾಣ ಕಾರ್ಯ ವೀಕ್ಷಿಸಲು ಅವಕಾಶವಿದೆ. ಇದರಿಂದಾಗಿ ವಿಶ್ವ ದಾಖಲೆ ನಿರ್ಮಿಸಲು ಮುಂದಾಗುತ್ತಿದ್ದು, ಈಗಾಗಲೇ ಗಿನ್ನಿಸ್ ವರ್ಲ್ಡ್ ರೆಕಾರ್ಡ್ ಹಾಗೂ ಇನ್ನಿತರ ದಾಖಲೆಗಳಿಗೆ ಅರ್ಜಿ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಸಾಯಿ ಕ್ಯಾಡ್ ಸಂಸ್ಥೆಯ ಮುಖ್ಯಸ್ಥ ಎಂ.ಮಂಜುನಾಥ್ ರೆಡ್ಡಿ ಮಾತನಾಡಿ, ಈ ಹಿಂದೆ ಚಿತ್ರದುರ್ಗ ಜಿಲ್ಲೆಯ ಗ್ರಾಮವೊಂದರಲ್ಲಿ ಆಂಜನೇಯಸ್ವಾಮಿ ದೇವಾಲಯದ ಬಳಿ, ಸ್ಥಳೀಯ ಐಟಿ ವಿದ್ಯಾರ್ಥಿಗಳನ್ನು ಬಳಸಿಕೊಂಡು ಸುಮಾರು 5 ಎಕರೆ ಜಮೀನಿನಲ್ಲಿ ರಚಿಸಿದ ಆಂಜನೇಯ ಚಿತ್ರ ಈ ರೀತಿಯ ಅತಿ ದೊಡ್ಡ ಆಂಜನೇಯ ಸ್ವಾಮಿಯ ಚಿತ್ರ ಎಂಬ ವಿಶ್ವ ದಾಖಲೆ ನಿರ್ಮಿಸಿತು. ಇದನ್ನು ಮನಸ್ಸಿನಲ್ಲಿರಿಸಿಕೊಂಡಿದ್ದ ತಮಗೆ ಎಂಐಟಿ ಕಾಲೇಜು ಸಂಪರ್ಕಕ್ಕೆ ಬಂದಾಗ ಇಲ್ಲಿಯೂ ಏಕೆ ಈ ರೀತಿಯ ದಾಖಲೆ ಮಾಡಬಾರದೆಂಬ ಚಿಂತನೆ ಮೂಡಿತು. ಹೀಗಾಗಿ ಅತ್ಯಾಧುನಿಕ ಸಾಫ್ಟ್‌ವೇರ್ ಬಳಸಿಕೊಂಡು, ಸಿವಿಲ್ ಎಂಜಿನಿಯರ್ ವಿದ್ಯಾರ್ಥಿಗಳಿಗೆ ತರಬೇತಿ ನೀಡಿ, ಈಗ ವಿಶ್ವೇಶ್ವರಯ್ಯ ನವರ ಬೃಹತ್ ಭಾವಚಿತ್ರ ರಚನೆಗೆ ಮುಂದಾಗಿದ್ದೇವೆ ಎಂದರು. ಸುದ್ದಿಗೋಷ್ಠಿಯಲ್ಲಿ ಆಡಳಿತಾಧಿಕಾರಿ ಎ.ಎಂ.ಅನಿರುದ್ಧ, ಸಹ ಪ್ರಾಧ್ಯಾಪಕ ರವಿಕಿರಣ್ ಉಪಸ್ಥಿತರಿದ್ದರು.

ಪತ್ರಿಕಾ ವಿತರಕರ ಕಾರ್ಯ ಶ್ರೇಷ್ಠವಾದುದು

ಮೈಸೂರಲ್ಲಿ ವಿಶ್ವ ಪತ್ರಿಕಾ ವಿತರಕರ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ಶ್ಲಾಘನೆ



ಮೈಸೂರಿನ ಚಿಕ್ಕಗಡಿಯಾರ ವೃತ್ತದಲ್ಲಿ ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟ ಹಾಗೂ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘ ಆಯೋಜಿಸಿದ್ದ 'ವಿಶ್ವ ಪತ್ರಿಕಾ ವಿತರಕರ ದಿನಾಚರಣೆ' ಕಾರ್ಯಕ್ರಮಕ್ಕೆ ಡಿಸಿ ಜಿ.ಲಕ್ಷ್ಮೀಕಾಂತರೆಡ್ಡಿ ಚಾಲನೆ ನೀಡಿದರು.

ಮೈಸೂರು, ಸೆ.4(ಎಂಟಿವೈ)–ಪತ್ರಿಕಾ ವಿತರಕರ ಕಾಯಕ ಶ್ರೇಷ್ಠ ವೃತ್ತಿಯಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಚಿಕ್ಕಗಡಿಯಾರ ವೃತ್ತದಲ್ಲಿ ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟ ಹಾಗೂ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಗುರುವಾರ ಬೆಳಗ್ಗೆ ಆಯೋಜಿಸಿದ್ದ 'ವಿಶ್ವ ಪತ್ರಿಕಾ ವಿತರಕರ ದಿನಾಚರಣೆ' ಕಾರ್ಯಕ್ರಮದ ಅಂಗವಾಗಿ ಕೇಕ್ ಕತ್ತರಿಸಿ ಉದ್ಘಾಟಿಸಿ ಮಾತನಾಡಿದ ಅವರು, ಪತ್ರಿಕಾ ವಿತರಕರು ಪ್ರತಿದಿನ ಮುಂಜಾನೆ ಪತ್ರಿಕಾ ವಿತರಣೆ ಮಾಡುವ ಮೂಲಕ ಶ್ರೇಷ್ಠ ಕಾಯಕ ಮಾಡುತ್ತಿರುವುದು ಶ್ಲಾಘನೀಯ. ಕೆಲವರಿಗೆ ದಿನಚರಿ ಆರಂಭವಾಗುವುದೇ ಪತ್ರಿಕೆಗಳನ್ನು ಓದುವ ಮೂಲಕ. ಹಾಗಾಗಿ ಮುಂಜಾನೆ ತಪ್ಪದೆ ಓದುಗರಿಗೆ ಪತ್ರಿಕೆ ತಲುಪಿಸುವುದು ಶ್ಲಾಘನೀಯ ಕಾರ್ಯ ಎಂದು ಪತ್ರಿಕಾ ವಿತರಕರಿಗೆ ಶುಭ ಕೋರಿದರು.

ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಮಾತನಾಡಿ, ಸಾಮಾಜಿಕ ಜಾಲತಾಣಗಳು ಎಷ್ಟೇ ಪ್ರಬಲವಾಗಿದ್ದರೂ ಇಂದಿಗೂ ಪತ್ರಿಕೆಗಳು ಮಹತ್ವ ಉಳಿಸಿಕೊಂಡಿವೆ. ಮುದ್ರಣ ಮಾಧ್ಯಮ ನಂಬಿಕೆ ಮತ್ತು ವಿಶ್ವಾಸಾರ್ಹತೆ ಉಳಿಸಿಕೊಂಡಿರುವುದೇ ಇದಕ್ಕೆ ಕಾರಣ ಎಂದು ಹೇಳಿದರು.

ನಗರಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ಮಾತನಾಡಿ, ಮುಂಜಾನೆ ಪಕ್ಷಿಗಳ ಕಲರವದಷ್ಟೇ ವೇಗವಾಗಿ ಪತ್ರಿಕಾ ವಿತರಕರು ತಮ್ಮ ವಿತರಣಾ ಕಾರ್ಯವನ್ನು ಪೂರ್ಣಗೊಳಿಸಿ ಸಮಾಜಕ್ಕೆ ವಿಶಿಷ್ಟ ಸೇವೆ ಸಲ್ಲಿಸುತ್ತಿದ್ದಾರೆ. ದೇಶದ ರಾಷ್ಟ್ರಪತಿಯಾಗಿದ್ದ ಎಪಿಜೆ ಅಬ್ದುಲ್ ಕಲಾಂ ಅವರು ಸಹ ಚಿಕ್ಕಂದಿನಲ್ಲಿ ಪತ್ರಿಕೆಗಳನ್ನು ಮನೆ ಮನೆಗೆ ತಲುಪಿಸುತ್ತಾ ದೇಶದ ಅತ್ಯುನ್ನತ ಸ್ಥಾನಕ್ಕೇರಿದರು. ಹಾಗಾಗಿ ಪತ್ರಿಕಾ ವಿತರಕರ ಸೇವೆ ಸ್ತುತ್ಯಾರ್ಹವಾದುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ಜೆ.ಎಸ್.ಹೋಮದೇವ, ಹೋಟೆಲ್ ಮಾಲೀಕರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ನಾರಾಯಣ ವಿ.ಹೆಗಡೆ, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ನಿಕಟ ಪೂರ್ವ ಅಧ್ಯಕ್ಷ ಎಸ್.ಟಿ.ರವಿಕುಮಾರ್, ನಿಕಟಪೂರ್ವ ಪ್ರಧಾನ ಕಾರ್ಯದರ್ಶಿ ಎಂ.ಸುಬ್ರಹ್ಮಣ್ಯ, ಕೆಯುಡಬ್ಲುಜೆ ರಾಜ್ಯ ಸಮಿತಿ ಸದಸ್ಯ ಬಿ.ರಾಘವೇಂದ್ರ, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ ಎಂ.ನಾಗರಾಜು, ಪ್ರಧಾನ ಕಾರ್ಯದರ್ಶಿ ಸಿ.ಶಿವಣ್ಣ, ಸಹ ಕಾರ್ಯದರ್ಶಿ ಎಸ್.ಚಿನ್ನರಾಜು, ಖಜಾಂಚಿ ಸಿ.ಡಿ.ಹರೀಶ್, ಸಂಘಟನಾ ಕಾರ್ಯದರ್ಶಿ ಆರ್.ಶಿವಕುಮಾರ್, ಕಾರ್ಯದರ್ಶಿ ಶ್ರೀಕಾಂತ್, ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ವಿತರಕ ಜವರಪ್ಪ, ನಿರ್ದೇಶಕರಾದ ಪಿ.ಕೆ.ಸತೀಶ್ ಬಾಬು, ಎ.ಆರ್.ಪ್ರಭಾಕರ್‌ರಾವ್, ಡಿ.ಹೇಮಂತ್ ಕುಮಾರ್, ಎಂ.ಶಿವಲಿಂಗ, ಎನ್.ನಂಜುಂಡಯ್ಯ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಸರ್ವ ಸದಸ್ಯರ ಸಭೆ

ಮೈಸೂರು, ಸೆ.4–ಮೈಸೂರಿನ ಆಂಧ್ರ ದೇವಾಂಗ ಸಂಘದ ಸರ್ವ ಸದಸ್ಯರ ಸಭೆ ಸೆ.7ರಂದು ಬೆಳಗ್ಗೆ 10.30ಕ್ಕೆ ಉತ್ತನಹಳ್ಳಿ ತ್ರಿಪುರ ಸುಂದರಿ ದೇವಸ್ಥಾನ ಬಳಿಯ ಮಾತಾಶ್ರೀ ಕಲ್ಯಾಣ ಮಂಟಪದಲ್ಲಿ ನಡೆಯಲಿದೆ. ಸಭೆಯ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಗಿರೀಶ್ ಬಾಬು ವಹಿಸಲಿದ್ದು, ಸಮಾಜದ ಆಯ್ದ ವಿದ್ಯಾರ್ಥಿಗಳಿಗೆ ಆರ್ಥಿಕ ಸಹಾಯ ವಿತರಿಸಲಾಗುವುದು. ಸಂಘಕ್ಕೆ ಹೊಸ ಅಧ್ಯಕ್ಷರು ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರ ಆಯ್ಕೆ ಪ್ರಕ್ರಿಯೆಯೂ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.



ಗುರುವಾರ ಕಾರ್ಯ ನಿಮಿತ್ತ ಮೈಸೂರಿಗೆ ಭೇಟಿ ನೀಡಿದ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಅವರನ್ನು ಸರ್ಕಾರಿ ಅತಿಥಿ ಗೃಹದಲ್ಲಿ ಶಾಸಕ ಜಿ.ಟಿ.ದೇವೇಗೌಡರು ಅಭಿನಂದಿಸಿದರು.

ವಾರ್ಷಿಕ ಮಹಾಸಭೆ

ಮೈಸೂರು, ಸೆ.4–ಮೈಸೂರು, ಮಂಡ್ಯ ಮತ್ತು ಕೊಡಗು ಜಿಲ್ಲಾ ಸೌಹಾರ್ದ ಸಹಕಾರಿ ಸಂಘಗಳ ಒಕ್ಕೂಟ ನಿಯಮಿತದ 2024–25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ಮೈಸೂರಿನ ಗುರು ರೆಸಿಡೆನ್ಸಿ ಹೋಟೇಲ್‌ನಲ್ಲಿ ಸೆ.18ರಂದು ಮಧ್ಯಾಹ್ನ 1 ಗಂಟೆಗೆ ಒಕ್ಕೂಟದ ಅಧ್ಯಕ್ಷ ಎಸ್.ಆರ್.ನಾರಾಯಣರಾವ್ ಅವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಗಣಿ ಲೂಟಿ, ಸಚಿವ ಹೆಚ್.ಕೆ.ಪಾಟೀಲ್ ಸಮಿತಿ ವರದಿ ಜಾರಿಗೆ ಎಸ್.ಅರ್.ಹಿರೇಮಠ್ ಆಗ್ರಹ



ಎಸ್.ಆರ್.ಹಿರೇಮಠ್

ಮೈಸೂರು, ಸೆ.4(ಜಿಎ)–ರಾಜ್ಯದ ಗಣಿ ಸಂಪತ್ತು ಲೂಟಿಯಿಂದ ಸರ್ಕಾರಕ್ಕೆ ಸುಮಾರು 1.5 ಲಕ್ಷ ಕೋಟಿ ರೂ. ನಷ್ಟವಾಗಿದೆ. ಇದನ್ನು ತಪ್ಪಿತಸ್ಥ ಅಧಿಕಾರಿಗಳು, ಲೂಟಿ ಮಾಡಿದ ಸಂಸ್ಥೆ, ವ್ಯಕ್ತಿಗಳಿಂದ ಭರಿಸಿಕೊಳ್ಳಬೇಕೆಂದು ಸಚಿವ ಹೆಚ್.ಕೆ.ಪಾಟೀಲ್ ಅವರ ನೇತೃತ್ವದ ಸಮಿತಿ ವರದಿ ನೀಡಿದೆ. ಇದನ್ನು ಸರ್ಕಾರ ತಪ್ಪದೇ ಜಾರಿಗೊಳಿಸಬೇಕೆಂದು ಸಾಮಾಜಿಕ ಹೋರಾಟಗಾರ ಎಸ್.ಆರ್.ಹಿರೇಮಠ್ ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವ ಹೆಚ್.ಕೆಪಾಟೀಲರ ಸಮಿತಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಏಳು ಪುಟಗಳ ಸುದೀರ್ಘ ವರದಿ ನೀಡಿದೆ. ಅಧಿಕಾರಸ್ಥರು, ರಾಜಕಾರಣಿಗಳು, ಮೊದಲಾದವರ ಅಕ್ರಮ ಕೂಟ ಗಣಿಸಂಪತ್ತು ಲೂಟಿಗೆ ಕಾರಣವಾಗಿದೆ ಎಂದು ಆರೋಪಿಸಿದ್ದಾರೆ ಎಂದು ತಿಳಿಸಿದರು.

ಈ ನಷ್ಟದ ಹಣ ವಸೂಲಾತಿಗಾಗಿ ಪ್ರಾಮಾಣಿಕ ಹಾಗೂ ದಕ್ಷ ರಿಕವರಿ ಆಯುಕ್ತರನ್ನು ನೇಮಕ ಮಾಡಿ ಅವರಿಗೆ ಸ್ಪಷ್ಟ ಹಾಗೂ ಹೆಚ್ಚಿನ ಅಧಿಕಾರ ನೀಡಬೇಕು. ತ್ವರಿತ ವಿಲೇವಾರಿ ನ್ಯಾಯಾಲಯ ಸ್ಥಾಪಿಸಬೇಕು. ಈಗಿನ ಗಣಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರು ಸುಪ್ರೀಂಕೋರ್ಟ್ ಆದೇಶ ಉಲ್ಲಂಘಿಸಿ 13 ಡಂಪ್‌ಗಳನ್ನು ಸಂಡೂರು ತಾಲೂಕಿನಲ್ಲಿ ಹರಾಜು ಮಾಡಿದ್ದು, ಇವರ ಬದಲಿಗೆ ದಕ್ಷ ಹಾಗೂ ಪ್ರಾಮಾಣಿಕ ಸಚಿವರೊಬ್ಬರನ್ನು ಗಣಿ ಸಚಿವರನ್ನಾಗಿ ನೇಮಕ ಮಾಡಬೇಕೆಂದು ಆಗ್ರಹಿಸಿದರು.

ಈ ವರದಿಯನ್ನು ನಿರ್ಲಕ್ಷಿಸಿದಲ್ಲಿ ಈ ಮೊದಲಿನ ರೀತಿ ದೊಡ್ಡ ಜನಾಂದೋಲನವನ್ನೇ ಆರಂಭಿಸ ಬೇಕಾ ಗುತ್ತದೆ ಎಂದು ಎಚ್ಚರಿಸಿ, ಈ ಹಿಂದೆಯೂ ತಮ್ಮ ನೇತೃತ್ವದಲ್ಲಿ ನಡೆದ ಹೋರಾಟದ ಫಲವಾಗಿ ಹಲವರು ಜೈಲು ಪಾಲಾದುದನ್ನು ಉದಾಹರಿಸಿದರು.

ಸುದ್ದಿಗೋಷ್ಠಿಯಲ್ಲಿ ಉಗ್ರನರಸಿಂಹೇಗೌಡ, ಅಭಿರುಚಿ ಗಣೇಶ್ ಉಪಸ್ಥಿತರಿದ್ದರು.

ಪ್ರಮಾಣ ಪತ್ರ ವಿತರಣೆ...



ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ಅಂಗ ಸಂಸ್ಥೆ ವಿವೇಕ ಗ್ರಾಮೀಣ ಜೀವನಾಧಾರ ಕೇಂದ್ರ, ಜಯಪುರ ಶಾಖೆಯಲ್ಲಿ ಫ್ಯಾಷನ್ ಡಿಸೈನಿಂಗ್, ಬ್ಯೂಟಿಷಿಯನ್ ತರಬೇತಿ ಪಡೆದವರಿಗೆ ಪ್ರಮಾಣ ಪತ್ರ ವಿತರಣೆ, ನೂತನ ಅಭ್ಯರ್ಥಿಗಳಿಗೆ ಸ್ವಾಗತ ಕಾರ್ಯಕ್ರಮವನ್ನು ನಿವೃತ್ತ ಐಪಿಎಸ್ ಅಧಿಕಾರಿ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಚಮನ್ ಲಾಲ್ ಉದ್ಘಾಟಿಸಿ, ಪ್ರಶಿಕ್ಷಣಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಿದರು. ಎಸ್‌ವಿವೈಎಂನ ನೀರು–ನೈರ್ಮಲ್ಯ ಕಾರ್ಯಕ್ರಮ ನಿರ್ದೇಶಕ ಡಾ.ಡೆನ್ನಿಸ್ ಡಿ.ಚೌಹಾಣ್, ಜಯಪುರ ಗ್ರಾಪಂ ಪಿಡಿಓ ಬಸವಣ್ಣ, ಚಿನ್ನಾಮಹಾದೇವ, ಅಬ್ದುಲ್ ರಶೀದ್, ಕ್ಷೇತ್ರ ಮಾರ್ಗದರ್ಶಕರಾದ ಸಿದ್ಧರಾಜು, ರುಕ್ಮಿಣಿ, ರವಿ, ನೇತ್ರಾವತಿ, ಪಲ್ಲವಿ, ಜಯಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯಶಿಕ್ಷಕಿ ಜಯಭಾರತಿ, ಸಹಶಿಕ್ಷಕಿ ಆಶಾ ಇದ್ದರು.

ಸ್ಪರ್ಧೆಯಲ್ಲಿ ಸೋಲು ಸಹ ಸ್ವೀಕಾರಾರ್ಹ

ಮೈವಿವಿ ಕುಲಸಚಿವೆ ಎಂ.ಕೆ.ಸವಿತಾ ಅಭಿಮತ



ಮೈಸೂರಿನ ಜೆಎಸ್‌ಎಸ್ ಕಲಾ, ವಾಣಿಜ್ಯ–ವಿಜ್ಞಾನ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸ್ನಾತಕ ವಿಭಾಗದ ಸಾಂಸ್ಕೃತಿಕ, ಕ್ರೀಡಾ ವೇದಿಕೆಗಳ ಕಾರ್ಯಕ್ರಮವನ್ನು ಮೈಸೂರು ವಿವಿ ಕುಲಸಚಿವೆ ಎಂ.ಕೆ.ಸವಿತಾ ಉದ್ಘಾಟಿಸಿದರು.

ಮೈಸೂರು, ಸೆ.4–ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ ಬೆಳೆಯುತ್ತದೆ. ಪ್ರಶಸ್ತಿ ಮತ್ತು ಬಹುಮಾನಗಳಿಗೆ ಮಾತ್ರವೇ ಸ್ಪರ್ಧೆಗಳಲ್ಲಿ ಭಾಗವಹಿಸಬಾರದು. ಸೋಲೂ ಕೂಡ ಸ್ವೀಕಾರಾರ್ಹವೇ ಆಗಿರುತ್ತದೆ. ಆದ್ದರಿಂದ ಸೋಲನ್ನು ಸವಾಲಾಗಿ ಸ್ವೀಕರಿಸಿ ಮುನ್ನಡೆಯಬೇಕು ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವೆ (ಆಡಳಿತ) ಶ್ರೀಮತಿ ಎಂ.ಕೆ. ಸವಿತಾ ಹೇಳಿದರು.

ಮೈಸೂರು ನಗರದ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸ್ನಾತಕ ವಿಭಾಗದ ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಸ್ವಯಂಪ್ರೇರಿತರಾಗಿ ಭಾಗವಹಿಸಬೇಕು. ಸಾಧ್ಯವಾದಷ್ಟು ಮೊಬೈಲ್ ಎಂಬ ಕೆಟ್ಟ ಸಂಸ್ಕೃತಿಯಿಂದ ಹೊರಬಂದು ಪುಸ್ತಕ ಸಂಸ್ಕೃತಿಯನ್ನು ಬೆಳೆಸಿಕೊಳ್ಳಿ, ಮಾರ್ಗದರ್ಶಕರ ಅಗತ್ಯತೆ ಇಂದಿನ ವಿದ್ಯಾರ್ಥಿಗಳಿಗೆ ಬೇಕಿದೆ ಎಂದು ಹೇಳಿದರು.

ಜಿಲ್ಲಾ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಸಹಾಯಕ ತರಬೇತುದಾರ ಮತ್ತು ರಾಜ್ಯಮಟ್ಟದ ಹಾಕಿ ಕ್ರೀಡಾಪಟು ಕು. ಎಸ್.ಪಿ. ಕೃತಿಕ ಮಾತನಾಡಿ, ಶಿಸ್ತು, ಸಮರ್ಪಣೆ ಮತ್ತು ನಿರ್ಧಾರ ಈ ಮೂರು ಸೂತ್ರಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು. ಇವುಗಳು ವಿದ್ಯಾರ್ಥಿಗಳನ್ನು ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢಗೊಳಿಸುತ್ತವೆ. ವಿದ್ಯೆ, ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳು ಬದುಕಿನ ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸುವಂತೆ ಮಾಡುತ್ತವೆ ಎಂದರು.

ಕಾಲೇಜಿನ ಪ್ರಾಂಶುಪಾಲ ಡಾ. ಎಂ. ಪ್ರಭು, ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಕಾರ್ಯನಿರ್ವಾಹಕ ಪ್ರೊ.ಬಿ.ವಿ.ಸಾಂಬಶಿವಯ್ಯ ಮಾತನಾಡಿದರು. ಸಾಂಸ್ಕೃತಿಕ ವೇದಿಕೆ ಸಂಚಾಲಕ ಶಿವ, ಕ್ರೀಡಾ ವೇದಿಕೆ ಸಂಚಾಲಕ ಕಾರ್ತಿಕ್ ಉಪಸ್ಥಿತರಿದ್ದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಸೆ.4–ಸೆ.6ರಂದು ಬೆಳಗ್ಗೆ 10ರಿಂದ ಸಂಜೆ 5:30ರವರೆಗೆ ವಾಜಮಂಗಲ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಅವಧಿಯ ನಿರ್ವಹಣಾ ಕಾಮಗಾರಿ ಹಮ್ಮಿಕೊಳ್ಳಲಾಗಿರುವುದರಿಂದ ಹಾರೋಹಳ್ಳಿ, ಮೆಲ್ಲಹಳ್ಳಿ, ಹಲಗಯ್ಯನಹುಂಡಿ, ಹಳ್ಳಿಕೆರೆಹುಂಡಿ, ಶಿವಪುರ, ಲಕ್ಷ್ಮಿಪುರ, ಬನ್ನೂರು ಮುಖ್ಯರಸ್ತೆ, ಟಿ.ನರಸೀಪುರ ಮುಖ್ಯರಸ್ತೆ, ನಾಡನಹಳ್ಳಿ, ಭುಗತಹಳ್ಳಿ, ವಾಜಮಂಗಲ, ವರುಣ, ದಂಡಿಕೆರೆ, ಪಿಲ್ಲಹಳ್ಳಿ, ಚಿಕ್ಕಹಳ್ಳಿ, ವಸಂತನಗರ, ವರಕೋಡು, ಯಾಂದಳ್ಳಿ, ಶಾಂತವೇರಿ ಗೋಪಾಲ ಗೌಡನಗರ, ಕೆಂಪೇಗೌಡನ ಹುಂಡಿ, ಲಾಲ್‌ಬಹದ್ದೂರ್‌ಶಾಸ್ತ್ರಿನಗರ, JSS ಬಡಾವಣೆ MYCEM ಕಾಲೇಜು ಹಾಗೂ ಸುತ್ತ–ಮುತ್ತ ವಿದ್ಯುತ್ ವ್ಯತ್ಯಯವಾಗಲಿದೆ.

ನಿಧನ

ಎಂ.ಡಿ.ನಿಖಿಲ್



ಮೈಸೂರು, ಸೆ. 4–ಉದ್ಯಮಿ ಹಾಗೂ ಮೈಸೂರಿನ ವಿಜಯನಗರ 4ನೇ ಹಂತದ ನಿವಾಸಿ ಎಂ.ಡಿ. ನಿಖಿಲ್ (35) ಸೆ.2ರಂದು ರಸ್ತೆ ಅಪಘಾತದಲ್ಲಿ ನಿಧನರಾದರು.

ಮೃತರು ತಂದೆ ದೊಡ್ಡಯ್ಯ (ನಿವೃತ್ತ ರೆವಿನ್ಯೂ ಇನ್ಸ್‌ಪೆಕ್ಟರ್), ತಾಯಿ ಹೇಮಾ ದೊಡ್ಡಯ್ಯ, ಸಹೋದರಿ ಎಂ.ಡಿ.ನಮಿತಾ, ಪತ್ನಿ ಗಾಯತ್ರಿ, ಪುತ್ರಿ ಐರಾ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಕಾಳಿಸಿದ್ದನಹುಂಡಿಯಲ್ಲಿರುವ ಮೃತರ ಕುಟುಂಬದ ತೋಟದಲ್ಲಿ ಗುರುವಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಡಿ.ಎಸ್.ನಾಗೇಂದ್ರ



ಪತ್ರಿಕಾ ವಿತರಕ ಹಾಗೂ ಬೋಗಾದಿ ಎರಡನೇ ಹಂತದ ನಿವಾಸಿ ಡಿ.ಎಸ್.ನಾಗೇಂದ್ರ (68) ಗುರುವಾರ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯನ್ನು ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶಾರದಮ್ಮ



ಮೈಸೂರಿನ ಸರಸ್ವತಿಪುರಂ, 5ನೇ ಮುಖ್ಯರಸ್ತೆ ನಿವಾಸಿ ಲೇಟ್ ಶ್ರೀನಿವಾಸ್ ಅವರ ಪತ್ನಿ ಶಾರದಮ್ಮ (87) ಗುರುವಾರ ನಿಧನರಾದರು. ಮೃತರು ಪುತ್ರಿ ಕವಯಿತ್ರಿ ಸೌಗಂಧಿಕಾ ವಿ.ಜೋಯಿಸ್ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಗುರುವಾರ ಮಧ್ಯಾಹ್ನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ನೆರವೇರಿಸಲಾಯಿತು ಎಂದು ಕುಟುಂಬ ವರ್ಗ ತಿಳಿಸಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

05.09.2025 ಶುಕ್ರವಾರ, ಮಳೆ ನಕ್ಷತ್ರ: ಪುಬ್ಬ 31.08.2025 ರಿಂದ 13.09.2025
ವಿಶ್ವವಸು ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಭಾದ್ರಪದ ಮಾಸ, ಶುಕ್ಲ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ಶ್ರವಣ, ರಾಹುಕಾಲ: ಬೆಳಗ್ಗೆ 10.30ರಿಂದ 12ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಯಕೃತ್ತಿನ ಸಮಸ್ಯೆಗಳು ಕುರಿತು ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9ರಿಂದ.
- **ಕಾವೇರಿ ಆಯುರ್ವೇದ ಆಸ್ಪತ್ರೆ:** ಕಣ್ಣಿನ ಸೋಂಕು ಮತ್ತು ಕಣ್ಣಿನಲ್ಲಿ ಮಾಂಸ ಬೆಳವಣಿಗೆ ಶಿಬಿರ–ಕಣ್ಣು ಕೆಂಪಾಗುವುದು, ಕಣ್ಣಿನಲ್ಲಿ ಏನೋ ಇರುವ ಅನುಭವ, ಕಣ್ಣಿನಿಂದ ಸೋರುವುದು, ಕಣ್ಣು ತುರಿಸುವುದು, ಶುಷ್ಕ ನೇತ್ರ, ಆಭರಣ ಮತ್ತು ಸೌಂದರ್ಯ ವರ್ಧಕಗಳಿಂದ ಆಗಿರುವ ಚರ್ಮದ ಅಲರ್ಜಿ ಮತ್ತು ಚರ್ಮಕ್ಕೆ ಸಂಬಂಧಪಟ್ಟ ಕಾಯಿಲೆಗೆ ಚಿಕಿತ್ಸೆ, ಯುವಕರ ಮಾನಸಿಕ ಆರೋಗ್ಯ ಜಾಗೃತಿ, ಗರ್ಭ ಸಂಸ್ಕಾರ ಕುರಿತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ರಿಂದ.
- **ರಾಮಸನ್ಸ್ ಬೊಂಬೆ ಮನೆ:** ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ.
- **ಅನಾಥಾಲಯ :** ತಾತಯ್ಯ ಜಯಂತಿ ಅಂಗವಾಗಿ ರಕ್ತದಾನ ಶಿಬಿರ, ಸ್ಥಳ: ಅನಾಥಾಲಯ ಆವರಣ, ವೀಣೆಶೇಷಣ್ಣ ರಸ್ತೆ, ಸುಬ್ಬರಾಯನಕೆರೆ ಸಮೀಪ, ಬೆಳಗ್ಗೆ 10.30 ರಿಂದ.
- **ಮೈಸೂರು ವಿಶ್ವವಿದ್ಯಾನಿಲಯ ಸಂಶೋಧಕರ ಸಂಘ, ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟ** : ನಾಗ, ಮಹಾರ್, ಹೊಲೆಯ, ಛಲವಾದಿ ಸಮುದಾಯದ ಸಾಂಸ್ಕೃತಿಕ ಮತ್ತು ಐತಿಹಾಸಿಕ ಹಿನ್ನೆಲೆ ಕುರಿತು ವಿಚಾರ ಸಂಕಿರಣ, ಸಾನ್ನಿಧ್ಯ : ಶ್ರೀ ಜ್ಞಾನಪ್ರಕಾಶ್ ಸ್ವಾಮೀಜಿ, ಉದ್ಘಾಟನೆ : ಶಾಸಕ ಪಿ.ಎಂ. ನರೇಂದ್ರಸ್ವಾಮಿ, ಮುಖ್ಯ ಅತಿಥಿಗಳು : ಶಾಸಕ ಎ.ಆರ್. ಕೃಷ್ಣಮೂರ್ತಿ, ಕರ್ನಾಟಕ ರಾಜ್ಯ ಎಸ್ಸಿ, ಎಸ್ಟಿ ನೌಕರರ ಸಂಘದ ಅಧ್ಯಕ್ಷ ಡಿ. ಚಂದ್ರಶೇಖರಯ್ಯ, ನಿವೃತ್ತ ಇಂಜಿನಿಯರ್ ಹೆಚ್.ಆರ್. ಶಿವರಾಮು, ಅಧ್ಯಕ್ಷತೆ : ಮಾಜಿ ಮೇಯರ್ ಪುರುಷೋತ್ತಮ್, ಸ್ಥಳ: ವಿಜ್ಞಾನ ಭವನ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.
- **ದಸರಾ ಲಲಿತಕಲೆ ಮತ್ತು ಕರಕುಶಲ ಕಲೆ ಉಪಸಮಿತಿ, ಕರ್ನಾಟಕ ಶಿಲ್ಪಕಲಾ ಅಕಾಡೆಮಿ, ಬೆಂಗಳೂರು, ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು :** ಟೆರಾಕೋಟಾ ಭಿತ್ತಿ ಶಿಲ್ಪಕಲಾ ಶಿಬಿರ, ಸ್ಥಳ: ಕಾವಾ ಕಾಲೇಜು ಆವರಣ, ಬೆಳಗ್ಗೆ 11.30 ರಿಂದ.
- **ಶ್ರೀ ದುರ್ಗಾ ಫೌಂಡೇಷನ್ :** ವಾರ್ಷಿಕೋತ್ಸವದ ಅಂಗವಾಗಿ ವಿವಿಧ ಕ್ಷೇತ್ರದ ಸಾಧಕರಿಗೆ ಮೈಸೂರು ಸೇವಾ ರತ್ನ ಪ್ರಶಸ್ತಿ ಪ್ರದಾನ, ಮುಖ್ಯ ಅತಿಥಿಗಳು : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಸಮಾಜ ಸೇವಕ ರಘುರಾಮ್ ವಾಜಪೇಯಿ, ಕರ್ನಾಟಕ ಸುಗಮ ಸಂಗೀತ ಪರಿಷತ್ ಅಧ್ಯಕ್ಷ ಡಾ. ನಾಗರಾಜ್ ವಿ. ಬೈರಿ, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಮುತ್ತಣ್ಣ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಡಾ. ಶೋಭರಾಣಿ, ಸ್ಥಳ: ಸಿಪಾಯಿ ಗ್ರಾಂಡ್ ಹೋಟೆಲ್, ಎಂ.ಜಿ. ರಸ್ತೆ, ಬೆಳಗ್ಗೆ 11.30ಕ್ಕೆ.
- **ಭೀಮ ಬಲ ಬಳಗ :** ಅಸ್ಪೃಶ್ಯ ಸಮುದಾಯದ ಅಪ್ರತಿಮ ಹೋರಾಟಗಾರ ಹಾಗೂ ದಲಿತರ ಶಿಕ್ಷಣಕ್ಕಾಗಿ ತನ್ನ ಜೀವನವನ್ನೇ ಪಣಕ್ಕಿಟ್ಟ ಕ್ರಾಂತಿಕಾರಿ ಶ್ರೀ ಅಯ್ಯನ್ ಕಾಳಿಯವರ 162ನೇ ಜನ್ಮ ದಿನಾಚರಣೆ, ಉಪಸ್ಥಿತರು : ಶಾಸಕ ಎ.ಆರ್. ಕೃಷ್ಣಮೂರ್ತಿ, ಮಾಜಿ ಸಚಿವರಾದ ಹೆಚ್.ಕೆ. ಕುಮಾರಸ್ವಾಮಿ, ವೈ.ಸಂಪಂಗಿ, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಡಾ. ನಟರಾಜ್ ಶಿವಣ್ಣ, ಡಾ. ನವೀನ್ ಮೌರ್ಯ, ಬೆಂಗಳೂರು ವಿವಿ ಸಂಶೋಧನಾ ವಿದ್ಯಾರ್ಥಿ ಒಕ್ಕೂಟದ ಅಧ್ಯಕ್ಷ ಚಂದ್ರು ಪೆರಿಯಾರ್, ದಲಿತ ವಿದ್ಯಾರ್ಥಿ ಒಕ್ಕೂಟದ ಮಾಜಿ ಅಧ್ಯಕ್ಷ ಸಂದೇಶ್ ಮಣಗಳ್ಳಿ, ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ನಿವೃತ್ತ ನಿರ್ದೇಶಕ ಡಾ. ಕೃಷ್ಣಯ್ಯ, ಮಹಾರಾಣಿ ಕಾಲೇಜು ನಿವೃತ್ತ ಪ್ರಿನ್ಸಿಪಾಲ್ ಮಲ್ಲಿಕಾರ್ಜುನಸ್ವಾಮಿ, ಸ್ಥಳ: ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಸಂಜೆ 4ಕ್ಕೆ.
- **ಎಸ್‌ಪಿವಿಜಿಎಂಸಿ ಟ್ರಸ್ಟ್ :** 64ನೇ ಪಾರಂಪರಿಕ ಸಂಗೀತೋತ್ಸವ, ಸಂಜೆ 5.30 ರಿಂದ ಗಮಕ ವಾಚನ ಕಾರ್ಯಕ್ರಮ, ಕಾವ್ಯ : ಕಾಳಿದಾಸನ ಮೇಘದೂತ, ವಾಚನ : ವಿದುಷಿ ಧರಿತ್ರಿ ಆನಂದರಾವ್, ವ್ಯಾಖ್ಯಾನ: ವಿದ್ವಾನ್ ಟಿ.ಎನ್. ಪ್ರಭಾಕರ್, ಸಂಜೆ 6.45 ರಿಂದ ವಿದ್ವಾನ್ ರಮಣ ಬಾಲಚಂದರ್ ಅವರಿಂದ ವೀಣಾವಾದನ, ವಿದ್ವಾನ್ ಸುಮೇಶ್ ನಾರಾಯಣ್–ಮೃದಂಗ, ಪಂಡಿತ್ ಇಶಾನ್ ಘೋಷ್–ತಬಲಾ, ಸ್ಥಳ: 8ನೇ ಕ್ರಾಸ್, ವಿವಿ ಮೊಹಲ್ಲಾ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸ್ವಾತಂತ್ರ್ಯ ದೀಪ ಸ್ವರಾಜ್ಯ ಸೇನಾನಿಗಳ ಕುರಿತ ಬಾನುಲಿ ಸರಣಿ, ಪ್ರಸ್ತುತಿ : ನಿತೀಶ್ ಡಂಬಳ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಅಂಬಯ್ಯನುಲಿ ಹಾಗೂ ಬಿ. ಶ್ರೀರಾಂಭಟ್, ವ್ಯಾಖ್ಯಾನ –ಕೆ. ಎಲ್. ಪದ್ಮಿನಿ ಹೆಗಡೆ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ–ಅನಿಮಿಯಾ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮ ಕುರಿತು ಡಾ. ಬಿ. ಮಲ್ಲಿಕಾ ಅವರೊಂದಿಗೆ ಮಾತುಕತೆ ನಂತರ ರಾಷ್ಟ್ರೀಯ ನೇತ್ರದಾನ ಪಾಕ್ಷಿಕದ ಸಂದರ್ಭದಲ್ಲಿ ಹಿರಿಯ ನಾಗರೀಕರ ಕಣ್ಣುಗಳ ಆರೋಗ್ಯ ಕುರಿತು ನೇತ್ರತಜ್ಞರಾದ ಡಾ. ಪಲ್ಲವಿ ಪ್ರಭು ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್ ಮತ್ತು ಡಾ. ಕುಲದೀಪ್ ಎನ್., 9.30 ಗಾಂಧಿ ಸ್ಮೃತಿ, 9.35 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ–ಗಾಯತ್ರಿ ವೆಂಕಟರಾಘವನ್ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ –ಕಾಮನ ಬಿಲ್ಲು ಬದುಕಿನ ಬಣ್ಣಗಳ ಚಿತ್ತಾರ, ಪ್ರಸ್ತುತಿ : ಜಿ.ಎನ್. ಮಂಜುನಾಥ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಕಾದಂಬರಿ ವಿಹಾರ – ಎಂ. ಆರ್. ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ: ಉಮೇಶ್. ಎಸ್.ಎಸ್., 1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ–ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ–ಹೆಚ್.ಕೆ. ನರಸಿಂಹಮೂರ್ತಿ ಹಾಗೂ ಹೆಚ್.ಎನ್.ಭಾಸ್ಕರ್–ದ್ವಂದ್ವ ವೈಯೋಲಿನ್ ವಾದನ, 4.00 ಮಹಿಳಾರಂಗ, 4.30 ವೃತ್ತಿ ಮಾರ್ಗದರ್ಶನ –ಸಂಗೀತ ಮತ್ತು ಪ್ರದರ್ಶಕ ಕಲೆಗಳ ಕ್ಷೇತ್ರದಲ್ಲಿ ಇರುವ ಅವಕಾಶಗಳು ಕುರಿತು ಅಂತಾರಾಷ್ಟ್ರೀಯ ಖ್ಯಾತಿಯ ವಯೋಲಿನ್ ವಾದಕರು, ಸಂಸ್ಕಾರ ಭಾರತಿಯ ರಾಷ್ಟ್ರೀಯ ಅಧ್ಯಕ್ಷರು ಹಾಗೂ ಮೈಸೂರು ವಿಶ್ವವಿದ್ಯಾಲಯದ ಲಲಿತಕಲಾ ಕಾಲೇಜಿನ ಪ್ರಾಧ್ಯಾಪಕರಾದ ಡಾ. ಮೈಸೂರು ಎಂ. ಮಂಜುನಾಥ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 6.50 ಕೃಷಿರಂಗ–ಅರಿಸಿಣ ಬೆಳೆಯ ಕೀಟ ರೋಗಗಳ ನಿರ್ವಹಣೆ ಕುರಿತು ಸಂವಾದ, ಭಾಗವಹಿಸುತ್ತಾರೆ –ಚಾಮರಾಜನಗರ ತಾಲೂಕು ಹರದನಹಳ್ಳಿಯ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ತಾಂತ್ರಿಕ ಅಧಿಕಾರಿ ಡಾ.ಪಂಪನಗೌಡ ಮತ್ತು ಚಾಮರಾಜನಗರ ತಾಲೂಕು ಬಂದಿಗೌದಾನ ಹಳ್ಳಿಯ ಬಿ.ಕೆ. ರವಿಕುಮಾರ್, ಪ್ರಸ್ತುತಿ–ಎನ್. ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 ವಿಜ್ಞಾನ ಭಾರತಿ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ–ಮಧುರೈ ಜಿ.ಎಸ್.ಮಣಿ–ಹಾಡುಗಾರಿಕೆ, 10.30 ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 5 ಶುಕ್ರವಾರ 2025

ಸಂಪುಟ: 46 | ಸಂಚಿಕೆ: 139 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ರಾಜ್ಯಪಾಲ, ಸಿಎಂ, ಡಿಸಿಎಂ, ಸಚಿವರಿಗೆ ದಸರಾ ಉತ್ಸವಕ್ಕೆ ಆಹ್ವಾನ







ಮೈಸೂರು ದಸರಾ ಮಹೋತ್ಸವಕ್ಕೆ ಮೈಸೂರು ಜಿಲ್ಲಾಡಳಿತ ವತಿಯಿಂದ ಗುರುವಾರ ಬೆಂಗಳೂರಿನಲ್ಲಿ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಅಧಿಕೃತ ಆಹ್ವಾನ ನೀಡಲಾಯಿತು. ಈ ವೇಳೆ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್, ಮೈಸೂರು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ಪೊಲೀಸ್ ಕಮೀಷನರ್ ಸೀಮಾ ಲಾಟ್ಕರ್, ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಯುಕೇಶ್‌ಕುಮಾರ್, ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ. ರೂಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ, ಅಪರ ಜಿಲ್ಲಾಧಿಕಾರಿ ಶಿವರಾಜ್ ಇನ್ನಿತರರು ಉಪಸ್ಥಿತರಿದ್ದಾರೆ.

ಮೈಸೂರು, ಸೆ.4(ಎಂಟಿವೈ)– ಮೈಸೂರು ಜಿಲ್ಲಾಡಳಿತ, ನಾಡಹಬ್ಬ ದಸರಾ ಮಹೋತ್ಸವಕ್ಕೆ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹಾಗೂ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರಿಗೆ ಆಹ್ವಾನ ನೀಡಿತು.

ಪ್ರಸಕ್ತ ಸಾಲಿನ ದಸರಾ ಉದ್ಘಾಟಕರಾದ ಸಾಹಿತಿ ಬಾನು ಮುಷ್ತಾಕ್ ಅವರಿಗೆ ಮಂಗಳವಾರ ವಷ್ಟೇ ಅಧಿಕೃತ ಆಹ್ವಾನ ನೀಡಿದ್ದ ಮೈಸೂರು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ನೇತೃತ್ವದ ಹಿರಿಯ ಅಧಿಕಾರಿಗಳ ತಂಡ ಇಂದು ಬೆಳಗ್ಗೆ ಬೆಂಗಳೂರಿಗೆ ತೆರಳಿ ಗಣ್ಯರನ್ನು ಅಭಿನಂದಿಸುವುದರೊಂದಿಗೆ ದಸರಾ ಮಹೋತ್ಸವದ ಆಹ್ವಾನ ಪತ್ರಿಕೆ ನೀಡಿ, ಆಹ್ವಾನಿಸಿತು.

ಇಂದು ಬೆಳಗ್ಗೆ ಮೊದಲು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಅವರಿಗೆ ಆಹ್ವಾನ ನೀಡಲಾಯಿತು. ನಂತರ ಸಚಿವರ ನೇತೃತ್ವದಲ್ಲಿ ಮುಖ್ಯಮಂತ್ರಿಗಳ ಗೃಹ ಕಚೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ರೇಷ್ಮೆ ಶಾಲು, ಹಾರ ಹಾಕಿ, ದಸರಾ ಕಾರ್ಯಕ್ರಮಗಳಲ್ಲಿ ಭಾಗವಹಿಸುವಂತೆ ಆಮಂತ್ರಿಸಿತು.

ಈ ವೇಳೆ ಆಹ್ವಾನ ಪತ್ರಿಕೆಯ ಎಲ್ಲಾ ಪುಟಗಳನ್ನು ತಿರುವಿ ಹಾಕಿದ ಸಿಎಂ ಸಿದ್ದರಾಮಯ್ಯ, ದಸರಾ ಮಹೋತ್ಸವವನ್ನು ಅದ್ಧೂರಿಯಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಎಲ್ಲಿಯೂ ಸಣ್ಣಪುಟ್ಟ ಲೋಪವಾಗದಂತೆ ಎಚ್ಚರ ವಹಿಸುವಂತೆ ಸೂಚನೆ ನೀಡಿದರು. ಎಲ್ಲಾ ಕಾರ್ಯಕ್ರಮಗಳು ಸುಗಮವಾಗಿ ನೆರವೇರುವಂತೆ ನೋಡಿಕೊಳ್ಳಬೇಕು. ಈ ಬಾರಿ ಹೆಚ್ಚು ಜನ ದಸರಾ ನೋಡಲು ಆಗಮಿಸುವುದರಿಂದ ಕಾರ್ಯಕ್ರಮಗಳು ಜನರ ಮನಸ್ಸು ಗೆಲ್ಲುವಂತೆ ಏರ್ಪಡಿಸುವಂತೆಯೂ ಸಲಹೆ ನೀಡಿದರು. ಈ ವೇಳೆ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ದಸರಾ ಸಿದ್ಧತೆ ಕುರಿತಂತೆ ಕೈಗೊಂಡಿರುವ ಕ್ರಮ, ಕಾರ್ಯಕ್ರಮಗಳ ರೂಪು–ರೇಷೆ ಕುರಿತಂತೆ ಮಾಹಿತಿ ನೀಡಿದರು.



ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರಿಗೆ ದಸರಾ ಆಹ್ವಾನ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಆಹ್ವಾನ: ಬಳಿಕ ಜಿಲ್ಲಾಧಿಕಾರಿ ನೇತೃತ್ವದ ಅಧಿಕಾರಿಗಳ ತಂಡ ವಿಧಾನಸೌಧಕ್ಕೆ ಆಗಮಿಸಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಅವರ ಕಚೇರಿಯಲ್ಲಿ ಭೇಟಿ ಮಾಡಿ ಅವರನ್ನೂ ಅಭಿನಂದಿಸಿ, ದಸರಾ ಮಹೋತ್ಸವಕ್ಕೆ ಆಹ್ವಾನಿಸಿತು.

ಗೃಹಸಚಿವರಿಗೆ ಆಹ್ವಾನ: ಹಾಗೆಯೇ ವಿಧಾನ ಸೌಧದಲ್ಲೇ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಅವರನ್ನು ಅವರ ಕಚೇರಿಯಲ್ಲಿ ಭೇಟಿ ಮಾಡಿ ನಾಡಹಬ್ಬ ಮೈಸೂರು ದಸರಾ ಮಹೋತ್ಸವದಲ್ಲಿ ಭಾಗವಹಿಸಲು ಆಹ್ವಾನ ನೀಡಲಾಯಿತು. ಈ ವೇಳೆ ಮುಖ್ಯ ■ 6ನೇ ಪುಟಕ್ಕೆ

ದಸರಾ ಉತ್ಸವಕ್ಕೆ ಬೆಂಗಳೂರು–ಬೆಳಗಾವಿ–ಮೈಸೂರು ನಡುವೆ ವಿಶೇಷ ರೈಲು ಸೇವೆ

ಬೆಂಗಳೂರು, ಸೆ.4– ದಸರಾ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಬೆಂಗಳೂರು – ಬೆಳಗಾವಿ – ಮೈಸೂರು ನಡುವೆ ಮೂರು ಟ್ರಿಪ್ ವಿಶೇಷ ರೈಲು ಓಡಿಸಲು ನಿರ್ಧರಿಸಲಾಗಿದೆ.

ಈ ಬಗ್ಗೆ ನೈರುತ್ಯ ರೈಲ್ವೆ ಮಾಹಿತಿ ನೀಡಿದ್ದು, ಮುಂಬರುವ ದಸರಾ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ದಟ್ಟಣೆಯನ್ನು ನಿಭಾಯಿಸಲು ನೈರುತ್ಯ ರೈಲ್ವೆಯು ಸರ್.ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ಬೆಂಗಳೂರು, ಬೆಳಗಾವಿ ಮತ್ತು ಮೈಸೂರು ನಡುವೆ ವಿಶೇಷ ರೈಲುಗಳನ್ನು ಓಡಿಸಲಿದೆ ಎಂದು ತಿಳಿಸಿದೆ. ಈ ವಿಶೇಷ ರೈಲು ಬೆಂಗಳೂರು, ಮೈಸೂರು, ಬೆಳಗಾವಿ ಮಾತ್ರವಲ್ಲದೇ ತುಮಕೂರು, ಚಿಕ್ಕಮಗಳೂರು (ಬೀರೂರು), ದಾವಣಗೆರೆ, ಹಾವೇರಿ, ಧಾರವಾಡ, ಮಂಡ್ಯ ಸೇರಿ ಒಟ್ಟು 9 ಜಿಲ್ಲೆಗಳಿಗೆ ಅನುಕೂಲವಾಗಲಿವೆ.

ಬೆಂಗಳೂರು–ಬೆಳಗಾವಿ–ಮೈಸೂರು ಎಕ್ಸ್‌ಪ್ರೆಸ್: ರೈಲು ಸಂಖ್ಯೆ 06271 ಸೆ.30, 2025 ರಂದು ಬೆಂಗಳೂರಿನ ಸರ್.ಎಂ. ವಿಶ್ವೇಶ್ವರಯ್ಯ ಟರ್ಮಿನಲ್‌ನಿಂದ ಸಂಜೆ 7 ಗಂಟೆಗೆ ಹೊರಟು, ■ 6ನೇ ಪುಟಕ್ಕೆ

ಕೇಂದ್ರ ಸರ್ಕಾರಿ ನೌಕರರಿಗೆ ಶೇ.3ರಷ್ಟು ಡಿಎ ಏರಿಕೆ

ನವದೆಹಲಿ, ಸೆ.4–ಕೇಂದ್ರ ಸರ್ಕಾರಿ ನೌಕರರು ಮತ್ತು ಪಿಂಚಣಿದಾರರ ಡಿಎ ಏರಿಕೆ ಕುರಿತು ದೀರ್ಘ ಕಾಲದ ನಿರೀಕ್ಷೆ ಈಗ ಅಂತ್ಯಗೊಂಡಿದೆ. ಹೊಸ ಅಖಿಲ ಭಾರತ ಗ್ರಾಹಕ ಬೆಲೆ ಸೂಚ್ಯಂಕ ಪ್ರಕಾರ ಕೇಂದ್ರ ಸರ್ಕಾರಿ ನೌಕರರ ಡಿಎ ಶೇ.55 ರಿಂದ ಶೇ.58ಕ್ಕೆ ಏರಿಕೆಯಾಗಲಿದೆ. ಈ ಏರಿಕೆ ಜುಲೈ 1, 2025 ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರಲಿದೆ.

ಸರ್ಕಾರಿ ಮೂಲಗಳ ಪ್ರಕಾರ,ಈ ಶೇ.3 ಏರಿಕೆಗೆ ಸಂಬಂಧಿಸಿದ ಅಧಿಕೃತ ಘೋಷಣೆ ಅಕ್ಟೋಬರ್‌ನಲ್ಲಿ ನಡೆಯುವ ಕ್ಯಾಬಿನೆಟ್ ಸಭೆಯಲ್ಲಿ ಹೊರಬೀಳಲಿದೆ. ಆದರೆ, ಈ ಏರಿಕೆ ಜುಲೈ 1 ರಿಂದ ಜಾರಿಗೆ ಬರುವುದರಿಂದ, ನೌಕರರು ಜುಲೈ, ಆಗಸ್ಟ್, ಸೆಪ್ಟೆಂಬರ್ (ಮತ್ತು ಘೋಷಣೆ ತಡವಾದರೆ ಅಕ್ಟೋಬರ್) ತಿಂಗಳ ಬಾಕಿ ಹಣವನ್ನು ಒಂದೇ ಬಾರಿಗೆ ಪಡೆಯುತ್ತಾರೆ.

AICPI ಇಂಡೆಕ್ಸ್ ಸಂಖ್ಯೆಗಳು ಜನವರಿಯಿಂದ ಜೂನ್ 2025 ರವರೆಗೆ ಕ್ರಮೇಣ ಏರಿಕೆಯಾಗಿದೆ. ಜೂ.2025ರಲ್ಲಿ ಇಂಡೆಕ್ಸ್ 145.0 ಕ್ಕೆ ಏರಿದ್ದರಿಂದ, ಒಟ್ಟು ಡಿಎ ಶೇ.58.18 ಆಗಿದೆ. ■ 6ನೇ ಪುಟಕ್ಕೆ

ರಾಜ್ಯದಲ್ಲಿ ಎಲ್ಲಾ ಚುನಾವಣೆಗೆ ಮತಪತ್ರ ಬಳಕೆ

ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಲು ಸಂಪುಟ ಸಭೆ ನಿರ್ಧಾರ





ಹೆಚ್.ಕೆ.ಪಾಟೀಲ್

ಬೆಂಗಳೂರು, ಸೆ.4– ರಾಜ್ಯದಲ್ಲಿ ಮುಂಬರುವ ಎಲ್ಲಾ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಇವಿಎಂಗಳ ಬದಲಿಗೆ ಮತಪತ್ರ (ಬ್ಯಾಲೆಟ್ ಪೇಪರ್)ಗಳ ಮೂಲಕ ನಡೆಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಲು ರಾಜ್ಯ ಸಚಿವ ಸಂಪುಟ ಗುರುವಾರ ನಿರ್ಧರಿಸಿದೆ.

ಇಂದು ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ್, ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಮತಪತ್ರಗಳ ಮೂಲಕ ನಡೆಸಲು ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಲು ಸಚಿವ ಸಂಪುಟ ನಿರ್ಧರಿಸಿದೆ ಎಂದರು. ಇವಿಎಂಗಳ ಬಗ್ಗೆ ಜನರಲ್ಲಿ ವಿಶ್ವಾಸ ಮತ್ತು ವಿಶ್ವಾಸಾರ್ಹತೆ ಕಮ್ಮಿಯಾಗಿದೆ ಎಂದು ಸಚಿವರು ತಿಳಿಸಿದರು.

ರಾಜ್ಯ ಚುನಾವಣಾ ಆಯೋಗವು ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಅಗತ್ಯವಾದ ಪರಿಷ್ಕರಣೆ ಮಾಡಲು, ರಾಜ್ಯ ಸಚಿವ ಸಂಪುಟ ಅಗತ್ಯ ಕಾನೂನುಗಳನ್ನು ಮಾಡಲು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡಲು ನಿರ್ಧರಿಸಿದೆ ಎಂದು ಅವರು ಹೇಳಿದರು. ಮುಂಬರುವ ಎಲ್ಲಾ ಚುನಾವಣೆಗಳನ್ನು ಇವಿಎಂಗಳ ಬದಲಿಗೆ ಮತಪತ್ರಗಳಲ್ಲಿ ನಡೆಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಲು ನಿರ್ಧರಿಸಲಾಗಿದೆ ಎಂದರು.

ಕನಕಪುರದಲ್ಲಿ ಮೆಡಿಕಲ್ ಕಾಲೇಜು ಸ್ಥಾಪನೆ: ಬೆಂಗಳೂರು ದಕ್ಷಿಣ ಜಿಲ್ಲೆ ಕನಕಪುರ ತಾಲೂಕಿನ ರಾಯಸಂದ್ರ ಗ್ರಾಮದಲ್ಲಿ ಹೊಸ ಮೆಡಿಕಲ್ ಕಾಲೇಜು ಸ್ಥಾಪನೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಕರ್ನಾಟಕ ಗೃಹ ಮಂಡಳಿಯಿಂದ 65 ಕೋಟಿ ರೂ. ಮೊತ್ತದಲ್ಲಿ 25 ಎಕರೆ ಜಮೀನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ಸಿಕ್ಕಿದೆ ಎಂದು ಹೆಚ್.ಕೆ.ಪಾಟೀಲ್ ಮಾಹಿತಿ ನೀಡಿದ್ದಾರೆ.

ಎಲ್ಲಾ ಜಿಲ್ಲೆಗಳಲ್ಲಿಯೂ 'ಆಶಾಕಿರಣ' ಯೋಜನೆ ಅನುಷ್ಠಾನ: ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ 'ಆಶಾಕಿರಣ' ಯೋಜನೆ ಅನುಷ್ಠಾನಕ್ಕೆ ಸಚಿವ ಸಂಪುಟ ನಿರ್ಧರಿಸಿದೆ. ಇದಕ್ಕಾಗಿ 52.85 ■ 6ನೇ ಪುಟಕ್ಕೆ


ರೈತರು, ಕನ್ನಡಪರ ಹೋರಾಟಗಾರರ ವಿರುದ್ಧದ 60 ಪ್ರಕರಣಗಳು ವಾಪಸ್

ಬೆಂಗಳೂರು, ಸೆ.4– ರೈತರು, ಕನ್ನಡಪರ ಹೋರಾಟಗಾರರ ವಿರುದ್ಧದ 60 ಪ್ರಕರಣಗಳು ವಾಪಸ್ ಪಡೆಯಲು ಸಂಪುಟ ಸಭೆ ಒಪ್ಪಿಗೆ ನೀಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್, ರೈತರು, ಕನ್ನಡಪರ ಹೋರಾಟಗಾರರ ವಿರುದ್ಧದ 60 ಪ್ರಕರಣಗಳು ವಾಪಸ್ ಪಡೆಯಲು ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ ಎಂದರು. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಶುಲ್ಕ ಬದಲಾವಣೆ ಮಾಡಲಾಗಿದ್ದು, ಮಾರುಕಟ್ಟೆ ಶುಲ್ಕ 41 ಪೈಸೆಯಿಂದ 42 ಪೈಸೆಗೆ ಹೆಚ್ಚಳ ಮಾಡಲಾಗುವುದು, ವಹಿವಾಟು ವೆಚ್ಚ 0.01 ಪೈಸೆಗೆ ಹೆಚ್ಚಳ ಮಾಡಿ ಮಾರ್ಪಾಡು ಮಾಡಲಾಗುವುದು ಎಂದು ಹೇಳಿದ್ದಾರೆ.

ಮುಡಾ ಪ್ರಕರಣ: ಸಿಎಂ ಸಿದ್ದರಾಮಯ್ಯ ಕುಟುಂಬಕ್ಕೆ 'ಕ್ಲೀನ್‌ಚಿಟ್' ಸಂಪುಟವೂ ಅಸ್ತು

ಬೆಂಗಳೂರು, ಸೆ.4– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ನಿವೇಶನ ಹಂಚಿಕೆಯಲ್ಲಿ ನಡೆದಿದ್ದ ಅಕ್ರಮಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿರುವ ನ್ಯಾ. ಪಿ.ಎನ್. ದೇಸಾಯಿ ಆಯೋಗವು ತನ್ನ ವರದಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಕುಟುಂಬಕ್ಕೆ ಕ್ಲೀನ್‌ಚಿಟ್ ನೀಡಿದೆ.



ಸಿದ್ದರಾಮಯ್ಯ

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಈ ವಿಷಯವನ್ನು ತಿಳಿಸಿದರು.

ಮುಡಾದಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ತನಿಖೆ ನಡೆಸಲು ಸರಕಾರವು ನ್ಯಾ.ದೇಸಾಯಿ ಆಯೋಗವನ್ನು ರಚಿಸಿತ್ತು. ಅವರು ಸಮಗ್ರವಾಗಿ ತನಿಖೆ ಮಾಡಿ ಸರಕಾರಕ್ಕೆ ವರದಿ ಸಲ್ಲಿಸಿದ್ದಾರೆ ಆ ವರದಿಯ ಕುರಿತು ಸಚಿವ ಸಂಪುಟ ಸಭೆಯಲ್ಲಿ ವಿಸ್ತೃತವಾಗಿ ಚರ್ಚೆ ನಡೆಸಲಾಯಿತು ಎಂದು ಅವರು ಹೇಳಿದರು.

ವರದಿಯಲ್ಲಿ ಮುಖ್ಯಮಂತ್ರಿ ಹಾಗೂ ಅವರ ಕುಟುಂಬದ ವಿರುದ್ಧ ಯಾವುದೇ ಆರೋಪಗಳನ್ನು ದಾಖಲಿಸಿಲ್ಲ. ಆದರೆ, ಕೆಲವು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಶಿಫಾರಸ್ಸು ಮಾಡಿದ್ದಾರೆ. ಅವರು ಸಲ್ಲಿಸಿರುವ ಶಿಫಾರಸ್ಸುಗಳನ್ನು ಸಚಿವ ಸಂಪುಟ ಒಪ್ಪಿಕೊಂಡಿದ್ದು, ಅದರಂತೆ ಮುಂದಿನ ಕ್ರಮ ಕೈಗೊಳ್ಳಲಿದೆ ಎಂದು ಹೆಚ್.ಕೆ.ಪಾಟೀಲ್ ತಿಳಿಸಿದರು.

ಅಲ್ಪಸಂಖ್ಯಾತರ ಹಿಂದುಳಿದ ಕಾಲೋನಿಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ 398 ಕೋಟಿ ಬಿಡುಗಡೆ

▶ ಸಂಪುಟ ಸಭೆ ನಿರ್ಧಾರ ▶ 27.07 ಕೋಟಿಯಲ್ಲಿ ವಿಕಾಸಸೌಧದ ಬಳಿ ಧಾರ್ಮಿಕ ಸೌಧ ನಿರ್ಮಾಣ ▶ 'ಶುಚಿ' ಕಾರ್ಯಕ್ರಮದಡಿ ನ್ಯಾಪ್ಕಿನ್ ಪ್ಯಾಡ್ ಖರೀದಿಗೆ 71.83 ಕೋಟಿ ಮಂಜೂರು ▶ ಗಂಗಾ ಕಲ್ಯಾಣ ಯೋಜನೆ ಫಲಾನುಭವಿ ಆಯ್ಕೆ ಶಾಸಕರಿಂದ ಸಾಧ್ಯವಾಗದಿದ್ದರೆ ಡಿಸಿ ಸಮಿತಿಗೆ ವರ್ಗಾವಣೆ ▶ ತಾಯಂದಿರ ಮರಣ ಶೂನ್ಯಕ್ಕಿಳಿಸಲು 139.53 ಕೋಟಿ ರೂ. ಯೋಜನೆ

ಬೆಂಗಳೂರು, ಸೆ.4(ಕೆಎಂಶಿ)– ಅಲ್ಪಸಂಖ್ಯಾತರು ವಾಸಿಸುವ ಹಿಂದುಳಿದ ಕಾಲೋನಿಗಳ ಮೂಲಸೌಕರ್ಯ ಅಭಿವೃದ್ಧಿಗೆ ಸಚಿವ ಸಂಪುಟ 398 ಕೋಟಿ ರೂ. ಬಿಡುಗಡೆ ಮಾಡಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ರಾಜ್ಯದ ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ ಅಲ್ಪಸಂಖ್ಯಾತರು ವಾಸಿಸುತ್ತಿರುವ ನಗರ ಪ್ರದೇಶಗಳಲ್ಲಿನ ಅತೀ ಹಿಂದುಳಿದ ಕಾಲೋನಿಗಳನ್ನು ಮಾದರಿ ಕಾಲೋನಿಗಳಾಗಿ ಪರಿವರ್ತಿಸಲು ಈ ಹಣ ಬಳಕೆಗೆ ಸೂಚಿಸಲಾಗಿದೆ.

ವಿಕಾಸಸೌಧ ಸಮೀಪ 27.07 ಕೋಟಿ ರೂ. ವೆಚ್ಚದಲ್ಲಿ ಧಾರ್ಮಿಕ ಸೌಧ ನಿರ್ಮಿಸಲು ಆಡಳಿತ ಅನುಮೋದನೆ ನೀಡಲಾಗಿದೆ. ಮೆಟ್ರೋ ರೈಲು ಯೋಜನೆಯ ಹಂತ 3ರಡಿ ಜೆ.ಪಿ.ನಗರ 4ನೇ ಹಂತದಿಂದ ಹೆಬ್ಬಾಳವರೆಗೆ 37 ಕಿಲೋ ಮೀಟರ್ ಉದ್ದದ ಡಬ್ಬಲ್ ಡೆಕ್ಕರ್ ಮಾರ್ಗ (ಮೆಟ್ರೊ ವಯಾಡೆಕ್ ಜೊತೆ ಎಲಿವೇಟೆಡ್ ರಸ್ತೆ) ನಿರ್ಮಾಣವನ್ನು 9,700 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆ ನೀಡಲಾಗಿದೆ.

ಶುಚಿ ಕಾರ್ಯಕ್ರಮದಡಿ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್‌ಗಳನ್ನು 71.83 ಕೋಟಿ ರೂ. ವೆಚ್ಚದಲ್ಲಿ ಖರೀದಿಸಿ, ವಿತರಣೆಗೆ ಸಭೆ ಅನುಮತಿಸಿದೆ. ಅಲ್ಲದೆ, ಆಶಾಕಿರಣ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ 52.85 ಕೋಟಿ ರೂ. ಅಂದಾಜು ಮೊತ್ತದಲ್ಲಿ ಅನುಷ್ಠಾನಕ್ಕೆ ಸಮ್ಮತಿಸಿದೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಡಿ ಬೆಂಗಳೂರು ದಕ್ಷಿಣ ಜಿಲ್ಲೆಯ ಕನಕಪುರ ರಾಯಸಂದ್ರ ಗ್ರಾಮದಲ್ಲಿ ಹೊಸ ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ 65 ಕೋಟಿ ರೂ. ವೆಚ್ಚದಲ್ಲಿ 25 ಎಕರೆ ಭೂಮಿ ಖರೀದಿಗೆ ಸಂಪುಟ ಸಮ್ಮತಿಸಿದೆ. ಸರ್ಕಾರ ಮತ್ತು ಅನುದಾನಿತ ಶಾಲೆಗಳ 1ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಸಾಯಿ ಶ್ಯೂರ್ ರಾಗಿ ಹೆಲ್ತ್‌ಮಿಕ್ಸ್ ಪುಡಿಯನ್ನು ಬಿಸಿ ಹಾಲಿನೊಂದಿಗೆ ಮಿಶ್ರಣ ಮಾಡಿ ವಿತರಿಸಲಾಗುತ್ತಿರುವ ಕಾರ್ಯಕ್ರಮವನ್ನು 3ರಿಂದ 5 ದಿನಗಳಿಗೆ ವಿಸ್ತರಿಸಲು ನಿರ್ಧರಿಸಿದ್ದು, ಇದಕ್ಕೆ ಹೆಚ್ಚುವರಿಯಾಗಿ ತಗಲುವ 27.02 ಕೋಟಿ ರೂ. ಭರಿಸಲು ಸಮ್ಮತಿಸಲಾಗಿದೆ. ■ 6ನೇ ಪುಟಕ್ಕೆ

ಅಗತ್ಯ ಬಿದ್ದರೆ ಧರ್ಮಸ್ಥಳ ಕೇಸ್ ಎನ್‌ಐಎಗೆ

ರಾಜ್ಯದ ಮಠಾಧೀಶರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಭರವಸೆ



ಧರ್ಮಸ್ಥಳ ಪ್ರಕರಣವನ್ನು ಎನ್‌ಐಎ ತನಿಖೆಗೆ ಒಪ್ಪಿಸುವಂತೆ ಗುರುವಾರ ನವದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾದ ರಾಜ್ಯದ ವಿವಿಧ ಮಠಾಧೀಶರು ಮನವಿ ಸಲ್ಲಿಸಿದರು.

ನವದೆಹಲಿ, ಸೆ.4–ಧರ್ಮಸ್ಥಳ ಕ್ಷೇತ್ರದ ಬಗ್ಗೆ ಅಪಪ್ರಚಾರ, ಅವಹೇಳನದ ಷಡ್ಯಂತ್ರ ನಡೆದಿದೆ. ಇದರ ತನಿಖೆಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ)ಗೆ ವಹಿಸಬೇಕೆಂದು ಒತ್ತಾಯಿಸಿ ಕರ್ನಾಟಕದ ಸನಾತನ ಸಂತರ ನಿಯೋಗವು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ದೆಹಲಿಯಲ್ಲಿ ಭೇಟಿಯಾಗಿ ಮನವಿ ಸಲ್ಲಿಸಿದೆ. ಅಗತ್ಯ ಬಿದ್ದರೆ ತನಿಖೆಯನ್ನು ಎನ್‌ಐಎಗೆ ವಹಿಸಲಾಗುವುದು ಎಂದು ಅಮಿತ್ ಶಾ ಭರವಸೆ ನೀಡಿದ್ದಾರೆ.

ಪಂಚಮಸಾಲಿ ಲಿಂಗಾಯತ ಮಠದ ಶ್ವಾಸಗುರು ಶ್ರೀ ವಚನಾನಂದ ಸ್ವಾಮೀಜಿ ನೇತೃತ್ವದ ಈ ನಿಯೋಗದಲ್ಲಿ ಮಂಗಳೂರಿನ ಗುರುಪುರ ವಜ್ರದೇಹಿ ಮಠದ ಶ್ರೀ ರಾಜಶೇಖರಾನಂದ ಸ್ವಾಮೀಜಿ ಸೇರಿದಂತೆ ವಿವಿಧ ಪೀಠಗಳ ಒಟ್ಟು ಎಂಟು ಸ್ವಾಮೀಜಿಗಳು ಭಾಗವಹಿಸಿದ್ದರು. ಈ ಭೇಟಿಯ ಸಂದರ್ಭದಲ್ಲಿ ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಷಡ್ಯಂತ್ರ ಮತ್ತು ಅಪಪ್ರಚಾರದ ಕುರಿತು ಸುದೀರ್ಘ ಚರ್ಚೆ ನಡೆದಿದೆ.

ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ಶವ ಹೂತ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರವು ರಚಿಸಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ)ದ ಬಗ್ಗೆ ಸ್ವಾಮೀಜಿಗಳಿಗೆ ಯಾವುದೇ ಆಕ್ಷೇಪವಿಲ್ಲ. ಆದರೆ, ಈ ಪ್ರಕರಣವನ್ನು ಎನ್‌ಐಎಗೆ ವಹಿಸಿದರೆ ಹೆಚ್ಚು ಪಾರದರ್ಶಕವಾಗಿ ಮತ್ತು ಸಮಗ್ರವಾಗಿ ತನಿಖೆ ನಡೆಯಲಿದೆ ಎಂದು ಸ್ವಾಮೀಜಿಗಳ ತಂಡ ಒತ್ತಾಯಿಸಿದೆ.

ಧರ್ಮಸ್ಥಳದ ಬಾಹುಬಲಿ ಬೆಟ್ಟದವರೆಗೆ ತಲುಪಿರುವ ಉತ್ಖನನ ಕಾರ್ಯಾಚರಣೆಯ ಬಗ್ಗೆ ಸ್ವಾಮೀಜಿಗಳು ಬೇಸರ ವ್ಯಕ್ತಪಡಿಸಿದ್ದಾರೆ. ಈ ಉತ್ಖನನವು ಶ್ರೀ ಕ್ಷೇತ್ರ ಧರ್ಮಸ್ಥಳದ ಆಧ್ಯಾತ್ಮಿಕ ಮಹತ್ವವನ್ನು ಹಾಳುಗೆಡಹುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ. ಜೊತೆಗೆ, ಈ ಪ್ರಕರಣದ ಹಿಂದೆ ದೊಡ್ಡ ಷಡ್ಯಂತ್ರವಿದೆ ಎಂದು ಆರೋಪಿಸಿದ ಸ್ವಾಮೀಜಿಗಳು, ಈ ಷಡ್ಯಂತ್ರದ ಸತ್ಯಾಂಶವನ್ನು ಬಯಲಿಗೆ ತರಬೇಕೆಂದು ಒತ್ತಾಯಿಸಿದ್ದಾರೆ.

ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ನಡೆದ ಚರ್ಚೆಯಲ್ಲಿ ಸ್ವಾಮೀಜಿಗಳು ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಅಪಪ್ರಚಾರದ ಕುರಿತು ವಿವರವಾಗಿ ಮಾಹಿತಿ ನೀಡಿದ್ದಾರೆ. ಧರ್ಮಸ್ಥಳವು ಲಕ್ಷಾಂತರ ಭಕ್ತರ ಆಧ್ಯಾತ್ಮಿಕ ಕೇಂದ್ರವಾಗಿದ್ದು, ಇದರ ವಿರುದ್ಧ ಯೋಜಿತ ರೀತಿಯಲ್ಲಿ ಷಡ್ಯಂತ್ರ ನಡೆಯುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ಶಬರಿಮಲೆ ಮತ್ತು ತಿರುಪತಿಯಂತಹ ಇತರ ಪವಿತ್ರ ಧಾರ್ಮಿಕ ಕ್ಷೇತ್ರಗಳ ಬಳಿಕ, ಈಗ ಧರ್ಮಸ್ಥಳವನ್ನು ಗುರಿಯಾಗಿಸಲಾಗಿದೆ ಎಂದು ಸ್ವಾಮೀಜಿಗಳು ಗೃಹ ಸಚಿವರ ಮುಂದೆ ಬೇಸರ ವ್ಯಕ್ತಪಡಿಸಿದ್ದಾರೆ. ಹಿಂದೂ ಧರ್ಮ ಕ್ಷೇತ್ರಗಳನ್ನು ಸಂಶಯದಿಂದ ನೋಡುವಂತೆ ಮಾಡುವ ಷಡ್ಯಂತ್ರವಿದು. ಜನರು ದೇವಸ್ಥಾನಗಳಿಗೆ ಹೋಗದಂತೆ ತಡೆಯುವ ದುರುದ್ದೇಶ ಇದರ ಹಿಂದಿದೆ ಎಂದು ನಿಯೋಗವು ಆರೋಪಿಸಿದೆ.

ಸ್ವಾಮೀಜಿಗಳ ನಿಯೋಗವು ಈ ಪ್ರಕರಣವನ್ನು ಎನ್‌ಐಎಗೆ ಶೀಘ್ರವಾಗಿ ವಹಿಸಬೇಕೆಂದು ಮನವಿ ಮಾಡಿದೆ. ಈ ಆರೋಪಗಳ ಹಿಂದೆ ರಾಷ್ಟ್ರವಿರೋಧಿ ಶಕ್ತಿಗಳ ಕೈವಾಡವಿದೆ ಎಂದು ಸ್ವಾಮೀಜಿಗಳು ಆರೋಪಿಸಿದ್ದಾರೆ. ಎಲ್ಲವನ್ನೂ ಸೂಕ್ಷ್ಮವಾಗಿ ಗಮನಿಸುತ್ತಿದ್ದೇನೆ ಎಂದು ಗೃಹ ಸಚಿವ ಅಮಿತ್ ಶಾ ಭರವಸೆ ನೀಡಿದ್ದಾರೆ. ಈ ಪ್ರಕರಣದ ಗಂಭೀರತೆಯನ್ನು ಅರಿತಿರುವ ಶಾ, ಕೇಂದ್ರ ಸರ್ಕಾರವು ಈ ವಿಷಯದಲ್ಲಿ ಗಂಭೀರವಾಗಿ ಕ್ರಮ ಕೈಗೊಳ್ಳಲಿದೆ ಎಂದು ಸೂಚಿಸಿದ್ದಾರೆ. ಸ್ವಾಮೀಜಿಗಳು ಈ ಷಡ್ಯಂತ್ರವು ಕೇವಲ ಧರ್ಮಸ್ಥಳಕ್ಕೆ ಸೀಮಿತವಾಗಿಲ್ಲ, ಬದಲಿಗೆ ಇತರ ಹಿಂದೂ ಧಾರ್ಮಿಕ ಕ್ಷೇತ್ರಗಳನ್ನೂ ಗುರಿಯಾಗಿಸುತ್ತಿದೆ ಎಂದು ಅಮಿತ್ ಶಾ ಮುಂದೆ ಬೇಸರ ವ್ಯಕ್ತಪಡಿಸಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಹೆಂಡತಿ : ರೀ ಪಕ್ಕದ ಮನೆಯವರು 50 ಇಂಚಿನ ಎಲ್‌ಇಡಿ ಟಿವಿ ತಂದಿದ್ದಾರೆ. ನೀವು ತಗೊಂಡ್ ಬನ್ನಿ!

ಗಂಡ : ಲೇ ಹುಚ್ಚಿ ನಿನ್ನಂತಹ ಸುಂದರವಾದ ಹೆಂಡತಿ ಇರುವಾಗ ಟಿವಿ ನೋಡ್ಕಂಡೂ ಟೈಮ್ ವೇಸ್ಟ್ ಮಾಡ್ತಾರೇನೆ?

ಹೆಂಡತಿ : ರೀ ಒಂದ್ ನಿಮಿಷ ಇರೀ ಪಕೋಡ ಮತ್ತು ಟೀ ಮಾಡ್ಕೊಂಡು ಬರ್ತೀನಿ!

ಮೈಸೂರು ಮಿತ್ರ

ಶುಕ್ರವಾರ, 5 ಸೆಪ್ಟೆಂಬರ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ......

ಕಾಲ ಹಿಂದಕ್ಕೆ ಸಾಗುವುದಿಲ್ಲ. ಆದರೆ ಅದರ ಜತೆ ಸಾಗದೇ ಇದ್ದರೆ ನಾವು ನಿಂತಲ್ಲೇ ನಿಲ್ಲಬೇಕಾಗುತ್ತದೆ.

–ಶಿವರಾಮ ಕಾರಂತ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಜಟ್ಟಿ ನೆಲಕ್ಕೆ ಬಿದ್ದರೂ ಮೀಸೆ ಮಣ್ಣಾಗಲಿಲ್ಲ.

ನಿಮ್ಮ ಪತ್ರಗಳು

ಎನ್‌.ಆರ್‌.ಮೊಹಲ್ಲಾ ರುದ್ರಭೂಮಿಗೆ ಮೂಲ ಸೌಕರ್ಯ ಕಲ್ಪಿಸಿ

ಮಾನ್ಯರೆ,



ಮೈಸೂರಿನ ನರಸಿಂಹರಾಜ ಕ್ಷೇತ್ರದ ಗಣೇಶನಗರದಲ್ಲಿರುವ ಹಿಂದೂ ರುದ್ರಭೂಮಿ ಮೂಲಸೌಕರ್ಯಗಳಿಂದ ವಂಚಿತವಾಗಿದ್ದು, ಪುಂಡು ಪೋಕರಿಗಳ ಅಕ್ರಮ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿದೆ.

ರುದ್ರಭೂಮಿಯಲ್ಲಿ ಗಿಡಗಂಟಿಗಳು ಆಳೆತ್ತರ ಬೆಳೆದು ನಿಂತಿದ್ದು, ಶವ ಹೂಳುವವರು ಜಾಗಕ್ಕಾಗಿ ಪರದಾಡುವಂತಾಗಿದೆ. ಶವ ಸಂಸ್ಕಾರ ನಡೆಸಿದವರು ಚಟ್ಟ, ಮೃತರ ಹಾಸಿಗೆ, ಹೊದಿಕೆಗಳನ್ನು ಅರೆಬರೆ ಸುಟ್ಟು ಅಲ್ಲೇ ಬಿಸಾಡುವುದರಿಂದ ಕಾಲಿಡಲು ಜಾಗವಿಲ್ಲದಂತಾಗಿದೆ. ಜತೆಗೆ ರುದ್ರಭೂಮಿಗೆ ಸೆಕ್ಯೂರಿಟಿ ಗಾರ್ಡ್ ಇಲ್ಲದಿರುವುದರಿಂದ ಮದ್ಯಪಾನ, ಇಸ್ಪೀಟ್, ಮಾದಕ ಪದಾರ್ಥಗಳ ಅಡ್ಡೆಯಾಗಿ ಮಾರ್ಪಟ್ಟಿದ್ದು, ರುದ್ರಭೂಮಿಯ ನಾಮಫಲಕವೂ ಸ್ಪಷ್ಟವಾಗಿ ಕಾಣದಂತಿದೆ. ಶವ ಸುಡುವ ಯಂತ್ರ ಸಮರ್ಪಕ ನಿರ್ವಹಣೆ ಇಲ್ಲದೇ ತುಕ್ಕು ಹಿಡಿದಿರುವುದರಿಂದ ಶವ ಸುಡಲು ಅವಕಾಶವಿಲ್ಲದಂತಾಗಿದೆ. ಸಂಬಂಧಪಟ್ಟವರು ಇತ್ತ ಗಮನಹರಿಸಿ ರುದ್ರಭೂಮಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಿಕೊಡಬೇಕು.

–ಅಭಿನಂದ ಕೆ., ಎನ್‌.ಆರ್‌.ಮೊಹಲ್ಲಾ, ಮೈಸೂರು.

ಜಿಎಸ್‌ಟಿಯಲ್ಲಿ ಕಡಿತ ಸ್ವಾಗತಾರ್ಹ

ಮಾನ್ಯರೆ,

ಜಿಎಸ್‌ಟಿಯಿಂದ ಬಳಲಿ ಬೆಂಡಾಗಿ ಹೈರಾಣಾಗಿದ್ದ ಬಳಕೆದಾರ ಕೇಂದ್ರ ಸರ್ಕಾರದ ಹೊಸ ಸೂತ್ರದಿಂದ ಉಸಿರಾಡುವ ಸ್ಥಿತಿಗೆ ಬಂದಿದ್ದಾನೆ. ಒಬ್ಬ ಸಾಧಾರಣ ಮನುಷ್ಯ ಅವನಷ್ಟೇ ತೂಕದ ತೆರಿಗೆ ಕೊಡಬೇಕಿತ್ತು. ಶೇ.18, 12ರ ತೆರಿಗೆಯಲ್ಲಿ ಅವನು ಸಾಯಲು ಆಗದ ಬದುಕಲು ಆಗದ ಸ್ಥಿತಿ ಆಗಿತ್ತು. ಅನೇಕ ಅಂಗಡಿಯವರು ಬಿಲ್ ಕೇಳಿದರೆ ಮುದ್ರೆ ಕ್ರಮಸಂಖ್ಯೆ ಇಲ್ಲದ ಬಿಳಿ ಕಾಗದದಲ್ಲಿ ಬರೆದುಕೊಟ್ಟು ಜಿಎಸ್‌ಟಿಯನ್ನು ಸ್ವಾಹ ಮಾಡುತ್ತಿದ್ದರು. ಇದು ತೆರಿಗೆ ಇಲಾಖೆಗೆ ತಿಳಿದಿದ್ದರೂ ಜಾಣಕುರುಡರಾಗಿದ್ದರು. ಎಲ್ಲಾ ಕಡೆಯೂ ಸರ್ಕಾರಕ್ಕೆ ಮೋಸ ಮಾಡುತ್ತಿದ್ದರು. ಈಗಲೂ ಮೋಸ ಮುಂದುವರೆದರೆ ಹಣ ದುರುಪಯೋಗ ಮೊತ್ತ ಕಡಿಮೆಯಾಗುತ್ತದೆ. ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಬರುವ ಹಣ ಕಡಿಮೆ ಆಯಿತು. ಇದನ್ನು ಕೇಂದ್ರ ಭರ್ತಿ ಮಾಡಿಕೊಡಬೇಕೆಂದು ಹೇಳುತ್ತಿದ್ದಾರೆ. ತೆರಿಗೆ ಕಡಿಮೆ ಮಾಡಿದ್ದರಿಂದ ದೇಶದ ಎಲ್ಲಾ ವರ್ಗಗಳ ಜನಕ್ಕೆ ಅನುಕೂಲವಾಗಿದೆ. ರಾಜ್ಯ ಸರ್ಕಾರವು ಅನವಶ್ಯಕ ವೆಚ್ಚ ನಿಲ್ಲಿಸುವುದರಿಂದ ಈ ನಷ್ಟವನ್ನು ಸರಿದೂಗಿಸಬಹುದು. ಒಟ್ಟಾರೆ ಜಿಎಸ್‌ಟಿ ಕಡಿತ ಜನೋಪಕಾರಿ ಯೋಜನೆ ಸ್ವಾಗತಾರ್ಹ.

– ಅಕ್ಕಿಹೆಬ್ಬಾಳು ವೆಂಕಟೇಶ್, ಮೈಸೂರು.

ದಸರಾ ಉದ್ಘಾಟನೆಯ ವಿವಾದ

ಮಾನ್ಯರೆ,

ಬಾನು ಮುಷ್ತಾಕ್ ಕನ್ನಡಾಂಬೆ ಕುರಿತ ಹೇಳಿಕೆಗೆ ಸ್ಪಷ್ಟನೆ ಕೊಡಲಿ... ('ಮೈಸೂರು ಮಿತ್ರ' ಆಗಸ್ಟ್ 30) ಎಂದು ರಾಜ ವಂಶಸ್ಥ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಒತ್ತಾಯ ಮಾಡಿದ್ದಾರೆ. ಸಮಂಜಸವಾದ ಅವರ ಅಭಿಪ್ರಾಯವನ್ನು ಮನ್ನಿಸಿ, ಶ್ರೀಮತಿ ಬಾನು ಮುಷ್ತಾಕ್ ಅವರು ತಾಯಿ ಭುವನೇಶ್ವರಿ, ಕನ್ನಡಾಂಬೆ, ತಾಯಿ ಚಾಮುಂಡೇಶ್ವರಿ ಬಗ್ಗೆ ನಂಬಿಕೆ, ಗೌರವವನ್ನು ಸ್ಪಷ್ಟವಾಗಿ ಉಲ್ಲೇಖಿಸಿ, ಈ ಹಿಂದೆ ಹೇಳಿದ ವಿವಾದಿತ ಹೇಳಿಕೆಗಳನ್ನು ಹಿಂಪಡೆದರೆ ವಿವಾದಗಳಿಗೆ ತೆರೆ ಬೀಳಬಹುದು. ಅಲ್ಲದೆ ಅವರು ಉದ್ಘಾಟನೆಗೆ ಮುಂದಾದರೆ ಅವರಿಗೂ ಮುಜುಗರ ಆಗಿ ವಿರೋಧ ಎದುರಿಸಬೇಕಾದ ಪರಿಸ್ಥಿತಿ ಉಂಟಾಗುವುದು ಖಚಿತ.

ದಸರಾ ನಾಡಹಬ್ಬ ಕನ್ನಡಿಗರಿಗೆ ಒಂದು ಭಕ್ತಿ ಪೂರ್ವಕ ಆಚರಣೆ. ಅದರ ಉದ್ಘಾಟನೆಯು ನಾಡಿನ ಎಲ್ಲರಿಗೂ ಸಂತಸ ಸಡಗರ ಉಂಟುಮಾಡಬೇಕೆ ಹೊರತು ವಾಗ್ವಾದದ ಕಹಿಯನ್ನಲ್ಲ. ಹೃದಯವೈಶಾಲ್ಯತೆ ತೋರಿ ಬಾನು ಮುಷ್ತಾಕ್ ಅವರು ಉದ್ಘಾಟನೆಗೆ ಬೇರೊಬ್ಬರನ್ನು ಆಹ್ವಾನಿಸಿ ಎಂದೂ ಹೇಳಬಹುದಿತ್ತು. ಅವರ ಕೃತಿಗೆ ಬೂಕರ್ ಪ್ರಶಸ್ತಿ ಬರಲು ಅದನ್ನು ಅನುವಾದ ಮಾಡಿದ ದೀಪಾ ಭಸ್ತಿ ಅವರನ್ನೂ ಬಾನು ಮುಷ್ತಾಕ್ ಜೊತೆ ಉದ್ಘಾಟನೆ ಮಾಡಲು ಸರ್ಕಾರ ಆಹ್ವಾನ ಮಾಡಬಹುದಿತ್ತಲ್ಲವೇ? ರಾಜ್ಯ ಸರ್ಕಾರ ಮತ್ತು ಶ್ರೀಮತಿ ಬಾನು ಮುಷ್ತಾಕ್ ಅವರ ಮುಂದಿನ ನಡೆ ಎಲ್ಲರಿಗೂ ಒಪ್ಪುವಂತೆ ಇರುವುದೆಂದು ಆಶಿಸೋಣವೇ?

–ಲಕ್ಷ್ಮಣ್ ಗೊರ್ಲಕಟ್ಟೆ, ಬೋಗಾದಿ, ಮೈಸೂರು

ಕುಡಿಯುವ ನೀರಿನ ಘಟಕ ಎಷ್ಟು ಶುದ್ಧ?

ಮಾನ್ಯರೆ,

ಬಹುತೇಕ ಮೈಸೂರು ನಗರ ಪ್ರದೇಶದ ಜನರು ಕುಡಿಯುವ ನೀರಿಗಾಗಿ ಸರ್ಕಾರದ ಸಹಭಾಗಿತ್ವದಲ್ಲಿ ನಿರ್ಮಿಸಿರುವ ಶುದ್ಧ ನೀರಿನ ಘಟಕಕ್ಕೆ ಅವಲಂಬಿತರಾಗಿರುವುದು ಎಲ್ಲರಿಗೂ ತಿಳಿದಿರುವ ವಿಷಯ. ಆದರೆ ಶುದ್ಧ ಕುಡಿಯುವ ನೀರಿನ ಘಟಕ ಎಷ್ಟು ಶುದ್ಧ ಎಂಬುದೇ ಯಕ್ಷಪ್ರಶ್ನೆಯಾಗಿದೆ!

ಒಂದು ಸಣ್ಣ ಕಿರಾಣಿ ಅಂಗಡಿಗೂ ಕೂಡ ಉದ್ದಿಮೆ ಪರವಾನಗಿ ಕಡ್ಡಾಯವಾಗಿದ್ದು, ಪರವಾನಗಿ ಪ್ರದರ್ಶಿಸದೇ ಇರುವವರಿಗೆ ದಂಡ ವಿಧಿಸುವ ಅಧಿಕಾರಿಗಳು ಮೂಲಭೂತವಾಗಿರುವ ಕುಡಿಯುವ ನೀರಿನ ಘಟಕದಲ್ಲಿ ಪರವಾನಗಿ ಪ್ರದರ್ಶಿಸದೆ ಇರುವುದು ವಿಪರ್ಯಾಸವೇ ಸರಿ. ಇತ್ತೀಚೆಗೆ ಸುರಿಯುತ್ತಿರುವ ಭಾರಿ ಮಳೆಯಿಂದ ನೀರು ಮಾಲಿನ್ಯಗೊಂಡು, ಜನರಲ್ಲಿ ರೋಗಗಳು ಉಲ್ಬಣಗೊಳ್ಳುತ್ತಿವೆ. ಕಲುಷಿತ ನೀರು ಸೇವಿಸಿದ ಜನರು ರೋಗ ಪೀಡಿತರಾಗುವ ಸಾಧ್ಯತೆ ಇದೆ. ಆದುದರಿಂದ ಸಂಬಂಧಪಟ್ಟವರಲ್ಲಿ ವಿನಂತಿಸುವುದೇನೆಂದರೆ ಈ ಎಲ್ಲಾ ನೀರಿನ ಘಟಕದಲ್ಲಿ ಕಡ್ಡಾಯವಾಗಿ ಅವರ ಪರವಾನಗಿ ಜೊತೆಗೆ ನೀರಿನ ಘಟಕದ ನೀರಿನ ಪರೀಕ್ಷೆಯ ವರದಿಯನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು. ಇದರಿಂದ ಸಾರ್ವಜನಿಕರು ಯಾವುದೇ ಅನುಮಾನವಿಲ್ಲದೆ ಕುಡಿಯುವ ನೀರನ್ನು ಉಪಯೋಗಿಸಬಹುದು ಹಾಗೂ ಇದರೊಂದಿಗೆ ಮುಂದಿನ ಘಟಕದ ಸ್ವಚ್ಛತಾ ದಿನಾಂಕ ಮತ್ತು ನೀರಿನ ಪರೀಕ್ಷೆಯ ದಿನಾಂಕದ ವಿವರಗಳನ್ನು ಪ್ರದರ್ಶಿಸಿದಲ್ಲಿ ಪರವಾನಗಿದಾರರ ಮೇಲೆ ನಿಗಾ ಇಡಬಹುದು. ದಯಮಾಡಿ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಹಾಗೂ ಅಹಿತಕರ ಘಟನೆ ನಡೆಯುವ ಮೊದಲು ಸೂಕ್ತ ಕ್ರಮ ವಹಿಸಲು ಮನವಿ.

–ವಿನೋದ್ ಶಂಕರ್, ಕೆ ಬ್ಲಾಕ್. ಕುವೆಂಪು ನಗರ

ಈ ಜೀವನ



ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

ಶಿಕ್ಷಕ ರಾಷ್ಟ್ರ ರಕ್ಷಕ

ಕಲಿಸು ಗುರುವೇ ಸದ್ಗುಣಗಳ
ಕಲಿಸು ಮಹಾಗುರುವೇ...

ಪ್ರತಿಯೊಬ್ಬರ ಬದುಕಿನಲ್ಲೂ ಶಿಕ್ಷಕರ ಪಾತ್ರ ಬಹಳ ಹಿರಿದಾದುದು. ಸೂರ್ಯನಿಲ್ಲದೆ ಬೆಳಕನ್ನು ಹೇಗೆ ಕಲ್ಪಿಸಿಕೊಳ್ಳಲು ಸಾಧ್ಯವಿಲ್ಲವೋ ಹಾಗೆಯೇ ಗುರುವಿಲ್ಲದ ಮನುಷ್ಯನ ಜೀವನವನ್ನು ಆಲೋಚಿಸಲು ಕೂಡ ಸಾಧ್ಯವಿಲ್ಲ. **'ಗುರುವಿನ ಗುಲಾಮ ನಾಗುವ ತನಕ ದೊರೆಯದಣ್ಣ ಮುಕುತಿ'** ಎಂಬ ದಾಸರಪದ ಗುರುವಿನ ಮಹತ್ವವನ್ನು ಸಾರುತ್ತದೆ.

ಇಡೀ ವಿಶ್ವದಾದ್ಯಂತ ಅಕ್ಟೋಬರ್ ಐದರಂದು ಶಿಕ್ಷಕರ ದಿನವನ್ನು ಆಚರಿಸಲಾಗುತ್ತದೆ. ಆದರೆ ಭಾರತದಲ್ಲಿ ಸೆಪ್ಟೆಂಬರ್ 5ರಂದು ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಭಾರತದ ಮೊದಲನೇ ಉಪ ರಾಷ್ಟ್ರಪತಿ ಹಾಗೂ ಎರಡನೇ ರಾಷ್ಟ್ರಪತಿ ಮತ್ತು ಶಿಕ್ಷಕರೂ ಆಗಿದ್ದ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನುಮ ದಿನವಾದ ಸೆಪ್ಟೆಂಬರ್ ಐದನ್ನು 1962ರಿಂದ ಶಿಕ್ಷಕರ ದಿನವನ್ನಾಗಿ ಆಚರಿಸಲಾಗುತ್ತಿದೆ.


'ಗುರುವಿಲ್ಲದೆ ಗುರಿಯನ್ನು ತಲುಪಲಾಗದು' ಎಂಬ ಮಾತಿನಂತೆ ಗುರುವಿನ ಮಹತ್ವವನ್ನು ತಿಳಿಯದೆ ಏನನ್ನು ಸಾಧಿಸಲಾಗದು. ಪ್ರತಿಯೊಬ್ಬ ಸಾಧಕರ ಹಿಂದೆ ಗುರುವಿನ ಶ್ರಮ ಇದ್ದೇ ಇರುತ್ತದೆ. ಮಹಾಭಾರತದಲ್ಲಿ ದ್ರೋಣಾಚಾರ್ಯರು ಇದ್ದಂತೆ ಪ್ರಸ್ತುತ ಪ್ರತಿಯೊಬ್ಬ ನಾಗರಿಕ ಪ್ರಜೆಯ ಹಿಂದೆ ಗುರುವಿನ ನೆರಳು ಇದ್ದೇ ಇರುತ್ತದೆ. ಇಂತಹ ಗುರುಗಳಿಗೆ ಗೌರವವನ್ನು ಸೂಚಿಸುವುದು ಪ್ರತಿಯೊಬ್ಬ ಭಾರತೀಯರ ಕರ್ತವ್ಯವಾಗಿದೆ.

ಪ್ರತಿಫಲಾಪೇಕ್ಷೆ ಇಲ್ಲದ ಶ್ರಮಜೀವಿ ಗುರು: ಬಹುತೇಕ ವಿದ್ಯಾರ್ಥಿಗಳ ಬದುಕಿನಲ್ಲಿ ಪ್ರಮುಖ ಪಾತ್ರ ವಹಿಸುವ ಗುರುಗಳು, ವಿದ್ಯಾರ್ಥಿಗಳಿಂದ ಯಾವುದೇ ಪ್ರತಿಫಲದ ಅಪೇಕ್ಷೆಯನ್ನು ಮಾಡದೆ ತಮ್ಮ ಕಾಯಕವನ್ನು ಅತ್ಯಂತ ನಿಷ್ಠೆಯಿಂದ, ಸಮರ್ಥವಾಗಿ, ಶ್ರದ್ಧೆಯಿಂದ ಮಾಡುವ ಶ್ರಮಜೀವಿಗಳು. ಲಕ್ಷ, ಲಕ್ಷ ಸಂಪಾದನೆ ಮಾಡುವ ಇತರ ಉದ್ಯೋಗಗಳ ಅವಕಾಶವಿದ್ದರೂ ಶಿಕ್ಷಕ ಹುದ್ದೆಯನ್ನು ಆಯ್ಕೆ ಮಾಡಿಕೊಂಡು ತಾನು ಕಲಿತ ವಿಷಯವನ್ನು ವಿದ್ಯಾರ್ಥಿಗಳಿಗೆ ಬೋಧಿಸುತ್ತಾ, ವಿದ್ಯಾರ್ಥಿಗಳ ಏಳಿಗೆಯಲ್ಲಿ ತನ್ನ ಸಂತೋಷವನ್ನು ಕಂಡುಕೊಳ್ಳುವ ಏಕೈಕ ಶ್ರಮಜೀವಿ ಎಂದರೆ ಅದು ಶಿಕ್ಷಕರು.

ಬದಲಾದ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಇಂದಿನ ಕೆಲವು ವಿದ್ಯಾರ್ಥಿಗಳು ಈ ಮಾತನ್ನು ಒಪ್ಪುವುದು ಕಷ್ಟ, ಸಂಬಳ ತೆಗೆದುಕೊಳ್ಳುತ್ತಾರೆ, ತಮ್ಮ ಕೆಲಸವನ್ನು ಮಾಡುತ್ತಾರೆ ಎಂಬಂತಹ ಧೋರಣೆ ಎಂದಿಗೂ ಸಲ್ಲದು. ಒಂದು ಸಣ್ಣ ಸಮೀಕ್ಷೆ ಮಾಡಿದರೆ ಸಾಕು ತಿಳಿಯುತ್ತದೆ –ಶಿಕ್ಷಕರಿಗೆ ಸಿಗುವ ವೇತನ, ಅವರಿಗೆ ಸಿಗುವ ಸವಲತ್ತುಗಳು ಎಷ್ಟರಮಟ್ಟಿಗೆ ಇದೆ ಎಂಬ ವಾಸ್ತವದ ಅಂಶ ಗೋಚರವಾಗುತ್ತದೆ.

ತನ್ನ ಸಮಸ್ಯೆಗಳು ಏನೇ ಇದ್ದರೂ ವಿದ್ಯಾರ್ಥಿಗಳಲ್ಲಿ ಪ್ರೇರಣೆ, ಉತ್ಸಾಹವನ್ನು ನೀಡುತ್ತಾ ವಿದ್ಯಾರ್ಥಿಗಳ ಸಾಧನೆಯಲ್ಲಿ ತನ್ನ ಸಂತೋಷವನ್ನು ಕಂಡುಕೊಳ್ಳುವ ಶಿಕ್ಷಕ ನಿಜವಾದ ಅರ್ಥದಲ್ಲಿ ಪ್ರತಿಫಲದ ಅಪೇಕ್ಷೆ ಇಲ್ಲದ ಶ್ರಮಜೀವಿಯೇ ಹೌದು.

ಪ್ರೇರಣೆ, ಸ್ಫೂರ್ತಿಯ ಚಿಲುಮೆ ಗುರು– ವಿದ್ಯಾವಂತರಾಗಲಿ ಅಥವಾ ವಿದ್ಯೆಯನ್ನು ಅಪೂರ್ಣಗೊಳಿಸಿದವರೇ ಆಗಲಿ ಒಂದಲ್ಲ ಒಂದು ರೀತಿಯಲ್ಲಿ ತಮ್ಮ ನೆಚ್ಚಿನ ಗುರುಗಳಿಂದ ಪ್ರೇರಣೆ, ಸ್ಫೂರ್ತಿ ಪಡೆದೇ ಇರುತ್ತಾರೆ. ಅಷ್ಟೇ ಅಲ್ಲ ತಮ್ಮ ಬದುಕಿನಲ್ಲಿ ಪ್ರಭಾವ ಬೀರಿದ ಗುರುವಿನ ಯಾವುದಾದರೂ ಒಂದು ಅಂಶವನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಆ ನಿಟ್ಟಿನಲ್ಲಿ ಮುನ್ನುಗ್ಗುವ ಕೆಲಸವನ್ನು ಮಾಡುತ್ತಲೇ ಇರುತ್ತಾರೆ. ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿ, ಸ್ಫೂರ್ತಿಯ ಮಾತುಗಳನ್ನು ಹೇಳುತ್ತಾ ಸದೃಢ ವ್ಯಕ್ತಿತ್ವ ರೂಪಿಸಿ ಉತ್ತಮ ನಾಗರಿಕರನ್ನಾಗಿ ಮಾಡುವಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾಗಿರುತ್ತದೆ.



ಸರ್ವಪಲ್ಲಿ ರಾಧಾಕೃಷ್ಣನ್

ಪ್ರೇರಕಃ ಸೂಚಕಶ್ಚೈವ
ವಾಚಕೋ ದರ್ಶಕಸ್ತಥಾ
ಶಿಕ್ಷಕೋ ಬೋಧಕಶ್ಚೈವ
ಷಡೇತೇ ಗುರವಃ ಸ್ಮೃತಃ

ಎಂಬ ಈ ಶ್ಲೋಕವು ಆರು ರೀತಿಯ ಗುರುವಿನ ಗುಣಗಳನ್ನು ವಿವರಿಸುತ್ತದೆ: ಪ್ರೇರಕ (ಪ್ರೇರೇಪಿಸುವವನು), ಸೂಚಕ (ಸೂಚಿಸುವವನು), ವಾಚಕ (ಸತ್ಯ ಹೇಳುವವನು), ದರ್ಶಕ (ಮಾರ್ಗದರ್ಶಕ), ಶಿಕ್ಷಕ (ಶಿಕ್ಷಣ ನೀಡುವವನು), ಮತ್ತು ಬೋಧಕ (ಜ್ಞಾನ ಒದಗಿಸುವವನು). ಈ ಗುಣಗಳೆಲ್ಲವೂ ಗುರುಗಳಿಗೆ ಅನ್ವಯಿಸುತ್ತವೆ (ಸಂಗ್ರಹ).

ಆತ್ಮವಿಶ್ವಾಸವ ಹೆಚ್ಚಿಸಬಲ್ಲರು: ಎಂತಹ ಸಂದರ್ಭ ಬಂದರೂ, ಜೀವನದಲ್ಲಿ ಎಂತಹ ಕಷ್ಟ ಎದುರಾದರು ಧೈರ್ಯವಾಗಿ ನಿಂತು ಅವುಗಳನ್ನು ಎದುರಿಸುವ ಶಕ್ತಿಯನ್ನು ತುಂಬುವ ಮೂಲಕ ಕಳೆದುಕೊಂಡ ಆತ್ಮವಿಶ್ವಾಸವನ್ನು ಮತ್ತಷ್ಟು, ಮಗದಷ್ಟು ಹೆಚ್ಚಿಸುವ ಶಕ್ತಿ ಗುರುಗಳಿಗೆ ಇರುತ್ತದೆ. ನನ್ನಿಂದ ಈ ಕಾರ್ಯ ಸಾಧ್ಯವಿಲ್ಲ ಎಂಬಂತಹ ವಿದ್ಯಾರ್ಥಿಗೆ ನಾನು ಇದನ್ನು ಸಾಧಿಸಬಲ್ಲೆ ಎಂಬಂತಹ ಆತ್ಮವಿಶ್ವಾಸವನ್ನು ತುಂಬಬಲ್ಲ, ಸಕಾರಾತ್ಮಕ ಮಾತುಗಳ ಮೂಲಕ ವಿದ್ಯಾರ್ಥಿಗಳಲ್ಲಿ ನೈಜವಾಗಿ ಅಡಗಿರುವ ಪ್ರತಿಭೆಯ ಅನಾವರಣ ಮಾಡಬಲ್ಲ ಶಕ್ತಿ ಗುರುವಿಗಿರುತ್ತದೆ.

ಬದಲಾವಣೆಗೆ ತಕ್ಕಂತೆ ಮಾರ್ಪಾಡುಗೊಳ್ಳುತ್ತಾರೆ: ಹರಿಯುವ ನೀರಿನಂತೆ ಸದಾ ಕಾಲ ಬದಲಾವಣೆಗೆ ಸಿದ್ಧರಾಗಿ ನಿಲ್ಲುವ ಶಿಕ್ಷಕರು ಶೈಕ್ಷಣಿಕ, ಸಾಮಾಜಿಕವಾಗಿ ಎಂತಹ ಪರಿಸ್ಥಿತಿಗಳು ಬದಲಾದರೂ ಅವುಗಳನ್ನು ಸಮರ್ಥವಾಗಿ ಅರಿತುಕೊಂಡು ಬದಲಾವಣೆಯ ಹರಿಕಾರರಾಗಿ ತಮ್ಮನ್ನು ತಾವು ಬದಲಿಸಿಕೊಂಡು ಏನೇ ಕಷ್ಟ ಎದುರಾದರೂ ಎದೆಗುಂದದೆ ವಿದ್ಯಾರ್ಥಿಗಳ ಭವಿಷ್ಯಕ್ಕೆ ದಾರಿದೀಪವಾಗಿ ದೀಪ ತಾನೇ ಉರಿದರೂ ಇತರರಿಗೆ ಬೆಳಕು ನೀಡುವಂತೆ ಭರವಸೆಯ ಜ್ಯೋತಿಯಾಗಿ ಪ್ರಜ್ವಲಿಸುವ ಗುಣ ಶಿಕ್ಷಕರಿಗೆ ಇರುತ್ತದೆ.

ಉತ್ತಮ ಸಮಾಜಕ್ಕೆ ಮಾರ್ಗದರ್ಶಕರಾಗಿರುತ್ತಾರೆ: ಕೇವಲ ಪಠ್ಯವನ್ನು ಬೋಧಿಸುವುದು, ಅಂಕಗಳನ್ನು ಹೆಚ್ಚಾಗಿ ಬರುವಂತೆ ನೋಡಿಕೊಳ್ಳುವುದು ಇದಷ್ಟೇ ನಿಜವಾದ ಗುರುವಿನ ಕೆಲಸವಲ್ಲ. ವಿದ್ಯಾರ್ಥಿಗಳ ಭಾವನೆಗಳಿಗೆ ಸ್ಪಂದಿಸುವ ಭಾವನಾತ್ಮಕವಾಗಿ ಅವರ ಸಮಸ್ಯೆಗಳನ್ನು ಅರಿತು ಅವುಗಳನ್ನು ಸರಿಪಡಿಸುವ, ಸಾಮಾಜಿಕವಾಗಿ ಬದುಕಲು ಬೇಕಾದ ಗುಣಗಳನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವ ಅವಶ್ಯಕತೆಯನ್ನು ಕಲಿಸುವ ಮೂಲಕ ಗುರು ಉತ್ತಮ ಸಮಾಜಕ್ಕೆ ಮಾರ್ಗದರ್ಶಕರಾಗಿ ತಮ್ಮ ಕಾರ್ಯನಿರ್ವಹಿಸುತ್ತಾರೆ.

ನೈತಿಕ ಮೌಲ್ಯ ಕಲಿಸಬಲ್ಲರು: ಯಾವುದನ್ನು ಮಾಡಬೇಕು, ಯಾವುದನ್ನು ಮಾಡಬಾರದು, ಬದುಕಿನಲ್ಲಿ ನಾವು ಅಳವಡಿಸಿಕೊಳ್ಳಬೇಕಾದ ನೈತಿಕ ಮೌಲ್ಯಗಳು ಯಾವುವು ಎಂಬುದನ್ನು ವಿದ್ಯಾರ್ಥಿಗಳ ಮನಮುಟ್ಟುವಂತೆ ತಿಳಿಸಬಲ್ಲ ಗುಣ ಶಿಕ್ಷಕರಿಗಿರುತ್ತದೆ. ಬದುಕಿನಲ್ಲಿ ನೈತಿಕತೆ ಬಹಳ ಪ್ರಮುಖವಾದದ್ದು. ಅಂತಹ ನೈತಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ, ಅದನ್ನು ಪಾಲಿಸುವ ಮಾರ್ಗವನ್ನು ಶಿಕ್ಷಕರು ಕಲಿಸಬಲ್ಲವರಾಗಿರುತ್ತಾರೆ.

ಸೃಜನಶೀಲತೆ ಬೆಳೆಸಬಲ್ಲರು: ವಿದ್ಯಾರ್ಥಿಗಳಲ್ಲಿ ಅಡಗಿರುವ ನೈಜ್ಯ ಪ್ರತಿಭೆಯನ್ನು ಗುರುತಿಸಿ ಅವರ ಶಕ್ತಿ ಸಾಮರ್ಥ್ಯವನ್ನು ಅರಿತು ಸೃಜನಶೀಲತೆಯನ್ನು ಬೆಳೆಸಬಲ್ಲ ಗುಣ ಶಿಕ್ಷಕರಿಗೆ ಇರುತ್ತದೆ. ಹಾಗೆ ನೋಡಿದರೆ ಪ್ರತಿಯೊಬ್ಬರಲ್ಲೂ ಒಂದಲ್ಲ ಒಂದು ಪ್ರತಿಭೆ ಅಡಕವಾಗಿರುತ್ತದೆ. ಅಡಕವಾಗಿರುವ ಪ್ರತಿಭೆಯನ್ನು ಅನಾವರಣಗೊಳಿಸಲು ಮಾರ್ಗದರ್ಶಕರೊಬ್ಬರ ಅಗತ್ಯ ಇರುತ್ತದೆ. ಈ ಕೆಲಸವನ್ನು ಸಮರ್ಥ ಶಿಕ್ಷಕರಾದವರು ದಕ್ಷವಾಗಿ ನಿರ್ವಹಿಸುತ್ತಾರೆ. ಸೃಜನಶೀಲತೆಯನ್ನು ಹೆಚ್ಚುಗೊಳಿಸಿ ಸಾಧನೆಗೆ ಸ್ಫೂರ್ತಿ ನೀಡಬಲ್ಲವರಾಗಿರುತ್ತಾರೆ.

> ಸಮರ್ಥ ಶಿಕ್ಷಕ ತನ್ನ ಕೆಲಸವನ್ನು ಸರಿಯಾಗಿ ನಿರ್ವಹಿಸಿದ್ದಲ್ಲಿ ನಿಜವಾಗಿಯೂ ಅವರು ರಾಷ್ಟ್ರ ರಕ್ಷಕರಾಗಿರುತ್ತಾರೆ. ವೈದ್ಯ, ಅಭಿಯಂತರ, ವಕೀಲ, ಸೈನಿಕ ಹೀಗೆ ಯಾವುದೇ ವೃತ್ತಿಯಲ್ಲಿ ತೊಡಗಿಕೊಳ್ಳಲು ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ನಿಂತು ತನ್ನ ಕೆಲಸವನ್ನು ಅಚ್ಚುಕಟ್ಟಾಗಿ ನಿರ್ವಹಿಸುವ ಶಿಕ್ಷಕ ನಿಜವಾಗಿಯೂ ಸಮರ್ಥ ರಾಷ್ಟ್ರ ರಕ್ಷಕರು ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ.


ಶಿಕ್ಷಕ ರಾಷ್ಟ್ರ ರಕ್ಷಕ: ಸಮರ್ಥ ಶಿಕ್ಷಕ ತನ್ನ ಕೆಲಸವನ್ನು ಸರಿಯಾಗಿ ನಿರ್ವಹಿಸಿದ್ದಲ್ಲಿ ನಿಜವಾಗಿಯೂ ಅವರು ರಾಷ್ಟ್ರ ರಕ್ಷಕರಾಗಿರುತ್ತಾರೆ. ವೈದ್ಯ, ಅಭಿಯಂತರ, ವಕೀಲ, ಸೈನಿಕ ಹೀಗೆ ಯಾವುದೇ ವೃತ್ತಿಯಲ್ಲಿ ತೊಡಗಿಕೊಳ್ಳಲು ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ನಿಂತು ತನ್ನ ಕೆಲಸವನ್ನು ಅಚ್ಚುಕಟ್ಟಾಗಿ ನಿರ್ವಹಿಸುವ ಶಿಕ್ಷಕ ನಿಜವಾಗಿಯೂ ಸಮರ್ಥ ರಾಷ್ಟ್ರ ರಕ್ಷಕರು ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ.

ಗುರು–ಶಿಷ್ಯರ ಸಂಬಂಧ ಹೇಗಿರಬೇಕೆಂಬುದಕ್ಕೆ ಹಿರಿಯ ಶಿಕ್ಷಕರು ಹೇಳಿದ ಘಟನೆ ನೆನಪಾಗುತ್ತದೆ.

ಘಟನೆ: ಗ್ರೀಸ್ ದೇಶದ ಮಹಾದಂಡನಾಯಕನಾದ ಅಲೆಕ್ಸಾಂಡರ್ ಒಮ್ಮೆ ತನ್ನ ಮಂತ್ರಿಯೊಂದಿಗೆ ಬರುತ್ತಿರುವಾಗ ದಾರಿಯಲ್ಲಿ ಅವನ ಗುರುವಾದ ತತ್ವಜ್ಞಾನಿಯಾದ ಅರಿಸ್ಟಾಟಲ್‌ನನ್ನು ನೋಡಿ ತಾನೊಬ್ಬ ಚಕ್ರವರ್ತಿಯಾಗಿದ್ದರೂ ಅದನ್ನು ಲೆಕ್ಕಿಸದೇ ದೀರ್ಘದಂಡ ನಮಸ್ಕಾರ ಮಾಡುತ್ತಾನಂತೆ. ನಂತರ ಅಲೆಕ್ಸಾಂಡರ್ ಮತ್ತು ಅವನ ಮಂತ್ರಿ ಮುಂದೆ ಸಾಗುವಾಗ ಮಂತ್ರಿ ತನ್ನ ರಾಜನ ನಡೆವಳಿಕೆ ಕುರಿತು ಪ್ರಶ್ನಿಸಿದಾಗ **ಅರಿಸ್ಟಾಟಲ್** ಕೊಟ್ಟ ಉತ್ತರ ಗಮನಾರ್ಹವಾದುದು. ನನ್ನ ತಂದೆ ನನಗೆ ಜನ್ಮವನ್ನು ನೀಡಿದರು, ಆದರೆ ಗುರು ನನ್ನನ್ನು ಸ್ವರ್ಗದೆತ್ತರಕ್ಕೆ ಏರಿಸಿದ, ಅಮರ ಸಿರಿಯನ್ನು, ದಿವ್ಯ ಜೀವನವನ್ನು ಕೊಟ್ಟರು.ಅಂತವರ ಪಾದಗಳಿಗೆ ನಮಸ್ಕಾರ ಮಾಡಿ ಗೌರವ ನೀಡುವುದು ನಮ್ಮ ಕರ್ತವ್ಯ ಎಂದು ಹೇಳಿದನಂತೆ.

ಮೇಲಿನ ಈ ಘಟನೆ ನಡೆದಿತ್ತೇ ಇಲ್ಲವೇ ಎಂಬುದಕ್ಕಿಂತ ತಿಳಿಸುವ ಮೌಲ್ಯ ನಿಜಕ್ಕೂ ಮಾದರಿಯಾದುದು. ಗುರುವಿನ ಪಾತ್ರ ಶಿಷ್ಯರ ಬದುಕಿನಲ್ಲಿ ಎಷ್ಟು ಮಹತ್ವವಾದುದು ಎಂಬುದನ್ನು ತಿಳಿಸುವ ಈ ಘಟನೆ ಪ್ರೇರಣೆಯಾದುದು.

ಸಮಾಜದ ಭದ್ರತೆ ಮತ್ತು ಅಭಿವೃದ್ಧಿ ನಿಂತಿರುವುದು ಕಲಿಸುವ ಗುರುಗಳಿಂದ; ಅವರ ಹಿರಿಯ ಮಾರ್ಗದರ್ಶನ ಆರೋಗ್ಯಕರ ಸಮಾಜಕ್ಕೆ ಅಗತ್ಯವಾಗಿ



ಬೇಕಾಗಿದೆ. ಅವರಿಂದ ಮಾತ್ರ ಯೋಗ್ಯವಾದ ದೇಶದ ಚಿತ್ರಣವನ್ನು ಕಾಣಲು ಸಾಧ್ಯ. ಗುರುಗಳಿಲ್ಲದ ಉತ್ತಮ ರಾಷ್ಟ್ರದ ಕಲ್ಪನೆ ಸಾಧ್ಯವಿಲ್ಲ. ಗುರುಗಳು ಅರಿವಿನ ಧುರೀಣರು. ಬದುಕಿನಲ್ಲಿ ಮುನ್ನುಗ್ಗಲು ಸದಾ ಪ್ರೇರಕ ಶಕ್ತಿಯಾಗಿ ನಿಲ್ಲಬಲ್ಲ ಇಂತಹ ಗುರುಗಳಿಗೆ ಗೌರವವನ್ನು ಸಲ್ಲಿಸುವುದು, ಪ್ರತಿಯೊಬ್ಬ ನಾಗರಿಕರ ಕರ್ತವ್ಯವಾಗಿದ್ದು, ಬಿಡುವಿಲ್ಲದ ನಮ್ಮ ಸಮಯದಲ್ಲಿ ಈ ಒಂದು ದಿನವಾದರೂ ನಮ್ಮ ಬದುಕಿಗೆ ಸ್ಫೂರ್ತಿ ನೀಡಿದ, ಮಾರ್ಗದರ್ಶನ ತೋರಿದ, ಸಕಾರಾತ್ಮಕ ಆಲೋಚನೆಗಳನ್ನು ಬೆಳೆಸಿದ, ಮಾನವೀಯ ಮೌಲ್ಯಗಳನ್ನು ಹೆಚ್ಚಿಸಿದ ಗುರು ವೃಂದಕ್ಕೆ ಈ ಒಂದು ದಿನವಾದರೂ ಬಿಡುವು ಮಾಡಿಕೊಂಡು ಶುಭಾಶಯ ಹೇಳುವ ಮೂಲಕ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ಗುರುಗಳಿಗೆ ಅಭಿನಂದನೆ ತಿಳಿಸೋಣ.

ಶಿಕ್ಷಕರಿಗೆ ನಮನ

ಬೆಳಕಲ್ಲಿ ಬಾಳ ಬೆಳಗಬಲ್ಲ ಶಕ್ತಿ,
ಸನ್ಮಾರ್ಗ ತೋರಬಲ್ಲ ಬಂಧು,
ಪ್ರೇರಣೆ ನೀಡುವ ಮಾರ್ಗದರ್ಶಿ,
ಅಗೋಚರ ಪ್ರತಿಭೆಯ ಕಾಣುವಂತೆ ಮಾಡಿ
ಅದನು ಪೋಷಿಸುವ ಪೋಷಕ ಮಹರ್ಷಿ ನೀವು


ಅಜ್ಞಾನದ ಅಂಧಕಾರವ ಕರಗಿಸಿ
ಸುಜ್ಞಾನ ಬೆಳಗಿಸುವ ಆತ್ಮಬಂಧು,
ಅಕ್ಷರಗಳಲ್ಲಿ ಬದುಕ ಬೆಳೆಸುವ ಅಮರ ಜ್ಯೋತಿ;
ಸಮಸ್ಯೆಗಳಿಗೆ ಸಂಜೀವಿನಿ
ನಿಸ್ವಾರ್ಥದಿ ದುಡಿಯುವ ಕಾಯಕ ಜೀವಿ
ನಿಮ್ಮ ನೆರಳೇ ನಮ್ಮ ಬಾಳಿಗೆ ಸೂರು
ಆಶ್ರಯ ಬೇಡಿ ಬಂದೆವು ನಾವು

ಶಿಸ್ತನ್ನು ಕಲಿಸಿ, ಭರವಸೆಯ ತುಂಬಿ,
ಸೋಲಿನ ಮೂಟೆಯನು ಹೆಗಲಿಂದ ಇಳಿಸಿ,
ಗೆಲುವಿನ ಕಿರೀಟವನ್ನು ಮುಡಿಗೇರಿಸಿ
ಸಂಭ್ರಮಿಸಿದ ಜೀವಧಾತು ನೀವು.

ನಿಮ್ಮ ವ್ಯಕ್ತಿತ್ವ ಗಂಧದ ಕೊರಡು
ನೀವಿಲ್ಲದಿರೆ ನಮ್ಮ ಬದುಕು ಕೇವಲ ಬರಡು
ನಿಮ್ಮ ಬಿಂಬದಲ್ಲಿ ಕಾಣುವೆವು ನಮ್ಮ ಪ್ರತಿಬಿಂಬ,
ಕರುಣೆಯರಸ ಹೃದಯದ ತುಂಬಾ

ವೈದ್ಯ, ಅಭಿಯಂತರ, ವಕೀಲ,
ಆರಕ್ಷಕ, ಸೈನಿಕ, ವರ್ತಕ, ಪಟೇಲ
ವೃತ್ತಿ–ಪ್ರವೃತ್ತಿ ಯಾವುದಾದರಾಗಿರಲಿ
ಅದರ ಹಿಂದಿರುವ ಅಗೋಚರ ಶಕ್ತಿ ನೀವೇ

ಗೌರವಿಸಲು ಸಾಲದು ದಿನ–ಒಂದು ಕ್ಷಣ
ಅನುದಿನ–ಅನುಕ್ಷಣವೂ ನಿಮ್ಮದೇ ಗುಣಗಾನ,
ನಿತ್ಯವೂ ನಿಮ್ಮ ನಾಮದ ಪಠಣ,
ನಿಮ್ಮ ಸ್ಮರಣೆ ನಮ್ಮೊಳಗೆ ಅಮರ
ಅಕ್ಷರದಾತರೇ ನಿಮಗಿದೋ
ಅನಂತ ಕೋಟಿ ನಮಸ್ಕಾರ.



ಶ್ರೀಗಳಿಂದ ಆಶೀರ್ವಾದ ಪಡೆದ ಜಿಟಿಡಿ

ಮೈಸೂರು ತಾಲೂಕು ವರುಣ ಹೋಬಳಿಯ ಚಿಕ್ಕಹಳ್ಳಿಯಲ್ಲಿರುವ ಶ್ರೀ ವಿಶ್ವಕರ್ಮ ಜಗದ್ಗುರು ಪೀಠದ ಅರೆಮಾದನಹಳ್ಳಿ ಮಹಾ ಸಂಸ್ಥಾನದ ಶಾಖಾ ಮಠದಲ್ಲಿ ನಡೆಯುತ್ತಿರುವ ಪರಮಪೂಜ್ಯ ಅನಂತ ಶ್ರೀವಿಭೂಷಿತ ಶಿವಸುಜ್ಞಾನ ತೀರ್ಥ ಮಹಾಸ್ವಾಮಿಗಳವರ ಶ್ರೀ ವಿಶ್ವಾವಸು ನಾಮ ಸಂವತ್ಸರದ, 43ನೇ ಚಾತುರ್ಮಾಸ್ಯ ವ್ರತಾನುಷ್ಠಾನ ಕಾರ್ಯಕ್ರಮದಲ್ಲಿ ಶಾಸಕರಾದ ಜಿ.ಟಿ.ದೇವೇಗೌಡರು ಭಾಗವಹಿಸಿ, ಗುರುಗಳ ಆಶೀರ್ವಾದ ಪಡೆದರು. ಈ ವೇಳೆ ಮುಖಂಡರಾದ ಎಂ.ಸಿ.ಮರಿಸ್ವಾಮಿ, ವೈ.ಈ. ಮಂಜುನಾಥ್, ನಂಜುಂಡಸ್ವಾಮಿ, ನಾಗೇಂದ್ರ, ಕುಮಾರ್, ಈಶ್ವರಚಾರ್, ರುದ್ರಣ್ಣ, ಪ್ರದೀಪ್, ಪ್ರವೀಣ್ ಹಾಜರಿದ್ದರು.

ಸೆ.7, ಕೊಡವ ಸಮಾಜದಲ್ಲಿ ಕೈಲ್ ಪೋಲ್ದ್ ಆಚರಣೆ

ಮೈಸೂರು, ಸೆ. 4– ಮೈಸೂರಿನ ವಿಜಯನಗರ 1ನೇ ಹಂತದಲ್ಲಿರುವ ಕೊಡವ ಸಮಾಜದ ಆವರಣದಲ್ಲಿ ಸೆ.7ರಂದು ವಾರ್ಷಿಕ ಕೈಲ್ ಪೋಲ್ದ್ ಸಂತೋಷ ಕೂಟವನ್ನು ಏರ್ಪಡಿಸಲಾಗಿದೆ. ಕಾರ್ಯಕ್ರಮ ಬೆಳಗ್ಗೆ 10ರಿಂದ ಸಂಜೆ 5ರವರೆಗೆ ನಡೆಯಲಿದ್ದು, ಆಯುಧ ಪೂಜಾ, ಕ್ರೀಡೆಗಳು ಮತ್ತು ಆಟಗಳು, ಲಕ್ಕಿ ಡಿಪ್, ಗಣ್ಯರಿಗೆ ಸನ್ಮಾನ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ವಿತರಣೆ ಕಾರ್ಯಕ್ರಮಗಳನ್ನು ಒಳಗೊಂಡಿದೆ. ಮುಖ್ಯ ಅತಿಥಿಗಳಾಗಿ ಎನ್‌ಫೋರ್ಸ್‌ಮೆಂಟ್ ಡೈರೆಕ್ಟರೇಟ್ (ಇಡಿ) ಸಹಾಯಕ ನಿರ್ದೇಶಕ ಡಾ. ಕೊಟ್ಟಂಗಡ ಪೆಮ್ಮಯ್ಯ ಭಾಗವಹಿಸುವರು. ಮೈಸೂರು ಕೊಡವ ಸಮಾಜದ ಅಧ್ಯಕ್ಷ ಪೂಂಜಂಡ ಎ.ಗಣಪತಿ ಅಧ್ಯಕ್ಷತೆ ವಹಿಸುವರು. ಸಮಾಜದ ಉಪಾಧ್ಯಕ್ಷ ಮಾಚಿಮಾಡ ಪಿ.ನಾಣಯ್ಯ, ಕಾರ್ಯದರ್ಶಿ ಕೇಟೋಳಿರ ಎ.ಬೆಳ್ಳಿಯಪ್ಪ ಜಂಟಿ ಕಾರ್ಯದರ್ಶಿ ಶ್ರೀಮತಿ ಅಜ್ಜಿಕುಟ್ಟೀರ ಡಯಾನಾ ಪೂವಯ್ಯ, ಖಜಾಂಚಿ ಇಟ್ಟೀರ ಜಿ.ಕಾಶಿಯಪ್ಪ ಉಪಸ್ಥಿತರಿರುವರು.

ವಾರ್ಷಿಕ ಮಹಾಸಭೆ

ಮೈಸೂರು: ಕರ್ನಾಟಕ ರಾಜ್ಯ ಕಾಲೇಜು ಅಧ್ಯಾಪಕರ ಹಾಗೂ ಶಾಲಾ ಶಿಕ್ಷಕರ ಗೃಹ ನಿರ್ಮಾಣ ಸಹಕಾರ ಸಂಘದ ಸರ್ವ ಸದಸ್ಯರ ಮಹಾಸಭೆ ಸೆ.7ರಂದು ಬೆಳಗ್ಗೆ 11 ಗಂಟೆಗೆ ಅಕ್ಕನ ಬಳಗದಲ್ಲಿ ಹಮ್ಮಿಕೊಳ್ಳಲಾಗಿದೆ.

ಸೈನಿಕರಂತೆ ಕೆಲಸ ನಿರ್ವಹಿಸುವ ಪತ್ರಿಕಾ ವಿತರಕರು

ಮೈಸೂರು ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಪ್ರಶಂಸೆ

ಮೈಸೂರು, ಸೆ. 4– ಬಿಸಿಲು, ಮಳೆ, ಚಳಿ ಲೆಕ್ಕಿಸದೆ ವರ್ಷವಿಡೀ ಕೆಲಸ ನಿರ್ವಹಿಸುವ ಯೋಧರಂತೆ ನಮ್ಮ ಪತ್ರಿಕಾ ವಿತರಕರದ್ದು ಒಂದು ರೀತಿಯ ತ್ಯಾಗದ ಕಾರ್ಯ ಎಂದು ಮೈಸೂರು ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಹೇಳಿದರು.

ಮೈಸೂರಿನ ಚಾಮುಂಡಿಪುರಂನಲ್ಲಿ ಕೆಎಂಪಿಕೆ ಟ್ರಸ್ಟ್ ವತಿಯಿಂದ ಪತ್ರಿಕಾ ವಿತರಕರ ದಿನದ ಅಂಗವಾಗಿ ಹಿರಿಯ ಪತ್ರಿಕಾ ವಿತರಕರಾದ ಹೋಮದೇವ, ಜವರಪ್ಪ, ನಾಗೇಶ್ ಕಾವ್ಯ ಪ್ರಿಯ, ಎಂ.ಪಿ.ಗುಂಡಪ್ಪ, ಶ್ರೀಕಾಂತ್ ಅವರನ್ನು ಸನ್ಮಾನಿಸಿ, ಗೌರವ ಧನ ನೀಡಿ ಮಾತನಾಡಿದ ಅವರು, ಮಾಜಿ ರಾಷ್ಟ್ರಪತಿ ಅಬ್ದುಲ್ ಕಲಾಂ ಸಹ ಪತ್ರಿಕಾ ವಿತರಕರಾಗಿದ್ದವರು. ಪತ್ರಿಕಾ ವಿತರಕರನ್ನು ಎಂದಿಗೂ ಕೀಳಾಗಿ ಪರಿಗಣಿಸಬಾರದು.



ಮೈಸೂರಿನ ಚಾಮುಂಡಿಪುರಂನಲ್ಲಿ ಕೆಎಂಪಿಕೆ ಟ್ರಸ್ಟ್ ವತಿಯಿಂದ ಹಿರಿಯ ಪತ್ರಿಕಾ ವಿತರಕರಾದ ಹೋಮದೇವ, ಜವರಪ್ಪ, ನಾಗೇಶ್ ಕಾವ್ಯ ಪ್ರಿಯ, ಎಂ.ಪಿ.ಗುಂಡಪ್ಪ, ಶ್ರೀಕಾಂತ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ವಿತರಕರು ಮಳೆಗಾಲದಲ್ಲಿ ಸಾಕಷ್ಟು ಸಮಸ್ಯೆ ಎದುರಿಸುತ್ತಾರೆ. ವಾಹನಗಳಿಂದ ಪತ್ರಿಕೆಗಳ ಬಂಡಲ್‌ಗಳನ್ನು ಇಳಿಸಿಕೊಳ್ಳಲು, ಪತ್ರಿಕೆ ಹಾಕುವ ಹುಡುಗರಿಗೆ ಹಂಚಲು ಬಹಳ ಕಷ್ಟವಾಗುತ್ತದೆ. ಒಂದು ಹನಿ ಮಳೆ ನೀರು ಬಿದ್ದರೂ ಪತ್ರಿಕೆ ಹಾಳಾಗುತ್ತದೆ. ಆದ್ದರಿಂದ ಪತ್ರಿಕೆಗಳ ಹಂಚಿಕೆಗೆ ಮೈಸೂರು ನಗರ ಹಾಗೂ ತಾಲೂಕು ಕೇಂದ್ರಗಳಲ್ಲಿ ಶಾಶ್ವತವಾಗಿ ಜಾಗ ಕಲ್ಪಿಸಿಕೊಡಬೇಕು. ಮೈಸೂರಿನ ವಸ್ತುಪ್ರದರ್ಶನ ಆವರಣ ಇಲ್ಲವೇ ಟೌನ್‌ಹಾಲ್ ಸೇರಿದಂತೆ ಇನ್ನಿತರ ಯಾವುದಾದರೂ ಸ್ಥಳದಲ್ಲಿ ಪತ್ರಿಕಾ ವಿತರಕರಿಗೆ ಶಾಶ್ವತ ಸ್ಥಳಾವಕಾಶ ಮೈಸೂರು ನಗರಪಾಲಿಕೆ ಮಾಡಿಕೊಡಬೇಕು. ಸರ್ಕಾರ, ಹಿರಿಯ ಪತ್ರಿಕಾ ವಿತರಕರನ್ನು ಗುರುತಿಸಿ ರಾಜ್ಯಮಟ್ಟದ ಪ್ರಶಸ್ತಿ ನೀಡುವ ಮೂಲಕ ಅವರನ್ನು ಗೌರವಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪತ್ರಿಕಾ ವಿತರಕರ ಸಂಘದ ಕಾರ್ಯದರ್ಶಿ ರವಿ, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಜಿ ರಾಘವೇಂದ್ರ, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಮೈಸೂರು ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ರಮೇಶ್ ರಾಮಪ್ಪ, ಎಸ್.ಎನ್.ರಾಜೇಶ್, ಲೋಕೇಶ್, ದಿನೇಶ್ ಇನ್ನಿತರರು ಹಾಜರಿದ್ದರು

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಶ್ರೀ ಹೊಸಮಠದ ಕಿರಿಯ ಶ್ರೀ ಸಿದ್ದಬಸವ ಸ್ವಾಮೀಜಿ ನಿರಂಜನ ಪಟ್ಟಾಧಿಕಾರ; ಚಿದಾನಂದ ಸ್ವಾಮೀಜಿಗೆ ಭಕ್ತಿಪೂರ್ವಕ ಗುರುವಂದನೆ

● ಇದೇ ವೇಳೆ ಚಿದ್ಬೆಳಕು ಗ್ರಂಥ, ಚಿದಾಮೃತ ಚಿತ್ರ ಸಂಪುಟ ಲೋಕಾರ್ಪಣೆ ● ಮಠಾಧೀಶರು, ಕೇಂದ್ರ ಸಚಿವ ಸೋಮಣ್ಣ, ಶಾಸಕ ಜಿ.ಟಿ.ದೇವೇಗೌಡರ ಉಪಸ್ಥಿತಿ

ಮೈಸೂರು, ಸೆ.4(ಎಂಕೆ)–ಐದು ಶತಮಾನಗಳ ವಿರಕ್ತ ಪರಂಪರೆಯ ಇತಿಹಾಸವನ್ನೊಳಗೊಂಡ ಮೈಸೂರಿನ ಹೊಸಮಠದ ಶ್ರೀ ಚಿದಾನಂದ ಮಹಾಸ್ವಾಮೀಜಿ ಅವರು, ವಿವಿಧ ಮಠಾಧೀಶರು, ಸದ್ಭಕ್ತರ ಸಮ್ಮುಖದಲ್ಲಿ ಶಿವದೀಕ್ಷಾ ಸಂಸ್ಕಾರದೊಂದಿಗೆ ಶ್ರೀ ಮಠದ ಪಟ್ಟಾಧಿಕಾರವನ್ನು ಶ್ರೀ ಸಿದ್ದಬಸವ ಸ್ವಾಮೀಜಿ (ಎಂ.ಬಿ.ರಾಕೇಶ್)ಯವರಿಗೆ ವಿಧ್ಯುಕ್ತವಾಗಿ ನೀಡಿ, ಆಶೀರ್ವದಿಸಿದರು.

ಶ್ರೀ ಹೊಸಮಠ ಆವರಣದಲ್ಲಿ ಶ್ರೀ ನಟರಾಜ ಪ್ರತಿಷ್ಠಾನದ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ನಿರಂಜನ ಪಟ್ಟಾಧಿಕಾರ ಮಹೋತ್ಸವ, ಶ್ರೀ ಚಿದಾನಂದ ಮಹಾಸ್ವಾಮೀಜಿಯವರ ಅಮೃತ ಮಹೋತ್ಸವದ ಗುರುವಂದನೆ ಹಾಗೂ ಚಿದ್ಬೆಳಕು ಗ್ರಂಥ ಮತ್ತು ಚಿದಾಮೃತ ಚಿತ್ರಸಂಪುಟ ಲೋಕಾರ್ಪಣೆ ಸಮಾರಂಭದಲ್ಲಿ ವಿರಕ್ತಾಶ್ರಮಾಧಿಕಾರ ಅನುಗ್ರಹಿಸಲಾಯಿತು.

ಬಳಿಕ ನಿರಂಜನ ಪಟ್ಟಾಧಿಕಾರ ಸ್ವೀಕರಿಸಿದ ಶ್ರೀ ಹೊಸಮಠದ ಕಿರಿಯ ಶ್ರೀ ಸಿದ್ದಬಸವ ಸ್ವಾಮೀಜಿ ಅವರಿಂದ ಶ್ರೀ ಚಿದಾನಂದ ಮಹಾಸ್ವಾಮೀಜಿಯವರಿಗೆ ಶ್ರದ್ಧಾ–ಭಕ್ತಿಯೊಂದಿಗೆ ಗುರುವಂದನೆ ಸಲ್ಲಿಸಲಾಯಿತು.

ಹಾಗೆಯೇ ವಿವಿಧ ಮಠಾಧೀಶರು, ಶ್ರೀ ನಟರಾಜ ಪ್ರತಿಷ್ಠಾನ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ, ಬಸವ ಬಳಗಗಳ ಒಕ್ಕೂಟ ಸೇರಿದಂತೆ ಹತ್ತಾರು ಸಂಘ–ಸಂಸ್ಥೆಗಳು, ಮುಖಂಡರು ಹಾಗೂ ಅಪಾರ ಶಿಷ್ಯವೃಂದದಿಂದ ಗೌರವಪೂರ್ವಕವಾಗಿ ಗುರುವಂದನೆ ನೆರವೇರಿಸಲಾಯಿತು.

ಚಿದಾನಂದ ಸ್ವಾಮೀಜಿ ಅಡಿಪಾಯ ಹಾಕಿದ್ದಾರೆ: ಇದಕ್ಕೂ ಮುನ್ನ ಸಮಾರಂಭವನ್ನು ಉದ್ಘಾಟಿಸಿದ ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಮಾತನಾಡಿ, ಶ್ರೀ ಹೊಸಮಠವು ಸುಮಾರು ಐದು ದಶಕಗಳ ಇತಿಹಾಸ ಹೊಂದಿದೆ. ಮಠ–ಮಾನ್ಯಗಳನ್ನು ಕಟ್ಟುವುದು ಬಹಳ ಸುಲಭ. ಆದರೆ, ಅವುಗಳನ್ನು ಸಹಸ್ರಾರು ವರ್ಷಗಳ ಕಾಲ ನಡೆಸಿಕೊಂಡು ಹೋಗುವುದು ತಪಸ್ಸು ಮತ್ತು ಪೂಜಾ ಫಲವಾಗಿದೆ. ಈ ಎರಡನ್ನೂ ಸಮರ್ಪಕವಾಗಿ ನಿರ್ವಹಣೆ ಮಾಡಿರುವ ಶ್ರೀ ಹೊಸಮಠದ 21ನೇ ಸ್ವಾಮೀಜಿಗಳಾದ ಶ್ರೀ ಚಿದಾನಂದ ಸ್ವಾಮೀಜಿಯವರು ದಾಸೋಹ, ದೂರದೃಷ್ಟಿಯುಳ್ಳ ಚಿಂತನೆ ಮತ್ತು ಕೈಗೊಂಡ ಅನೇಕ ತೀರ್ಮಾನಗಳಿಂದ ಸೂರ್ಯ–ಚಂದ್ರ ಇರುವವರೆಗೂ ಮುಂದುವರೆಸಿಕೊಂಡು ಹೋಗುವಂತೆ ಶ್ರೀ ಮಠಕ್ಕೆ ದೊಡ್ಡ ಅಡಿಪಾಯವನ್ನು ಹಾಕಿದ್ದಾರೆ ಎಂದರು.

ರಾಷ್ಟ್ರದ ಅಭಿವೃದ್ಧಿಗೆ ಶಿಕ್ಷಣ ಅವಶ್ಯವಾಗಿದ್ದು, ಈ ನಿಟ್ಟಿನಲ್ಲಿ ಎಲ್ಲಾ ವರ್ಗದವರಿಗೂ ಶಿಕ್ಷಣ ನೀಡುವ ಮೂಲಕ ಸಮಾಜಕ್ಕೆ, ರಾಷ್ಟ್ರಕ್ಕೆ, ನಾಡಿಗೆ ಶ್ರೀ ಚಿದಾನಂದ ಸ್ವಾಮೀಜಿಯವರು ಅಪಾರ ಕೊಡುಗೆ ನೀಡಿದ್ದಾರೆ. ಬಡವರ ಮನೆಯಲ್ಲಿಯೂ ಸಂಸ್ಕಾರ, ಬಡವರ ಮಕ್ಕಳು ವಿದ್ಯಾಭ್ಯಾಸ ಪಡೆದು ಅಧಿಕಾರಿಗಳಾಗಬೇಕು ಎಂಬುದಕ್ಕೆ ಹತ್ತಾರು ವರ್ಷಗಳ ಕಾಲ ಶ್ರೀಗಳು, ಕೈಗೊಂಡ ಅನೇಕ ಪ್ರಗತಿಪರ ಕಾರ್ಯಕ್ರಮಗಳು ನಮ್ಮ ಮುಂದಿವೆ. ಸಾಂಸ್ಕೃತಿಕ ಹಿನ್ನೆಲೆಯಲ್ಲಿ ಕನ್ನಡ ನಾಡಿನ ಇತಿಹಾಸವನ್ನು ವಿಶ್ವದ ಭೂಪಟಕ್ಕೆ ಕೊಂಡೊಯ್ದಿದ್ದಾರೆ. ಅದೇ ರೀತಿ ಹೊಸಮಠವೂ ವ್ಯವಸ್ಥಿತವಾಗಿ ಕಾಯಕ ತತ್ವದ ಮೂಲಕ ಸಮಾಜಕ್ಕೆ ಸಮಾನತೆ ಸಂದೇಶ ನೀಡಿದೆ ಎಂದು ಶ್ಲಾಘಿಸಿದರು.

ರಾಜೇಂದ್ರ ಶ್ರೀಗಳ ಆಶೀರ್ವಾದ: ಶ್ರೀ ಹೊಸಮಠದ ನೂತನ ಲಾಂಛನ ಬಿಡುಗಡೆಗೊಳಿಸಿದ ವಾಟಾಳು ಶ್ರೀ ಸೂರ್ಯ ಸಿಂಹಾಸನ ಮಠದ ಶ್ರೀ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ನಾನು ಮತ್ತು ಶ್ರೀ ಹೊಸಮಠ ಚಿದಾನಂದ ಸ್ವಾಮೀಜಿಗಳು ಕಾಲೇಜು ಸ್ನೇಹಿತರು. ಆಗ ಪೂಜ್ಯ ಸುತ್ತೂರು ರಾಜೇಂದ್ರ ಸ್ವಾಮೀಜಿಯವರು ಚಿದಾನಂದ ಸ್ವಾಮೀಜಿಯವರ ಕಾರ್ಯಕ್ಷಮತೆ ನೋಡಿ ಅನೇಕ ಜವಾಬ್ದಾರಿಗಳನ್ನು ನೀಡಿದ್ದರು. ರಾಜೇಂದ್ರ ಶ್ರೀಗಳ ಆಶೀರ್ವಾದಿಂದಲೇ ಚಿದಾನಂದ ಸ್ವಾಮೀಜಿಯವರು ಶಿಕ್ಷಣ ಸಂಸ್ಥೆಗಳನ್ನು ಕಟ್ಟಲು ಸಾಧ್ಯವಾಗಿದೆ ಎಂದು ಸ್ಮರಿಸಿದರು.

ಮಠಗಳು ನೊಂದವರ ಬಾಳಿಗೆ ಚೈತನ್ಯ ನೀಡಲಿವೆ: ವಾತ್ಸಲ್ಯ ತ್ರೈಮಾಸಿಕ ಸಂಚಿಕೆ ಬಿಡುಗಡೆಗೊಳಿಸಿದ ಬಾಗಲಕೋಟೆ ಇಳಕಲ್‌ನ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಮಹಾಸಂಸ್ಥಾನ ಮಠದ ಶ್ರೀ ಗುರುಮಹಾಂತ ಸ್ವಾಮೀಜಿ ಮಾತನಾಡಿ, ಮಠಗಳು ನೊಂದವರ ಬಾಳಿಗೆ ಚೈತನ್ಯ ನೀಡುವ ಕೇಂದ್ರಗಳಾಗಿವೆ. ಈ ನಿಟ್ಟಿನಲ್ಲಿ ಶ್ರೀ ಚಿದಾನಂದ ಸ್ವಾಮೀಜಿಯವರು ಸುಮಾರು 45 ವರ್ಷಗಳಿಂದ ಸಮಾಜಮುಖಿಯಾಗಿ ದುಡಿದು, ತಮ್ಮ ಆರೋಗ್ಯ ಕೆಡಿಸಿಕೊಂಡು, ಸಮಾಜದ ಆರೋಗ್ಯ ಕಾಪಾಡಿದ್ದಾರೆ. ಅವರ ಸೇವೆ ಸ್ಮರಣೀಯ ಎಂದು ಮೆಚ್ಚುಗೆ ಮಾತುಗಳನ್ನಾಡಿದರು.

ಹೊಸಮಠದಿಂದ ಶಿಕ್ಷಣ ಕ್ರಾಂತಿ: ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಗುಂಡ್ಲುಪೇಟೆ ಶಾಸಕ ಹೆಚ್.ಎಂ.ಗಣೇಶ್‌ಪ್ರಸಾದ್ ಮಾತನಾಡಿ, ಎಲ್ಲರಿಗೂ ಶಿಕ್ಷಣ ನೀಡಿದರೆ ಮಾತ್ರವೇ ದೇಶದ ಅಭಿವೃದ್ಧಿ ಸಾಧ್ಯ ಎಂಬುದನ್ನರಿತ ಸಮಾಜದಲ್ಲಿನ ಎಲ್ಲಾ ಮಠಗಳು ತಮ್ಮ ಶಿಕ್ಷಣ ಸಂಸ್ಥೆಗಳ ಮೂಲಕ ದೇಶದ ಕೀರ್ತಿ ಹೆಚ್ಚಿಸುತ್ತಿವೆ. ಈ ನಿಟ್ಟಿನಲ್ಲಿ ಶ್ರೀ ಹೊಸಮಠ ಕಾರ್ಯೋನ್ಮುಖವಾಗಿದ್ದು, ಹತ್ತಾರು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಕ್ರಾಂತಿಯನ್ನೇ ಮಾಡಿದೆ ಎಂದು ಬಣ್ಣಿಸಿದರು. ತುಮಕೂರು ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ ಚಿದ್ಬೆಳಕು ಗ್ರಂಥ ಲೋಕಾರ್ಪಣೆಗೊಳಿಸಿದರೆ, ಮಾಜಿ ಸಚಿವರೂ ಆದ ಶಾಸಕ ಜಿ.ಟಿ.ದೇವೇಗೌಡರು ಚಿದಾಮೃತ ಚಿತ್ರಸಂಪುಟ ಬಿಡುಗಡೆ ಮಾಡಿದರು.

ಸುತ್ತೂರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿದ್ದರು. ಕನಕಪುರ ದೇಗುಲ ಮಠದ ಡಾ.ಶ್ರೀ ಮುಮ್ಮಡಿ ನಿರ್ವಾಣ ಮಹಾ ಸ್ವಾಮೀಜಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ದೇವನೂರು ಶ್ರೀ ಗುರುಮಲ್ಲೇಶ್ವರ ಮಹಾಸಂಸ್ಥಾನ ದಾಸೋಹ ಮಠದ ಶ್ರೀ ಮಹಾಂತ ಸ್ವಾಮೀಜಿ, ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಸಂಸದ ಪ್ರತಾಪ್ ಸಿಂಹ, ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಹಿನಕಲ್ ಬಸವರಾಜು, ಬಸವ ಬಳಗಗಳ ಒಕ್ಕೂಟದ ನಿಕಟಪೂರ್ವ ಅಧ್ಯಕ್ಷ ಪ್ರದೀಪ್ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರಿನ ಶ್ರೀ ಹೊಸಮಠ ಆವರಣದಲ್ಲಿ ನಿರಂಜನ ಪಟ್ಟಾಧಿಕಾರ ಮಹೋತ್ಸವ, ಶ್ರೀ ಚಿದಾನಂದ ಮಹಾಸ್ವಾಮೀಜಿಯವರ ಅಮೃತ ಮಹೋತ್ಸವದ ಗುರುವಂದನೆ ಹಾಗೂ ಚಿದ್ಬೆಳಕು ಗ್ರಂಥ ಮತ್ತು ಚಿದಾಮೃತ ಚಿತ್ರಸಂಪುಟ ಲೋಕಾರ್ಪಣೆ ಸಮಾರಂಭ ನಡೆಯಿತು. ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ತುಮಕೂರು ಶ್ರೀ ಸಿದ್ದಗಂಗಾ ಮಠದ ಶ್ರೀ ಸಿದ್ಧಲಿಂಗ ಸ್ವಾಮೀಜಿ, ಮೈಸೂರಿನ ಶ್ರೀ ಹೊಸಮಠದ ಶ್ರೀ ಚಿದಾನಂದ ಸ್ವಾಮೀಜಿ, ಕನಕಪುರ ದೇಗುಲ ಮಠದ ಡಾ.ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮೀಜಿ, ಬಾಗಲಕೋಟೆ ಇಳಕಲ್‌ನ ಚಿತ್ತಗಿರಿ ಶ್ರೀ ವಿಜಯಮಹಾಂತೇಶ್ವರ ಮಹಾಸಂಸ್ಥಾನ ಮಠದ ಶ್ರೀ ಗುರುಮಹಾಂತ ಸ್ವಾಮೀಜಿ, ವಾಟಾಳು ಶ್ರೀ ಸೂರ್ಯ ಸಿಂಹಾಸನ ಮಠದ ಶ್ರೀ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ, ದೇವನೂರು ಶ್ರೀ ಗುರುಮಲ್ಲೇಶ್ವರ ಮಹಾಸಂಸ್ಥಾನ ದಾಸೋಹ ಮಠದ ಶ್ರೀ ಮಹಾಂತಸ್ವಾಮೀಜಿ, ಹೊಸಮಠದ ಕಿರಿಯ ಶ್ರೀ ಸಿದ್ದಬಸವ ಸ್ವಾಮೀಜಿ, ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಶಾಸಕರಾದ ಜಿ.ಟಿ.ದೇವೇಗೌಡ, ಟಿ.ಎಸ್.ಶ್ರೀವತ್ಸ, ಹೆಚ್.ಎಂ.ಗಣೇಶ್‌ಪ್ರಸಾದ್, ಮಾಜಿ ಸಂಸದ ಪ್ರತಾಪ್ ಸಿಂಹ, ಬಸವ ಬಳಗಗಳ ಒಕ್ಕೂಟದ ನಿಕಟಪೂರ್ವ ಅಧ್ಯಕ್ಷ ಪ್ರದೀಪ್ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಮಠಾಧೀಶರು, ಪೂಜ್ಯರೇ ದೇಶದ ಸಂಪತ್ತು...

“ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಶ್ರೀ ಹೊಸಮಠದ ಚಿದಾನಂದ ಸ್ವಾಮೀಜಿ ಅವರು, ಕಳೆದ 45 ವರ್ಷದಿಂದ ಬಸವಣ್ಣನವರ ಕಾಯಕ ಮಾರ್ಗದಲ್ಲಿ ನಡೆದುಕೊಂಡು ಬಂದಿದ್ದಾರೆ. ಮಠಾಧೀಶರು, ಪೂಜ್ಯರು ದೇಶದ ಸಂಪತ್ತು. ಅವರು, ಸಮಾಜದ ಎಲ್ಲಾ ವರ್ಗದ ಮಕ್ಕಳಿಗೂ ಶಿಕ್ಷಣ ನೀಡುವ ಮೂಲಕ ದೇಶದ ಅಭಿವೃದ್ಧಿಗೆ ತಮ್ಮದೇ ಕೊಡುಗೆ ನೀಡುತ್ತಿದ್ದಾರೆ. ಯಾವುದೇ ಮೂಲದಿಂದ ಆದಾಯವಿಲ್ಲದಿದ್ದರೂ ಶ್ರೀ ಚಿದಾನಂದ ಸ್ವಾಮೀಜಿ ಅವರು, ಸಾವಿರಾರು ಮಕ್ಕಳಿಗೆ ಶಿಕ್ಷಣ ನೀಡಿ, ಅವರನ್ನು ಪದವೀಧರರನ್ನಾಗಿ, ಅಧಿಕಾರಿಗಳನ್ನಾಗಿ ಮಾಡಿರುವುದು ಸಂತೋಷದ ವಿಚಾರ. ಗುರುಪರಂಪರೆಯಿಂದಲೇ ಬೆಳೆದು ಬಂದ ಶಿಷ್ಯರಿಗೆ ಪಟ್ಟಾಧಿಕಾರ ನೀಡಿರುವುದು ಮಠದ ಅಭಿವೃದ್ಧಿಗೆ ದಾರಿಯಾಗಿದೆ.

–ಜಿ.ಟಿ.ದೇವೇಗೌಡ, ಶಾಸಕರು, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ

ದೇಶದ ಸಂಸ್ಕೃತಿ ಉಳಿಸಿದರೆ ಮಾತ್ರವೇ ದೇಶ ಉಳಿಯಲಿದೆ

“ ದೇಶವಿದ್ದರೆ ನಾವು. ದೇಶದ ಸಂಸ್ಕೃತಿ ಉಳಿಸಿದರೆ ಮಾತ್ರವೇ ದೇಶ ಉಳಿಯಲಿದೆ. ವಿಚ್ಛಿದ್ರಕಾರಿ ಶಕ್ತಿಗಳಿಂದ, ಘಟನೆಗಳಿಂದ ದೇಶವನ್ನು ಯಾವ ರೀತಿ ರಕ್ಷಣೆ ಮಾಡಬೇಕು ಎಂಬುದಕ್ಕೆ ಏಪ್ರಿಲ್ ತಿಂಗಳಿನಲ್ಲಿ ನಡೆದ ಪಹಲ್ಗಾಮ್ ಘಟನೆ ಜ್ವಲಂತ ಸಾಕ್ಷಿ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕೊಟ್ಟಂತಹ ಸಂದೇಶವನ್ನು ವಿಶ್ವವೇ ಮೆಚ್ಚಿರುವುದು ಸಾಕ್ಷಿಯಾಗಿದೆ.

–ವಿ.ಸೋಮಣ್ಣ, ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವರು.

ಅನಕ್ಷರಸ್ಥರ ವಿರಳವಾಗಿಸುವಲ್ಲಿ ವೀರಶೈವ ಲಿಂಗಾಯತ ಮಠಗಳ ಕೊಡುಗೆ ದೊಡ್ಡದು...

“ ಉತ್ತರ ಭಾರತದ ರಾಜ್ಯಗಳಲ್ಲಿ ಅನಕ್ಷರಸ್ಥರ ಸಂಖ್ಯೆ ಹೆಚ್ಚಿದೆ. ಆದರೆ, ರಾಜ್ಯದಲ್ಲಿ ಅನಕ್ಷರಸ್ಥರ ಸಂಖ್ಯೆ ವಿರಳವಾಗಿಸುವಲ್ಲಿ ವೀರಶೈವ ಲಿಂಗಾಯತ ಮಠಗಳ ಕೊಡುಗೆ ದೊಡ್ಡದು. ಮೊದಲು ನೂರಾರು ಮಠಗಳಿದ್ದವು. ಈಗ ಬೆರಳೆಣಿಕೆಯಷ್ಟಿವೆ. ಹುಬ್ಬಳ್ಳಿ ಮೂಲದಿಂದ ಬಂದ ಶ್ರೀ ಸಂಗನಬಸವ ಸ್ವಾಮೀಜಿ ಅವರಿಂದ ಹೊಸಮಠವು ಸ್ಥಾಪನೆಯಾಯಿತು. ಚಿದಾನಂದ ಸ್ವಾಮೀಜಿ ಅವರು ಮಾತಿಗಿಂತ ಕೃತಿ ಲೇಸು ಎಂಬಂತೆ ಕಾಯಕ ಜೀವಿಗಳಾಗಿ ದುಡಿದಿದ್ದಾರೆ.

–ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಶ್ರೀ ವೀರಸಿಂಹಾಸನ ಮಠ, ಸುತ್ತೂರು.

ಜನರ ಬದುಕು ಹಸನಾಗಲು ಮಠಗಳ ಸೇವಾ ಪರಂಪರೆಯೇ ಕಾರಣ...

“ ರಾಜ್ಯದ ಜನರ ಬದುಕು ಹಸನಾಗಲು ಮಠಗಳ ಸೇವಾ ಪರಂಪರೆಯೇ ಕಾರಣ. ಹೊಸಮಠಕ್ಕೆ 500 ವರ್ಷದ ಇತಿಹಾಸವಿದ್ದು, ಅನೇಕ ಪೂಜ್ಯರು ತೇದ ಗಂಧದಂತೆ, ಉರಿಯುವ ದೀಪದಂತೆ ಅರ್ಪಿಸಿಕೊಂಡಿದ್ದಾರೆ. ಚಿದಾನಂದ ಸ್ವಾಮೀಜಿ ಅವರು ನಟರಾಜ ಪ್ರತಿಷ್ಠಾನದ ಮೂಲಕ ಸುತ್ತೂರಿನ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಮಾರ್ಗದರ್ಶನದಲ್ಲಿ ಶಿಕ್ಷಣ ಸಂಸ್ಥೆಗಳನ್ನು ಕಟ್ಟಿದರು. ಪೋಷಕರಿಗೆ ನಿಮ್ಮ ಇಬ್ಬರು ಮಕ್ಕಳಲ್ಲಿ ಒಬ್ಬರನ್ನು ಮಠಕ್ಕೆ ಸ್ವಾಮಿಗಳಾಗಿ ಕೊಡಿ ಎಂದರೆ ಮಠದ ಕಡೆ ಅವರು ನೋಡುವುದೇ ಇಲ್ಲ. ಅಂಥ ವೇಳೆಯಲ್ಲಿ ಸಿದ್ಧಬಸವ ಸ್ವಾಮೀಜಿ ಅವರನ್ನು ಅವರ ಪೋಷಕರು ಮಠಕ್ಕೆ ನೀಡಿದ್ದಾರೆ. ಶ್ರೀಗಳಿಗೆ ಸಮಾಜವೇ ತಾಯಿ–ತಂದೆ, ಬಂಧುಗಳು. ಸ್ವಹಿತ ಕಡೆಗಣಿಸಿ ಸಮಾಜದ ಕಲ್ಯಾಣಕ್ಕಾಗಿ ಪರಿಶ್ರಮಿಸುತ್ತಾರೆ. ಭಕ್ತರು ಅವರನ್ನು ಭಕ್ತಿ–ಶ್ರದ್ಧೆಯಿಂದ ನೋಡಿಕೊಳ್ಳಬೇಕು.

–ಶ್ರೀ ಸಿದ್ಧಲಿಂಗ ಸ್ವಾಮೀಜಿ, ಶ್ರೀ ಸಿದ್ದಗಂಗಾ ಮಠ, ತುಮಕೂರು

ಎಲ್ಲರ ಸಹಕಾರದಿಂದ ಸಾಧ್ಯವಾಯಿತು...

“ ಎಲ್ಲಾ ರೀತಿಯಲ್ಲೂ ಎಲ್ಲರಿಂದಲೂ ದೊರೆತ ಸಹಕಾರದಿಂದ ಈ ಕಾರ್ಯಕ್ರಮ ಮಾಡಲು ಸಾಧ್ಯವಾಯಿತು. ನಾನು ಸಾಧ್ಯವಾದಷ್ಟು ಕಾರ್ಯಕ್ರಮಗಳಿಂದ ದೂರ ಇರಲು ಪ್ರಯತ್ನ ಮಾಡುತ್ತೇನೆ. ಹೋದರೂ ಕೇಳುತ್ತೇನೆಯೇ ಹೊರತು ಟೀಕೆ–ಟಿಪ್ಪಣಿಗಳನ್ನು ಮಾಡುವುದಿಲ್ಲ. ಎಲ್ಲರ ವಿಚಾರವನ್ನು ಕೇಳುತ್ತೇನೆ. ನನಗೆ ಒಪ್ಪಿಗೆಯಾದ ವಿಚಾರಗಳನ್ನು ಸ್ವೀಕರಿಸಿ, ಒಪ್ಪಿಗೆ ಇಲ್ಲದಿದ್ದರೆ ಬಿಟ್ಟುಬಿಡುತ್ತೇನೆ. –ಶ್ರೀ ಚಿದಾನಂದ ಸ್ವಾಮೀಜಿ, ಶ್ರೀ ಹೊಸಮಠ, ಮೈಸೂರು

ಹುಟ್ಟುಹಬ್ಬದ ಶುಭಾಶಯ...



ಬುಧವಾರ ಹುಟ್ಟುಹಬ್ಬ ಆಚರಿಸಿಕೊಂಡ ದಿ ಕಾರ್ ಗ್ಯಾಲಕ್ಸಿ ಮಾಲೀಕ ಪ್ರದೀಪ್‌ಗೌಡ ಅವರನ್ನು ಮೈಸೂರು ನಮ್ಮ ಹೊಂಗನಸು ಚಾರಿಟಬಲ್ ಟ್ರಸ್ಟ್‌ನ ನವೀನ್ ಜೀವ ಹಾಗೂ ಸ್ನೇಹಿತರು ಆತ್ಮೀಯವಾಗಿ ಅಭಿನಂದಿಸಿ, ಶುಭಾಶಯ ಕೋರಿದರು.

ಚಾಮುಂಡೇಶ್ವರಿ ಶಾಪ ತಟ್ಟಬಾರದೆಂದರೆ ದಸರಾ ಉದ್ಘಾಟನೆಯಿಂದ ಬಾನು ಮುಷ್ತಾಕ್ ಹಿಂದೆ ಸರಿಯಬೇಕು!

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸಲಹೆ



ಬೆಂಗಳೂರು,ಸೆ.4(ಬಿಎಲ್‌ಯು)–ನಾಡದೇವತೆ ತಾಯಿ ಚಾಮುಂಡೇಶ್ವರಿ ದೇವಿಯ ಶಾಪ ತಟ್ಟಬಾರದು ಅಂದರೆ ಸಾಹಿತಿ ಬಾನು ಮುಷ್ತಾಕ್ ಅವರು ದಸರಾ ಉದ್ಘಾಟನೆಯಿಂದ ಹಿಂದೆ ಸರಿಯಬೇಕು ಎಂದು ವಿಧಾನಸಭಾ ಸದಸ್ಯ ಬಸನಗೌಡ ಪಾಟೀಲ್ ಯತ್ನಾಳ್ ಎಚ್ಚರಿಸಿದ್ದಾರೆ.

ಬೆಂಗಳೂರಿನಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮೈಸೂರಿನ ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ಸನ್ನಿಧಿಯಲ್ಲಿ ದಸರಾ ಉದ್ಘಾಟನೆಯಾಗುತ್ತದೆ. ಸನಾತನ ಧರ್ಮದಂತೆ ಪೂಜೆ, ಪುನಸ್ಕಾರ ನಡೆಯುವ ಆ ಸ್ಥಳದಲ್ಲಿ ಬಾನು ಮುಷ್ತಾಕ್ ಅವರಿಗೇನು ಕೆಲಸ ಎಂದು ಪ್ರಶ್ನಿಸಿದರು.

ಬಾನು ಮುಷ್ತಾಕ್ ಅವರು ಹಿಂದೂ ಧರ್ಮವನ್ನು ಒಪ್ಪಿಕೊಂಡಿಲ್ಲ. ಹೀಗಿರುವಾಗ ಹಿಂದೂ ಧರ್ಮದ ಧಾರ್ಮಿಕ ವಿಧಿ ವಿಧಾನ ನಡೆಯುವ ಸ್ಥಳದಲ್ಲಿ ಅವರಿಗೇನು ಕೆಲಸ ಇರುತ್ತದೆ ಎಂದು ಮರು ಪ್ರಶ್ನಿಸಿದರು.

ದಸರಾ ಸಾಂಸ್ಕೃತಿಕ ಕಾರ್ಯಕ್ರಮ ಮಾತ್ರವಲ್ಲದೆ ಸನಾತನ ಹಿಂದೂ ಧಾರ್ಮಿಕ ಆಚರಣೆ ಆಧಾರಿತ ಕಾರ್ಯಕ್ರಮವಾಗಿದೆ. ದಸರಾ ಉದ್ಘಾಟಕರು ತಾಯಿ ಚಾಮುಂಡೇಶ್ವರಿ ದೇವಿ ಉತ್ಸವಮೂರ್ತಿಗೆ ಪುಷ್ಪಾರ್ಚನೆ ಮಾಡಿ ದಸರಾ ಉದ್ಘಾಟನೆ ಮಾಡಬೇಕು. ಕನ್ನಡ ಬಾವುಟ ಮತ್ತು ಅರಿಶಿನ, ಕುಂಕುಮದ ಬಗ್ಗೆ ಕೇವಲವಾಗಿ ಮಾತನಾಡಿರುವ ಬಾನು ಮುಷ್ತಾಕ್ ಅವರನ್ನು ದಸರಾ ಉದ್ಘಾಟನೆಗೆ ಆಯ್ಕೆ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಡೆ ಸರಿ ಇಲ್ಲ ಎಂದು ಆರೋಪಿಸಿದ್ದಾರೆ. ತಾಯಿ ಚಾಮುಂಡೇಶ್ವರಿ ಶಾಪ ತಟ್ಟಬಾರದು ಅಂದರೆ ಬಾನು ಮಷ್ತಾಕ್ ಅವರು ದಸರಾ ಉದ್ಘಾಟನೆಯಿಂದ ಹೊರಗುಳಿಯುವುದು ಒಳಿತು ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸಲಹೆ ನೀಡಿದ್ದಾರೆ.

ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಆಯ್ಕೆ ಸಮರ್ಥಿಸಿ ಕಾಂಗ್ರೆಸ್ ಸಂಭ್ರಮಾಚರಣೆ



ನಾಡಹಬ್ಬ ಮೈಸೂರು ದಸರಾ ಉದ್ಘಾಟನೆಗೆ ಸಾಹಿತಿ ಬಾನು ಮುಷ್ತಾಕ್ ಅವರ ಆಯ್ಕೆ ಸಮರ್ಥಿಸಿ ಮೈಸೂರು ನಗರ(ಜಿಲ್ಲಾ) ಕಾಂಗ್ರೆಸ್ ಸಮಿತಿಯಿಂದ ಸಂಭ್ರಮಾಚರಣೆ ನಡೆಸಲಾಯಿತು.

ಮೈಸೂರು,ಸೆ.4(ಎಂಕೆ)–ನಾಡಹಬ್ಬ ಮೈಸೂರು ದಸರಾ ಉದ್ಘಾಟನೆಗೆ ಸಾಹಿತಿ ಹಾಗೂ ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ವಿಜೇತರಾದ ಬಾನು ಮುಷ್ತಾಕ್ ಅವರ ಆಯ್ಕೆಯನ್ನು ಸಮರ್ಥಿಸಿ ಮೈಸೂರು ನಗರ(ಜಿಲ್ಲಾ) ಕಾಂಗ್ರೆಸ್ ಸಮಿತಿಯಿಂದ ಸಂಭ್ರಮಾಚರಣೆ ನಡೆಸಲಾಯಿತು.

ನಗರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಎದುರು ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು, ಸಾಹಿತಿ ಬಾನು ಮುಷ್ತಾಕ್ ಅವರ ಭಾವಚಿತ್ರಗಳನ್ನಿಡಿದು ಜೈಕಾರ ಕೂಗಿದರು. ಅಂತರರಾಷ್ಟ್ರೀಯ ಮಟ್ಟದಲ್ಲಿ ಕನ್ನಡಕ್ಕೆ ಕೀರ್ತಿ ತಂದ ಸಾಹಿತಿ ಬಾನು ಮುಷ್ತಾಕ್ ಅವರನ್ನು ದಸರಾ ಉದ್ಘಾಟಕರನ್ನಾಗಿ ಆಯ್ಕೆ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿರ್ಧಾರ ಸಮರ್ಥನಿಯವಾಗಿದೆ.

ಆದರೆ, ಬಿಜೆಪಿಯವರು ಕನ್ನಡಕ್ಕೆ ಕೀರ್ತಿ ತಂದ ಮಹಿಳೆಗೆ ಅಗೌರವ ತರುವ ನಿಟ್ಟಿನಲ್ಲಿ ವರ್ತಿಸುತ್ತಿರುವುದು ಸರಿಯಲ್ಲ. ದಸರಾ ಸಂದರ್ಭದಲ್ಲಿ ಕೋಮುಗಲಭೆ ಸೃಷ್ಟಿಯಾಗಲು ಪ್ರಚೋದನೆ ನೀಡುತ್ತಿದ್ದಾರೆ ಎಂದು ಕಿಡಿಕಾರಿದರು.

ಮೈಸೂರು ನಗರ ಕಾಂಗ್ರೆಸ್ ವಕ್ತಾರ ಎಸ್.ರಾಜೇಶ್, ಕಾರ್ಯಕರ್ತರಾದ ಸುನೀಲ್‌ಕುಮಾರ್, ಕೇಶವ.ಬಿ.ಜೆ, ಸೈಯದ್ ಫಾರುಕ್, ರಾಜಶೇಖರ್, ಎಸ್.ಎ.ರಹೀಮ್, ನಂಜುಂಡಸ್ವಾಮಿ, ಲೋಕೇಶ್, ರವಿನಂದನ್, ರವಿನಾಯಕ್, ಕುರುಬಾರಳ್ಳಿ ಪ್ರಕಾಶ್, ಗಂಟಯ್ಯ, ಯೋಗೇಶ್ ಉಪ್ಪಾರ್, ಮೋಹನ್‌ಕುಮಾರ್, ಶಿವಶಂಕರ ಮೂರ್ತಿ, ರವಿನಾಯಕ್, ವನಜಾಕ್ಷಿ ರವಿ, ಸಿದ್ದರಾಜು, ಕಮ್ರಾನ್ ಪಾಷ, ರದೀವುಲ್ಲ ಖಾನ್, ಸುಲೇಮಾನ್ ಉಪಸ್ಥಿತರಿದ್ದರು.

ಭರತನಾಟ್ಯ ಕಾರ್ಯಕ್ರಮ



ಮೈಸೂರಿನ ಸಿದ್ಧಾರ್ಥನಗರದ ಶ್ರೀ ಸಿದ್ಧಿವಿನಾಯಕ ದೇವಸ್ಥಾನದಲ್ಲಿ ಗೌರಿ–ಗಣೇಶ ಹಬ್ಬದ ಅಂಗವಾಗಿ ಏರ್ಪಡಿಸಿರುವ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನಂಜನಗೂಡಿನ ಶ್ರೀ ವಿದ್ಯಾ ಸಂಗೀತ ಮತ್ತು ನೃತ್ಯ ಶಾಲೆಯ ಗುರು ವಿದುಷಿ ಶ್ರೀ ವಿದ್ಯಾ ಅವರ ನೇತೃತ್ವದಲ್ಲಿ ಭರತನಾಟ್ಯ ನಡೆಸಿಕೊಡಲಾಯಿತು.

ಶಿಬಿರ ಮುಂದೂಡಿಕೆ

ಮೈಸೂರು, ಸೆ.4– ಲಯನ್ಸ್ ಕ್ಲಬ್ ಆಫ್ ಮೈಸೂರು ಪ್ಲಾಟಿನಂ ವತಿಯಿಂದ ಸೆ.8ರಂದು ರಾಜೇಂದ್ರನಗರದ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ನಡೆಯಬೇಕಿದ್ದ ಕಣ್ಣಿನ ಉಚಿತ ತಪಾಸಣಾ ಶಿಬಿರವನ್ನು ಮೈಸೂರು ಜಿಲ್ಲಾ ಅಂಧತ್ವ ನಿವಾರಣಾ ಇಲಾಖೆ ಆದೇಶ ಮೇರೆಗೆ ತಾತ್ಕಾಲಿಕವಾಗಿ ಮುಂದೂಡಲಾಗಿದೆ ಎಂದು ಲಯನ್ಸ್ ಕ್ಲಬ್ ಆಫ್ ಮೈಸೂರು ಪ್ಲಾಟಿನಂನ ಉಮಾಶಂಕರ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಿಳೆ ಮೇಲೆ ಅತ್ಯಾಚಾರ ಆರೋಪ ಪ್ರಕರಣ

ಶಾಸಕ ಮುನಿರತ್ನಗೆ ಎಸ್‌ಐಟಿ ಕ್ಲೀನ್‌ಚಿಟ್



ಬೆಂಗಳೂರು, ಸೆ.4–ಆರ್‌ಎಂಸಿ ಯಾರ್ಡ್ ಠಾಣೆಯಲ್ಲಿ ದಾಖಲಾಗಿದ್ದ ಮಹಿಳೆ ಮೇಲಿನ ಅತ್ಯಾಚಾರ ಪ್ರಕರಣದಲ್ಲಿ ಶಾಸಕ ಮುನಿರತ್ನಗೆ ಬಿಗ್ ರಿಲೀಫ್ ಸಿಕ್ಕಿದೆ. ಮಾಜಿ ಸಂಸದರು/ಶಾಸಕರ ವಿರುದ್ಧದ ಪ್ರಕರಣಗಳನ್ನು ವಿಚಾರಣೆ ನಡೆಸುತ್ತಿರುವ ಎಸ್‌ಐಟಿ, ವಿಶೇಷ ನ್ಯಾಯಾಲಯಕ್ಕೆ ಬಿ ರಿಪೋರ್ಟ್ ಸಲ್ಲಿಕೆ ಮಾಡಿದೆ.

ಪ್ರಕರಣದಲ್ಲಿ ಯಾವುದೇ ಪುರಾವೆಗಳು ಕಂಡುಬಂದಿಲ್ಲವಾದ್ದರಿಂದ, ತನಿಖೆ ನಂತರ 'ಬಿ' ವರದಿಯನ್ನು ಸಲ್ಲಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆರ್‌ಎಂಸಿ ಯಾರ್ಡ್ ಪೊಲೀಸರು ದಾಖಲಿಸಿರುವ ಅಪರಾಧದ ಕಾನೂನುಬದ್ಧತೆಯನ್ನು ಪ್ರಶ್ನಿಸಿ ಮುನಿರತ್ನ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ಮುಂದೂಡಿದೆ. ಪ್ರಕರಣದಲ್ಲಿ ಪೊಲೀಸರು 'ಬಿ' ವರದಿಯನ್ನು ಸಲ್ಲಿಸಿದ್ದಾರೆ ಎಂದು ಸರ್ಕಾರಿ ವಕೀಲರು ತಿಳಿಸಿದ ನಂತರ ನ್ಯಾಯಮೂರ್ತಿ ಎಂಐ ಅರುಣ್ ವಿಚಾರಣೆಯನ್ನು ಮುಂದೂಡಿದರು.

ಶಾಸಕ ಮತ್ತು ಅವರ ಸಹಚರರು ತನ್ನ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿದ್ದಾರೆ ಎಂದು 40 ವರ್ಷದ ಮಹಿಳೆಯೊಬ್ಬರು ಆರೋಪಿಸಿದ್ದರು. ಅಲ್ಲದೆ, ವಿಚಾರ ಬಾಯ್ಬಿಟ್ಟರೆ ಸೋಂಕು ತಗುಲಿಸಿ, ಕೊಲೆ ಬೆದರಿಕೆಯನ್ನೂ ಹಾಕಿದ್ದರು ಎಂದು ಆರೋಪಿಸಿದ್ದರು. ಇದರ ಬೆನ್ನಲ್ಲೇ ಕಳೆದ ವರ್ಷ ರಾಜ್ಯ ಸರ್ಕಾರವು ಶಾಸಕ ಮುನಿರತ್ನ ವಿರುದ್ಧ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ಅಪರಾಧಗಳು ಮತ್ತು ಅತ್ಯಾಚಾರ ಪ್ರಕರಣಗಳ ತನಿಖೆಗಾಗಿ ವಿಶೇಷ ತನಿಖಾ ತಂಡ ರಚಿಸಿತ್ತು.

ಮೈಸೂರಲ್ಲಿ ದ ಜ್ಯುವೆಲರಿ ಶೋಗೆ ಚಾಲನೆ

ಮೈಸೂರು, ಸೆ.4(ಜಿಎ)–ಮೈಸೂರಿನ ರ್‍ಯಾಡಿಸನ್ ಬ್ಲೂ ಹೋಟೆಲ್‌ನಲ್ಲಿ ಗೋಲ್ಡನ್ ಕ್ರೀಪರ್ ಸಂಸ್ಥೆ ವತಿಯಿಂದ ಆಯೋಜಿಸಿರುವ ಮೂರು ದಿನಗಳ ವಿನೂತನ ಆಭರಣಗಳ ಪ್ರದರ್ಶನ ಮತ್ತು ಮಾರಾಟ ದ ಜ್ಯುವೆಲರಿ ಶೋ ಮೇಳಕ್ಕೆ ನಟಿ ಅಮೃತ ಪ್ರೇಮ್ ಗುರುವಾರ ಚಾಲನೆ ನೀಡಿದರು.

ಮೇಳದಲ್ಲಿ ಬೆಂಗಳೂರಿನ ಗಜರಾಜ್, ಎಂ.ಪಿ.ಜ್ಯುವೆಲರ್ಸ್, ಸಿಂಹ ಜ್ಯುವೆಲರ್ಸ್, ನವರತನ್ ಅಂಡ್ ಸನ್ಸ್, ಪಂಚಕೇಸರಿ ಬಡೇರಾ, ಶ್ರೀ ಗಣೇಶಸ್ ಡೈಮಂಡ್ಸ್, ಆರ್ಟ್ ಇಂಡಿಯಾ, ಸಪ್ತೋಷಿ, ಸುನೀಲ್ ಜ್ಯುವೆಲರ್ಸ್, ರೂಪಂ ಸಿಲ್ವರ್, ಸ್ಯಾಂಚೀಸ್, ಮದನ್ ಜೆಮ್ಸ್, ಮೈಸೂರಿನ ಡಾರ್ಲ ಗೋಲ್ಡ್, ರಾಜ್ ಡೈಮಂಡ್ಸ್, ಪ್ರಕಾಶ್ ಜ್ಯುವೆಲರ್ಸ್ ಸೇರಿದಂತೆ ಪ್ರಶಸ್ತಿ ವಿಜೇತ ಹಾಗೂ ಹೆಸರಾಂತ ಆಭರಣ ಮಳಿಗೆಗಳು ಭಾಗವಹಿಸಿವೆ. ಮದುವೆ, ಶುಭಸಮಾರಂಭಗಳಿಗೆ ಆಭರಣ ಗಳನ್ನು ಕೊಳ್ಳಲು ಸೂಕ್ತ ವೇದಿಕೆ ಇದಾಗಿದ್ದು, ಆಧುನಿಕ ಹಾಗೂ ಪಾರಂಪರಿಕ ಶೈಲಿಯ ಆಭರಣಗಳು ಲಭ್ಯವಿದೆ.

ಮೇಳಕ್ಕೆ ಚಾಲನೆ ನೀಡಿದ ಅಮೃತ ಪ್ರೇಮ್ ಮಾತನಾಡಿ, ದಸರಾ ಹಾಗೂ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಒಂದೇ ವೇದಿಕೆಯಡಿ 50 ಸಾವಿರಕ್ಕೂ ಹೆಚ್ಚು ವಿನ್ಯಾಸದ ಚಿನ್ನಾಭರಣಗಳ ಪ್ರದರ್ಶನ ಮತ್ತು ಮಾರಾಟ ಆಯೋಜಿಸಲಾಗಿದೆ. ಪ್ರತಿದಿನ ಬೆಳಗ್ಗೆ 10ರಿಂದ ರಾತ್ರಿ 10ರವರೆಗೆ ನಡೆಯಲಿದ್ದು, ಆಭರಣಪ್ರಿಯರು ತಮಗೆ ಇಷ್ಟವಾದ ಆಭರಣವನ್ನು ಖರೀದಿಸಬಹುದು ಎಂದು ತಿಳಿಸಿದರು. ಈ ಸಂದರ್ಭ ಆಯೋಜಕರಾದ ಗೋಲ್ಡನ್ ಕ್ರೀಪರ್ ಸಂಸ್ಥೆಯ ಬಿ.ಎನ್.ಜಗದೀಶ್, ಹೇಮಲತಾ ಜಗದೀಶ್, ಉದ್ಯಮಿಗಳಾದ ಪಲ್ಲವಿ ಸಿ.ಟಿ.ರವಿ, ಗೀತಾ ಸಂದೇಶ್‌ಸ್ವಾಮಿ, ರಮ್ಯಾ ಕಾಂತರಾಜ್ ಅರಸ್, ಕುಸುಮಾ ಜಗನ್ನಾಥ್ ಶೆಣೈ, ಅನುಷಾ ಗೋವಿಂದ್‌ಶೆಣೈ, ಇಂಟೀರಿಯರ್ ಡಿಸೈನರ್ ಮೋನಿಕಾ ಭಂಡಾರಿ, ಮಾಜಿ ಇಂಡಿಯಾ ಯೂನಿವರ್ಸ್ ಕ್ವೀನ್ ಡಾ.ಹೇಮಮಾಲಿನಿ ಲಕ್ಷ್ಮಣ್, ಇನ್ನರ್‌ವೀಲ್ ಕ್ಲಬ್ ಗೋಲ್ಡ್‌ನ ಅಧ್ಯಕ್ಷೆ ಡಾ.ಹೆಚ್.ಎಸ್.ತನುಜಾ, ಆರ್ಕಿಟೆಕ್ಟ್ ಚೈತ್ರಾ ರಂಗಸ್ವಾಮಿ, ನಟಿ ವರ್ಷ ಬಲ್ಯಂಡ ಮತ್ತಿತರರಿದ್ದರು.



ಮೈಸೂರಿನ ರ್‍ಯಾಡಿಸನ್ ಬ್ಲೂ ಹೋಟೆಲ್‌ನಲ್ಲಿ ಗೋಲ್ಡನ್ ಕ್ರೀಪರ್ ಸಂಸ್ಥೆ ವತಿಯಿಂದ ಆಯೋಜಿಸಿರುವ ಮೂರು ದಿನಗಳ ವಿನೂತನ ಆಭರಣಗಳ ಪ್ರದರ್ಶನ ಮತ್ತು ಮಾರಾಟ ದ ಜ್ಯುವೆಲರಿ ಶೋ ಮೇಳಕ್ಕೆ ನಟಿ ಅಮೃತ ಪ್ರೇಮ್ ಚಾಲನೆ ನೀಡಿದರು.

ಆಸ್ಪತ್ರೆಗೆ ಬರುತ್ತಿದ್ದಂತೆ ಬಾಲಕಿ ಸಾವು

ಕುಪಿತಗೊಂಡ ಬಾಲಕಿ ಕುಟುಂಬಸ್ಥರಿಂದ ಆಸ್ಪತ್ರೆಯಲ್ಲಿ ದಾಂಧಲೆ, ವೈದ್ಯರ ಮೇಲೆ ಹಲ್ಲೆಗೆ ಯತ್ನ



ಮಳವಳ್ಳಿ,ಸೆ.4– ಜ್ವರದಿಂದ ತೀವ್ರ ಅಸ್ವಸ್ಥಗೊಂಡಿದ್ದ ಬಾಲಕಿಯೊಬ್ಬಳು ಆಸ್ಪತ್ರೆಗೆ ಬರುತ್ತಿದ್ದಂತೆ ಸಾವನ್ನಪ್ಪಿದ್ದು ಇದರಿಂದ ಆಕ್ರೋಶ ಗೊಂಡ ಬಾಲಕಿಯ ಪೋಷಕರು ವೈದ್ಯರ ಮೇಲೆ ಹಲ್ಲೆ ನಡೆಸಲು ಮುಂದಾಗುವುದರ ಜೊತೆಗೆ ಆಸ್ಪತ್ರೆ ಬಾಗಿಲುಗಳ ಗಾಜು ಹೊಡೆದು ಔಷಧಗಳನ್ನು ನಾಶಪಡಿಸಿರುವ ಘಟನೆ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ನಡೆದಿದೆ.

ಕೊಳ್ಳೇಗಾಲದ ವಾಸಿ ಲೇ.ಜಕಾಉಲ್ಲಾ ಎಂಬುವರ ಪುತ್ರಿ ದ್ವಿತೀಯ ಪಿಯುಸಿ ವಿದ್ಯಾರ್ಥಿನಿ ಶಿಫಾ(17) ಮೃತಪಟ್ಟ ದುರ್ದೈವಿಯಾಗಿದ್ದು, ಗುರುವಾರ ಬೆಳಗ್ಗಿನ ಸಮಯದಲ್ಲಿ ತೀವ್ರ ಅಸ್ವಸ್ಥಗೊಂಡಿದ್ದ ಶಿಫಾಳನ್ನು ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ಕರೆತರಲಾಯಿತಾದರೂ ಆಸ್ಪತ್ರೆಗೆ ಬರುವ ಮುನ್ನ ಆಕೆ ಪ್ರಜ್ಞಾಹೀನವಾಗಿದ್ದು ಗಂಭೀರ ಸ್ಥಿತಿ ತಲುಪಿದ್ದಳು ಎಂದು ಗೊತ್ತಾಗಿದೆ. ಜೊತೆಗೆ ಆಕೆಯ ಬಾಯಲ್ಲಿ ನೊರೆ ತುಂಬಿ ಕೊಂಡಿದ್ದನ್ನು ಗಮನಿಸಿದ ಕರ್ತವ್ಯದಲ್ಲಿದ್ದ ವೈದ್ಯ ಡಾ.ಮುರುಳಿ ಪರಿಶೀಲನೆ ನಡೆಸಿ ಸಾವನ್ನಪ್ಪಿರುವುದನ್ನು ಖಚಿತ ಪಡಿಸಿದ್ದಾರೆ.

ಇದರಿಂದ ಕುಪಿತರಾದ ಮೃತ ಯುವತಿಯ ಕೆಲ ಸಂಬಂಧಿಕರು ವೈದ್ಯರ ಮೇಲೆ ಆಕ್ರೋಶ ವ್ಯಕ್ತಪಡಿಸಿ ಹಲ್ಲೆಗೆ ಮುಂದಾದರಲ್ಲದೆ ತುರ್ತು ಚಿಕಿತ್ಸಾ ಘಟಕದ ವಾರ್ಡಿನ ಶಸ್ತ್ರ ಚಿಕಿತ್ಸಾ ಕೊಠಡಿಯ ಬಾಗಿಲಿನ ಗಾಜುಗಳನ್ನು ಹೊಡೆದು ವಾರ್ಡಿನಲ್ಲಿದ್ದ ಚುಚ್ಚು ಮದ್ದು ಸಲಕರಣೆಗಳನ್ನು ಹೊಡೆದು ಹಾಕಿ ನಾಶಪಡಿಸಿದ್ದಾರೆಂದು ತಿಳಿದು ಬಂದಿದೆ.

ಈ ಹಠಾತ್ ದಾಳಿಯಿಂದ ವೈದ್ಯರು ಸಿಬ್ಬಂದಿ ಆತಂಕಕ್ಕೆ ಒಳಗಾಗಿದ್ದು ಘಟನೆಯಿಂದಾಗಿ ಆಸ್ಪತ್ರೆ ಆವರಣದಲ್ಲಿ ಕೆಲಕಾಲ ಉದ್ರಿಕ್ತ ವಾತಾವರಣ ನಿರ್ಮಾಣವಾಗಿತ್ತು ಸುದ್ದಿ ತಿಳಿದು ತಕ್ಷಣ ಸ್ಥಳಕ್ಕೆ ಧಾವಿಸಿದ ಪಟ್ಟಣದ ಪೊಲೀಸರು ಉದ್ರಿಕ್ತ ಜನರನ್ನು ಹೊರಗೆ ಕಳುಹಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ. ಜೊತೆಗೆ ಆಸ್ಪತ್ರೆ ಆವರಣದಲ್ಲಿ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಏರ್ಪಡಿಸಿದ್ದರು.

ಬಾಲಕಿ ಸಾವಿಗೆ ಸಂಬಂಧಿಸಿದಂತೆ ವೈದ್ಯರ ಮೇಲೆ ಹಲ್ಲೆ ನಡೆಸಿರುವುದಲ್ಲದೆ ಆಸ್ಪತ್ರೆಯ ಕೊಠಡಿ ಬಾಗಿಲು, ಗ್ಲಾಸ್‌ಗಳು, ಸಲಕರಣೆಗಳನ್ನು ನಾಶಪಡಿಸಿರುವ ಬಗ್ಗೆ ಪಟ್ಟಣ ಪೊಲೀಸ್ ಠಾಣೆಗೆ ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಸಂಜಯ್ ಅವರು ದೂರು ನೀಡಿದ್ದಾರೆ.

ನಾಗಮಂಗಲದಲ್ಲಿ ಅದ್ದೂರಿ ಸಾಮೂಹಿಕ ಗಣಪತಿ ವಿಸರ್ಜನೆ

ಕೋಮು ಗಲಭೆ ಸಂಭವಿಸದಂತೆ ಭಾರೀ ಕಟ್ಟೆಚ್ಚರ, ಮುಂಜಾಗ್ರತಾ ಕ್ರಮವಾಗಿ ಶಾಲಾ– ಕಾಲೇಜುಗಳಿಗೆ ರಜೆ, ಎಸ್ಪಿ ಸೇರಿ 600 ಪೊಲೀಸರು ಮೊಕ್ಕಾಂ



ನಾಗಮಂಗಲದಲ್ಲಿ ಗುರುವಾರ ಸಡಗರ ಸಂಭ್ರಮದಿಂದ ಸಾಮೂಹಿಕ ಗಣಪತಿಗಳ ಮೆರವಣಿಗೆಯನ್ನು ಮಾಡಲಾಯಿತು.

ನಾಗಮಂಗಲ, ಸೆ.4– ನಾಗಮಂಗಲ ಪಟ್ಟಣ ಮತ್ತು ಸುತ್ತಮುತ್ತಲ ಹಳ್ಳಿಗಳ ಗಣ ಪತಿಗಳ ಸಾಮೂಹಿಕ ವಿಸರ್ಜನಾ ಮಹೋತ್ಸವವನ್ನು ಸಾಮೂಹಿಕ ಗಣಪತಿ ಸಮಿತಿ ವತಿಯಿಂದ ಅದ್ದೂರಿಯಾಗಿ ನೆರವೇರಿಸಲಾಯಿತು.

ನಾಗಮಂಗಲ ಪಟ್ಟಣದ ಟಿ.ಬಿ. ಬಡಾವಣೆಯಲ್ಲಿರುವ ಗಣೇಶ ದೇವಾಲಯದಲ್ಲಿ ಮುಂಜಾನೆಯಿಂದಲೇ ಹೋಮ ಹವನ, ಪ್ರಸಾದ ವಿನಿಯೋಗ ಮಾಡಲಾಯಿತು.

ಸಾಮೂಹಿಕ ಗಣಪತಿ ವಿಸರ್ಜನೆಯಲ್ಲಿ ಬದರಿಕೊಪ್ಪಲು ಗ್ರಾಮದ ಗಜಪಡೆ ಯುವಕರ ಬಳಗ, ಗಣೇಶ ಗೂಳಿ ಬಾಯ್ಸ್, ಪೌರ ಕಾರ್ಮಿಕರ ಕಾಲೋನಿ ನಾಗಮಂಗಲ, ಕರುನಾಡ ವಿನಾಯಕರ ಬಳಗ ಕೆ ಮಲ್ಲೇನಹಳ್ಳಿ, ಬಬ್ರುವಾಹನ ಯುವಕರ ಬಳಗ ಗಾಣಿಗರ ಬೀದಿ, ಶ್ರೀ ರಾಮಸೇನೆ ಯುವಕರ ಬಳಗ, ಗಾಣಿಗರ ಬೀದಿ, ಬಿಸಿಲು ಮಾರಮ್ಮ ಭೀಮಸೇನೆ ಯುವಕರ ಬಳಗ, ಎಕೆಕಾಲೋನಿ, ಮೈಸೂರು ರಸ್ತೆ, ಟೀಮ್ ಕೆಂಪೇಗೌಡ ಗೆಳೆಯರ ಬಳಗ ಸಾರೇಮೇಗಲಕೊಪ್ಪಲು, ಸ್ನೇಹಜೀವಿ ಗೆಳೆಯರ ಬಳಗ ಉಪಾರಹಳ್ಳಿ, ಸಾಲು ಸರದಿ ಸಾಲಿನಲ್ಲಿ ವಿವಿಧ ರೀತಿಯ ಗಣೇಶಮೂರ್ತಿ ನೋಡಲು ಸಂಭ್ರಮದ ವಾತಾವರಣ ಸೃಷ್ಟಿಯಾಗಿತ್ತು.

ಪಟ್ಟಣದ ಟಿ.ಬಿ.ಬಡಾವಣೆಯಿಂದ ಹೊರಟು ಪಟ್ಟಣದ ರಾಜಬೀದಿಗಳಲ್ಲಿ ಗಜರಾಜನ ಗಾಂಭೀರ್ಯ ಸಾಗಿ ಮಂಡ್ಯ ಸರ್ಕಲ್ ಮಾರ್ಕೆಟ್ ರಸ್ತೆ ಮೂಲಕ ಸಾಗಿ ಹಂಪೆ ಅರಸನ ಕೊಳದಲ್ಲಿ ಗಣೇಶ ಮೂರ್ತಿಗಳ ವಿಸರ್ಜನೆ ವ್ಯವಸ್ಥೆ ಮಾಡಲಾಗಿತ್ತು.


ನಾಗಮಂಗಲ ಪಟ್ಟಣದ ಮಂಡ್ಯ ರಸ್ತೆ ಮುಖಾಂತರ ಸೌಮ್ಯ ಕೇಶವ ಸ್ವಾಮಿ ದೇವಸ್ಥಾನದ ರಸ್ತೆಯಲ್ಲಿ ಹೊರಟಿತು. ಸಹಸ್ರಾರು ಪ್ರಮಾಣದಲ್ಲಿ ಸೇರಿದಂತಹ ಯುವಕರು, ಮಹಿಳೆಯರು, ಭಕ್ತರು ಮತ್ತು ಕಲಾವಿದರು, ಕಲಾತಂಡಗಳ ನೃತ್ಯ ಮತ್ತು ಡಿ.ಜೆ. ಸೌಂಡ್, ನಾಸಿಕ್ ಡೋಲು, ಚಂಡೆ ವಾದ್ಯ ಹಾಗೂ ವಿವಿಧ ಗೊಂಬೆಗಳ ತಂಡಗಳೊಂದಿಗೆ ಗಣಪತಿಗಳನ್ನ ನಾಗಮಂಗಲದ ಪ್ರಮುಖ ಬೀದಿಗಳಲ್ಲಿ ಎಲ್ಲಾ ಭಕ್ತರುಗಳು ಅತಿ ಸಂತಸದಿಂದ ಕುಣಿದು ಕುಪ್ಪಳಿಸುವುದರ ಮೂಲಕ ಗಣೇಶನಿಗೆ ಜಯಕಾರ ಹಾಕಿ ಈ ಮೆರವಣಿಗೆಯಲ್ಲಿ ಭಾಗವಹಿಸಿದರು.

ಭಾರೀ ಕಟ್ಟೆಚ್ಚರ: ಕಳೆದ ಬಾರಿ ಬದರಿಕೊಪ್ಪಲು ಗ್ರಾಮದ ಗಣೇಶ ಮೂರ್ತಿ ವಿಸರ್ಜನೆ ಮಹೋತ್ಸವ ಸಂದರ್ಭದಲ್ಲಿ ಕೋಮು ಗಲಭೆ ಸಂಭವಿಸಿದ ಹಿನ್ನೆಲೆಯಲ್ಲಿ ಈ ಬಾರಿ ಸುಮಾರು 600ಕ್ಕೂ ಅಧಿಕ ಪೊಲೀಸ್ ಸಿಬ್ಬಂದಿಗಳು, ಮಿಲಿಟರಿ ಅರೆಪಡೆ, ಹಾಗೂ ಡ್ರೋನ್ ಕ್ಯಾಮರಗಳು, ಗುಪ್ತಚರ ಇಲಾಖೆ ಸಿಬ್ಬಂದಿಗಳು ಮತ್ತು ಆಯಕಟ್ಟಿನ ಸ್ಥಳಗಳಲ್ಲಿ ಸಿ.ಸಿ. ಕ್ಯಾಮರಗಳನ್ನು ಅಳವಡಿಸಿರುವುದು ವಿಶೇಷವಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಪಟ್ಟಣದ ವ್ಯಾಪ್ತಿಯ ಶಾಲಾ–ಕಾಲೇಜುಗಳಿಗೆ ರಜೆ ಘೋಷಣೆ ಮಾಡಲಾಗಿತ್ತು.

ಗಣಪತಿ ಮೆರವಣಿಗೆ ಸಂದರ್ಭದಲ್ಲಿ ನಗಾರಿ ಕುಣಿತ. ಡೊಳ್ಳು ಕುಣಿತ. ಪೂಜಾ ಕುಣಿತ. ಕಣ್ಣನ ಸೆಳೆಯಿತು. ಡೊಳ್ಳು ಬಡಿತದ ಶಬ್ದಕ್ಕೆ ಯುವಕ ಯುವತಿಯರು ಕುಣಿದು ಕುಪ್ಪಳಿಸಿ ಮನಸೂರೆಗೊಂಡರು.

ಈ ವೇಳೆ ಮಂಡ್ಯ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ. ಆಡಿಷನ್ ಎಸ್ಪಿ ತಿಮ್ಮಯ್ಯ, ಡಿವೈಎಸ್ಪಿ ಚಲುವರಾಜು, ಸಿಪಿಐ ನಿರಂಜನ್, ರಾಜೇಂದ್ರ. ರವಿಕುಮಾರ್, ಮಾರುತಿ, ಇತರ ಪೊಲೀಸ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

ನಿಂಗಪ್ಪ ನಿಧನ



ಕೆ.ಆರ್.ಪೇಟೆ, ಸೆ.4– ತಾಲೂಕಿನ ಬೂಕನಕೆರೆ ಹೋಬಳಿಯ ಚೋಕನಹಳ್ಳಿ ಗ್ರಾಮದ ವೀರಶೈವ ಲಿಂಗಾಯಿತ ಸಮುದಾಯದ ಹಿರಿಯ ಮುಖಂಡರಾದ ನಿಂಗಪ್ಪ(78) ಇಂದು ನಿಧನ ಹೊಂದಿದ್ದಾರೆ. ಮೃತರು ಪತ್ನಿ, ಪುತ್ರ ಪ್ರಕಾಶ್ ಹಾಗೂ ಓರ್ವ ಪುತ್ರಿ ಸೇರಿದಂತೆ ಬಂಧು–ಬಳಗವನ್ನು ಅಗಲಿದ್ದಾರೆ. ಮೃತ ನಿಂಗಪ್ಪ ಅವರು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಹತ್ತಿರದ ಸಂಬಂಧಿ ಕೂಡ ಆಗಿದ್ದಾರೆ. ಮೃತರ ಅಂತ್ಯಕ್ರಿಯೆಯು ಗುರುವಾರ ಮಧ್ಯಾಹ್ನ ಚೋಕನಹಳ್ಳಿ ಗ್ರಾಮದಲ್ಲಿ ನಡೆಯಿತು.

ಭಕ್ತಾದಿಗಳ ಗಮನಕ್ಕೆ

ಮಂಡ್ಯ: ರಾಹುಗ್ರಸ್ತ ಚಂದ್ರಗ್ರಹಣದ ಅಂಗವಾಗಿ ಸೆ.7ರ ಪೌರ್ಣಮಿಯ ದಿವಸದಂದು ಶ್ರೀರಂಗಪಟ್ಟಣದ ಗಂಜಾಂನ ಶ್ರೀ ನಿಮಿಷಾಂಬ ದೇವಸ್ಥಾನದಲ್ಲಿ ಮಧ್ಯಾಹ್ನ 12 ರಿಂದ ಭಕ್ತಾದಿಗಳ ಪ್ರವೇಶಕ್ಕೆ ಅವಕಾಶವಿರುವುದಿಲ್ಲ.

ಹೆದ್ದಾರಿಗೆ ಭೂಮಿ ಪಡೆದು ಸರ್ವೀಸ್ ರಸ್ತೆ ಬಗ್ಗೆ ನಿರ್ಲಕ್ಷ್ಯ

ಬೊಮ್ಮೂರು ಅಗ್ರಹಾರ ಬಳಿ ರೈತರ ಆಕ್ರೋಶ

ಶ್ರೀರಂಗಪಟ್ಟಣ: ಕುಶಾಲನಗರ–ಶ್ರೀರಂಗಪಟ್ಟಣ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ 275ರ ನಿರ್ಮಾಣದಲ್ಲಿ ರೈತರು, ಜನಸಾಮಾನ್ಯರು ಹಾಗೂ ಪ್ರವಾಸಿಗರ ಹಿತ ಕಡೆಗಣಿಸಿ ಸರ್ವೀಸ್ ರಸ್ತೆಗೆ ಅನುವು ಮಾಡಿಕೊಡದ ಅಧಿಕಾರಿಗಳ ವಿರುದ್ಧ ರೈತರು ಆಕ್ರೋಶ ವ್ಯಕ್ತಪಡಿಸಿದರು.

ಬೊಮ್ಮೂರು ಅಗ್ರಹಾರ ಬಳಿ ನಿರ್ಮಾಣವಾಗುತ್ತಿರುವ ರಸ್ತೆ ಬಳಿ ನೂರಾರು ಮಂದಿ ರೈತರು, ರೈತ ಮಹಿಳೆಯರು ಜಮಾವಣೆಗೊಂಡು ಆಕ್ರೋಶ ಹೊರ ಹಾಕಿದರು.

2019ರಲ್ಲಿ ಶ್ರೀರಂಗಪಟ್ಟಣ–ಕುಶಾಲನಗರ ನಡುವಿನ 275ರ ರಾಷ್ಟ್ರೀಯ ಹೆದ್ದಾರಿ ನಿರ್ಮಾಣಕ್ಕೆ ಅಗತ್ಯ ಭೂ ಸ್ವಾಧೀನಕ್ಕೆ ಮುಂದಾದ ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳು ಸ್ಥಳೀಯ ರೈತರಿಗೆ ವಾಣಿಜ್ಯ ಉದ್ದೇಶದ ಆಮಿಷವೊಡ್ಡಿ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ಸ್ಥಳೀಯರು ಹಾಗೂ ರೈತರಿಗೆ ಅಗತ್ಯವಿರುವ ಸರ್ವೀಸ್ ರಸ್ತೆ ನಿರ್ಮಾಣಕ್ಕೆ ಕ್ರಿಯಾಯೋಜನೆ ರೂಪಿಸದಿರುವುದು ಸರಿಯಲ್ಲ ಎಂದು ಆಕ್ರೋಶ ಹೊರ ಹಾಕಿದರು.




ಸ್ಥಳಕ್ಕೆ ಆಗಮಿಸಿದ ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಅವರ ಬಳಿ ಸರ್ವೀಸ್ ರಸ್ತೆಯ ಅಗತ್ಯತೆ ಬಗ್ಗೆ ಮನವಿ ಮಾಡಿದ ರೈತರು, ಹಾಲಿ ಶಾಸಕರು ಹಾಗೂ ಅಧಿಕಾರಿಗಳ ಬೇಜಾವಾಬ್ದಾರಿ ನಡವಳಿಕೆ ವಿರುದ್ಧ ಆಕ್ರೋಶ ಹೊರ ಹಾಕಿದರು. ರಸ್ತೆ ನಿರ್ಮಾಣದ ಕಾಮಗಾರಿ ಪರಿಶೀಲಿಸಿದ ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಸಮಸ್ಯೆಯ ಗಂಭೀರತೆ ನನಗೆ ಅರ್ಥವಾಗಿದೆ. ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಹಾಗೂ ನಿತಿನ್ ಗಡ್ಕರಿ ಅವರ ಬಳಿಗೆ ಮುಂದಿನ ವಾರದಲ್ಲಿ 20 ಮಂದಿ ರೈತರ ನಿಯೋಗ ಕರೆದೊಯ್ದು ಅಗತ್ಯ ಸರ್ವೀಸ್ ರಸ್ತೆ ಮಂಜೂರು ಮಾಡಿಸುವ ಭರವಸೆ ವ್ಯಕ್ತಪಡಿಸಿದರು.


ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕು ವಿಶ್ವ ದರ್ಜೆಯ ಐತಿಹಾಸಿಕ ಪ್ರವಾಸಿ ತಾಣಗಳನ್ನು ಹೊಂದಿರುವ ಪ್ರೇಕ್ಷಣೀಯ ಸ್ಥಳವಾಗಿದ್ದು, ನಮ್ಮ ತಾಲೂಕಿನಿಂದ ಕುಶಾಲನಗರಕ್ಕೆ ಸಂಪರ್ಕ ಕಲ್ಪಿಸುವ ರಾಷ್ಟ್ರೀಯ ಹೆದ್ದಾರಿ ನಿರ್ಮಾಣಕ್ಕೆ ನಮ್ಮದೇನು ತಕರಾರಿಲ್ಲ, ಆದರೆ ಭೂಮಿ ಕಳೆದುಕೊಳ್ಳುವ ರೈತರ ಬದುಕಿನ ಬಗ್ಗೆ ಅಧಿಕಾರಿಗಳು ಸಹಾನುಭೂತಿ ತೋರದಿರುವುದು ವಿಪರ್ಯಾಸದ ಸಂಗತಿ ಎಂದು ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಆಕ್ರೋಶ ಹೊರ ಹಾಕಿದರು.

ಸರ್ವೀಸ್ ರಸ್ತೆ ನಿರ್ಮಾಣ ಸಂಬಂಧ ಈಗಾಗಲೇ ಕೇಂದ್ರ ಸಚಿವ ಕುಮಾರಸ್ವಾಮಿ ಅವರೊಂದಿಗೆ ಚರ್ಚಿಸಲಾಗಿದ್ದು, ಮುಂದಿನ ವಾರ ದೆಹಲಿಗೆ ಸ್ಥಳೀಯ ರೈತರ ನಿಯೋಗ ಕೊಂಡೊಯ್ದು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರ ಬಳಿ ಮನವಿ ಮಾಡಿ, ಸರ್ವೀಸ್ ರಸ್ತೆ ನಿರ್ಮಾಣಕ್ಕೆ ಹಸಿರು ನಿಶಾನೆ ಪಡೆಯುವ ವಿಶ್ವಾಸ ವ್ಯಕ್ತಪಡಿಸಿದರು.

ಎಮ್ಮೆ ಮೈ ತೊಳೆಯುವಾಗ ಪತ್ನಿಯೊಂದಿಗೆ ಪತಿಯೂ ಜಲಸಮಾಧಿ!



ಕಾಳೇಗೌಡ



ವಸಂತಮ್ಮ

ಕೆ.ಆರ್.ಪೇಟೆ: ತೆರೆದ ಬಾವಿಯಲ್ಲಿ ಎಮ್ಮೆ ಮೈ ತೊಳೆಯುವಾಗ ಪತ್ನಿ ನೀರಿನಲ್ಲಿ ಮುಳುಗುತ್ತಿರುವುದನ್ನು ಕಂಡು ರಕ್ಷಣೆಗೆ ಮುಂದಾದ ಪತಿ ಸಹ ಜಲಸಮಾಧಿಯಾದ ಘಟನೆ ತಾಲೂಕಿನ ಅರೆಬೊಪ್ಪನಹಳ್ಳಿ ಗ್ರಾಮದಲ್ಲಿ ಸಂಭವಿಸಿದೆ.

ಗ್ರಾಮದ ವಸಂತಮ್ಮ(65) ಮತ್ತು ಕಾಳೇಗೌಡ(70) ನೀರು ಪಾಲಾದ ದುರ್ದೈವಿ ದಂಪತಿ. ವಸಂತಮ್ಮ ಮತ್ತು ಕಾಳೇಗೌಡ ಬುಧವಾರ ಸಂಜೆ ತಮ್ಮ ಜಮೀನಿನಲ್ಲಿರುವ ತೆರೆದ ಬಾವಿಯಲ್ಲಿ ಎಮ್ಮೆಯ ಮೈ ತೊಳೆಯಲೆಂದು ಹೋಗಿದ್ದಾರೆ. ವಸಂತಮ್ಮ ನೀರಿಗಿಳಿದ ಸಂದರ್ಭದಲ್ಲಿ ಆಕಸ್ಮಿಕವಾಗಿ ಕಾಲುಜಾರಿ ನೀರಿನಲ್ಲಿ ಮುಳುಗುತ್ತಿದ್ದರು. ಇದನ್ನು ಕಂಡ ಕಾಳೇಗೌಡ, ನೀರಿಗೆ ಧುಮುಕಿ ಹೆಂಡತಿ ರಕ್ಷಣೆಗೆ ಮುಂದಾಗಿದ್ದಾರೆ. ಈ ವೇಳೆ ಎಮ್ಮೆ ಈಜಿ ದಡ ಸೇರಿದರೆ ಕಾಳೇಗೌಡ ಮತ್ತು ವಸಂತಮ್ಮ ನೀರಿನಲ್ಲಿ ಮುಳುಗಿದ್ದಾರೆ.

ಈ ಘಟನೆಯಿಂದ ಇಡೀ ಅರೆಬೊಪ್ಪನಹಳ್ಳಿ ಗ್ರಾಮದಲ್ಲಿ ಸೂತಕದ ಛಾಯೆ ಆವರಿಸಿದೆ. ಇವರ ಅಂತ್ಯಕ್ರಿಯೆಯು ಗುರುವಾರ ಮಧ್ಯಾಹ್ನ ಅರೆಬೊಪ್ಪನಹಳ್ಳಿ ಸುತ್ತಮುತ್ತಲ ಗ್ರಾಮಸ್ಥರು, ಬಂಧುಗಳ ರೋಧನೆಯ ನಡುವೆ ನಡೆಯಿತು.

ಕೆ.ಟಿ.ಶ್ರೀನಿವಾಸ್ ನಿಧನ



ಕೆ.ಆರ್.ಪೇಟೆ,ಸೆ.4– ತಾಲೂಕು ಕರ್ನಾಟಕ ರಕ್ಷಣಾ ವೇದಿಕೆಯ ಉಪಾಧ್ಯಕ್ಷರು ಹಾಗೂ ಶ್ರೀನಿಧಿ ಟ್ರಾವೆಲ್ಸ್ ಮಾಲೀಕರಾದ ಕೆ.ಟಿ.ಶ್ರೀನಿವಾಸ್(48) ಅವರು ಗುರುವಾರ ನಿಧನ ಹೊಂದಿದ್ದಾರೆ.

ಮೃತರು ಪತ್ನಿ, ಓರ್ವ ಪುತ್ರಿ ಹಾಗೂ ತಾಯಿ, ಸಹೋದರ, ಸಹೋದರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಕೆ.ಆರ್.ಪೇಟೆ ಪಟ್ಟಣದಲ್ಲಿ ನಡೆಯಿತು. ಮೃತರ ನಿಧನಕ್ಕೆ ತಾಲೂಕಿನ ವಿವಿಧ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಮೂರನೇ ಪುಟದಿಂದ

ಸಚಿವರಿಗೆ ದಸರಾ ಉತ್ಸವಕ್ಕೆ ಆಹ್ವಾನ

ಕಾರ್ಯದರ್ಶಿ ಶಾಲಿನಿ ರಜನೀಶ್, ದಸರಾ ವಿಶೇಷಾಧಿಕಾರಿಯೂ ಆದ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಮಹಾನಗರ ಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸಿಫ್, ಜಿಪಂ ಸಿಇಓ ಎಸ್.ಯುಕೇಶ್ ಕುಮಾರ್, ಎಸ್ಪಿ ಡಾ.ವಿಷ್ಣುವರ್ಧನ್, ಅಪರ ಜಿಲ್ಲಾಧಿಕಾರಿ ಡಾ. ಪಿ.ಶಿವರಾಜು, ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ.ರೂಪಾ, ಮಹಾನಗರ ಪಾಲಿಕೆಯ ಉಪ ಆಯುಕ್ತ ಜೆ.ಎಸ್.ಸೋಮಶೇಖರ್ ಜಿಗಿನಿ, ಸಿಎಆರ್ ಡಿಸಿಪಿ ಮಾರುತಿ, ವಾಲ್ಮೀಕಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಶಿವಕುಮಾರ್, ಮೈಸೂರು ಮಹಾನಗರ ಪಾಲಿಕೆ ಎಸಿಗಳಾದ ಪ್ರತಿಭಾ, ಗಿರೀಶ್ ಇನ್ನಿತರರು ಉಪಸ್ಥಿತರಿದ್ದರು.

ಎಲ್ಲಾ ಚುನಾವಣೆಗೆ ಮತಪತ್ರ ಬಳಕೆ

ಕೋಟಿ ರೂ. ಅನುದಾನ ನೀಡಲಾಗುವುದು ಎಂದು ತಿಳಿಸಿದ್ದಾರೆ. ಕ್ಷಿಣಿಉಚಿತ ತಪಾಸಣೆಯೋ ಆಶಾಕಿರಣ ಯೋಜನೆಯಾಗಿದೆ. ಅಂಧತ್ವ ನಿವಾರಣಾ ಕಾರ್ಯಕ್ರಮವನ್ನೂ ಒಳಗೊಂಡ ಯೋಜನೆಯ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುವುದು ಎಂದು ತಿಳಿಸಿದ್ದಾರೆ.

ಮೆಟ್ರೋ ಎಲಿವೇಟೆಡ್ ಕಾರಿಡಾರ್: ಮೆಟ್ರೋ ಎಲಿವೇಟೆಡ್ ಕಾರಿಡಾರ್ ಗೆ ಸಚಿವ ಸಂಪುಟ ಅನುಮೋದನೆ ನೀಡಿದೆ, ಮೆಟ್ರೋ ಹಂತ–3, ಜೆಪಿನಗರ 4ನೇ ಹಂತದಿಂದ ಹೆಬ್ಬಾಳದವರೆಗೆ ಹೊಸ ಹಳ್ಳಿಯಿಂದ ಮಾಗಡಿ ರಸ್ತೆ ಮಾರ್ಗವಾಗಿ ಕಡಬಗೆರೆವರೆಗೆ 37.121 ಕಿ.ಮೀ. ಉದ್ದದ ಡಬಲ್ ಡೆಕ್ಕರ್ ನಿರ್ಮಾಣಕ್ಕೆ ಒಪ್ಪಿಗೆ ನೀಡಲಾಗಿದೆ.

ಶಾಲಾ ಮಕ್ಕಳಿಗೆ ರಾಗಿ ಹೆಲ್ತ್ ಮಿಕ್ಸ್ ಪುಡಿ: ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 10ನೆ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಾಯಿ ಶ್ಯೂರ್ ರಾಗಿ ಹೆಲ್ತ್ ಮಿಕ್ಸ್ ಪುಡಿಯನ್ನು ಬಿಸಿ ಹಾಲಿನೊಂದಿಗೆ ವಾರದಲ್ಲಿ ಐದು ದಿನಗಳಿಗೆ ಮಿಶ್ರಣ ಮಾಡಿ ನೀಡಲು ರಾಜ್ಯ ಸರಕಾರದಿಂದ ಭರಿಸಬೇಕಾಗಿರುವ ಶೇ.25ರಷ್ಟು ವೆಚ್ಚದ ಅಂದಾಜು ಮೊತ್ತ 20.53 ಕೋಟಿ ರೂ.ಗಳನ್ನು ಪಾವತಿಸಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮತ್ತು ಅಂದಾಜು ಸಾಗಾಣಿಕಾ ವೆಚ್ಚ 6.49 ಕೋಟಿ ರೂ. ಗಳನ್ನು ಕರ್ನಾಟಕ ಹಾಲು ಮಹಾ ಮಂಡಳಿಗೆ ಪಾವತಿಸಲು ಅನುಮೋದನೆ ನೀಡಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ ಜಿಲ್ಲಾ ಆಸ್ಪತ್ರೆಗಳು, ತಾಲೂಕು ಆಸ್ಪತ್ರೆಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್ ಅನುಸರಣೀಯ ಆಸ್ಪತ್ರೆ ನಿರ್ವಹಣಾ ವ್ಯವಸ್ಥೆ ತಂತ್ರಾಂಶದ ಹಂತವಾರು ಅನುಷ್ಠಾನಕ್ಕಾಗಿ ತಾತ್ವಿಕ ಅನುಮೋದನೆ ಹಾಗೂ ವಿವಿಧ ಸೇವಾ ಪೂರೈಕೆದಾರರೊಂದಿಗೆ ಪ್ರತಿ ವಹಿವಾಟಿನ ಪಾವತಿ ಆಧಾರದ ಮೇಲೆ ಮೊದಲನೇ ಹಂತದ ಅನುಷ್ಠಾನಕ್ಕೆ (ವಾರ್ಷಿಕ ಅಂದಾಜು ವೆಚ್ಚ 20.60 ಕೋಟಿ ರೂ.ಗಳು) ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ನಿರ್ಮಾಣವಾಗುತ್ತಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ನಿರ್ಮಾಣ ಕಾಮಗಾರಿಯ 63.34 ಕೋಟಿ ರೂ.ಗಳ ಪರಿಷ್ಕೃತ ಅಂದಾಜಿಗೆ ಹಾಗೂ ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಅಧೀನದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು 100 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಸ್ಥಾಪಿಸಲು ಆಡಳಿತಾತ್ಮಕ ಅನುಮೋದನೆ.

ಅರಣ್ಯ, ಅರಣ್ಯದಂಚಿನ ಹಾಡಿಗಳಲ್ಲಿ ವಾಸ ಮಾಡುತ್ತಿರುವ ಬುಡಕಟ್ಟು ಜನಾಂಗದವರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಪಿಎಂ–ಜನ್‌ಮನ್ ವಸತಿ ಯೋಜನೆಯಡಿ 1,580 ಮನೆಗಳನ್ನು ಜೇನು ಕುರುಬ ಮತ್ತು ಕೊರಗ ಸಮುದಾಯದವರಿಗೆ 30 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಹಾಗೂ ಅರಣ್ಯ ಪ್ರದೇಶಗಳ ಹಾಡಿಗಳಲ್ಲಿ ಅತ್ಯಂತ ಕ್ಲಿಷ್ಟಕರ ಹಾಗೂ ತುರ್ತು ಸಂದರ್ಭದಲ್ಲಿ ಸಂಪರ್ಕ ರಸ್ತೆ / ಇತ್ಯಾದಿ ಮೂಲಭೂತ ಸೌಕರ್ಯಗಳನ್ನು 10 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಒದಗಿಸಲು ಆಡಳಿತಾತ್ಮಕ ಅನುಮೋದನೆ.

ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರಗಳಿಗೆ 84 ಕೋಟಿ ರೂ.ಗಳ ಮೊತ್ತದಲ್ಲಿ ಯಂತ್ರೋಪಕರಣಗಳು ಮತ್ತು ಉಪಕರಣಗಳನ್ನು ಖರೀದಿಸಲು ಮತ್ತು ಹೆಚ್ಚುವರಿ ತರಗತಿ ಕೊಠಡಿಗಳು ಮತ್ತು ಪ್ರಯೋಗಾಲಯಗಳನ್ನು 21 ಕೋಟಿ ರೂ.ಗಳ ಮೊತ್ತದಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ.

ಕೇಂದ್ರ ಸರ್ಕಾರಿ ನೌಕರರಿಗೆ ಶೇ.3ರಷ್ಟು ಡಿಎ ಏರಿಕೆ

ನಿಯಮಗಳ ಪ್ರಕಾರ, ದಶಮಾಂಶ ಸಂಖ್ಯೆಗಳನ್ನು ಪರಿಗಣಿಸುವುದಿಲ್ಲ. ಹಾಗಾಗಿ, ಡಿಎ ಅನ್ನು ಶೇ.58% ಎಂದು ನಿಗದಿಪಡಿಸಲಾಗಿದೆ. ಉದಾಹರಣೆಗೆ, ರೂ.18,000 ಮೂಲ ವೇತನ ಇರುವವರಿಗೆ ತಿಂಗಳಿಗೆ ರೂ.540 ಹೆಚ್ಚುವರಿ ಆದಾಯ, ವರ್ಷಕ್ಕೆ ರೂ.6,480 ಏರಿಕೆ ಸಿಗಲಿದೆ.

ಪಿಂಚಣಿದಾರರಿಗೆ ಲಾಭ ಲೆವೆಲ್ –1ರಲ್ಲಿ ರೂ.56,900 ಮೂಲ ವೇತನ ಇರುವವರಿಗೆ ತಿಂಗಳಿಗೆ ರೂ.1,707 ಮತ್ತು ವರ್ಷಕ್ಕೆ ರೂ.20,484 ಹೆಚ್ಚಾಗುತ್ತದೆ. ಒಟ್ಟಾರೆಯಾಗಿ, ಈ 3% ಡಿಎ ಏರಿಕೆ ಕೇವಲ ಒಂದು ಸಂಖ್ಯೆಯಲ್ಲ. ಕೋಟ್ಯಾಂತರ ಕುಟುಂಬಗಳ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ಭರವಸೆ. ಹೆಚ್ಚುತ್ತಿರುವ ಆರ್ಥಿಕ ಹೊರೆಯಲ್ಲಿ ಈ ಘೋಷಣೆ ಅಕ್ಟೋಬರ್‌ನಲ್ಲಿ ಹೊರಬಂದರೆ ಹಬ್ಬದ ಸಂಭ್ರಮವನ್ನು ಇಮ್ಮಡಿಗೊಳಿಸುತ್ತದೆ ಎಂದು ನಿರೀಕ್ಷಿಸಲಾಗಿದೆ.

ಮೈಸೂರು ನಡುವೆ ವಿಶೇಷ ರೈಲು ಸೇವೆ

ಮರುದಿನ ಬೆಳಿಗ್ಗೆ 7.30ಕ್ಕೆ ಬೆಳಗಾವಿ ತಲುಪಲಿದೆ. ಈ ರೈಲು ಚಿಕ್ಕಬಾಣಾವರ, ತುಮಕೂರು, ಅರಸೀಕೆರೆ, ಬೀರೂರು, ದಾವಣಗೆರೆ, ಹರಿಹರ, ಎಸ್‌ಎಂಎಂ ಹಾವೇರಿ, ಎಸ್‌ಎಸ್‌ಎಸ್ ಹುಬ್ಬಳ್ಳಿ, ಧಾರವಾಡ, ಅಳ್ನಾವರ, ಲೋಂಡಾ ಮತ್ತು ಖಾನಾಪುರ ನಿಲ್ದಾಣಗಳಲ್ಲಿ ನಿಲ್ಲಲಿದೆ.

ರೈಲು ಸಂಖ್ಯೆ 06272 ಅ.1, 2025 ರಂದು ಬೆಳಗಾವಿಯಿಂದ ಸಂಜೆ 5.30ಕ್ಕೆ ಹೊರಟು, ಮರುದಿನ ಬೆಳಿಗ್ಗೆ 7.45ಕ್ಕೆ ಮೈಸೂರಿಗೆ ತಲುಪಲಿದೆ. ಈ ರೈಲು ಮಾರ್ಗದಲ್ಲಿ ಖಾನಾಪುರ, ಲೋಂಡಾ, ಅಳ್ನಾವರ, ಧಾರವಾಡ, ಎಸ್‌ಎಸ್‌ಎಸ್ ಹುಬ್ಬಳ್ಳಿ, ಎಸ್‌ಎಂಎಂ ಹಾವೇರಿ, ಹರಿಹರ, ದಾವಣಗೆರೆ, ಬೀರೂರು, ಅರಸೀಕೆರೆ, ತುಮಕೂರು, ಚಿಕ್ಕಬಾಣಾವರ, ಯಶವಂತಪುರ, ಕೆಎಸ್‌ಆರ್ ಬೆಂಗಳೂರು ಮತ್ತು ಮಂಡ್ಯ ನಿಲ್ದಾಣಗಳಲ್ಲಿ ನಿಲುಗಡೆ ನೀಡಲಿದೆ.

ಮೈಸೂರು ಬೆಳಗಾವಿ ಬೆಂಗಳೂರು ಎಕ್ಸ್‌ಪ್ರೆಸ್: ರೈಲು ಸಂಖ್ಯೆ 06273 ಅ.2, 2025 ರಂದು ಮೈಸೂರಿನಿಂದ ರಾತ್ರಿ 11.45ಕ್ಕೆ ಹೊರಟು, ಅ.3 ರಂದು ಮಧ್ಯಾಹ್ನ 12.30ಕ್ಕೆ ಬೆಳಗಾವಿಯನ್ನು ತಲುಪಲಿದೆ. ಈ ರೈಲು ಮಂಡ್ಯ, ಕೆಎಸ್‌ಆರ್ ಬೆಂಗಳೂರು, ಯಶವಂತಪುರ, ಚಿಕ್ಕಬಾಣಾವರ, ತುಮಕೂರು, ಅರಸೀಕೆರೆ, ಬೀರೂರು, ದಾವಣಗೆರೆ, ಹರಿಹರ, ಎಸ್‌ಎಂಎಂ ಹಾವೇರಿ, ಎಸ್‌ಎಸ್‌ಎಸ್ ಹುಬ್ಬಳ್ಳಿ, ಧಾರವಾಡ, ಅಳ್ನಾವರ, ಲೋಂಡಾ ಮತ್ತು ಖಾನಾಪುರ ನಿಲ್ದಾಣಗಳಲ್ಲಿ ನಿಲ್ಲಲಿದೆ.

ರೈಲು ಸಂಖ್ಯೆ 06274 ಅ.3, 2025 ರಂದು ಬೆಳಗಾವಿಯಿಂದ ಸಂಜೆ 5.30ಕ್ಕೆ ಹೊರಟು, ಮರುದಿನ ಬೆಳಿಗ್ಗೆ 5.00ಕ್ಕೆ ಬೆಂಗಳೂರಿನ ಎಸ್‌ಎಂವಿಟಿ ಟರ್ಮಿನಲ್ ತಲುಪಲಿದೆ. ಇದು ಖಾನಾಪುರ, ಲೋಂಡಾ, ಅಳ್ನಾವರ, ಧಾರವಾಡ, ಎಸ್‌ಎಸ್‌ಎಸ್ ಹುಬ್ಬಳ್ಳಿ, ಎಸ್‌ಎಂಎಂ ಹಾವೇರಿ, ಹರಿಹರ, ದಾವಣಗೆರೆ, ಬೀರೂರು, ಅರಸೀಕೆರೆ, ತುಮಕೂರು ಮತ್ತು ಚಿಕ್ಕಬಾಣಾವರ ನಿಲ್ದಾಣಗಳಲ್ಲಿ ನಿಲುಗಡೆ ನೀಡಲಿದೆ.

ಎಷ್ಟು ಬೋಗಿಗಳು ಇರಲಿವೆ?: ಈ ಮೇಲೆ ತಿಳಿಸಿದ ಎಲ್ಲಾ ರೈಲುಗಳು (06271/06272, 06273/06274 ಮತ್ತು 06275/06276) ಒಟ್ಟು 19 ಬೋಗಿಗಳನ್ನು ಹೊಂದಿದ್ದು, ಅವುಗಳಲ್ಲಿ 1 ಎಸಿ 2 ಟೈರ್, 3 ಎಸಿ 3–ಟೈರ್, 10 ಸ್ಲೀಪರ್ ಕ್ಲಾಸ್, 3 ಜನರಲ್ ಸೆಕೆಂಡ್ ಕ್ಲಾಸ್ ಮತ್ತು 2 ಎಸ್‌ಎಲ್‌ಆರ್/ಡಿ ಬೋಗಿಗಳು ಇರಲಿವೆ.

ಹಬ್ಬದ ಸಮಯದಲ್ಲಿ ಪ್ರಯಾಣಿಕರು ಈ ವಿಶೇಷ ಸೇವೆಗಳ ಸದುಪಯೋಗ ಪಡೆದುಕೊಳ್ಳಬೇಕು, ಹೆಚ್ಚಿನ ವಿವರಗಳಿಗಾಗಿ, ಪ್ರಯಾಣಿಕರು ಭಾರತೀಯ ರೈಲ್ವೆಯ ಅಧಿಕೃತ ವೆಬ್‌ಸೈಟ್ ಗೆ ಭೇಟಿ ನೀಡಬಹುದು, ಸಹಾಯವಾಣಿ ಸಂಖ್ಯೆ 139 ಗೆ ಕರೆ ಮಾಡಬಹುದು ಅಥವಾ ಹತ್ತಿರದ ರೈಲು ನಿಲ್ದಾಣವನ್ನು ಸಂಪರ್ಕಿಸಬಹುದು ಎಂದು ರೈಲ್ವೆ ಇಲಾಖೆ ತಿಳಿಸಿದೆ.

ಅಭಿವೃದ್ಧಿಗೆ 398 ಕೋಟಿ ಬಿಡುಗಡೆ

ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳ ಆಯ್ಕೆಯನ್ನು ಶಾಸಕರು ಅಕ್ಟೋಬರ್ 31ರೊಳಗೆ ಮಾಡದಿದ್ದಲ್ಲಿ ಜಿಲ್ಲಾಧಿಕಾರಿಗಳ ಸಮಿತಿಗೆ ಫಲಾನುಭವಿಗಳ ಆಯ್ಕೆ ಅಧಿಕಾರ ನೀಡಿದೆ. ಮೈಸೂರು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಟಿ.ಅಮರನಾಥ್ ಕಡ್ಡಾಯ ನಿವೃತ್ತಿ ಆದೇಶವನ್ನು ಸಂಪುಟ ಹಿಂದಕ್ಕೆ ಪಡೆದಿದೆ. ಅರಣ್ಯದಂಚಿನ ಹಾಡಿಗಳಲ್ಲಿ ವಾಸ ಮಾಡುತ್ತಿರುವ ಬುಡಕಟ್ಟು ಜನಾಂಗದವರಿಗೆ 1,580 ಮನೆಗಳನ್ನು ನಿರ್ಮಿಸಿ, ಮೂಲಸೌಕರ್ಯ ಕಲ್ಪಿಸಲು 40 ಕೋಟಿ ರೂ. ಒದಗಿಸಲಾಗಿದೆ.

ಪರಿಶಿಷ್ಟ ಪಂಗಡದ ಮೆಟ್ರಿಕ್ ನಂತರದ 20 ವಿದ್ಯಾರ್ಥಿ ನಿಲಯಗಳನ್ನು 15.45 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಸಮ್ಮತಿಸಿದೆ. ತಾಯಂದಿರ ಮರಣ ಪ್ರಮಾಣವನ್ನು ಶೂನ್ಯಕ್ಕೆ ಇಳಿಸುವ 139.53 ಕೋಟಿ ರೂ. ಸಮಗ್ರ ಕ್ರಿಯಾ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸರ್ಕಾರದ 550 ಆಯ್ದ ಶಾಲೆಗಳನ್ನು ಪಬ್ಲಿಕ್ ಶಾಲೆಗಳಾಗಿ ಪರಿವರ್ತಿಸಲು ಮತ್ತು ಮೂಲಸೌಕರ್ಯ ಕಲ್ಪಿಸಲು ಪ್ರತಿ ಶಾಲೆಗೆ 2 ರಿಂದ 4 ಕೋಟಿ ರೂ. ಒದಗಿಸಲು ಅನುಮತಿ ನೀಡಿದೆ. ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಮಾದರಿಯಲ್ಲಿ ರಾಜ್ಯ ರಸ್ತೆ ಸಾರಿಗೆ ದರ ನಿಯಂತ್ರಣ ಆಯೋಗ ರಚಿಸಲು ಸಮ್ಮತಿಸಿದೆ.

ಹೆಗ್ಗಡೆ ಆಶೀರ್ವಾದ ಪಡೆದ ಹರೀಶ್‌ಗೌಡರು



ಕಾಂಗ್ರೆಸ್ ಶಾಸಕ ಚಾಮರಾಜ ಕ್ಷೇತ್ರದ ಕೆ.ಹರೀಶ್‌ಗೌಡರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ 'ಧರ್ಮಸ್ಥಳ ಯಾತ್ರೆ' ಸಂಪನ್ನಗೊಂಡ ಬಳಿಕ ಶ್ರೀ ಮಂಜುನಾಥ ಸ್ವಾಮಿಯ ದರ್ಶನ ಪಡೆದು, ಧರ್ಮಾಧಿಕಾರಿ ಗಳಾದ ಡಾ.ವೀರೇಂದ್ರ ಹೆಗ್ಗಡೆಯವರ ಆಶೀರ್ವಾದ ಪಡೆಯಲಾಯಿತು. ಚಿತ್ರದಲ್ಲಿ ಶಾಸಕ ಕೆ.ಹರೀಶ್‌ಗೌಡರಲ್ಲದೆ ಮಂಚೇಗೌಡನಕೊಪ್ಪಲು ರವಿ, ಜನತಾ ಬಜಾರ್ ಅಧ್ಯಕ್ಷ ರಮೇಶ್ ರಾಯಪ್ಪ ಇನ್ನಿತರರಿದ್ದಾರೆ.

ಜಯದೇವ ಹೃದ್ರೋಗ ಸಂಸ್ಥೆ ನಿರ್ದೇಶಕರಾಗಿ ಡಾ. ಬಿ.ದಿನೇಶ್ ನೇಮಕ ಸಾಧ್ಯತೆ

ಬೆಂಗಳೂರು, ಸೆ4(ಕೆಂಪಿ)– ಜಯದೇವ ಹೃದ್ರೋಗ ಆಸ್ಪತ್ರೆ ನಿರ್ದೇಶಕರಾಗಿ ಡಾ.ಬಿ. ದಿನೇಶ್ ನೇಮಕಗೊಳ್ಳುವ ಸಾಧ್ಯತೆ ಇದೆ.

ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿಂದು ವಿಧಾನಸೌಧದಲ್ಲಿ ನಡೆದ ಜಯದೇವ ಹೃದ್ರೋಗ ಆಸ್ಪತ್ರೆ ಆಡಳಿತ ಮಂಡಳಿ ಸಭೆಯಲ್ಲಿ ನೂತನ ನಿರ್ದೇಶಕರ ನೇಮಕಕ್ಕೆ ಸಂಬಂಧಿಸಿದಂತೆ ಕೆಲವು ನಿರ್ಣಯಗಳನ್ನು ಕೈಗೊಂಡಿದ್ದು, ಅದರ ಮಾಹಿತಿಯನ್ನು ರಾಜ್ಯ ಹೈಕೋರ್ಟ್‌ಗೆ ಸಲ್ಲಿಸಿದ ಬಳಿಕ ಅಧಿಕೃತ ಪ್ರಕಟಣೆ ಹೊರಡಲಿದೆ.

ಜಯದೇವ ಹೃದ್ರೋಗ ಆಸ್ಪತ್ರೆ ನಿರ್ದೇಶಕ ಹುದ್ದೆಗೆ ಸಂದರ್ಶನ ಸಂದರ್ಭದಲ್ಲಿ ತಮ್ಮ ಹೆಸರನ್ನೂ ಪರಿಗಣಿಸುವಂತೆ ಹಿರಿಯ ವೈದ್ಯರೊಬ್ಬರು ನ್ಯಾಯಾಲಯದ ಮೊರೆ ಹೋಗಿದ್ದರಿಂದ, ಅವರ ಸಂದರ್ಶನಕ್ಕೂ ಅವಕಾಶ ಕಲ್ಪಿಸಿಕೊಡುವಂತೆ ನ್ಯಾಯಾಲಯ ಸೂಚಿಸಿತ್ತು.

ಸಂದರ್ಶನ ನಡೆದ ನಂತರ ಮುಚ್ಚಿದ ಲಕೋಟೆಯಲ್ಲಿ ಮಾಹಿತಿ ನೀಡುವಂತೆಯೂ ನ್ಯಾಯಾಲಯ ತಿಳಿಸಿತ್ತು. ಜಯದೇವ ಹೃದ್ರೋಗ ಆಸ್ಪತ್ರೆ ನಿರ್ದೇಶಕ ಹುದ್ದೆಗೆ ಸಂದರ್ಶನ ಅಭ್ಯರ್ಥಿಗಳ ಪಟ್ಟಿಯಲ್ಲಿ ಮೈಸೂರು ಜಯದೇವ ವೈದ್ಯಕೀಯ ಆಸ್ಪತ್ರೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಡಾ.ಬಿ.ದಿನೇಶ್, ಡಾ.ಎಂ.ದಿವ್ಯಾ ಪ್ರಕಾಶ್, ಡಾ.ಬಿ.ಗಿರೀಶ್, ಡಾ.ಗಿರಿಧರ್ ಕಮಲಾಪುರಕರ್, ಡಾ.ಎಸ್. ಜಯಪ್ರಕಾಶ್, ಡಾ.ವಿ.ಕುಮಾರಸ್ವಾಮಿ, ಡಾ.ಎ.ಸಿ.ನಾಗಮಣಿ, ಡಾ.ಪ್ರಭುಶಂಕರ್, ಡಾ.ಎಂ.ಪ್ರಸನ್ನ ಸಿಂಹ, ಡಾ.ವೇಣುಗೋಪಾಲ್ ರಾಮರಾವ್ ಮತ್ತು ಡಾ.ಸತೀಶ್ ಗೋವಿಂದಯ್ಯ ಇದ್ದರು. ಡಾ.ಸತೀಶ್ ಗೋವಿಂದಯ್ಯ ಸಂದರ್ಶನಕ್ಕೆ ಹಾಜರಾಗಿರಲಿಲ್ಲ.



ಡಾ.ಬಿ.ದಿನೇಶ್

ಮೂಲಗಳ ಪ್ರಕಾರ, 10 ವೈದ್ಯರ ಪೈಕಿ ಮೈಸೂರಿನ ಡಾ.ಬಿ.ದಿನೇಶ್ ಹೆಸರು ನೂತನ ನಿರ್ದೇಶಕ ಹುದ್ದೆ ಗೆ ಪ್ರಬಲವಾಗಿ ಕೇಳಿ ಬರುತ್ತಿದೆ. ಜಯದೇವ ಹೃದ್ರೋಗ ಆಸ್ಪತ್ರೆಗೆ ಡಾ.ಸಿ.ಎನ್.ಮಂಜುನಾಥ್ ನಿರ್ದೇಶಕರಾಗಿ ನೇಮಕಗೊಂಡ ನಂತರದ 20 ವರ್ಷಗಳಲ್ಲಿ ನಿರ್ದೇಶಕರ ಆಯ್ಕೆಗೆ ಆಡಳಿತ ಮಂಡಳಿ ಸಭೆ ನಡೆದಿರಲಿಲ್ಲ.

ಎರಡು ದಶಕಗಳ ನಂತರ ಡಾ.ಸಿ.ಎನ್. ಮಂಜುನಾಥ್ ನಿವೃತ್ತಿ ಬಳಿಕ ಡಾ.ರವೀಂದ್ರನಾಥ್ ನೇಮಕ ಮಾಡಲಾಗಿತ್ತು, ಇದೀಗ ಅವರ ನಿವೃತ್ತಿಯಿಂದ ತೆರವಾದ ಜಯದೇವ ಹೃದ್ರೋಗ ಆಸ್ಪತ್ರೆ ನಿರ್ದೇಶಕರ ಆಯ್ಕೆಗೆ ಆಡಳಿತ ಮಂಡಳಿ ಸಭೆ ವಿಧಾನಸೌಧದಲ್ಲಿ ಇಂದು ನಡೆಯಿತು.

ಶಾಸಕರ ಕಚೇರಿಗೆ ಕೇಂದ್ರ ಸಚಿವರ ಭೇಟಿ



ಮೈಸೂರಿನ ಕೆ.ಆರ್.ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಅವರ ಕಚೇರಿ ಕರ್ತವ್ಯ ಭವನಕ್ಕೆ ಭೇಟಿ ನೀಡಿದ್ದ ಕೇಂದ್ರ ಸಚಿವ ವಿ.ಸೋಮಣ್ಣ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು. ಈ ವೇಳೆ ಮಾಜಿ ಸಂಸದ ಪ್ರತಾಪ್ ಸಿಂಹ, ಮಾಜಿ ಎಂಎಲ್‌ಸಿ ಸಿದ್ದರಾಜು, ಮುಖಂಡ ಮೈ.ವಿ.ರವಿಶಂಕರ್, ಬಿಜೆಪಿ ಜಿಲ್ಲಾಧ್ಯಕ್ಷ ಸುಬ್ಬಣ್ಣ, ಮಾಜಿ ಶಾಸಕ ಬಾಲರಾಜ್, ಕೆ.ಆರ್.ಕ್ಷೇತ್ರದ ಅಧ್ಯಕ್ಷ ಗೋಪಾಲ್ ರಾಜೇ ಅರಸ್, ಮಾಜಿ ಕಾರ್ಪೊರೇಟರ್ ಬಿ.ವಿ.ಮಂಜುನಾಥ್, ಜಯಶಂಕರ್, ಪ್ರದೀಪ್ ಕುಮಾರ್, ಜೋಗಿ ಮಂಜು, ರಾಕೇಶ್ ಗೌಡ, ಬಿಲ್ಲಯ್ಯ, ಖಂಡೇಶ್, ಬಾಲಕೃಷ್ಣ, ವಸಂತಕುಮಾರ್, ವಿನಯ್ ಪಾಂಚಜನ್ಯ, ಕಿಶೋರ್, ಸುರೇಶ್, ನವೀನ್ ಮತ್ತಿತರರು ಉಪಸ್ಥಿತರಿದ್ದರು.

ಜಿಎಸ್‌ಟಿ ಪರಿಷ್ಕರಣೆ ಬೆನ್ನಲ್ಲೇ ಐಪಿಎಲ್ ಟಿಕೆಟ್ ದರ ದುಬಾರಿ

ನವದೆಹಲಿ, ಸೆ.4– ಸರಕು ಮತ್ತು ಸೇವಾ ತೆರಿಗೆ(ಜಿಎಸ್‌ಟಿ) ಸ್ಲ್ಯಾಬ್ ಪರಿಷ್ಕರಣೆ ಬೆನ್ನಲ್ಲೇ 2026ನೇ ಆವೃತ್ತಿಯ ಐಪಿಎಲ್ ಪಂದ್ಯಗಳ ಟಿಕೆಟ್ ದರ ದುಬಾರಿಯಾಗಲಿದೆ.

ಇಲ್ಲಿಯವರೆಗೆ ಐಪಿಎಲ್ ಟಿಕೆಟ್‌ಗಳು ಶೇ.28 ರಷ್ಟು ತೆರಿಗೆ ಸ್ಲ್ಯಾಬ್ ಅಡಿಯಲ್ಲಿದ್ದವು. ಆದರೆ ಪರಿಷ್ಕರಣೆಯಾದ ಬಳಿಕ ಇವು ಶೇ.40 ರ ವಿಭಾಗದಲ್ಲಿ ಬರುವುದರಿಂದ ಟಿಕೆಟ್ ದರ ಏರಿಕೆಯಾಗಲಿದೆ.

ತಂಬಾಕು ಉತ್ಪನ್ನಗಳು ಹಾಗೂ ಕ್ಯಾಸಿನೊ, ರೇಸ್ ಕ್ಲಬ್‌ಗಳು ಮತ್ತು ಇತರ ಐಷಾರಾಮಿ ಖರ್ಚುಗಳಿಗೆ ಶೇ.40 ತೆರಿಗೆ ಹಾಕಲಾಗಿದೆ. ಹೀಗಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡದ ಬೆಂಗಳೂರಿನ ಪಂದ್ಯದ ಟಿಕೆಟ್ ದರ ಭಾರೀ ಏರಿಕೆಯಾಗುವ ಸಾಧ್ಯತೆ ಯಿದೆ. ಈ ವರ್ಷ ಆರ್‌ಸಿಬಿಯ ಬೆಂಗಳೂರು ಪಂದ್ಯದ ದುಬಾರಿ ಟಿಕೆಟ್ ಬೆಲೆ 42,350 ರೂ. ಇತ್ತು. ಈ ದರಕ್ಕೆ ಶೇ.40 ಜಿಎಸ್‌ಟಿ ಹಾಕಿದರೆ ಸುಮಾರು 4 ಸಾವಿರ ರೂ. ಏರಿಕೆ ಕಾಣಬಹುದು. ಚೆಪಾಕ್ ನಲ್ಲಿ ಅತ್ಯಂತ ದುಬಾರಿ ಟಿಕೆಟ್ (7,000 ರೂ.) 7,656 ಕ್ಕೆ ಏರುವ ಸಾಧ್ಯತೆಯಿದೆ. ಆರ್‌ಸಿಬಿಯ ಬೆಂಗಳೂರು ಪಂದ್ಯದ ಕಡಿಮೆ ಬೆಲೆಯ ಟಿಕೆಟ್‌ಗೆ 2,300 ರೂ. ಇತ್ತು. ಇನ್ನು ಮುಂದೆ ಈ ದರ 2,515 ರೂ. ಆಗಬಹುದು. ಐಪಿಎಲ್ ಮಾತ್ರವಲ್ಲ, ಪ್ರೊ ಕಬಡ್ಡಿ ಲೀಗ್ ಮತ್ತು ಇಂಡಿಯನ್ ಸೂಪರ್ ಲೀಗ್ ಕೂಡ ಟಿಕೆಟ್ ಬೆಲೆಯಲ್ಲಿ ಹೆಚ್ಚಳವಾಗಬಹುದು. 500 ರೂ. ಗಿಂತ ಹೆಚ್ಚಿಲ್ಲದ ಮಾನ್ಯತೆ ಪಡೆದ ಕ್ರೀಡಾಕೂಟಗಳು ಸೇರಿದಂತೆ ಇತರ ಕ್ರೀಡಾಕೂಟಗಳಿಗೆ ಪ್ರವೇಶಕ್ಕೆ ವಿನಾಯಿತಿ ನೀಡಲಾಗಿದೆ. ಟಿಕೆಟ್ ದರ 500 ರೂ.ಗಿಂತ ಜಾಸ್ತಿ ಇದ್ದರೆ ಅದಕ್ಕೆ ಶೇ.18ರ ಪ್ರಮಾಣಿತ ದರದಲ್ಲಿ ತೆರಿಗೆ ವಿಧಿಸಲಾಗುತ್ತದೆ.



ಮೈಸೂರು ಸೇರಿದಂತೆ ಎಲ್ಲೆಡೆ ರೈಲ್ವೆ ಲೆವೆಲ್ ಕ್ರಾಸಿಂಗ್ ಗೇಟ್ ಸದ್ಯದಲ್ಲೇ ಪೂರ್ಣ ತೆರವು

- ಇಂತಹ ಕಡೆ ಮೇಲ್ಸೇತುವೆ, ಅಂಡರ್ ಬ್ರಿಡ್ಜ್ ನಿರ್ಮಿಸಲು ಈಗಾಗಲೇ ಟೆಂಡರ್
- ಮೈಸೂರಿನಲ್ಲಿ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಮಾಹಿತಿ

ಮೈಸೂರು, ಸೆ.4(ಬಿಎಲ್‌ಯು)– ಮೈಸೂರು ಸೇರಿದಂತೆ ಎಲ್ಲೆಡೆ ನಗರಗಳ ನೂರು ಕಿಲೋ ಮೀಟರ್ ವ್ಯಾಪ್ತಿಯ ರೈಲ್ವೆ ಲೆವೆಲ್ ಕ್ರಾಸಿಂಗ್ ಗೇಟ್‌ಗಳನ್ನು ತೆರವು ಮಾಡಿ ಮೇಲ್ಸೇತುವೆ ಅಥವಾ ಅಂಡರ್ ಬ್ರಿಡ್ಜ್‌ಗಳನ್ನು ನಿರ್ಮಿಸಲಾಗುವುದು ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು.

ನಗರದ ಸರ್ಕಾರಿ ಅತಿಥಿ ಗೃಹದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 175 ರೈಲ್ವೆ ಲೆವೆಲ್ ಕ್ರಾಸಿಂಗ್‌ನಲ್ಲಿ 75 ರೈಲ್ವೆ ಲೆವೆಲ್ ಕ್ರಾಸಿಂಗ್ ತೆರವು ಮಾಡಿ, ಅಲ್ಲಲ್ಲಿ ಮೇಲ್ಸೇತುವೆ ಅಥವಾ ಅಂಡರ್ ಬ್ರಿಡ್ಜ್ ನಿರ್ಮಾಣಕ್ಕೆ ಟೆಂಡರ್ ಕರೆಯಲಾಗಿದೆ. ನಮ್ಮ ಸರ್ಕಾರದ ಮೂರು ವರ್ಷದ ಅಧಿಕಾರಾವಧಿಯಲ್ಲಿ ಎಲ್ಲಾ ರೈಲ್ವೆ ಲೆವೆಲ್ ಕ್ರಾಸಿಂಗ್‌ಗಳನ್ನು ತೆರವು ಮಾಡಿ ಮೇಲ್ಸೇತುವೆ ಅಥವಾ ಅಂಡರ್ ಬ್ರಿಡ್ಜ್ ನಿರ್ಮಾಣ ಮಾಡುತ್ತೇವೆ ಎಂದು ಭರವಸೆ ನೀಡಿದರು.

ಮೈಸೂರಿನ ವಿವಿಧ ನಗರಗಳಿಂದ ಮತ್ತಷ್ಟು ವಂದೇ ಭಾರತ್ ರೈಲಿಗೆ ಬೇಡಿಕೆ ಇರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಸೋಮಣ್ಣ, 'ಬೆಂಗಳೂರಿನಿಂದ' ಮೈಸೂರು ಮತ್ತು ತುಮಕೂರಿಗೆ ಪ್ರಯಾಣಿಕರ ದಟ್ಟಣೆ ಕಡಿಮೆ ಮಾಡುವ ನಿಟ್ಟಿನಲ್ಲಿ ಹೊಸ ಯೋಜನೆ ಹಾಕಿಕೊಳ್ಳಲಾಗಿದೆ. ಆ ಯೋಜನೆಯ ವಿವರಗಳನ್ನು ಮುಂದೆ ನೀಡಲಾಗುವುದು ಎಂದರು.



ಮೈಸೂರಿನ ಸರ್ಕಾರಿ ಅತಿಥಿ ಗೃಹದಲ್ಲಿ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಸಾವಿರ ಸುಳ್ಳು ಹೇಳಿ ಅದು ಸುಳ್ಳೇ ಎಂಬುದನ್ನು ಸಾಬೀತು ಮಾಡಿದ್ದಾರೆ!

"ಸಾವಿರ ಬಾರಿ ಸುಳ್ಳು ಹೇಳಿದರೆ ಅದು ಸುಳ್ಳೆ ಆಗುತ್ತದೆ ಎಂಬುದನ್ನು ಧರ್ಮಸ್ಥಳ ವಿಚಾರದಲ್ಲಿ ರಾಜ್ಯ ಸರ್ಕಾರ ಸಾಬೀತು ಮಾಡಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ಸೋಮಣ್ಣ ಅಭಿಪ್ರಾಯಪಟ್ಟರು. ಬಾಲಂಗೋಚಿಗಳು, ಎಡಪಂಥೀಯರ ಮಾತಿಗೆ ಸರ್ಕಾರ ಇನ್ನು ಮುಂದೆ ಬಲಿಯಾಗಬಾರದು. ತಾನು ಮಾಡಿದ ತಪ್ಪನ್ನು ಸರ್ಕಾರ ಈಗಲಾದರೂ ಅರಿತುಕೊಳ್ಳಲಿ. ಕ್ಷುಲ್ಲಕ ರಾಜಕಾರಣ ಬಿಟ್ಟು ಜನರ ನೋವಿಗೆ ಸ್ಪಂದಿಸಬೇಕು. ಅತಿವೃಷ್ಟಿಯಿಂದ ರಾಜ್ಯದೆಲ್ಲೆಡೆ ನಷ್ಟವಾಗಿದ್ದು, ಜನರ ಸಂಕಷ್ಟ ಅರಿತು ಅದರ ನಿವಾರಣೆಗೆ ಮುಂದಾಗಬೇಕು. ಜಿಲ್ಲಾ ಉಸ್ತುವಾರಿ ಸಚಿವರನ್ನು ಆಯಾ ಜಿಲ್ಲೆಗೆ ಕಳುಹಿಸಿ, ಜನರ ತೊಂದರೆ ಪರಿಹರಿಸಬೇಕು ಎಂದು ವಿ.ಸೋಮಣ್ಣ ಕಿವಿಮಾತು ಹೇಳಿದರು.

ಮೈಸೂರು ಕಾರ್ಯಕ್ರಮದ ನಂತರ ಸೋಮಣ್ಣ ಅವರು ನಂಜನಗೂಡಿನ ಶ್ರೀ ಶ್ರೀಕಂಠೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದರು.

ದಶಕಗಳಿಂದ ನೆನೆಗುದಿಗೆ ಬಿದ್ದಿರುವ ರೈಲ್ವೆ ಅಂಡರ್ ಬ್ರಿಡ್ಜ್ ನಿರ್ಮಾಣ ಪ್ರಸ್ತಾವನೆ ಬಗ್ಗೆ ಅಧಿಕಾರಿಗಳು ಹಾಗೂ ಸ್ಥಳೀಯರಿಂದ ಮಾಹಿತಿ ಪಡೆದ ಸೋಮಣ್ಣ ಅವರು, ಈ ಸಂಬಂಧ ಅಧಿಕಾರಿಗಳ ಸಭೆ ನಡೆಸಿ ಅಂಡರ್ ಬ್ರಿಡ್ಜ್ ನಿರ್ಮಿಸುವ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಹಲವು ವಸ್ತುಗಳಿಗೆ ಜಿಎಸ್‌ಟಿ ಕಡಿಮೆ ಮಾಡಿರುವುದರಲ್ಲಿ ಯಾವುದೇ ರಾಜಕಾರಣವಿಲ್ಲ. ಬಿಹಾರ ಚುನಾವಣೆ ಹಿನ್ನೆಲೆಯಲ್ಲಿ ಜಿಎಸ್‌ಟಿ ಕಡಿಮೆ ಮಾಡಲಾಗಿದೆ ಎಂಬ ವಿರೋಧ ಪಕ್ಷಗಳ ಆರೋಪ ಶುದ್ಧ ಸುಳ್ಳು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಡಳಿತಾವಧಿಗೆ 12 ವರ್ಷ ತುಂಬಿದ ಹಿನ್ನೆಲೆಯಲ್ಲಿ ದಸರಾ ವೇಳೆಯಲ್ಲಿ ದೇಶದ ಜನರಿಗೆ ಜಿಎಸ್‌ಟಿ ಸುಧಾರಣೆಯ ಕೊಡುಗೆ ನೀಡಲಾಗಿದೆ ಎಂದರು.

ಚುನಾವಣೆ ಬರುತ್ತವೆ, ಹೋಗುತ್ತವೆ. ಆದರೆ, ಜನರ ಅನುಕೂಲಕ್ಕಾಗಿ ಕೇಂದ್ರ ಸರ್ಕಾರ ಹೊಸ ನೀತಿ ರೂಪಿಸಿದೆ. ದೇಶದ ಅರ್ಥ ವ್ಯವಸ್ಥೆ ಉತ್ತಮವಾಗಿಸಲು ಹಣಕಾಸು ಸಚಿವ ನಿರ್ಮಲಾ ಸೀತಾರಾಮನ್ ಅವರು ಹಗಲಿರುಳು ದುಡಿಯುತ್ತಿದ್ದಾರೆ. ಹೊಸ ಜಿಎಸ್‌ಟಿಯಿಂದ ರಾಜ್ಯಗಳಿಗೆ ನಷ್ಟವಾಗುತ್ತದೆ ಎಂಬ ಕಾಂಗ್ರೆಸ್ ಆರೋಪ ನಿರಾಧಾರವಾಗಿದ್ದು, ನಾವು ಯಾವುದೇ ರಾಜ್ಯವನ್ನು ಟಾರ್ಗೆಟ್ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು. ಗೋಷ್ಠಿಯಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಮಾಜಿ ಸಂಸದ ಪ್ರತಾಪ್ ಸಿಂಹ, ನಗರಾಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಸುಬ್ಬಣ್ಣ ಉಪಸ್ಥಿತರಿದ್ದರು.

ಚಾಮುಂಡಿಬೆಟ್ಟದ ಐತಿಹಾಸಿಕ ಹಿನ್ನೆಲೆ, ಆರಾಧನೆ, ಸಂಪ್ರದಾಯ ಅರಿತು ನಂತರ ದಸರಾ ಉದ್ಘಾಟಿಸಲಿ!

ಸಾಹಿತಿ ಬಾನು ಮುಷ್ತಾಕ್ ಅವರಿಗೆ ಕೇಂದ್ರ ಸಚಿವ ಸೋಮಣ್ಣ ಕಿವಿಮಾತು

- ಮೊದಲು ಇಲ್ಲಿನ ಧಾರ್ಮಿಕತೆ ಅರ್ಥ ಮಾಡಿಕೊಳ್ಳಲಿ
- ನಮ್ಮ ಸಂಪ್ರದಾಯಕ್ಕೆ ಯಾವ ಧಕ್ಕೆ ತರಬಾರದು
- ಸರ್ಕಾರ, ದಸರಾ ಉದ್ಘಾಟಕರು ಸಂಪ್ರದಾಯ ಪಾಲಿಸಲಿ

ಮೈಸೂರು,ಸೆ.4(ಬಿಎಲ್‌ಯು)– ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವದ ಐತಿಹಾಸಿಕ ಹಿನ್ನೆಲೆ, ಉತ್ಸವ, ಆರಾಧನೆ, ಸಂಪ್ರದಾಯವನ್ನು ಅರಿತು ಆನಂತರ ಬಾನು ಮುಷ್ತಾಕ್, ದಸರಾ ಮಹೋತ್ಸವವನ್ನು ಉದ್ಘಾಟಿಸಲಿ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಸಲಹೆ ನೀಡಿದರು.

ನಗರದ ಸರ್ಕಾರಿ ಅತಿಥಿ ಗೃಹದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಂಬಿಕೆ, ಭಕ್ತಿ, ಇತಿಹಾಸಕ್ಕೆ ಮತ್ತೊಂದು ಹೆಸರು ಅಂದರೆ ಅದು ತಾಯಿ ಚಾಮುಂಡೇಶ್ವರಿ. ಈ ಹಿನ್ನೆಲೆಯಲ್ಲಿ ದಸರಾ ಉದ್ಘಾಟಕರು ಚಾಮುಂಡಿಬೆಟ್ಟದ ಧಾರ್ಮಿಕತೆಯನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

ಈ ಬಾರಿಯ ದಸರಾ ಉದ್ಘಾಟನೆ ಮಾಡುತ್ತಿರುವ ಬೂಕರ್ ಪ್ರಶಸ್ತಿ ಪುರಸ್ಕೃತ ಸಾಹಿತಿ ಬಾನು ಮುಷ್ತಾಕ್ ಅವರಿಗೆ ಚಾಮುಂಡೇಶ್ವರಿ ದೇವಸ್ಥಾನದ ಇತಿಹಾಸ, ಉತ್ಸವ, ಆರಾಧನೆ, ಸಂಪ್ರದಾಯ ಸೇರಿದಂತೆ ಐತಿಹಾಸಿಕ ಹಿನ್ನೆಲೆಯನ್ನು ಸರ್ಕಾರದವರು ಮೊದಲು ಮನವರಿಕೆ ಮಾಡಿಕೊಡಲಿ. ಆನಂತರ ಅವರು ದಸರಾ ಉದ್ಘಾಟಿಸಲಿ ಎಂದು ಸಲಹೆಯಿತ್ತರು.

ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರು ಅರ್ಹರೋ, ಇಲ್ಲವೋ ಎಂದು ನಾನು ಪರಾಮರ್ಶೆ ಮಾಡುವುದಿಲ್ಲ. ಆದರೆ ನಮ್ಮ ಸಂಪ್ರದಾಯಕ್ಕೆ ಧಕ್ಕೆ ಆಗದಂತೆ ಉದ್ಘಾಟಕರು ನಡೆದುಕೊಳ್ಳಲಿ ಎಂಬುದಷ್ಟೆ ನಮ್ಮ ಅಭಿಪ್ರಾಯ ಎಂದು ಸ್ಪಷ್ಟಪಡಿಸಿದರು.

ಸರ್ಕಾರ ಯಾರ ತೃಪ್ತಿಪಡಿಸುವ ಸಲುವಾಗಿ ದಸರಾ ಉದ್ಘಾಟಕರನ್ನು ಆಯ್ಕೆ ಮಾಡಿದೆಯೋ ನನಗೆ ಗೊತ್ತಿಲ್ಲ. ಆದರೆ ಧಾರ್ಮಿಕ ವಿಚಾರದಲ್ಲಿ ಟೇಕ್ ಇಟ್ ಫಾರ್ ಗ್ರ್ಯಾಂಟೆಡ್ (ದಸರಾ ಉದ್ಘಾಟನೆಗೆ ಒಪ್ಪಿದರೆ ಸಾಕು) ಎಂಬ ಮನೋಭಾವ ತಳೆಯಬಾರದಿತ್ತು ಸರ್ಕಾರ ಹಾಗೂ ದಸರಾ ಉದ್ಘಾಟನೆ ಮಾಡುವವರಿಗೆ ಚಾಮುಂಡಿಬೆಟ್ಟದ ಶಿಷ್ಟಾಚಾರ, ಸಂಪ್ರದಾಯ ಪಾಲಿಸುವ ಬುದ್ಧಿ ನೀಡಲಿ ಎಂದಷ್ಟೇ ನಾನು ಸಲಹೆ ನೀಡುತ್ತೇನೆ ಎಂದು ಸೋಮಣ್ಣ ಹೇಳಿದರು.

ಶಾಲಾ ಮಕ್ಕಳಿಗೆ ಲೇಖನಿ ಸಾಮಗ್ರಿ ವಿತರಣೆ...



ಹೆಚ್.ವಿ.ರಾಜೀವ್ ಸ್ನೇಹ ಬಳಗ, ಪ್ರತಿಭೆ ವೇದಿಕೆಯಿಂದ ಕೆ.ಆರ್.ಮೊಹಲ್ಲಾದ ಶ್ರೀ ಕೃಷ್ಣರಾಜ ಹಿರಿಯ ಪ್ರಾಥಮಿಕ ಶಾಲೆ ಮಕ್ಕಳಿಗೆ ಲೇಖನ ಸಾಮಗ್ರಿಗಳನ್ನು ನೀಡಲಾಯಿತು. ಪ್ರತಿಭೆ ವೇದಿಕೆ ಅಧ್ಯಕ್ಷ ಎಸ್.ರಾಜರತ್ನಂ, ಪ್ರಧಾನ ಕಾರ್ಯದರ್ಶಿ ಕೆ.ಇಂದುಮತಿ ರಾಜರತ್ನಂ, ಗೌರವ ಸಲಹೆಗಾರರಾದ ರೇಣುಕಾ ರುದ್ರೇಶ್, ಹೆಚ್.ವಿ.ರಾಜೀವ್ ಸ್ನೇಹ ಬಳಗದ ಆರ್.ಭಾಗ್ಯಶ್ರೀ ಭಟ್, ಶಾಲೆಯ ಮುಖ್ಯ ಶಿಕ್ಷಕಿ ಸುಮಾ ಎನ್.ಆರ್., ಸಹ ಶಿಕ್ಷಕರಾದ ರೂಪ ಬಿ.ಎಸ್., ಶೀಲಾ ಎಂ., ಪ್ರಶಿಕ್ಷಣಾರ್ಥಿಗಳಾದ ಅನುಷಾ, ಸುರಭಿ, ತೇಜಸ್ವಿನಿ, ಜ್ಯೋತಿ, ಅಭಿಷೇಕ್ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಗಣೇಶೋತ್ಸವ...



ಮೈಸೂರು ತಾಲೂಕು ಜಯಪುರದ ವಿನಾಯಕ ಗೆಳೆಯರ ಬಳಗದಿಂದ ಪ್ರತಿಷ್ಠಾಪಿಸಿದ್ದ ಗಣೇಶಮೂರ್ತಿಯನ್ನು ಬುಧವಾರ ವಿಸರ್ಜಿಸಲಾಯಿತು. ಗಣೇಶೋತ್ಸವಕ್ಕೆ ವೈಯಕ್ತಿಕ ಧನಸಹಾಯ ಮಾಡಿದ ಸಮಾಜ ಸೇವಕ ಎಸ್.ಶ್ರೀಕಾಂತ್, ಜಯಪುರ ಗ್ರಾಪಂ ಸದಸ್ಯ ಎಂ.ನಾಗರಾಜು, ಜಯಪುರ ಡೇರಿ ಅಧ್ಯಕ್ಷ ಮೂಗನಾಯಕ, ಮುಖಂಡರಾದ ಜವರನಾಯಕ, ರಂಗಸ್ವಾಮಿ ಅವರನ್ನು ಬಳಗದ ಯುವಕರು ಸನ್ಮಾನಿಸಿದರು.

ಮಾಜಿ ಉಪಮೇಯರ್ ಅಭಿನಂದನೆ



ಬಿಜೆಪಿ ಮೈಸೂರು ನಗರ ಎಸ್‌ಸಿ ಮೋರ್ಚಾ ಅಧ್ಯಕ್ಷರಾದ ಮಾಜಿ ಉಪಮೇಯರ್ ವಿ.ಶೈಲೇಂದ್ರ ಅವರು ಕೇಂದ್ರ ಸಚಿವ ವಿ.ಸೋಮಣ್ಣ ಅವರನ್ನು ಅಭಿನಂದಿಸಿದರು. ಈ ವೇಳೆ ಶಾಸಕ ಟಿ.ಎಸ್.ಶ್ರೀವತ್ಸ, ಬಿಜೆಪಿ ನಗರ ಉಪಾಧ್ಯಕ್ಷ ಜೋಗಿ ಮಂಜು, ಮುಖಂಡ ವಸಂತ್ ಕುಮಾರ್, ಯುವ ಮೋರ್ಚಾ ಅಧ್ಯಕ್ಷ ರಾಕೇಶ್ ವಾಜಮಂಗಲ, ಯುವ ಮುಖಂಡರಾದ ಮಹದೇವು, ವಿಕ್ಕಿ ಮತ್ತಿತರರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೆ ರೈಲ್ವೆ ಮ್ಯೂಸಿಯಂ ವೀಕ್ಷಣೆಗೆ ಉಚಿತ ಪ್ರವೇಶ ಕಲ್ಪಿಸಲು ಮನವಿ

ಮೈಸೂರು, ಸೆ.4(ಎಂಕೆ)– ದಸರಾ ಮಹೋತ್ಸವದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ರೈಲ್ವೆ ಮ್ಯೂಸಿಯಂ ವೀಕ್ಷಣೆಗೆ ಉಚಿತ ಪ್ರವೇಶ ನೀಡುವಂತೆ ವಿಧಾನ ಪರಿಷತ್ ಸದಸ್ಯ ಕೆ.ವಿವೇಕಾನಂದ, ನಂಜನಗೂಡಲ್ಲಿ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡಿದ್ದ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಮಾಡಿದರು.

ಕಳೆದ ವರ್ಷವೂ ದಸರಾ ಸಂದರ್ಭದಲ್ಲಿ ಶಾಲಾ ಮಕ್ಕಳು ರೈಲ್ವೆ ಮ್ಯೂಸಿಯಂ ವೀಕ್ಷಿಸಲು ಉಚಿತ ಪ್ರವೇಶ ಕಲ್ಪಿಸಿದಂತೆಯೇ ಈ ವರ್ಷವೂ ಉಚಿತ ಪ್ರವೇಶಕ್ಕೆ ಅವಕಾಶ ಮಾಡಿಕೊಡಬೇಕು. ಇದರಿಂದ ಶಾಲಾ ಮಕ್ಕಳಲ್ಲಿ ರೈಲ್ವೆ ಕುರಿತು ಅರಿವು ಮೂಡಿಸಲು ಸಹಕಾರಿ ಯಾಗಲಿದೆ ಎಂದು ಮನವಿ ಮಾಡಿದರು.



ಸೆ.7ಕ್ಕೆ ಮಾದಕ ವಸ್ತುಗಳ ದುಷ್ಪರಿಣಾಮದ ಜಾಗೃತಿಗಾಗಿ ಬೈಕ್ ರ‍್ಯಾಲಿ

ಮೈಸೂರು,ಸೆ.4(ಜಿಎ)–ಯುವ ಸಮೂಹಕ್ಕೆ ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ವಿವಿಧ ಸಂಘಟನೆಗಳ ಹಾಗೂ ವಿವಿಧ ವಿದ್ಯಾಸಂಸ್ಥೆಗಳ ಸಹಯೋಗದಲ್ಲಿ ಸೆ.7ರಂದು ಬೈಕ್ ರ‍್ಯಾಲಿ ಆಯೋಜಿಸಿದ್ದು, ಕನ್ನಡ ಚಲನಚಿತ್ರ ನಟ ಧನಂಜಯ್ ಚಾಲನೆ ನೀಡಲಿದ್ದಾರೆ ಎಂದು ಗೋಪಾಲಗೌಡ ಆಸ್ಪತ್ರೆ ಮುಖ್ಯಸ್ಥ ಡಾ. ಶುಶ್ರುತ್‌ಗೌಡ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಸ್ತುತ ಮೈಸೂರಿನಲ್ಲಿ ಮಾದಕ ದ್ರವ್ಯಗಳ ಪಿಡುಗು ಹೆಚ್ಚಾಗಿದೆ. ಇದರಿಂದಾಗಿ ಸಾರ್ವಜನಿಕ ಸುರಕ್ಷತಾ ಬಿಕ್ಕಟ್ಟು ನಿರ್ಮಾಣವಾಗಿದೆ. ಇದರ ಸಲುವಾಗಿ ಮಾದಕ ದ್ರವ್ಯದ ವಿರುದ್ಧವಾಗಿ ಹೋರಾಡಲು ಈ ಬೈಕ್ ರ‍್ಯಾಲಿ ಹಮ್ಮಿಕೊಂಡಿದ್ದು ಅಂದು ಬೆಳಿಗ್ಗೆ 8ಗಂಟೆಗೆ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದಿಂದ ರ‍್ಯಾಲಿಗೆ ಚಾಲನೆ ದೊರೆಯಲಿದ್ದು, ನಗರದ ವಿವಿಧ ಮುಖ್ಯ ರಸ್ತೆಗಳಲ್ಲಿ ಜಾಥಾ ನಡೆಸಲಾಗುವುದು ಎಂದು ತಿಳಿಸಿದರು.



ಡಾ.ಶುಶ್ರುತ್‌ಗೌಡ

ಜಾಥಾ ಕಾರ್ಯಕ್ರಮವು ಯಾವುದೇ ರಾಜಕೀಯ ಪ್ರೇರಿತವಲ್ಲದೇ ಪಕ್ಷಾತೀತವಾಗಿ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ನಡೆಯಲಿದ್ದು, ವಿನಯ್ ಗುರೂಜಿ ಸಾರಥ್ಯದಲ್ಲಿ ನಟ ಧನಂಜಯ್ ಚಾಲನೆ ನೀಡಲಿದ್ದಾರೆ. ಕಾರ್ಯಕ್ರಮದಲ್ಲಿ ಶಿಲ್ಪಿ ಅರುಣ್ ಯೋಗಿರಾಜ್, ಯೋಗಪಟು ಯೋಗಾತ್ಮ ಶ್ರೀಹರಿ, ಡಾ.ಹೆಚ್.ಕೆ ಚೇತನ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಇವರೊಂದಿಗೆ ಮೈಸೂರಿನ ಸಾರ್ವಜನಿಕರು ಹಾಗೂ ನಾಗರೀಕರು ಭಾಗವಹಿಸಲಿದ್ದಾರೆ ಎಂದರು.

ಸಾಂಸ್ಕೃತಿಕವಾಗಿ ಹೆಸರುವಾಸಿಯಾಗಿರುವ ಮೈಸೂರಿನಲ್ಲಿ ಮಾದಕ ವಸ್ತುಗಳ ಮಾರಾಟದ ಕೃತ್ಯಗಳು ನಡೆದಿವೆ. ಮಹಾರಾಷ್ಟ್ರ ಪೊಲೀಸರಿಂದ ಸುಮಾರು 390 ಕೋಟಿ ರೂ.ಗಳ 192 ಕೆಜಿ ಎಂಡಿಎಂಎ ಮಾದಕ ವಸ್ತು ವಶಪಡಿಸಿಕೊಂಡಿದ್ದು, ಇದೊಂದು ಸಮಾಜವನ್ನೇ ವಿನಾಶದ ಹಾದಿಗೆ ಕರೆದೊಯ್ಯುತ್ತಿರುವ ಭೀತಿ ಉಂಟಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಮುಖ್ಯಮಂತ್ರಿಗಳ ತವರು ಜಿಲ್ಲೆಯಲ್ಲಿ ಈ ರೀತಿಯ ಘಟನೆ ನಡೆದಿದ್ದು, ಮಹಾರಾಷ್ಟ್ರದ ಪೊಲೀಸರು ಈ ಕೃತ್ಯವನ್ನು ಪತ್ತೆ ಹಚ್ಚಿ ಬಯಲು ಮಾಡಿದ್ದಾರೆ. ಆದರೆ ಸರ್ಕಾರ, ಆಡಳಿತ ವ್ಯವಸ್ಥೆಗಳು ಏನು ಕಾರ್ಯ ನಿರ್ವಹಿಸುತ್ತಿವೆ ಎಂದು ಕಿಡಿಕಾರಿದ ಅವರು, ಇಂತಹ ಪ್ರಕರಣಗಳ ವಿರುದ್ಧ ಸರ್ಕಾರ ಕಟ್ಟೆಚ್ಚರ ವಹಿಸಿ, ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕು. ಇಂತಹ ಮಾದಕ ವಸ್ತುಗಳ ಪ್ರಕರಣಗಳು ತಲೆ ಎತ್ತದಂತೆ ಕಾನೂನು ಕ್ರಮಗಳನ್ನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ದಿನೇಶ್‌ಗೌಡ, ರವಿಶಂಕರ್, ಸೋಮಣ್ಣ, ಲೋಕೇಶ್ ಉಪಸ್ಥಿತರಿದ್ದರು.

ಅತಿಥಿ ಉಪನ್ಯಾಸಕರ ನೇಮಕಾತಿ ಗೊಂದಲ ಪರಿಹರಿಸುವಂತೆ ವಿದ್ಯಾರ್ಥಿಗಳ ಪ್ರತಿಭಟನೆ

ಮೈಸೂರು, ಸೆ.4(ಎಂಕೆ)– ಪದವಿ ವಿದ್ಯಾರ್ಥಿಗಳಲ್ಲಿನ ಶೈಕ್ಷಣಿಕ ವಿಷಯಗಳಲ್ಲಿ ಹಾಗೂ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಾಗುತ್ತಿರುವ ಗೊಂದಲ ಪರಿಹರಿಸುಂತೆ ಆಗ್ರಹಿಸಿ ಮೈಸೂರಿನ ಕುವೆಂಪುನಗರದ ಸರ್ಕಾರಿ ಪದವಿ ಕಾಲೇಜಿನ ವಿದ್ಯಾರ್ಥಿಗಳು ಎಐಡಿಎಸ್‌ಓ (ಆಲ್ ಇಂಡಿಯಾ ಡೆಮಾಕ್ರೆಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್) ನೇತೃತ್ವದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

ಕಾಲೇಜು ಎದುರು ಜಮಾವಣೆಗೊಂಡ ವಿದ್ಯಾರ್ಥಿಗಳು, ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪಾಠ ಮಾಡಲು ಉಪನ್ಯಾಸಕರೇ ಇಲ್ಲದಂತಾಗಿದೆ. ಸರ್ಕಾರ ಬಡ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡುತ್ತಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.



ಅತಿಥಿ ಉಪನ್ಯಾಸಕರ ನೇಮಕಾತಿ ಗೊಂದಲ ಪರಿಹರಿಸುಂತೆ ಆಗ್ರಹಿಸಿ ಎಐಡಿಎಸ್‌ಓ ನೇತೃತ್ವದಲ್ಲಿ ಗುರುವಾರ ಪ್ರತಿಭಟನೆ ನಡೆಸಲಾಯಿತು.

ಎಐಡಿಎಸ್‌ಓ ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯೆ ಹೇಮಲತಾ ಮಾತನಾಡಿ, ರಾಜ್ಯಾದ್ಯಂತ ಪದವಿ ತರಗತಿಗಳು ಪ್ರಾರಂಭವಾಗಿ ತಿಂಗಳು ಕಳೆದರೂ ಇಲ್ಲಿವರೆಗೂ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಿಲ್ಲ. ಈಗಾಗಲೇ ಖಾಸಗಿ ಕಾಲೇಜುಗಳಲ್ಲಿ ಪಾಠ ಮುಗಿಸಿ ಆಂತರಿಕ ಪರೀಕ್ಷೆಗಳು ನಡೆಯುತ್ತಿವೆ. ಸರ್ಕಾರಿ ಪದವಿ ಕಾಲೇಜುಗಳಿಗೆ ಬಡ ರೈತ, ಕೂಲಿ ಕಾರ್ಮಿಕರ ಮಕ್ಕಳು ಶಿಕ್ಷಣವನ್ನು ಪಡೆದುಕೊಳ್ಳಲು ಬರುತ್ತಾರೆ. ಆದರೆ, ಸರ್ಕಾರ ಇಂತಹ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ಒದಗಿಸದೆ ದ್ರೋಹ ಬಗೆಯುತ್ತಿದೆ ಎಂದು ಕಿಡಿಕಾರಿದರು.

ಮುಂದಿನ ತಿಂಗಳು ಪದವಿ ವಿದ್ಯಾರ್ಥಿಗಳ ಮೊದಲ ಆಂತರಿಕ ಪರೀಕ್ಷೆಗಳು ನಡೆಯಬೇಕಿದ್ದು ಪಾಠಗಳು ಇನ್ನೂ ಆರಂಭವಾಗಿಲ್ಲ. ಇಂತಹ ಪರಿಸ್ಥಿತಿಯಲ್ಲಿ ರಾಜ್ಯ ಸರ್ಕಾರವು ಶೈಕ್ಷಣಿಕ ಚಟುವಟಿಕೆಗಳನ್ನು ಸರಾಗವಾಗಿ ನಡೆಸುವ ನಿಟ್ಟಿನಲ್ಲಿ ಸೂಕ್ತ ಕ್ರಮಗಳನ್ನು ಕೈಗೊಂಡು ಪದವಿ ವಿದ್ಯಾರ್ಥಿಗಳ ಶೈಕ್ಷಣಿಕ ಗೊಂದಲವನ್ನು ಕೂಡಲೇ ಪರಿಹರಿಸಬೇಕೆಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಎಐಡಿಎಸ್‌ಓ ಜಿಲ್ಲಾ ಕೌನ್ಸಿಲ್ ಸದಸ್ಯ ಅಭಿಷೇಕ್ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ನಾಳೆ ಮೈಸೂರಲ್ಲಿ ಕನ್ನಡ, ಹಿಂದಿ ಹಳೇ ಚಿತ್ರ ಗೀತೆಗಳ ಕರೋಕೆ ಸಂಗೀತ ಕಾರ್ಯಕ್ರಮ

ಮೈಸೂರು, ಸೆ.4(ಜಿಎ)–ವಿ.ಜಾರ್ಜ್ ಪ್ರಭಾಕರ್ ಆರ್ಕೇಸ್ಟ್ರಾ ಮತ್ತು ಗಜಲ್ ಪಾರ್ಟಿ ವಾರ್ಷಿಕೋತ್ಸವ ಸಂಭ್ರಮದ ಅಂಗವಾಗಿ ಸೆ.6 ರಂದು ಸಂಜೆ 5.30ಕ್ಕೆ ಹಳೆಯ ಕನ್ನಡ ಮತ್ತು ಹಿಂದಿ ಚಲನಚಿತ್ರಗಳ ಹಿಟ್ ಹಾಡುಗಳ ನೇರಪ್ರಸಾರ ಹಾಗೂ ಕರೋಕೆ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಸಂಸ್ಥಾಪಕ ವಿ.ಜಾರ್ಜ್ ಪ್ರಭಾಕರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಗನ್ಮೋಹನ ಅರಮನೆಯಲ್ಲಿ ಅಂದು ಸಂಗೀತ ಗೀತ ಗಾಯನ ಕಾರ್ಯಕ್ರಮ ನಡೆಯಲಿದ್ದು, ಕನ್ನಡ ಮತ್ತು ತುಳು ಚಲನಚಿತ್ರಗಳ ಹಿನ್ನೆಲೆ ಗಾಯಕ ಆಕಾಶ್ ತಲಾಪತ್ರ, ಹಿನ್ನೆಲೆ ಗಾಯಕಿ ರಶ್ಮಿ ಲಹರಿ ಹಾಗೂ ಹಿನ್ನಲೆ ಗಾಯಕಿ ಇಂದುಮತಿ ಸಂಗೀತ ಕಾರ್ಯಕ್ರಮ ನಡೆಸಿಕೊಡಲಿದ್ದು, ಅವರೊಂದಿಗೆ ಗಾಯಕರಾದ ವಿ.ಜಾರ್ಜ್ ಪ್ರಭಾಕರ್ ಆದ ನಾನು ಅವರೊಂದಿಗೆ ಹಾಡಲಿದ್ದೇನೆ ಎಂದು ತಿಳಿಸಿದರು.

ನಿರಂತರವಾಗಿ 44 ವರ್ಷಗಳಿಂದ ಗೀತ ಗಾಯನ ಕಾರ್ಯಕ್ರಮ ನಡೆಸುತ್ತಾ ಬರುತ್ತಿದ್ದು, ಐಗಿರಿ ಡೆವಲಪರ್ಸ್ ಹರೀಶ್, ಡಾ.ರಘುವೀರ್, ಡಾ.ರೇಖಾ ಅರುಣ್, ಚಿತ್ರ ನಿರ್ಮಾಪಕ ರಾಮ್‌ನಾಯಕ, ಗುರು ಹಾಗೂ ಬೆಂಗಳೂರು ಗಗನ ಸಖಿ ಅಶ್ವಿನಿ ಅವರು ಸಂಗೀತ ಕಾರ್ಯಕ್ರಮದಲ್ಲಿ ಗಾಯನ ನಡೆಸಿಕೊಡಲಿದ್ದಾರೆ. ಕಾರ್ಯ ಕ್ರಮದಲ್ಲಿ 30ಕ್ಕೂ ಹೆಚ್ಚಿನ ಕನ್ನಡ ಮತ್ತು ಹಿಂದಿ ಹಾಡುಗಳನ್ನು ಹಾಡಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಗಾಯಕ ಆಕಾಶ್ ತಲಾಪತ್ರ, ಪ್ರಭಾಕರ್, ಕುಮಾರ್, ಪ್ರಸಾದ್ ಉಪಸ್ಥಿತರಿದ್ದರು.

ತ್ರಿಮತಸ್ಥ ಬ್ರಾಹ್ಮಣ ಪುರುಷರು, ಮಹಿಳೆಯರಿಂದ ಅರ್ಜಿ ಆಹ್ವಾನ

ಮೈಸೂರು, ಸೆ. 4– ಸಂಧ್ಯಾ ಸುರಕ್ಷಾ ಟ್ರಸ್ಟ್, ಕರ್ನಾಟಕ ಬ್ರಾಹ್ಮಣ ಹಿರಿಯ ನಾಗರಿಕ ವೇದಿಕೆ, ಶಾಕಾಂಬರಿ ಧಾರ್ಮಿಕ ಶ್ರದ್ಧಾ ಕೇಂದ್ರದ ಆಶ್ರಯದಲ್ಲಿ ನಡೆಯುತ್ತಿರುವ ವೃದ್ಧಾಶ್ರಮಕ್ಕೆ ತ್ರಿಮತಸ್ಥ ಬ್ರಾಹ್ಮಣ ಪುರುಷರು ಹಾಗೂ ಮಹಿಳೆಯರಿಗೆ ಊಟ, ವಸತಿ ಸೌಕರ್ಯದೊಂದಿಗೆ ಸ್ಥಳಾವಕಾಶವಿದ್ದು, ಸೇವಾ ಕೇಂದ್ರಕ್ಕೆ ಸೇರಬಯಸುವವರು ಸಂಧ್ಯಾ ಸುರಕ್ಷಾ ಟ್ರಸ್ಟ್, ಶಾಕಾಂಬರಿ ಧಾರ್ಮಿಕ ಶ್ರದ್ಧಾ ಕೇಂದ್ರ, ದೇವಯ್ಯನಹುಂಡಿ, ಹುಣಸೇಮರ ಸ್ಟಾಪ್, ಶ್ರೀರಾಂಪುರ 2ನೇ ಹಂತ ಇಲ್ಲಿ ಸಂಪರ್ಕಿಸಲು ಕೋರಲಾಗಿದೆ. ಮಾಹಿತಿಗೆ ಮೊ. 8088799540, 8861998817ಕ್ಕೆ ಸಂಪರ್ಕಿಸಿ.

ದೇಶ - ವಿದೇಶ

ಹಾರ್ವರ್ಡ್ ವಿವಿ ಅನುದಾನ ಕಡಿತಗೊಳಿಸಿದ್ದ ಡೊನಾಲ್ಡ್ ಟ್ರಂಪ್ ಕ್ರಮಕ್ಕೆ ಕೋರ್ಟ್ ತಡೆ



ವಾಷಿಂಗ್ಟನ್: ಹಾರ್ವರ್ಡ್ ವಿವಿಗೆ ನೀಡಬೇಕಿದ್ದ 260 ಕೋಟಿ ಡಾಲರ್‌ಗಳ ಫೆಡರಲ್ ಸಂಶೋಧನಾ ಅನುದಾನಕ್ಕೆ ಕತ್ತರಿ ಹಾಕಿದ್ದ ಡೊನಾಲ್ಡ್ ಟ್ರಂಪ್ ಆಡಳಿತದ ಕ್ರಮವನ್ನು ನ್ಯಾಯಾಲಯ ಕಾನೂನುಬಾಹಿರ ಎಂದು ಘೋಷಿಸಿದೆ. ಅಮೆರಿಕದ ಜಿಲ್ಲಾ ನ್ಯಾಯಾಧೀಶೆ ಅಲಿಸನ್ ಬರೋಫ್ಸ್ ಈ ತೀರ್ಪು ನೀಡಿದ್ದು, ಇವಿ ಲೀಗ್ ಸ್ಕೂಲ್‌ನ ಆಡಳಿತ ಮತ್ತು ನೀತಿಯನ್ನು ಬದಲಾವಣೆ ಮಾಡಿಕೊಳ್ಳುವಂತೆ ಶ್ವೇತಭವನ ಮಾಡಿದ್ದ ಆಗ್ರಹವನ್ನು ತಿರಸ್ಕರಿಸಿದ್ದಕ್ಕಾಗಿ ಅನುದಾನಕ್ಕೆ ಕತ್ತರಿ ಹಾಕಿದ ಟ್ರಂಪ್ ಆಡಳಿತದ ಕ್ರಮ ಕಾನೂನುಬಾಹಿರ ಪ್ರತೀಕಾರವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಹಾರ್ವರ್ಡ್ ಜತೆಗಿನ ಸಂಘರ್ಷ ಉಲ್ಬಣಗೊಂಡ ಹಿನ್ನೆಲೆಯಲ್ಲಿ ವಿವಿಗೆ ನೀಡಬೇಕಿದ್ದ ಸರಣಿ ಅನುದಾನ ಸ್ಥಗಿತಗೊಳಿಸಿದ ಟ್ರಂಪ್ ಆಡಳಿತದ ನಿರ್ಧಾರವನ್ನು ಈ ತೀರ್ಪು ಅನೂರ್ಜಿತಗೊಳಿಸಿದೆ. ಈ ತೀರ್ಪು ಅನುಷ್ಠಾನಗೊಂಡಲ್ಲಿ ವಿವಿಯ ನೂರಾರು ಸಂಶೋಧನಾ ಯೋಜನೆಗಳಿಗೆ ಟ್ರಂಪ್ ಆಡಳಿತ ಅನುದಾನವನ್ನು ಪುನಃಸ್ಥಾಪನೆ ಮಾಡಬೇಕಾಗುತ್ತದೆ ಎಂದು ನ್ಯಾಯಾಧೀಶರು ಹೇಳಿದ್ದಾರೆ.

ಕುಡಿದು ಶಾಲೆಗೆ ತೂರಾಡುತ್ತಾ ಬಂದು ಮೇಜಿನಡಿ ಮಲಗಿದ ಶಿಕ್ಷಕ

ತೆಲಂಗಾಣ: ಶಿಕ್ಷಕರೊಬ್ಬರು ಶಾಲೆಗೆ ಕಂಠಪೂರ್ತಿ ಕುಡಿದು ತೂರಾಡುತ್ತಾ ಬಂದು, ಮೇಜಿನಡಿ ನಿದ್ರೆಗೆ ಜಾರಿರುವ ವಿಡಿಯೋ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.



ಮಕ್ಕಳಿಗೆ ಯಾವುದು ತಪ್ಪು, ಯಾವುದು ಸರಿ ಎಂದು ತಿಳಿಸಬೇಕಾದ ಶಿಕ್ಷಕರೊಬ್ಬರು ಶಾಲೆಗೆ ಮದ್ಯಪಾನ ಮಾಡಿ ತೂರಾಡುತ್ತಾ ಬಂದು, ಮೇಜಿನಡಿ ನಿದ್ರೆಗೆ ಜಾರಿದ್ದಾರೆ. ತೆಲಂಗಾಣದ ಕೊಮರಂ ಭೀಮ್ ಆಸಿಫಾಬಾದ್‌ನ ಸರ್ಕಾರಿ ಶಾಲೆಯಲ್ಲಿ ಘಟನೆ ನಡೆದಿದೆ. ಶಿಕ್ಷಕ ಜೆ. ವಿಲಾಸ್ ಮದ್ಯದ ಅಮಲಿನಲ್ಲಿ ಬಂದಿದ್ದಾರೆಂದು ವರದಿಯಾಗಿದೆ. ನಂತರ ಅವರು ತರಗತಿಯೊಳಗೆ ಮಲಗಿದ್ದಾರೆ. ಪರಿಸ್ಥಿತಿಯನ್ನು ಕಂಡ ಗ್ರಾಮಸ್ಥರಲ್ಲಿ ಆಕ್ರೋಶ ವ್ಯಕ್ತವಾಗಿದೆ. ಜಿಲ್ಲಾ ಬುಡಕಟ್ಟು ಕಲ್ಯಾಣ ಇಲಾಖೆ ಉಪನಿರ್ದೇಶಕಿ ರಮಾದೇವಿ ಅವರು ಕರ್ತವ್ಯ ನಿರ್ಲಕ್ಷ್ಯ ಮತ್ತು ಸೇವಾ ನಿಯಮಗಳ ಉಲ್ಲಂಘನೆಗಾಗಿ ವಿಲಾಸ್ ಅವರನ್ನು ಅಮಾನತುಗೊಳಿಸಲಾಗಿದೆ ಎಂದು ದೃಢಪಡಿಸಿದ್ದಾರೆ.

ಅಫ್ಘಾನಿಸ್ತಾನದಲ್ಲಿ ಭೂಕಂಪ; ಮೃತರ ಸಂಖ್ಯೆ 2,200ಕ್ಕೇರಿಕೆ

ಕಾಬೂಲ್: ವಾರಾಂತ್ಯದಲ್ಲಿ ಪೂರ್ವ ಅಫ್ಘಾನಿಸ್ತಾನಕ್ಕೆ ಅಪ್ಪಳಿಸಿದ ಪ್ರಬಲ ಭೂಕಂಪದಲ್ಲಿ 2,200 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಎಂದು ತಾಲಿಬಾನ್ ಅಧಿಕಾರಿಗಳು ತಿಳಿಸಿದ್ದಾರೆ. ಭಾನುವಾರ ಮಧ್ಯರಾತ್ರಿಯ ಮೊದಲು ಅಫ್ಘಾನಿಸ್ತಾನದಲ್ಲಿ 6.3 ತೀವ್ರತೆಯ ಭೂಕಂಪ ಸಂಭವಿಸಿದ್ದು, ಪಾಕಿಸ್ತಾನದ ಗಡಿಯಲ್ಲಿರುವ ಕುನಾರ್ ಪ್ರಾಂತ್ಯದಲ್ಲಿ ಅತ್ಯಂತ ಭೀಕರವಾದ ವಿನಾಶಕ್ಕೆ ಕಾರಣವಾಗಿದೆ. ನೂರಾರು ಜನರು ಆಸ್ಪತ್ರೆಗಳಿಗೆ ದಾಖಲಾಗಿದ್ದಾರೆ. ಭೂಕಂಪದ ಕೇಂದ್ರಬಿಂದು ಜಲಾಲಾಬಾದ್‌ನಿಂದ ಸುಮಾರು 27 ಕಿ.ಮೀ. ದೂರದಲ್ಲಿತ್ತು ಭೂಕಂಪವು ಭೂಮಿಯ ಮೇಲ್ಮೈಯಿಂದ 8 ಕಿ.ಮೀ. ಕೆಳಗೆ ಆಳದಲ್ಲಿ ಸಂಭವಿಸಿದೆ ಎಂದು ಯುಎಸ್‌ಜಿಎಸ್ ತಿಳಿಸಿದೆ.



ಪತ್ನಿ ಕೊಂದು, ದೇಹ ಕತ್ತರಿಸಿ ಬಿಸಾಡಿದ್ದ ವ್ಯಕ್ತಿ

ಮಹಾರಾಷ್ಟ್ರ: ಪತ್ನಿ ಕೊಂದು ದೇಹವನ್ನು ಕತ್ತರಿಸಿ ಬಿಸಾಡಿದ್ದ ವ್ಯಕ್ತಿ, ಈಗ ರುಂಡ ಪತ್ತೆಯಾದ ಬಳಿಕ ತಪ್ಪೊಪ್ಪಿಕೊಂಡಿದ್ದಾನೆ. ಮಹಾರಾಷ್ಟ್ರದ ಭಿವಂಡಿಯ ಈದ್ಗಾ ರಸ್ತೆ ಕೊಳೆಗೇರಿ ಮತ್ತು ಕಸಾಯಿಖಾನೆ ಪ್ರದೇಶದ ಬಳಿ ಮಹಿಳೆಯ ರುಂಡ ಪತ್ತೆಯಾಗಿತ್ತು. ಪೊಲೀಸರು ಆಕೆಯ ಪತಿಯನ್ನು ಬಂಧಿಸಿದ್ದು, ಕೊನೆಯದಾಗಿ ಆಕೆಯನ್ನು ಕೊಂದಿದ್ದು ತಾನೇ ಎಂದು ಒಪ್ಪಿಕೊಂಡಿದ್ದಾನೆ. ಮೃತರನ್ನು ಪರ್ವೀನ್ ಅಲಿಯಾಸ್ ಮುಸ್ಕಾನ್ (22) ಎಂದು ಗುರುತಿಸಲಾಗಿದೆ. ರುಂಡ ಪತ್ತೆಯಾಗಿರುವ ಸ್ಥಳದಿಂದ ಕೆಲವು ಮೀಟರ್ ದೂರದಲ್ಲಿ ತಮ್ಮ ಪತಿಯೊಂದಿಗೆ ವಾಸಿಸುತ್ತಿದ್ದರು. ಪತ್ತೆಯಾಗಿರುವ ತಲೆಯನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಕಳುಹಿಸಲಾಗಿದೆ. ಮುಸ್ಕಾನ್ ಅವರ ತಾಯಿ ಅವಶೇಷಗಳನ್ನು ಗುರುತಿಸಿದ್ದಾರೆ. ಆರಂಭಿಕ ತನಿಖೆ ನಂತರ, ಮುಸ್ಕಾನ್ ಅವರ ಪತಿಯನ್ನು ಅನುಮಾನದ ಮೇಲೆ ಬಂಧಿಸಲಾಯಿತು. ನಂತರ ಅವರು ಆಕೆ ಗಂಟಲು ಸೀಳಿ, ದೇಹವನ್ನು ತುಂಡುಗಳಾಗಿ ಕತ್ತರಿಸಿ ಕೊಲ್ಲಿಯಲ್ಲಿ ಎಸೆದು ಕೊಲೆ ಮಾಡಿದ್ದಾಗಿ ಒಪ್ಪಿಕೊಂಡಿದ್ದಾನೆ. ಮುಸ್ಕಾನ್ 2 ವರ್ಷಗಳ ಹಿಂದೆ ಮೊಹಮ್ಮದ್ ಅನ್ಸಾರಿ ಅಲಿಯಾಸ್ ಸೋನುವನ್ನು ವಿವಾಹವಾಗಿದ್ದಳು.





ಪಾಟ್ನಾದಲ್ಲಿ ಭೀಕರ ರಸ್ತೆ ಅಪಘಾತ : ಐವರು ಸಾವು

ಪಾಟ್ನಾ: ಇಲ್ಲಿನ ಪರ್ಸಾ ಬಜಾರ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ತಡರಾತ್ರಿ ಸಂಭವಿಸಿದ ಭೀಕರ ರಸ್ತೆ ಅಪಘಾತಕ್ಕೆ ಐವರು ಉದ್ಯಮಿಗಳು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಡೆದಿದೆ. ಪಾಟ್ನಾ–ಗಯಾ–ದೋಭಿ ಚತುಷ್ಪಥ ರಸ್ತೆಯಲ್ಲಿ ಘಟನೆ ನಡೆದಿದೆ. ಮೃತ ಉದ್ಯಮಿಗಳನ್ನು ರಾಜೇಶ್‌ಕುಮಾರ್ (50), ಸಂಜಯ್ ಸಿಂಗ್ (55), ಕಮಲ್ ಕಿಶೋರ್ (38), ಪ್ರಕಾಶ್ ಚೌರಾಸಿಯಾ (35) ಮತ್ತು ಸುನಿಲ್ ಕುಮಾರ್ (38) ಎಂದು ಗುರುತಿಸಲಾಗಿದೆ. ಮೃತರೆಲ್ಲರೂ ಪಾಟ್ನಾದ ಪ್ರತಿಷ್ಠಿತ ಉದ್ಯಮಿಗಳಾಗಿದ್ದು, ಫತುಹಾದಿಂದ ತಡರಾತ್ರಿ ಕೆಲವು ಕೆಲಸ ಮುಗಿಸಿ ಪಾಟ್ನಾಕ್ಕೆ ಹಿಂತಿರುಗುತ್ತಿದ್ದರು ಎಂದು ತಿಳಿದುಬಂದಿದೆ. ಫತುಹಾದಿಂದ ಪಾಟ್ನಾಗೆ ಹಿಂತಿರುಗುತ್ತಿದ್ದ ವೇಳೆ ಕಾರು ರಸ್ತೆಯಲ್ಲಿ ನಿಂತಿದ್ದ ಟ್ರಕ್‌ಗೆ ಹಿಂದಿನಿಂದ ಡಿಕ್ಕಿ ಹೊಡೆದ ಪರಿಣಾಮ ದುರಂತ ಸಂಭವಿಸಿದೆ.



ಡಿಕ್ಕಿ ಹೊಡೆದ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿತ್ತು. ಅರ್ಧ ಕಾರು ಟ್ರಕ್ ಕೆಳಗೆ ನುಗ್ಗಿದೆ. ಇದರಿಂದಾಗಿ ಕಾರಿನಲ್ಲಿದ್ದ ಐವರೂ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಮಡಿಕೇರಿಯಲ್ಲಿ ಪತ್ರಿಕಾ ವಿತರಕರ ದಿನಾಚರಣೆ

ಪತ್ರಿಕೆ–ಓದುಗರ ಸಂಪರ್ಕ ಕಲ್ಪಿಸುವ ಪತ್ರಿಕಾ ವಿತರಕರ ಸೇವೆ ಶ್ಲಾಘನೀಯ

ಕೊಡಗು ಪತ್ರಿಕಾ ಭವನ ಟ್ರಸ್ಟ್‌ನ ಮ್ಯಾನೇಜಿಂಗ್ ಟ್ರಸ್ಟಿ ಕೇಶವ ಕಾಮತ್ ಮೆಚ್ಚುಗೆ

ಮಡಿಕೇರಿ,ಸೆ4– ಪ್ರಾಕೃತಿಕ ಏರು ಪೇರುಗಳ ನಡುವೆಯೂ ಪತ್ರಿಕೆ ಮತ್ತು ಓದುಗರ ಸಂಪರ್ಕ ಸೇತುವಾಗಿ ಕಾರ್ಯ ನಿರ್ವಹಿಸುವ ವಿತರಕರನ್ನು ಗುರುತಿಸಿ ಅವರ ಕಾರ್ಯವನ್ನು ಶ್ಲಾಘಿಸುವುದು ಅವಶ್ಯಕ. ಮಾಡುವ ಕಾರ್ಯವನ್ನು ನಿಷ್ಠೆ ಮತ್ತು ಪ್ರೀತಿಯಿಂದ ಮಾಡಿದಲ್ಲಿ ಯಶಸ್ಸು ದೊರಕುತ್ತದೆ ಎಂದು ಕೊಡಗು ಪತ್ರಿಕಾ ಭವನ ಟ್ರಸ್ಟ್‌ನ ಮ್ಯಾನೇಜಿಂಗ್ ಟ್ರಸ್ಟಿ ಎಂ.ಪಿ.ಕೇಶವ ಕಾಮತ್ ಅಭಿಪ್ರಾಯ ವ್ಯಕ್ತಪಡಿಸಿದರು.

ಕೊಡಗು ಪತ್ರಕರ್ತರ ಸಂಘ ಮತ್ತು ಅಖಿಲ ಕರ್ನಾಟಕ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಕೊಡಗು ಘಟಕದ ಸಂಯುಕ್ತಾಶ್ರಯದಲ್ಲಿ ನಗರದ ಪತ್ರಿಕಾ ಭವನದ ಸಭಾಂಗಣದಲ್ಲಿ ಆಯೋಜಿತ ಪತ್ರಿಕಾ ವಿತರಕರ ದಿನಾಚರಣೆಯನ್ನು ಜ್ಯೋತಿ ಬೆಳಗಿ ಉದ್ಘಾಟಿಸಿ ಮಾತನಾಡಿ, ಮಹಾನ್ ವ್ಯಕ್ತಿಗಳಾಗಿ ಸಮಾಜದಲ್ಲಿ ಗುರುತಿಸಿಕೊಂಡ ಹಲವರು ತಮ್ಮ ಬದುಕಿನ ಆರಂಭಿಕ ಕಾಲ ಘಟ್ಟದಲ್ಲಿ ಪತ್ರಿಕಾ ವಿತರಣೆ ಮಾಡುತ್ತಿದ್ದುದನ್ನು ಸ್ಮರಿಸಿದರು. ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿಗಾಗಿ ನಿಧಿಯನ್ನು ಸ್ಥಾಪಿಸಿದಲ್ಲಿ ಅಗತ್ಯ ನೆರವನ್ನು ನೀಡುವುದಾಗಿ ಘೋಷಿಸಿದರು.

ಶಕ್ತಿ ಪತ್ರಿಕೆ ಸಂಪಾದಕ ಜಿ.ಚಿದ್ವಿಲಾಸ್ ಮಾತನಾಡಿ, ಕೆಲ ದಶಕಗಳ ಹಿಂದೆ ಮನೆ ಮನೆಗೆ ನಡೆದುಕೊಂಡು ಹೋಗಿ ಪತ್ರಿಕಾ ವಿತರಕರು ಪತ್ರಿಕಾ ವಿತರಣೆ ಮಾಡುತ್ತಿದ್ದರು. ಇಂದು ದ್ವಿಚಕ್ರ ವಾಹನಗಳು ವಿತರಕರ ನೆರವಿಗೆ ಬಂದಿದೆ ಎನ್ನುವುದನ್ನು ಬಿಟ್ಟರೆ ಉಳಿದೆಲ್ಲ ಕೆಲಸ ಕಾರ್ಯಗಳು ಹಿಂದಿನಂತೆಯೇ ನಡೆದುಕೊಂಡು ಬರುತ್ತಿದೆ. ಯಾವುದೇ ಸಂಕಷ್ಟದ ಅವಧಿಯಲ್ಲಿ ಜಿಲ್ಲೆಯ ಪತ್ರಿಕಾ ವಿತರಕರು ತಮ್ಮ ಕಾರ್ಯವನ್ನು ಅತ್ಯಂತ ವ್ಯವಸ್ಥಿತವಾಗಿ ನಡೆಸಿದ್ದಾರೆ. ಪತ್ರಿಕಾ ವಿತರಣೆ ಎನ್ನುವುದನ್ನು ಕೇವಲ ಆರ್ಥಿಕ ದೃಷ್ಟಿಯಿಂದ ನೋಡುವುದರ ಬದಲಾಗಿ ಪತ್ರಿಕೆಯ ಮೇಲಿನ ಪ್ರೀತಿಯಿಂದ ಮಾಡುತ್ತಿರುವುದರಿಂದ ಇದು ಸಾಧ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಪತ್ರಿಕಾ ವಿತರಕರ ದಿನಾಚರಣೆಯನ್ನು ಜ್ಯೋತಿ ಬೆಳಗಿಸಿ ಎಂ.ಪಿ.ಕೇಶವ ಕಾಮತ್ ಉದ್ಘಾಟಿಸಿದರು.

ಮುದ್ರಾ ಮಾಧ್ಯಮ ಗಟ್ಟಿ ಮುಟ್ಟಾಗಿದೆ: ದೃಶ್ಯ ಮಾಧ್ಯಮಗಳ ಭರಾಟೆಯ ನಡುವೆ ಮುದ್ರಣ ಮಾಧ್ಯಮ ಮರೆಯಾಗುವ ಆತಂಕ ಸೃಷ್ಟಿಯಾಗಿತ್ತು. ಆದರೆ ಪತ್ರಿಕಾ ಮಾಧ್ಯಮ ಗಟ್ಟಿಯಾಗಿಯೇ ಮುಂದುವರೆದಿದೆ. ಇಂದಿನ ಸಾಮಾಜಿಕ ಜಾಲ ತಾಣಗಳಲ್ಲಿನ ವಿಚಾರಗಳು ಕೇವಲ ತಾತ್ಕಾಲಿಕ ನೋಡಿ ಮರೆತು ಹೋಗುವಂತದ್ದಾಗಿದೆ. ಆದರೆ ಪತ್ರಿಕೆಗಳಲ್ಲಿನ ವಿಚಾರಗಳು ಶಾಶ್ವತ ಮತ್ತು ಸಮಾಜದ ಪರಿಣಾಮಗಳನ್ನು ಬೀರುತ್ತವೆ ಎನ್ನುವುದನ್ನು ಜನ ಅರ್ಥೈಸಿಕೊಂಡಿದ್ದಾರೆ ಎಂದು ಹೇಳಿದರು. ಒಂದು ಪತ್ರಿಕೆಗೆ ಓದುಗರು, ಏಜೆಂಟರು, ವಿತರಕರು, ಜಾಹೀರಾತುದಾರರು ಮತ್ತು ಸಿಬ್ಬಂದಿವರ್ಗ ಆಧಾರ ಸ್ತಂಭವಾಗಿರುವುದಾಗಿ ಅವರು ತಿಳಿಸಿದರು.

ಸಮಾಜದ ಮೇಲೆ ದುಷ್ಪರಿಣಾಮ: ಯಾವುದೇ ಪತ್ರಿಕೆಯ ಓದುಗ ತನ್ನ ಓದನ್ನು ನಿಲ್ಲಿಸಿದ ಎಂದಲ್ಲಿ, ಅದು ಯಾವುದೋ ಒಂದು ವಿಧದಲ್ಲಿ ಸಮಾಜದ ಮೇಲೆ ಕೆಟ್ಟ ಪರಿಣಾಮವನ್ನು ಬೀರುತ್ತದೆ. ಇಂದಿನ ಯುವ ಸಮೂಹಕ್ಕೆ ಓದಿನ ಬಗ್ಗೆ ತಾಳ್ಮೆ ಇಲ್ಲವೆಂದು ಅಭಿಪ್ರಾಯಿಸಿದ ಚಿದ್ವಿಲಾಸ್ ಜನರಲ್ಲಿ ಓದಿನ ಬಗ್ಗೆ ಪ್ರೇರಣೆಯನ್ನು ನೀಡುವ, ಮನವೊಲಿಸುವ ಕಾರ್ಯ ನಮ್ಮೆಲ್ಲರಿಂದ ನಡೆಯಬೇಕಾಗಿದೆ ಎಂದು ತಿಳಿಸಿದರು.

ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ನಿಧಿಯನ್ನು ಸ್ಥಾಪಿಸಿದಲ್ಲಿ ಅದಕ್ಕೆ ಮೂಲ ಧನವಾಗಿ 1 ಲಕ್ಷ ರೂ.ಗಳನ್ನು ನೀಡುವುದಾಗಿ ಘೋಷಿಸಿದರಲ್ಲದೇ ನಿಧಿಯ ಸ್ಥಾಪನೆಗೆ ಅಗತ್ಯ ರೂಪುರೇಷೆಗಳನ್ನು ಮಾಡುವಂತೆ ಸೂಚಿಸಿದರು.

ಕೊಡಗು ಪತ್ರಿಕಾ ಭವನದ ಸ್ಥಾಪಕ ಮ್ಯಾನೇಜಿಂಗ್ ಟ್ರಸ್ಟಿಗಳಾದ ಟಿ.ಪಿ.ರಮೇಶ್ ಮಾತನಾಡಿ, ಹತ್ತು ಹಲವು ಸಂಕಷ್ಟಗಳ ನಡುವೆಯೂ ವಿತರಕರು ಪತ್ರಿಕೆಯನ್ನು ಮನೆ ಬಾಗಿಲಿಗೆ ವಿತರಿಸುವ ಕೆಲಸವನ್ನು ನಿರಂತರವಾಗಿ ಮಾಡುತ್ತಾ ಬಂದಿರುವುದು ಶ್ಲಾಘನೀಯ. ಪತ್ರಿಕೆ ಮತ್ತು ಓದುಗರ ನಡುವಿನ ಸಂಪರ್ಕ ಸೇತುವೆಯೆ ವಿತರಕರಾಗಿದ್ದಾರೆ ಎಂದು ಬಣ್ಣಿಸಿದರು. ಇಂದು ಯಾವುದೇ ಪತ್ರಿಕೆ ಜಿಲ್ಲೆಯ ಮೂಲೆ ಮೂಲೆಗಳಲ್ಲಿ ತಲುಪುತ್ತಿದೆ ಎಂದರೆ ಅದರ ಹಿಂದೆ ವಿತರಕರ ಅಪಾರ ಪರಿಶ್ರಮ ಅಡಗಿದೆ ಎಂದು ತಿಳಿಸಿದರು. ಪತ್ರಿಕೆಯ ಜೀವನಾಡಿ ವಿತರಕರಾಗಿದ್ದಾರೆ. ಪತ್ರಿಕೆಯ ಎಲ್ಲಾ ವಿಭಾಗಗಳಲ್ಲೂ ಕೆಲಸವಾಗಿ ಅಂತಿಮ ಹಂತದಲ್ಲಿ ಪತ್ರಿಕೆ ಓದುಗನಿಗೆ ತಲುಪಿಲ್ಲ ಎಂದಾದರೆ ಪತ್ರಿಕೆಗೆ ಕುಂದು ಉಂಟಾಗುತ್ತದೆ. ಇಂತಹ ಕ್ಲಿಷ್ಟಕರವಾದ ಪತ್ರಿಕಾ ವಿತರಣೆಯಲ್ಲಿ ನಿರತರಾಗಿರುವ ವಿತರಕರ ಕ್ಷೇಮವನ್ನು ನೋಡಿಕೊಳ್ಳುವ ನಿಟ್ಟಿನಲ್ಲಿ ಸಂಘ ಯಾವತ್ತೂ ಕಾರ್ಯನಿರ್ವಹಿಸಬೇಕೆಂದು ಸಲಹೆ ನೀಡಿದರು. ಮಳೆ ಗಾಳಿ ಎನ್ನದೆ ಪತ್ರಿಕಾ ವಿತರಣೆಯಲ್ಲಿ ತೊಡಗಿಸಿಕೊಂಡಿರುವ ವಿತರಕರ ಅನುಕೂಲಕ್ಕಾಗಿ ನಗರದಲ್ಲಿ 'ಪತ್ರಿಕಾ ವಿತರಕರ ಭವನ' ನಿರ್ಮಾಣ ಅವಶ್ಯವಾಗಿದೆ. ಇಂತಹ ಭವನ ಇದ್ದಲ್ಲಿ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಕೆಲಸ ಕಾರ್ಯಗಳನ್ನು, ವಿತರಕರ ಪತ್ರಿಕೆಯ ಕೆಲಸ ಕಾರ್ಯಗಳನ್ನು ಅಲ್ಲಿ ನಡೆಸಲು ಅನುಕೂಲವಾಗುತ್ತದೆ ಎಂದು ಅನಿಸಿಕೆ ವ್ಯಕ್ತಪಡಿಸಿದರು.

ಕೊಡಗು ಪತ್ರಕರ್ತರ ಸಂಘದ ಸ್ಥಾಪಕಾಧ್ಯಕ್ಷ ಎಸ್.ಎ. ಮುರಳೀಧರ್ ಮಾತನಾಡಿ, ಕೊಡಗು ಪತ್ರಕರ್ತರ ಸಂಘದಿಂದ 2022ರಿಂದ ಪತ್ರಿಕಾ ವಿತರಕರ ದಿನಾಚರಣೆಯನ್ನು ನಡೆಸಿಕೊಂಡು ಬರಲಾಗುತ್ತಿದೆ. ಪತ್ರಿಕಾ ವಿತರಕರ ಕ್ಷೇಮಕ್ಕಾಗಿ ಕ್ಷೇಮಾಭಿವೃದ್ಧಿ ನಿಧಿಗೆ ಆದಷ್ಟು ಶೀಘ್ರ ಚಾಲನೆ ನೀಡಬೇಕೆಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಶಿಕ್ಷಣ ಇಲಾಖೆಯ ನಿವೃತ್ತ ನೌಕರರು ಹಾಗೂ ಪತ್ರಿಕಾ ಓದುಗ ಪಿ.ಎ.ನಾಣಯ್ಯ, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ಟಿ.ಜಿ. ಸತೀಶ್ ಉಪಸ್ಥಿತರಿದ್ದರು. ಪತ್ರಿಕಾ ವಿತರಕರಾದ ಸುಂಟಿಕೊಪ್ಪದ ವಸಂತ ಮಾತನಾಡಿದರು. ಇದೇ ಸಂದರ್ಭ ಪತ್ರಿಕಾ ವಿತರಕರಿಗೆ ಕಿರು ಕಾಣಿಕೆ ನೀಡಿ ಗೌರವಿಸಲಾಯಿತು.

ಹಿಂದೂಗಳ ಮತಾಂತರ ಆರೋಪ

ವಿಹೆಚ್‌ಪಿ ಪ್ರತಿಭಟನಾ ಮೆರವಣಿಗೆ


ವಿಶ್ವ ಹಿಂದೂ ಪರಿಷತ್ ಕಾರ್ಯಕರ್ತರು ಪ್ರತಿಭಟನಾ ಮೆರವಣಿಗೆ ನಡೆಸಿದರು.

ಮಡಿಕೇರಿ,ಸೆ4– ಹಿಂದೂಗಳನ್ನು ಮತಾಂತರ ಮಾಡಲಾಗುತ್ತಿದೆ ಎಂದು ಆರೋಪಿಸಿ ವಿಶ್ವ ಹಿಂದೂ ಪರಿಷತ್ ವತಿಯಿಂದ ಮತಾಂತರದ ವಿರುದ್ಧ ಗೋಣಿಕೊಪ್ಪಲಿನಲ್ಲಿ ಪ್ರತಿಭಟನಾ ಮೆರವಣಿಗೆ ನಡೆಯಿತು. ವಿವಿಧ ಹಿಂದೂ ಪರ ಸಂಘಟನೆಗಳ ಪ್ರಮುಖರು ಮತ್ತು ಪದಾಧಿಕಾರಿಗಳು ಗೋಣಿಕೊಪ್ಪಲುವಿನ ಶ್ರೀ ಮಹಾಲಕ್ಷ್ಮಿ ದೇವಸ್ಥಾನದ ಆವರಣದಿಂದ ಖಾಸಗಿ ಶಾಲೆಯ ಆವರಣದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಈ ಸಂದರ್ಭ ಮಾತನಾಡಿದ ಹಿಂದೂ ಜಾಗರಣ ವೇದಿಕೆ ಪ್ರಾಂತ್ಯ ಸಂಯೋಜಕ ಕುಕ್ಕೇರ ಅಜಿತ್, ಕೊಡಗು ಜಿಲ್ಲೆಯಲ್ಲಿ ಮತಾಂತರ ಎನ್ನುವುದು ಕ್ಯಾನ್ಸರ್ ರೋಗದಂತೆ ಹರಡಿಕೊಂಡಿದ್ದು, ಹಿಂದೂಗಳನ್ನು ಮತಾಂತರ ಮಾಡುವ ಷಡ್ಯಂತ್ರ ನಡೆಯುತ್ತಿದೆ. ನಮ್ಮ ದೇಶದ ಈಶಾನ್ಯ ಪ್ರಾಂತ್ಯಗಳಾದ ಸಿಕ್ಕಿಂ, ಮಿಜೋರಂ, ನಾಗಾಲ್ಯಾಂಡ್, ಮಣಿಪುರ ಈ ಭಾಗದ ಸಮಾಜದ ಹಿಂದೂಗಳನ್ನು ಷಡ್ಯಂತ್ರದಿಂದ ಮತಾಂತರ ಮಾಡಿ ಸಾಮಾನ್ಯ ಹಿಂದೂ ಆ ನೆಲದಲ್ಲಿ ಓಡಾಡಲು ಕಷ್ಟ ಎನಿಸುತ್ತಿದೆ. ಬ್ರಿಟಿಷರು ಸೇರಿದಂತೆ ಹಲವರು ಭಾರತದಲ್ಲಿ ಆಡಳಿತ ನಡೆಸಿದರೂ ಭಾರತೀಯರು ಮತಾಂತರಕ್ಕೆ ಒಳಗಾಗಿರಲಿಲ್ಲ. ಗೋಣಿಕೊಪ್ಪಲಿನ ಭಾಗದಲ್ಲಿ ಬೇರೆಯವರಿಗೆ ಸಂಬಂಧಿಸಿದ ಆಸ್ತಿಯಲ್ಲಿ ಅಕ್ರಮ ಪ್ರವೇಶ ಮಾಡಿ ಚರ್ಚಾ ಸ್ಪರ್ಧೆ ನಡೆಸುವ ಹೆಸರಿನಲ್ಲಿ ಧರ್ಮ ಬೋಧನೆಯನ್ನು ಮಾಡಿ ಮತಾಂತರಕ್ಕೆ ಪ್ರೇರೇಪಿಸಲಾಗುತ್ತಿದೆ ಎಂದು ಆರೋಪಿಸಿದರು. ಈ ಬಗ್ಗೆ ಪೊಲೀಸ್ ಇಲಾಖೆ ಸೂಕ್ತ ತನಿಖೆ ನಡೆಸಬೇಕೆಂದು ಒತ್ತಾಯಿಸಿದರು. ಬಳಿಕ ಮತಾಂತರ ಎಸಗುತ್ತಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಗೋಣಿಕೊಪ್ಪ ಠಾಣಾಧಿಕಾರಿ ಪ್ರದೀಪ್ ಕುಮಾರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭ ವಿಧಾನಪರಿಷತ್ ಸದಸ್ಯ ಸುಜಾ ಕುಶಾಲಪ್ಪ, ವಿಶ್ವ ಹಿಂದೂ ಪರಿಷತ್ ಜಿಲ್ಲಾಧ್ಯಕ್ಷ ಸಿ.ಕೆ.ಬೋಪಣ್ಣ, ನಗರ ಅಧ್ಯಕ್ಷ ಎನ್.ಆರ್.ಅಮೃತ್ ರಾಜ್, ಕಾರ್ಯದರ್ಶಿ ಕೆ.ವಿ.ಸುರೇಶ್ ರೈ, ಪೊನ್ನಂಪೇಟೆ ತಾಲೂಕು ಉಪಾಧ್ಯಕ್ಷ ಎಂ.ಎಸ್.ಸುಬ್ರಮಣಿ, ಮಾಚಿಮಾಡ ಸುವಿನ್ ಗಣಪತಿ, ಚೆಪ್ಪುಡಿರ ರಾಕೇಶ್ ದೇವಯ್ಯ, ಗುಮ್ಮಟ್ಟಿರ ಕಿಲನ್ ಗಣಪತಿ, ನೆಲ್ಲಿರ ಚಲನ್, ಪಂದ್ಯಂಡ ಹರೀಶ್, ಪುದಿಯೊಕ್ಕಡ ರಮೇಶ್ ಸೇರಿದಂತೆ ಮತ್ತಿತರರು ಹಾಜರಿದ್ದರು.

ವೈದ್ಯಕೀಯ ನೀಟ್ ಪರೀಕ್ಷೆಯಲ್ಲಿ ಡಾ.ಅಮೂಲ್ಯಗೆ 4419ನೇ ರ್‍ಯಾಂಕ್



ಮಡಿಕೇರಿ,ಸೆ.4– ವೈದ್ಯಕೀಯ ಸ್ನಾತಕೋತ್ತರ ನೀಟ್ ಪರೀಕ್ಷೆಯಲ್ಲಿ ಐಗೂರು ಗ್ರಾಮದ ಡಾ. ಅಮೂಲ್ಯ ಪೆಮ್ಮಯ್ಯ ಅಖಿಲ ಭಾರತ ಮಟ್ಟದಲ್ಲಿ 4419ನೇ ರ್‍ಯಾಂಕ್ ಪಡೆದುಕೊಂಡಿದ್ದಾರೆ. ಡಾ. ಅಮೂಲ್ಯ ಸೋಮವಾರಪೇಟೆ ತಾಲೂಕಿನ ಐಗೂರು ಗ್ರಾಮದ ದೊಡ್ಡೆಗೌಡನ ಮನೆ ಕೆ.ವಿ.ಗೀತಾ ಹಾಗೂ ಡಿ.ಡಿ.ಪೆಮ್ಮಯ್ಯ ಅವರ ಪುತ್ರಿಯಾಗಿದ್ದಾರೆ.

ಮದೆ ಸಹಕಾರ ಬ್ಯಾಂಕಿಗೆ ಅಪೆಕ್ಸ್ ಬ್ಯಾಂಕಿನಿಂದ ಪ್ರಶಸ್ತಿ

ಮಡಿಕೇರಿ,ಸೆ.4– ಮದೆ ಸಹಕಾರ ಬ್ಯಾಂಕಿಗೆ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿನಿಂದ ಪ್ರಶಸ್ತಿ ಲಭಿಸಿದೆ. ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ವತಿಯಿಂದ 2023–24ನೇ ಸಾಲಿನಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದಕ್ಕಾಗಿ ಮದೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಬ್ಯಾಂಕಿನ ಬಹುಮಾನ ಯೋಜನೆ ಅಡಿಯಲ್ಲಿ 10 ಸಾವಿರ ನಗದು ಮತ್ತು ಪ್ರಶಸ್ತಿ ಪತ್ರವನ್ನು ನೀಡಲಾಗಿದೆ.



ಈ ಬಹುಮಾನವನ್ನು ಕೊಡಗು ಜಿಲ್ಲಾ ಸಹಕಾರ ಬ್ಯಾಂಕಿನ ಮಹಾಸಭೆಯಲ್ಲಿ ಪ್ರದಾನ ಮಾಡಲಾಯಿತು.

ಇಂದು ಶಿಕ್ಷಕರ ದಿನಾಚರಣೆ

ಮಡಿಕೇರಿ, ಸೆ.4– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಸಂಯುಕ್ತಾಶ್ರಯದಲ್ಲಿ ಸೆ.5 ರಂದು ಬೆಳಗ್ಗೆ 10 ಗಂಟೆಗೆ ನಗರದ ಸಂತ ಜೋಸೆಫರ ಪ್ರೌಢಶಾಲೆಯಲ್ಲಿ ಶಿಕ್ಷಕರ ದಿನಾಚರಣೆ ಮತ್ತು ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು, ಶಾಸಕರಾದ ಡಾ. ಮಂತರ್ ಗೌಡ, ಎ.ಎಸ್.ಪೊನ್ನಣ್ಣ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಇತರರು ಪಾಲ್ಗೊಳ್ಳಲಿದ್ದಾರೆ.

ಜಿಲ್ಲಾಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರಕಟ

ಮಡಿಕೇರಿ, ಸೆ.4– ಪ್ರಸಕ್ತ (2025–26) ಸಾಲಿಗೆ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರಕಟಿಸಲಾಗಿದೆ.

ಮಡಿಕೇರಿ ತಾಲೂಕಿನ ಮೊಣಕಾಲ್ಮುರಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರಾದ ಕೆ.ಆರ್.ಶಾಲಿನಿ, ಅರೆಕಾಡು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರಾದ ಎ.ಡಿ.ಮೀನಾಕ್ಷಿ, ಹಾಕತ್ತೂರು ಸರ್ಕಾರಿ ಪ್ರೌಢಶಾಲೆಯ ಶಿಕ್ಷಕರಾದ ಎಂ.ವನಜ, ಸೋಮವಾರಪೇಟೆ ತಾಲೂಕಿನ ಬಡುಬನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರಾದ ಕೆ.ವಿ.ಜಾನ್ಸಿ, ಕೂಡಿಗೆ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ಎಸ್.ಎ.ಯೋಗೇಶ್, ಕೊಡ್ಲಿಪೇಟೆ ಪದವಿ ಪೂರ್ವ ಕಾಲೇಜು(ಪ್ರೌಢ ಶಾಲಾ ವಿಭಾಗ) ಮುಖ್ಯ ಶಿಕ್ಷಕರಾದ ಅಬ್ದುಲ್ ರಬ್ ಎಂ.ಎಸ್., ವಿರಾಜಪೇಟೆ ತಾಲ್ಲೂಕಿನ ಎಮ್ಮೆಗುಂಡಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರಾದ ಎ.ಕೆ.ಮಾಚಮ್ಮ, ಚೆನ್ನಂಗಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರಾದ ಸುಷಾ ಕೆ.ಕೆ., ದೇವಣಗೇರಿ ಬಿ.ಸಿ.ಪ್ರೌಢ ಶಾಲೆಯ ಮುಖ್ಯ ಶಿಕ್ಷಕ ಎಚ್.ಡಿ. ಲೋಕೇಶ್, ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.



ಕೊಂಡೀರ ಪೂವಪ್ಪ ನಿಧನ

ನಾಪೋಕ್ಲು: ಸಮೀಪದ ಬೇತು ಗ್ರಾಮದ ನಿವಾಸಿ ಕೊಂಡೀರ ಪೂವಪ್ಪ (ತಮ್ಮಣಿ) ಬುಧವಾರ ನಿಧನರಾದರು. ಅವರಿಗೆ 73 ವರ್ಷ ವಯಸ್ಸಾಗಿತ್ತು. ಮೃತರ ಅಂತ್ಯಕ್ರಿಯೆಯು ಗುರುವಾರ ಬೇತು ಗ್ರಾಮದ ಕೊಂಡೀರ ಕುಟುಂಬದ ರುದ್ರ ಭೂಮಿಯಲ್ಲಿ ನಡೆಯಿತು. ಮೃತರು ಪತ್ನಿ, ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂದು ಬಾಂಧವರನ್ನು ಅಗಲಿದ್ದಾರೆ.

ಚಾ.ನಗರದಲ್ಲಿ ಕೇಕ್ ಕತ್ತರಿಸುವ ಮೂಲಕ ವಿಶ್ವ ಪತ್ರಿಕಾ ವಿತರಕರ ದಿನ ಆಚರಣೆ

ಪತ್ರಿಕಾ ವಿತರಕರ ದಿನಾಚರಣೆಯಂದು ವಿವಿಧ ಹಕ್ಕೊತ್ತಾಯಗಳ ಈಡೇರಿಕೆಗೆ ಆಗ್ರಹ


ಚಾಮರಾಜನಗರ ಜಿಲ್ಲಾ ಪತ್ರಿಕಾ ವಿತರಕರ ಒಕ್ಕೂಟದ ವತಿಯಿಂದ ಚಾಮರಾಜನಗರದ ಭುವನೇಶ್ವರಿ ವೃತ್ತದಲ್ಲಿ ವಿಶ್ವ ಪತ್ರಿಕಾ ವಿತರಕರ ದಿನಾಚರಣೆ ಕಾರ್ಯಕ್ರಮವನ್ನು ಎಲ್ಲ ಪತ್ರಿಕಾ ವಿತರಕರ ಸಮ್ಮುಖದಲ್ಲಿ ಆಚರಿಸಲಾಯಿತು.

ಚಾಮರಾಜನಗರ. ಸೆ.4– ಚಾಮರಾಜನಗರ ಜಿಲ್ಲಾ ಪತ್ರಿಕಾ ವಿತರಕರ ಒಕ್ಕೂಟದ ವತಿಯಿಂದ ಕೇಕ್ ಕತ್ತರಿಸುವ ಮೂಲಕ ನಗರದ ಭುವನೇಶ್ವರಿ ವೃತ್ತದಲ್ಲಿ ವಿಶ್ವಪತ್ರಿಕಾ ವಿತರಕರ ದಿನಾಚರಣೆ ಕಾರ್ಯಕ್ರಮವನ್ನು ಎಲ್ಲ ಪತ್ರಿಕಾ ವಿತರಕರ ಸಮ್ಮುಖದಲ್ಲಿ ಗುರುವಾರ ಮುಂಜಾನೆ ಆಚರಿಸಲಾಯಿತು.

ಇದೇ ವೇಳೆ ಪತ್ರಿಕಾ ವಿತರಕ ದಿನಾಚರಣೆಯನ್ನು ಮುಂದಿನ ದಿನಗಳಲ್ಲಿ ಜಿಲ್ಲಾಡಳಿತದಿಂದ ಆಚರಿಸಬೇಕು, ಜಿಲ್ಲೆಯ ಪತ್ರಿಕಾ ವಿತರಕರಿಗೆ ರಾಜ್ಯೋತ್ಸವ ಪ್ರಶಸ್ತಿ ಕೊಡಿಸಲು ಜಿಲ್ಲಾಡಳಿತ ಸರ್ಕಾರದ ಗಮನಸೆಳೆಯಬೇಕು, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸ್ಥಾಪಿಸಿ ಸರ್ಕಾರ 5 ಕೋಟಿ ರೂ., ಮೀಸಲಿಡಬೇಕು, ಸ್ಥಗಿತಗೊಂಡಿರುವ ಪಿಎಂಸ್ವನಿಧಿ ಆರಂಭಿಸಬೇಕು ಎಂದು ಆಗ್ರಹಿಸಲಾಯಿತು.

ಜಿಲ್ಲಾಧ್ಯಕ್ಷ ಸಿ.ಪುರುಷೋತ್ತಮ, ಪ್ರಧಾನ ಕಾರ್ಯದರ್ಶಿ ಎನ್.ಅಕ್ಷಯ್, ಗೌರವಾಧ್ಯಕ್ಷ ಎಚ್.ಎಸ್.ಚಂದ್ರಶೇಖರ್, ಸಹ ಕಾರ್ಯದರ್ಶಿ ಎಲ್.ಶಿವಲಿಂಗಮೂರ್ತಿ, ಖಜಾಂಚಿ ಪ್ರತಾಪ್, ನಿರ್ದೇಶಕರಾದ ಎಂ. ಲಿಂಗಪ್ಪ, ಆರ್.ಎನ್.ಸಿದ್ದಲಿಂಗಸ್ವಾಮಿ, ಸಾಗರ್, ಮಂಜುನಾಥ ಆರಾಧ್ಯ, ವಿಕ ಪ್ರಸರಣವಿಭಾಗದ ವ್ಯವಸ್ಥಾಪಕ ದಿನೇಶ್, ರೇಣುಕೇಶ್, ಸದಸ್ಯರಾದ ಗಿರೀಶ್, ಶಿವು, ಶರೀಫ್ ಇತರರು ಭಾಗವಹಿಸಿದ್ದರು.

ಸಿದ್ಧ ಉಡುಪು ತಯಾರಿಕಾ ಘಟಕ ಉದ್ಘಾಟನೆ

ಚಾಮರಾಜನಗರ, ಸೆ.4– ಚಾಮರಾಜನಗರ ಜಿಲ್ಲೆಯು ಹಿಂದುಳಿದ ಜಿಲ್ಲೆಯಲ್ಲ. ಅಭಿವೃದ್ಧಿ ಹೊಂದಿದ ಜಿಲ್ಲೆಯಾಗಿದೆ ಎಂದು ಜಿಪಂ ಮುಖ್ಯಕಾರ್ಯನಿರ್ವಾಹಣಾಧಿಕಾರಿ ಮೋನಾರೋತ್ ಹೇಳಿದರು.

ತಾಲೂಕಿನ ಬದನಗುಪ್ಪೆ–ಕೆಲ್ಲಂಬಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ 2023–24ನೇ ಸಾಲಿನ ನೇಕಾರರ ಪ್ಯಾಕೇಜ್ ಯೋಜನೆಯ ಎಸ್ಸಿಎಸ್ಟಿ ಎಸ್‌ಎಂಇ ಯೋಜನೆಯಡಿ ಸ್ಥಾಪಿಸಲಾಗಿರುವ ಘಟಕ ಶ್ರೀರಂಗನಾಥ ಟ್ರೇಡರ್ಸ್ ಸಿದ್ದ ಉಡುಪು ತಯಾರಿಕಾ ಘಟಕವನ್ನು ಉದ್ಘಾಟಿಸಿ ಮಾತನಾಡಿದರು.


ಶ್ರೀರಂಗನಾಥ ಟ್ರೇಡರ್ಸ್ ಸಿದ್ದ ಉಡುಪು ತಯಾರಿಕಾ ಘಟಕವನ್ನು ಜಿಪಂ ಸಿಇಓ ಮೋನಾರೋತ್ ಉದ್ಘಾಟಿಸಿದರು

ತಾಲೂಕಿನ ಬದನಗುಪ್ಪೆ–ಕೆಲ್ಲಂಬಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆ ಯೋಜನೆಯಡಿಯಲ್ಲಿ ಸಿದ್ದ ಉಡುಪು ತಯಾರಿಕಾ ಘಟಕ ಉದ್ಘಾಟನೆಯಾಗಿದ್ದು, ಸ್ಥಳೀಯವಾಗಿ 120 ಮಂದಿಗೆ ಉದ್ಯೋಗಾವಕಾಶ ದೊರೆಯುತ್ತದೆ. ಎಲ್ಲರೂ ಸ್ಟಿಚ್ಚಿಂಗ್ ಮಾಡುತ್ತಾರೆ. ಬೇರೆಬೇರೆ ಕಂಪನಿಗಳೊಂದಿಗೆ ಹೆಚ್ಚು ಹೆಚ್ಚು ಹೊಂದಾಣಿಕೆ ಮಾಡಿಕೊಳ್ಳಬೇಕು. ಉತ್ಪನ್ನಗಳಿಗೆ ಹೆಚ್ಚು ಹೆಚ್ಚು ಅವಕಾಶ ಬಂದರೆ ಅನುಕೂಲವಾಗುತ್ತದೆ ಎಂದರು. ಜಿಲ್ಲೆಯಲ್ಲಿ ಉದ್ಯೋಗಾವಕಾಶಗಳ ಕೊರತೆ ಇದೆ. ಯಾರಾದರು ಬಂದು ಕೇಳುತ್ತಾರೆ ಒಂದು ಕೆಲಸಕೊಡಿ ಎಂದು. ಆಗ ಈ ಕೈಗಾರಿಕಾ ಪ್ರದೇಶದಲ್ಲಿ ನಗರದವರಿಗೆ ಅವಕಾಶ ಕೊಟ್ಟರೆ ಜಿಲ್ಲೆಯು ಅಭಿವೃದ್ಧಿ ಆಗುತ್ತದೆ ಜಿಲ್ಲೆಯು ಹಿಂದುಳಿದ ಜಿಲ್ಲೆಯಲ್ಲ. ಅಭಿವೃದ್ಧಿ ಹೊಂದಿದ ಜಿಲ್ಲೆಯಾಗಿದೆ ಎಂದರು.

ಕರ್ನಾಟಕ ದಲಿತ ಎಂಟರ್ಪ್ರೈಸಸ್ ಕಾರ್ಯಾಧ್ಯಕ್ಷ ಸಿ.ಜಿ.ಶ್ರೀನಿವಾಸನ್ ಮಾತನಾಡಿ, 2009ರಲ್ಲಿ ಕೆಐಎಡಿಬಿಯಲ್ಲಿ ನಿವೇಶನ, ಮಳಿಗೆ ಹಂಚಿಕೆಯಲ್ಲಿ ಮೀಸಲಾತಿ ಇರಲಿಲ್ಲ. ಕೆಐಎಡಿಬಿಯಲ್ಲಿ ನಿವೇಶನ, ಮಳಿಗೆ ಹಂಚಿಕೆಯಲ್ಲಿ ಮೀಸಲಾತಿ ಕೊಡಬೇಕು ಎಂದು ರಾಜ್ಯದಲ್ಲಿ ಧ್ವನಿ ಎತ್ತಿದ್ದು, ಕರ್ನಾಟಕ ದಲಿತ ಉದ್ಯಮಿದಾರ ಸಂಘ. 2009ರಲ್ಲಿ ದಲಿತರಿಗೆ ನಿವೇಶನ, ಮಳಿಗೆಯಲ್ಲಿ ಮೀಸಲಾತಿ ಜಾರಿಗೆ ಬಂದ ಮೇಲೆ ಶೇ.1ರಷ್ಟು ಇದ್ದದ್ದು, ಈಗ ಶೇ.17 ರಷ್ಟು ಉದ್ಯಮಿದಾರರಾಗಿದ್ದಾರೆ ಇದು ನಮ್ಮ ಸಂಘದ ಕೊಡುಗೆಯಾಗಿದೆ ಎಂದರು.

ರಾಜ್ಯದಲ್ಲಿ ಭೂಮಿ, ಶೆಡ್ ತೆಗೆದುಕೊಂಡರೆ ಶೇ.85ರಷ್ಟು ಸಬ್ಸಿಡಿ ಕೊಡುತ್ತಾರೆ. ಮಾರ್ಜಿನ್ ಮನಿ ಹೊಂದಿಸಲಾಗದವರಿಗೆ 75 ಲಕ್ಷದವರೆಗೂ ಶೂನ್ಯ ಬಡ್ಡಿದರದಲ್ಲಿ ಸಾಲಸೌಲಭ್ಯ ಸಿಗುತ್ತದೆ. ಕರ್ನಾಟಕ ರಾಜ್ಯ ಹಣಕಾಸು ನಿಗಮದಿಂದ 10 ಕೋಟಿ ರೂ. ತನಕ ಶೇ.4ರಷ್ಟು ಬಡ್ಡಿ ದರದಲ್ಲಿ ಸಾಲಸೌಲಭ್ಯ ಪಡೆಯಬಹುದಾಗಿದೆ ಎಂದರು.

ರಾಜ್ಯದಲ್ಲಿ ಶೇ.1ರಷ್ಟು ಇದ್ದ ಎಸ್ಸಿಎಸ್ಟಿ ಉದ್ಯಮಿಗಳು ಇಂದು ಎಲ್ಲ ಯೋಜನೆಗಳನ್ನು ಉಪಯೋಗ ಮಾಡಿಕೊಂಡು ರಾಜ್ಯದಲ್ಲಿ 6933 ಮಂದಿ ಕೋಟ್ಯಾಧಿಪತಿಗಳಾಗಿದ್ದಾರೆ. ಇಡೀ ರಾಷ್ಟ್ರದಲ್ಲಿ ಯಾವ ರಾಜ್ಯದಲ್ಲೂ ಕರ್ನಾಟಕದಲ್ಲಿರುವ ಯೋಜನೆಗಳು ಎಲ್ಲಿಯೂ ಇಲ್ಲ. ಆಗಾಗಿ ದಲಿತರು ಉದ್ಯಮಿದಾರರಾಗಿ ಆರ್ಥಿಕವಾಗಿ ಸಬಲರಾಗಬೇಕು. ಎಲ್ಲರಂತೆ ನಾವು. ಬೆಳೆಯುತ್ತೇವೆ. ಶ್ರೀರಂಗನಾಥ ಟ್ರೇಡರ್ಸ್ ಸಿದ್ಧ ಉಡುಪು ತಯಾರಿಕಾ ಘಟಕ ಯಶಸ್ವಿಯಾಗಲಿ ಎಂದು ಆಶಿಸಿದರು.

ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕ ಹೆಚ್. ಶಿವಶಂಕರ್, ಕೈಮಗ್ಗ ಮತ್ತು ಜವಳಿ ಇಲಾಖೆ ಜವಳಿ ಪ್ರವರ್ಧನಾಧಿಕಾರಿ ಕೆ.ಸಿ.ಲಕ್ಷ್ಮೀಪತಿ, ಮೈಸೂರು ಎಸ್‌ಸಿ, ಎಸ್ಟಿ ಕೈಗಾರಿಕಾ ಸಂಘದ ಅಧ್ಯಕ್ಷ ಮಂಜುನಾಥ್, ಉಪಾಧ್ಯಕ್ಷ ವಿಜಯಶಂಕರ್, ಜಿಲ್ಲಾ ಎಸ್‌ಸಿಎಸ್‌ಟಿ ಕೈಗಾರಿಕಾ ಸಂಘದ ಜಿಲ್ಲಾ ಸಂಯೋಜಕ ಎನ್.ಎನ್. ನಾಗಯ್ಯ ಹಾಜರಿದ್ದರು.

ವಿಮೆ ಹಣ ವಿತರಣೆ



ಆಲೂರು: ಚಾಮರಾಜನಗರ ತಾಲೂಕಿನ ಕುದೇರು ಗ್ರಾಮದ ಭಾರತೀಯ ಸ್ಟೇಟ್ ಬ್ಯಾಂಕಿನಲ್ಲಿ (ಎಸ್‌ಬಿಐ) ವಿಮೆ ಮಾಡಿಸಿದ ಕಮರವಾಡಿ ಗ್ರಾಮದ ಗುರುಸ್ವಾಮಿ ಆಕಾಲಿಕ ಮರಣಹೊಂದಿದ್ದು ಅವರ ಮಗ ಅರುಣ್ ಕುಮಾರ್‌ರವರಿಗೆ 2ಲಕ್ಷ ರೂ. ವಿಮೆಯ ಹಣವನ್ನು ಬ್ಯಾಂಕಿನ ವ್ಯವಸ್ಥಾಪಕ ಲೋಕೇಶ್ ಮೂರ್ತಿ ವಿತರಿಸಿದರು

ನಂತರ ಮಾತನಾಡಿದ ಅವರು, ಕೇಂದ್ರ ಸರ್ಕಾರ ಪ್ರಧಾನ ಮಂತ್ರಿ ಸುರಕ್ಷಾ ಹಾಗೂ ಪ್ರಧಾನಮಂತ್ರಿ ಜೀವನ ಜ್ಯೋತಿ ಎಂಬ ಎರಡು ವಾರ್ಷಿಕ ವಿಮಾ ಯೋಜನೆ ಜಾರಿಗೆ ತಂದಿದ್ದು ಇದು ಅತಿ ಕಡಿಮೆ ಹಣದಲ್ಲಿ ವಾರ್ಷಿಕವಾಗಿ 20ರೂ ಹಾಗೂ 436ರೂ. ಗಳ ವಿಮೆಯ ಕಂತಿನ ಹಣವನ್ನು ಪಾವತಿಸಿದರೆ 2 ಲಕ್ಷ ರೂ. ಪರಿಹಾರ ಪಡೆಯಬಹುದಾಗಿದೆಎಂದು ತಿಳಿಸಿ ಮಾಹಿತಿಯನ್ನು ಗ್ರಾಹಕರು ಬ್ಯಾಂಕಿನಲ್ಲಿ ಪಡೆಯಬಹುದು ಎಂದರು.

ಈ ಸಂದರ್ಭದಲ್ಲಿ ಬ್ಯಾಂಕಿನ ಹಣಕಾಸು ವಿಭಾಗದ ಸಂತೋಸ್ ಕುಮಾರ್, ಕ್ಷೇತ್ರ ಅಧಿಕಾರಿ ಉಮಾಗ್ ಸಿಬ್ಬಂದಿ ಸಿದ್ದೇಶ್ ಇಂಟಿಗ್ರಾ ಕಂಪನಿಯ ಬ್ಯಾಂಕಿನ ವ್ಯವಹಾರ ಪ್ರತಿನಿಧಿಗಳಾದ ಕೆ.ಪಿ.ಪ್ರಕಾಶ್, ಮಹದೇವ ಮೂರ್ತಿ, ಅಟೆಂಡರ್ ಪ್ರಸಾದ್ ಹಾಜರಿದ್ದರು.

ಹೆಚ್‌ಐವಿ ಜಾಗೃತಿ ಬಗ್ಗೆ ಮ್ಯಾರಥಾನ್

ಚಾಮರಾಜನಗರ: ಯುವಜನೋತ್ಸವ–2025ರ ಅಂಗವಾಗಿ ಎಚ್.ಐ.ವಿ. ಬಗ್ಗೆ ಜನಜಾಗೃತಿಗಾಗಿ ನಗರದಲ್ಲಿ ಏರ್ಪಡಿಸಲಾಗಿದ್ದ ಮ್ಯಾರಥಾನ್, ರೆಡ್ ರಿಬ್ಬನ್ ಓಟ ಸ್ಪರ್ಧೆಗೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ನಗರದಲ್ಲಿಂದು ಚಾಲನೆ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿಂದು ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಸ್ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಚಾಮರಾಜನಗರ ವಿಶ್ವವಿದ್ಯಾಲಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ರೋಟರಿ ಸಿಲ್ಕ್ ಸಿಟಿ ಸಹಯೋಗದಲ್ಲಿ ಹೆಚ್‌ಐವಿ, ಏಡ್ಸ್ ತಡೆಗಟ್ಟಲು ತೀವ್ರಗೊಳಿಸಿದ ಐ.ಇ.ಸಿ. ಪ್ರಚಾರಾಂದೋಲನ 2025ರ ಕಾರ್ಯಕ್ರಮದಡಿ ಆಯೋಜಿಸಿದ್ದ ಮ್ಯಾರಥಾನ್‌ಗೆ ಜಿಲ್ಲಾಧಿಕಾರಿಯವರು ಹಸಿರು ನಿಶಾನೆ ತೋರಿದರು.


ಎಚ್‌ಐವಿ ಬಗ್ಗೆ ಜಾಗೃತಿ ಮ್ಯಾರಥಾನ್‌ಗೆ ಡಿಸಿ ಶಿಲ್ಪಾ ನಾಗ್ ಚಾಲನೆ ನೀಡಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಹೆಚ್‌ಐವಿ ಬಗ್ಗೆ ಜಾಗರೂಕರಾಗುವ ಅವಶ್ಯವಿದೆ. ಎಲ್ಲರೂ ಮನುಷ್ಯರೇ ಆಗಿರುವುದರಿಂದ ಸಮಾಜದಲ್ಲಿ ಏಡ್ಸ್ ಸೋಂಕಿತರನ್ನು ಕೀಳಾಗಿ ನೋಡಿ ಕಡೆಗಣಿಸಬಾರದು. ಅವರಿಗೆ ಆತ್ಮಸ್ಥೈರ್ಯ ತುಂಬಿ ಇತರರಂತೆ ಬದುಕುವ ಅವಕಾಶ ಮಾಡಿಕೊಡಬೇಕು. ಅವರೊಂದಿಗೆ ಮಾತನಾಡುವುದರಿಂದ, ಕೈ ಕುಲುಕುವುದರಿಂದ ಹೆಚ್‌ಐವಿ ಏಡ್ಸ್ ಹರಡುವುದಿಲ್ಲ. ಪ್ರಜ್ಞಾವಂತ ನಾಗರಿಕರಾದ ನಾವೆಲ್ಲರೂ ಅವರ ಜೊತೆ ಉತ್ತಮ ರೀತಿಯಲ್ಲಿ ನಡೆದುಕೊಳ್ಳಬೇಕು ಎಂದರು. ಏಡ್ಸ್ ಕಾಯಿಲೆಗೆ ಚಿಕಿತ್ಸೆ ಇದೆ. ಮುಖ್ಯವಾಗಿ ಯುವಕರು ಇತರರಿಗೂ ಅರಿವು ಮೂಡಿಸಬೇಕು. ಸಾಮುದಾಯಿಕ ಪ್ರಜ್ಞೆ ಜಾಗೃತವಾಗಬೇಕು. ಎಚ್.ಐ.ವಿ ಏಡ್ಸ್ ನಿಯಂತ್ರಣ, ಜಾಗೃತಿ ಸರ್ಕಾರದ ಇಲಾಖೆಗಳ ಕೆಲಸ ಮಾತ್ರವಲ್ಲ. ನಗರದ ರೋಟರಿ ಸಂಸ್ಥೆ, ಸ್ನೇಹಜ್ಯೋತಿ ನೆಟ್‌ವರ್ಕ್, ಸಮತಾ ಸೊಸೈಟಿ ಸೇರಿದಂತೆ ನಗರದ ಹಲವು ಸಂಘ ಸಂಸ್ಥೆಗಳು ಏಡ್ಸ್ ಕುರಿತು ತಳಮಟ್ಟದಿಂದ ಕೆಲಸ ಮಾಡುತ್ತಿವೆ. ಜಾಗೃತಿ ನಿರಂತರವಾಗಿರಬೇಕು ಮುಂದಿನ ದಿನಗಳಲ್ಲಿ ಆರೋಗ್ಯಪೂರ್ಣ ಚಾಮರಾಜನಗರಕ್ಕಾಗಿ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಡಿಸಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಪಂ ಸಿಇಓ ಮೋನಾ ರೋತ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಎಸ್. ಶಶಿಧರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ ಅಧಿಕಾರಿ ಡಾ. ರವಿಕುಮಾರ್, ಸಿಮ್ಸ್‌ನ ನಿವಾಸಿ ವೈದ್ಯಾಧಿಕಾರಿ ಡಾ. ಮಹೇಶ್, ಆರೋಗ್ಯ ಶಿಕ್ಷಣ ಅಧಿಕಾರಿ ದೊರೆಸ್ವಾಮಿ ನಾಯಕ್, ರಕ್ತನಿಧಿ ಕೇಂದ್ರದ ಮಹದೇವ ಪ್ರಸಾದ್, ರೋಟರಿ ಸಿಲ್ಕ್ ಸಿಟಿ ಶಮೀತ್, ನಾಗಕೈವಲ್ಯ ಎಂಟರ್ ಪ್ರೈಸಸ್, ಮಹೀಂದ್ರ ಹಾಗೂ ಈಶ್ವರಿ ಟ್ರಾಕ್ಟರ್ಸ್ ಕಂಪನಿ ಪ್ರತಿನಿಧಿಗಳು ಈ ಸಂದರ್ಭದಲ್ಲಿ ಇದ್ದರು.

ಆರಂಭದಲ್ಲಿ ಯಳಂದೂರಿನ ರಂಗದೇಗುಲ ಕಲಾವೇದಿಕೆಯ ಶಾಂತರಾಜು ಮತ್ತು ತಂಡದವರು ಎಚ್.ಐ.ವಿ. ಬಗ್ಗೆ ಜನಜಾಗೃತಿ ಗೀತೆಗಳನ್ನು ಪ್ರಸ್ತುತ ಪಡಿಸಿ ಎಲ್ಲರ ಗಮನ ಸೆಳೆದರು.

'ಕನ್ನಡಿ' ಕೃತಿ ಜನಜೀವನಕ್ಕೆ ದಾರಿ ತೋರಿಸುವ ಮಾರ್ಗದರ್ಶಕ ಕಾವ್ಯ

ಚಾಮರಾಜನಗರ, ಸೆ.4– ಕನ್ನಡಿ ಕವನ ಸಂಕಲನವು ಜನಜೀವನಕ್ಕೆ ದಾರಿ ತೋರಿಸುವ ಒಂದು ಮಾರ್ಗದರ್ಶಕ ಕಾವ್ಯವಾಗಿದ್ದು, ಸಾಹಿತ್ಯ ಒಂದು ಪ್ರತಿಬಿಂಬ. ಜನಜೀವನದ ಪ್ರತಿಬಿಂಬವೇ ಒಂದು ಸಾಹಿತ್ಯ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಜವರೇಗೌಡ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕನ್ನಡ ವಿಭಾಗ ಹಾಗೂ ಹಿರಿಯ ವಿದ್ಯಾರ್ಥಿಗಳ ಸಂಘ, ಒಲುಮೆಯ ಗೂಡು, ಚಾಮರಾಜನಗರ, ವೆಂಕಟಯ್ಯಛತ್ರ ಸರ್ಕಾರಿ ಪದವಿ ಪೂರ್ವ ಕಾಲೇಜಿನ 1996ನೇ ಸಾಲಿನ ಎಸ್ ಎಸ್‌ಎಲ್‌ಸಿಯ ಹಿರಿಯ ವಿದ್ಯಾರ್ಥಿಗಳ ವೃಂದ ಇವರ ಸಂಯುಕ್ತಾಶ್ರಯದಲ್ಲಿ ಕವಿ ಸಿ.ಶಂಕರ ಅಂಕನಶೆಟ್ಟಿಪುರ ಅವರ 7ನೇ ಕೃತಿ ಕನ್ನಡಿ ಕವನ ಸಂಕಲನವು ಸಾರ್ವಜನಿಕ ಗ್ರಂಥಾಲಯದ ಪುಸ್ತಕ ಖರೀದಿ ಆಯ್ಕೆ ಸಮಿತಿಯಲ್ಲಿ ಆಯ್ಕೆಯಾಗಿರುವುದರಿಂದ ಕನ್ನಡಿ ಕೃತಿಯ ಸಂವಾದ, ಕನ್ನಡಿಯೊಳಗಿನ ಕವಿತೆಗಳ ದರ್ಶನ ಹಾಗೂ ಅಭಿನಂದನಾ ಸಮಾರಂಭವನ್ನು ನಗಾರಿ ಬಾರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಜನಜೀವನ ಹೇಗಿದೆ, ನಮ್ಮ ಬದುಕು ಹೇಗಿದೆ? ಅನ್ನುವುದು ಪ್ರತಿಬಿಂಬಿಸುವುದೇ ಕನ್ನಡಿ ಕೃತಿ. ಜಿಲ್ಲೆಯ ದಲಿತ ಸಮುದಾಯದ ಜನಜೀವನ, ಆಚಾರ–ವಿಚಾರ, ನೋವು, ಸಂಕಷ್ಟ ಏನಿದೆ ಅನ್ನುವುದನ್ನು ಕನ್ನಡಿ ರೂಪದಲ್ಲಿ ಪ್ರತಿಬಿಂಬಿಸುತ್ತದೆ. ಸಾಹಿತ್ಯ ಬರೀ ಪ್ರತಿಬಿಂಬವಾದರೆ ಸಾಲದು. ಸಾಹಿತ್ಯ ಗತಿಬಿಂಬವೂ ಹೌದು, ಎಲ್ಲ ಸಮಸ್ಯೆಗಳನ್ನಿಟ್ಟುಕೊಂಡು ನಾವು ಯಾವ ದಾರಿಯಲ್ಲಿ ಹೋಗಬೇಕು ಅನ್ನುವುದನ್ನು ಒಂದು ದಾರಿಯನ್ನು ತೋರಿಸುವುದು ಒಂದು ಸಾಹಿತ್ಯವಾಗಿದೆ ಜನಜೀವನಕ್ಕೆ ದಾರಿ ತೋರಿಸುವ ಒಂದು ಮಾರ್ಗದರ್ಶಕ ಕಾವ್ಯವಾಗಿ ಈ ಕನ್ನಡಿ ಕೃತಿ ಇದೆ. ಕವನ ಸಂಕಲನವು ಸಾರ್ವಜನಿಕ ಗ್ರಂಥಾಲಯದ ಪುಸ್ತಕ ಖರೀದಿ ಆಯ್ಕೆ ಸಮಿತಿಯಲ್ಲಿ ಆಯ್ಕೆಯಾಗಿರುವುದು ಬಹಳ ಸಂತೋಷಕರವಾಗಿದೆ' ಎಂದರು. ಸಾಹಿತಿ ಹರದನಹಳ್ಳಿ ನಂಜುಂಡಸ್ವಾಮಿ ಕೃತಿ ಕುರಿತು ಮಾತನಾಡಿದರು. ಕಾಲೇಜು ಪ್ರಾಂಶುಪಾಲೆ ಡಾ.ಆರ್.ಎಸ್.ಅಶ್ವಿನಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.


ನಗಾರಿ ಬಾರಿಸುವ ಮೂಲಕ ಅಪರ ಜಿಲ್ಲಾಧಿಕಾರಿ ಜವರೇಗೌಡ ಉದ್ಘಾಟಿಸಿದರು.

ಕವಿ ಸಿ.ಶಂಕರ ಅಂಕನಶೆಟ್ಟಿಪುರ ಪ್ರಾಸ್ತಾವಿಕ ಭಾಷಣ ಮಾಡಿದರು. ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕನ್ನಡ ವಿಭಾಗದ ಮುಖ್ಯಸ್ಥ ಎ.ಎಂ.ಶಿವಸ್ವಾಮಿ, ಉದ್ಯಮಿ ಹೆಚ್.ಡಿ.ಪ್ರತಾಪ್, ಹೋರಾಟಗಾರ ಪಿ.ಸಂಘಸೇನಾ ಸಾಹಿತಿ ಬಸವಣ್ಣ, ಜಿ.ಕೆ.ದೀಪಿತ, ಸಾವಯವ ಕೃಷಿಕ ವಿ.ನಟರಾಜು, ಯುವಸೇನೆ ಕರ್ನಾಟಕ ಸೇವಾ ಸಂಘ ನಮ್ಮನೆ ಪ್ರಶಾಂತ್, ಶಿವಶಂಕರ್ ಚಟ್ಟು, ಡಿ.ಎನ್.ಉಷಾ, ಪದ್ಮಾಕ್ಷಿ, ಕೋಮಲ, ರೇಷ್ಮಾ, ರಮೇಶ್, ಮಲ್ಲು, ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಕಲಿಯುಗ ಕೃಷ್ಣನ

ಮಿಡಲ್‌ಕ್ಲಾಸ್ ರಾಮಾಯಣ

ಈ ಹಿಂದೆ ರೆಬಲ್‌ಹುಡುಗರು ಎಂಬ ಚಿತ್ರ ನಿರ್ದೇಶಿಸಿದ್ದ ಧನುಶ್‌ಗೌಡ ಇದೀಗ ಮಿಡಲ್‌ಕ್ಲಾಸ್ ರಾಮಾಯಣ ಎಂಬ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ, ವಿನುಗೌಡ ಹಾಗೂ ಮೋಕ್ಷಿತಾ ಪೈ ಪ್ರಮುಖ ಪಾತ್ರಗಳಲ್ಲಿ ನಟಿಸಿರುವ ಈ ಚಿತ್ರ ಸೆ.12ಕ್ಕೆ ರಾಜ್ಯಾದ್ಯಂತ ರಿಲೀಸಾಗುತ್ತಿದ್ದು, ಇತ್ತೀಚೆಗಷ್ಟೇ ಚಿತ್ರದ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ನಡೆಯಿತು.

ಮಿಡಲ್‌ಕ್ಲಾಸ್ ಫ್ಯಾಮಿಲಿಯ ಯುವಕನೊಬ್ಬ ತನ್ನ ಮದುವೆ ಸಮಯದಲ್ಲಿ ಎದುರಿಸೋ ಸಂಕಷ್ಟಗಳನ್ನು ಚಿತ್ರದಲ್ಲಿ ಹೇಳಲಾಗಿದೆ, ಇಡೀ ಚಿತ್ರ ಹಾಸ್ಯಮಯವಾಗಿದೆ. ನಾಯಕಿ ಮೋಕ್ಷಿತಾ ಪೈ ತಮ್ಮ ರಿಯಲ್ ಕಲರ್ ಬಿಟ್ಟು, ಸೌಂದರ್ಯ ಹೆಸರಿಗೆ ತದ್ವಿರುದ್ಧವಾದ ಪಾತ್ರ ನಿರ್ವಹಿಸಿದ್ದಾರೆ.

ನಿರ್ದೇಶಕ ಧನುಷ್‌ಗೌಡ ಮಾತನಾಡುತ್ತಾ, ಎಲ್ಲರ ಜೀವನದಲ್ಲೂ ಒಂದೊಂದು ಕಥೆ ಇರುತ್ತೆ. ಅದನ್ನೇ ಚಿತ್ರದ ಮೂಲಕ ತೋರಿಸಿದ್ದೇವೆ, ಚಿತ್ರದಲ್ಲಿ ಸಾಕಷ್ಟು ಹಿರಿಯ ಕಲಾವಿದರು ನಟಿಸಿದ್ದಾರೆ. ಆದರೆ ನಮ್ಮದು ದೊಡ್ಡ ಬ್ಯಾನರ್ ಅಲ್ಲ ಎಂಬ ಕಾರಣಕ್ಕೋ ಏನೋ ಅವರ್‍ಯಾರೂ ಇಲ್ಲಿ ಬಂದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಕೃಷಿ ಬಗ್ಗೆ ಸಾಕಷ್ಟು ಆಸಕ್ತಿ ಹೊಂದಿರುವ ನಿರ್ಮಾಪಕ ಜಯರಾಮ್ ಗಂಗಪ್ಪನಹಳ್ಳಿ ಅವರು ಟ್ರಾವೆಲ್ ಬ್ಯುಸಿನೆಸ್ ಇಟ್ಟುಕೊಂಡಿದ್ದಾರೆ. ಈ ವೇಳೆ ಮಾತನಾಡುತ್ತಾ, ಈ ಕಥೆ ನನಗೆ ತುಂಬಾ ಇಷ್ಟ ಆಯ್ತು, ಹಾಗಾಗಿ ನಿರ್ಮಾಣಕ್ಕೆ ಮುಂದಾದೆ. ನಮಗೆ ಸಿನಿಮಾ ಇಷ್ಟ ಆಗೋದು ಮುಖ್ಯ ಅಲ್ಲ. ಜನ ಇಷ್ಟ ಪಡುವುದು ಮುಖ್ಯ ಎಂದಿದ್ದಾರೆ.

ನಾಯಕಿ ಮೋಕ್ಷಿತಾ ಪೈ ಮಾತನಾಡುತ್ತಾ, ಚಿತ್ರವೀಗ ರಿಲೀಸ್ ಹಂತಕ್ಕೆ ಬಂದಿದ್ದು, ಹೊಟ್ಟೆಯಲ್ಲಿ ಚಿಟ್ಟೆ ಬಿಟ್ಟ ಫೀಲ್ ಆಗ್ತಾ ಇದೆ. ನಾವೆಲ್ಲರೂ ಜನರ ಅಭಿಪ್ರಾಯಕ್ಕೆ ಕಾಯ್ತಿದ್ದೀವಿ. ಈ ಚಿತ್ರದಲ್ಲಿ ಸೌಂದರ್ಯ ಎಂಬ ಪಾತ್ರ ಮಾಡಿದ್ದೇನೆ, ಆದ್ರೆ ಸಿನಿಮಾದಲ್ಲಿ ನಾನೇನು ಸಖತ್ತಾಗಿ ಕಾಣಿಸ್ತಿಲ್ಲ. ನಿರ್ದೇಶಕರು ಚಿತ್ರದಲ್ಲಿ ನೀನು ಎಣ್ಣೆಗೆಂಪು ಬಣ್ಣದ ಹುಡುಗಿಯಾಗಿರಬೇಕು ಅಂದಿದ್ರು. ಲುಕ್ ಟೆಸ್ಟ್ ಕೊಟ್ಟಾಗ ನಾನೇ ಶಾಕ್ ಆಗಿದ್ದೆ. ಆದ್ರೆ ಹೊಸ ಪ್ರಯತ್ನ ಅಂತ ಒಪ್ಪಿಕೊಂಡೆ ಎಂದಿದ್ದಾರೆ. ನಾಯಕ ನಟ ವಿನುಗೌಡ ತನ್ನ ಕ್ಯಾರೆಕ್ಟರ್ ಗೆಟಪ್‌ನಲ್ಲೇ ವೇದಿಕೆಗೆ ಬಂದಿದ್ದರು. ಈ ವೇಳೆ ಮಾತನಾಡುತ್ತಾ, ಈ ಸಿನಿಮಾ ಖಂಡಿತ ಎಲ್ಲರಿಗೂ ಇಷ್ಟವಾಗುತ್ತೆ. ಹೊಸ ಪ್ರತಿಭೆಗಳನ್ನು ಬೆಳೆಸಿ ಎಂದರು. ಮತ್ತೊಬ್ಬ ನಟಿ ಯುಕ್ತ ಮಾತನಾಡುತ್ತಾ, ಈ ಚಿತ್ರದಲ್ಲಿ ನಾನು ಕೀರ್ತಿ ಎಂಬ ಪಾತ್ರ ಮಾಡಿದ್ದೇನೆ ಎಂದರು.

ಅ.24ಕ್ಕೆ ತೆರೆಮೇಲೆ ತೊನ್ನುರೋಗಿಯ ಕಥೆ

ಬಿಳಿಚುಕ್ಕಿ ಹಳ್ಳಿಹಕ್ಕಿ



ಈ ಹಿಂದೆ ಮಹಿರಾ ಎಂಬ ಸಸ್ಪೆನ್ಸ್, ಥ್ರಿಲ್ಲರ್ ಚಿತ್ರ ನಿರ್ದೇಶಿಸಿದ್ದ ಮಹೇಶ್‌ಗೌಡ ಅವರೀಗ 'ಬಿಳಿಚುಕ್ಕಿ ಹಳ್ಳಿಹಕ್ಕಿ' ಎಂಬ ಚಿತ್ರಕ್ಕೆ ಆಕ್ಷನ್‌ಕಟ್ ಹೇಳಿದ್ದಾರೆ. ದೇಶದಲ್ಲೇ ಮೊದಲ ಬಾರಿಗೆ ವಿಟಿಲಿಗೋ(ತೊನ್ನುರೋಗ) ವ್ಯಾಧಿಯ ಹಿನ್ನೆಲೆಯಲ್ಲಿ ತಯಾರಾದ ಚಿತ್ರ ಎಂಬ ಹೆಗ್ಗಳಿಕೆ 'ಬಿಳಿಚುಕ್ಕಿ ಹಳ್ಳಿಹಕ್ಕಿ' ಚಿತ್ರಕ್ಕಿದೆ. ಸಾಮಾನ್ಯವಾಗಿ ಇಂಥಾ ಸಿನಿಮಾದಲ್ಲಿ ಪಾತ್ರಧಾರಿಗಳು ಮೇಕಪ್ ಮೂಲಕ ತಮ್ಮ ಪಾತ್ರಕ್ಕೆ ಜೀವ ತುಂಬುತ್ತಾರೆ. ಆದರೆ, ಈ ಚಿತ್ರದಲ್ಲಿ ಸ್ವತಃ ವಿಟಿಲಿಗೋಗೆ ತುತ್ತಾಗಿರುವ ನಿರ್ದೇಶಕ ಮಹೇಶ್‌ಗೌಡ ಅವರೇ ಚಿತ್ರದ ನಾಯಕನ ಪಾತ್ರಕ್ಕೆ ಜೀವ ತುಂಬಿದ್ದಾರೆ. ತೊನ್ನುರೋಗ ಅಪರಿಚಿತ ಅಥವಾ ಕಾಡುವಂಥ ಖಾಯಿಲೆಯೇನಲ್ಲ. ಆದರೆ ಅದು ನೀಡುವ ಮನೋದೈಹಿಕ ಯಾತನೆಗಳು ಬೇರೆಯವರ ನಿಲುಕಿಗೆ ಸಲೀಸಾಗಿ ದಕ್ಕುವಂಥಾದ್ದಲ್ಲ. ತನಗಾದಂಥ ಕಹಿ ಅನುಭವಗಳನ್ನೇ ಈ ಚಿತ್ರದ ಮೂಲಕ ನಿರ್ದೇಶಕ ಮಹೇಶ್‌ಗೌಡ ಅವರು ಹೇಳಿದ್ದಾರೆ. ಈಗಾಗಲೇ ತನ್ನೆಲ್ಲ ಕೆಲಸ ಮುಗಿಸಿಕೊಂಡು ಸಿದ್ಧವಾಗಿರುವ ಈ ಚಿತ್ರ ಅ.24ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದೆ.

ಎರಡು ಪಾತ್ರಗಳ ನಡುವಿನ ಸಂಬಂಧದ ಸುತ್ತ ಸಾಗೋ ಈ ಕಥೆ ಪ್ರೇಕ್ಷಕರಿಗೆ ಬೇರೆಯದ್ದೇ ಫೀಲ್‌ನ್ನು ಕೊಡಲಿದೆ ಎನ್ನುವುದು ಚಿತ್ರತಂಡದ ಅಭಿಪ್ರಾಯ. ಮಹೇಶ್‌ಗೌಡ ಅವರು ಹೊನ್ನುಡಿ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಬಿಳಿಚುಕ್ಕಿ ಹಳ್ಳಿಹಕ್ಕಿ ಚಿತ್ರವನ್ನು ನಿರ್ಮಾಣ ಮಾಡುವ ಜತೆಗೆ ನಿರ್ದೇಶನ ಮಾಡಿದ್ದು, ಚಿತ್ರದ ನಾಯಕನಾಗಿಯೂ ನಟಿಸಿದ್ದಾರೆ.

ದುರ್ಗಾಪರಮೇಶ್ವರಿ ಸನ್ನಿಧಿಯಲ್ಲಿ 'ಕೊನಾರ್ಕ್'ಗೆ ಚಾಲನೆ

ನಾನು ಮತ್ತು ಗುಂಡ ಖ್ಯಾತಿಯ ಶ್ರೀನಿವಾಸ್ ತಿಮ್ಮಯ್ಯ ನಿರ್ದೇಶನದ ಕೊನಾರ್ಕ್ ಚಿತ್ರದ ಮುಹೂರ್ತ ಇತ್ತೀಚೆಗೆ ಶ್ರೀದುರ್ಗಾಪರಮೇಶ್ವರಿ ದೇವಸ್ಥಾನದಲ್ಲಿ ನಡೆಯಿತು. ಪಿಆರ್‌ಓ ಸುಧೀಂದ್ರವೆಂಕಟೇಶ್ ಮುಹೂರ್ತ ದೃಶ್ಯಕ್ಕೆ ಆರಂಭ ಫಲಕ ತೋರಿಸಿ ಶುಭಹಾರೈಸಿದರು.

ನಿರ್ದೇಶಕ ಶ್ರೀನಿವಾಸ್ ತಿಮ್ಮಯ್ಯ ಮಾತನಾಡುತ್ತಾ, ಕೊನಾರ್ಕ್ ಎಂದರೆ ಸೂರ್ಯನಿಂದ ಭೂಮಿಗೆ ಬೀಳುವ ಬೆಳಕು. ನಮ್ಮ ಚಿತ್ರದ ಕಥೆಗೆ ಈ ಟೈಟಲ್ ಸೂಕ್ತವಾಗಿತ್ತು. ಧನುಷ್ ಹಾಗೂ ಮುಂಬೈ ಮೂಲದ ಫಲ್ಗುಣಿ ಖನ್ನ ನಾಯಕ, ನಾಯಕಿಯಾಗಿ ನಟಿಸುತ್ತಿದ್ದಾರೆ. ಅಭಿಜಿತ್, ಹ್ಯಾರಿ ಜೋಶ್, ಸುಧಾರಾಣಿ, ರಮೇಶ್ ಇಂದಿರಾ, ಬಿ.ಸುರೇಶ್, ರಾಜ್‌ದೀಪಕ್ ಶೆಟ್ಟಿ, ಯಶ್‌ಶೆಟ್ಟಿ ಪ್ರಮುಖ ಪಾತ್ರಗಳಲ್ಲಿ ನಟಿಸುತ್ತಿದ್ದಾರೆ, ಕೊನಾರ್ಕ್ ಚಿತ್ರದ ಮೊದಲ ಹಂತದ ಚಿತ್ರೀಕರಣವನ್ನು ಅಕ್ಟೋಬರ್‌ನಲ್ಲಿ ದಕ್ಷಿಣ ಆಫ್ರಿಕಾದಲ್ಲಿ ಆರಂಭಿಸಿ, ಆನಂತರ ಮುಂಬೈ, ಗೋವಾ, ಕಾರವಾರ, ಹೊನ್ನಾವರ, ಬೆಂಗಳೂರು ಹಾಗೂ ಮೈಸೂರಿನ ಸುತ್ತಮುತ್ತ ನಡೆಸುವ ಯೋಜನೆಯಿದೆ, ಮಾವಿನಮರ ಫಿಲಂಸ್ ಮೂಲಕ ಒಂದಷ್ಟು ಸ್ನೇಹಿತರು ಸೇರಿ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ ಎಂದರು.

ನಾನು ಹಾಗೂ ನಿರ್ದೇಶಕ ಶ್ರೀನಿವಾಸ್ ತಿಮ್ಮಯ್ಯ ಆರು ವರ್ಷಗಳ ಸ್ನೇಹಿತರು. ನಾನು ಮತ್ತು ಗುಂಡ



ಚಿತ್ರದ ಸಮಯದಲ್ಲಿ ಅವರ ಕೆಲಸ ನೋಡಿದ ನನಗೆ, ಅವರ ನಿರ್ದೇಶನದಲ್ಲಿ ನಟಿಸಬೇಕೆಂಬ ಆಸೆಯಿತ್ತು ಅದಕ್ಕೆ ಈಗ ಕಾಲ ಕೂಡಿಬಂದಿದೆ. ಕೊನಾರ್ಕ್ ಚಿತ್ರದ ಕಥೆ ಬಹಳ ಚೆನ್ನಾಗಿದೆ ಎಂದು ನಾಯಕ ಧನುಷ ಹೇಳಿದರು.

ನಾನು ಮೂಲತಃ ದೆಹಲಿಯವಳು. ಈಗ ಮುಂಬೈನಲ್ಲಿ ನೆಲೆಸಿದ್ದು, ತೆಲುಗಿನಲ್ಲಿ ಈಗಾಗಲೇ ಚಿತ್ರವೊಂದರಲ್ಲಿ ನಟಿಸಿದ್ದೇನೆ, ಕನ್ನಡದಲ್ಲಿ ನನಗಿದು ಮೊದಲ ಚಿತ್ರ ಎಂದು ನಾಯಕಿ ಫಲ್ಗುಣಿ ಖನ್ನ ಹೇಳಿದರು. ಶ್ರೀನಿವಾಸ್ ತಿಮ್ಮಯ್ಯ ಅವರು ಕಥೆ ಹೇಳುವ ರೀತಿಯೇ ಬಹಳ ಅದ್ಭುತ. ಅವರು ಕಥೆ ಹೇಳಿದ ಕೂಡಲೆ ನಾನು ಚಿತ್ರದಲ್ಲಿ ನಟಿಸಬೇಕೆಂದು ನಿರ್ಧರಿಸಿದೆ ಎಂದು ಹಿರಿಯನಟ ಅಭಿಜಿತ್ ಹೇಳಿದರು.

ಕೊನಾರ್ಕ್ ಚಿತ್ರದ ಅನೇಕ ಕಲಾವಿದರು, ತಂತ್ರಜ್ಞರು ಹಾಗೂ ನಿರ್ಮಾಪಕ ಮದನ್‌ಕುಮಾರ್ ಪತ್ರಿಕಾಗೋಷ್ಠಿಯಲ್ಲಿದ್ದರು. ಶ್ಯಾಮ್ ಸಿ.ಎಸ್. ಅವರ ಸಂಗೀತ, ಸಂಕೇತ್ ಮೈಸೂರು ಅವರ ಛಾಯಾಗ್ರಹಣ ಕೊನಾರ್ಕ್ ಚಿತ್ರಕ್ಕಿದೆ.



'ಕುಂಭಸಂಭವ' ಹೆಣ್ಣು ಭ್ರೂಣಹತ್ಯೆ ಸುತ್ತ ಸುತ್ತುವ ಕಥೆ




ಕೆಲ ವರ್ಷಗಳ ಹಿಂದೆ ಮಂಡ್ಯ ಬಳಿಯ ಆಲೆಮನೆಯಲ್ಲಿ ಭ್ರೂಣಹತ್ಯೆ ನಡೆದ ಪ್ರಕರಣ ನಿಮಗೆಲ್ಲ ಗೊತ್ತಿರಬಹುದು. ಆ ಘಟನೆ ರಾಜ್ಯಾದ್ಯಂತ ದೊಡ್ಡ ಸುದ್ದಿಯಾಗಿತ್ತು, ಅದಿನ್ನೂ ನ್ಯಾಯಾಲಯದ ಅಂಗಳದಲ್ಲಿದೆ. ಅದೇ ಘಟನೆ ಆಧಾರವಾಗಿಟ್ಟುಕೊಂಡು ಟಿ.ಎನ್.ನಾಗೇಶ್ ಅವರು ಕುಂಭಸಂಭವ ಎಂಬ ಚಿತ್ರ ನಿರ್ದೇಶಿಸಿದ್ದಾರೆ. ಈ ಚಿತ್ರದಲ್ಲಿ ಭೀಮ ಚಿತ್ರದ ಇನ್‌ಸ್ಪೆಕ್ಟರ್ ಗಿರಿಜಾ ಪಾತ್ರದ ಮೂಲಕ ಕನ್ನಡಿಗರ ಮನಗೆದ್ದ ಪ್ರಿಯಾ ಮತ್ತೊಮ್ಮೆ ಪೊಲೀಸ್ ಅಧಿಕಾರಿಯಾಗಿ ಪ್ರೇಕ್ಷಕರ ಮುಂದೆ ಬರುತ್ತಿದ್ದಾರೆ, ಇತ್ತೀಚೆಗೆ ಚಿತ್ರದ ಟೀಸರ್ ಅನ್ನು ಪರಿಪೂರ್ಣ ಆಯುರ್ವೇದಿಕ್ ಕಾಲೇಜಿನ ಗುರೂಜಿ ಡಾ.ಎ.ವಿ.ಶ್ರೀನಿವಾಸನ್ ಅವರು ಬಿಡುಗಡೆಗೊಳಿಸಿ ಸಮಾಜಕ್ಕೆ ಒಂದೊಳ್ಳೆ ಸಂದೇಶ ನೀಡುವ ಈ ಚಿತ್ರ ಯಾಶಸ್ವಿಯಾಗಲೆಂದು ಶುಭ ಹಾರೈಸಿದರು. ಮಿಲ್ಕಿಮೂನ್ ಮೂವೀಸ್ ಅಡಿ ನಾಗನಾಯ್ಕ, ನರೇಶ್‌ಕುಮಾರ್, ತಾರಾ, ಸುನಂದ ಹಾಗೂ ಪುರುಷೋತ್ತಮ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ.

ನಿರ್ದೇಶಕ ಟಿ.ಎನ್.ನಾಗೇಶ್ ಮಾತನಾಡುತ್ತಾ, ನೈಜ ಘಟನೆಯ ಎಳೆ ಇಟ್ಟುಕೊಂಡು ಕಮರ್ಷಿಯಲ್ಲಾಗಿ ಈ ಚಿತ್ರವನ್ನು ಹೇಳಲು ಪ್ರಯತ್ನಿಸಿದ್ದೇವೆ. ಮಹಾಭಾರತದ ಗಾಂಧಾರಿ–ಕುಂತಿ ಮಧ್ಯೆ ನಡೆಯುವ ಕಥೆಯಲ್ಲಿ ಕುಂಭಸಂಭವದ ಬಗ್ಗೆ ಉಲ್ಲೇಖವಿದೆ. ಈ ಪದಕ್ಕೂ ನಮ್ಮ ಕಥೆಗೂ ಸಂಬಂಧವಿದೆ. ಹಾಗಾಗಿ ಈ ಟೈಟಲ್ ಇಟ್ಟಿದ್ದೇವೆ, ಚಿತ್ರದ ಕಥೆ ಮಂಡ್ಯ ಸುತ್ತಮುತ್ತ ನಡೆಯುತ್ತದೆ. ಯಾರೂ ಹೆಣ್ಣು ಭ್ರೂಣಹತ್ಯೆ ಮಾಡಬೇಡಿ ಎಂಬ ಸಂದೇಶ ಚಿತ್ರದಲ್ಲಿದ್ದು, ಮಂಡ್ಯ ಘಟನೆಯ ರೂವಾರಿಗಳಿಗೆ ಮರಣ ದಂಡನೆಯೇ ಆಗಬೇಕು ಎಂದು ಚಿತ್ರದಲ್ಲಿ ಹೇಳಿದ್ದೇವೆ. ಈಗಾಗಲೇ ಚಿತ್ರೀಕರಣ ಮುಗಿದು ಪೋಸ್ಟ್ ಪ್ರೊಡಕ್ಷನ್ ಕೆಲಸ ನಡೆಯುತ್ತಿದೆ. ಅಕ್ಟೋಬರ್‌ನಲ್ಲಿ ತೆರೆಗೆ ತರುವ ಯೋಜನೆಯಿದೆ ಎಂದರು.

ನಾಯಕಿ ಪ್ರಿಯಾ ಮಾತನಾಡುತ್ತಾ, ನಿರ್ದೇಶಕರು ಹೇಳಿದ ಕಥೆ ಬಹಳ ಇಷ್ಟವಾಯಿತು. ತುಂಬಾ ಸೂಕ್ಷ್ಮ ವಿಷಯ ಚಿತ್ರದಲ್ಲಿದೆ. ಎಲ್ಲರಿಗೂ ಎಜುಕೇಟ್ ಮಾಡುವಂಥ ಈ ಕಥೆಯಲ್ಲಿ ಇನ್‌ಸ್ಪೆಕ್ಟರ್ ಜಾನಕಿ ಎಂಬ ಪೊಲೀಸ್ ಪಾತ್ರ ನಿರ್ವಹಿಸಿದ್ದೇನೆ ಎಂದರು. ಶೋಭಿತ, ಮಧುಶ್ರೀ, ಆದಿದೇವ್, ಶಂಕರ್ ಅಶ್ವಥ್, ಅರ್ಜುನ್ ದೇವ್, ಕೋಟೆ ಪ್ರಭಾಕರ್, ವಿಜಯ್ ಚೆಂಡೂರ್ ಚಿತ್ರದ ಉಳಿದ ಪಾತ್ರವರ್ಗದಲ್ಲಿದ್ದು, ಛಾಯಾಗ್ರಾಹಕ ಸಿದ್ದರಾಜ ಹಾಗೂ ಕಾರ್ಯಕಾರಿ ನಿರ್ಮಾಪಕ ನಿಂಗರಾಜು ಮತ್ತು ವಲ್ಲಿ ಪತ್ರಿಕಾಗೋಷ್ಠಿಯಲ್ಲಿದ್ದರು,

ಸಿನಿಪದಬಂಧ–592



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ______
ವಿಳಾಸ ______
______
ದೂರವಾಣಿ ಸಂಖ್ಯೆ ______

ಎಡದಿಂದ ಬಲಕ್ಕೆ

1. ಹೆಣ್ಣಿರಲಿ ಗಂಡಿರಲಿ ಒಂದೇ ಮಗುವಿರಲಿ ಎನ್ನುವ ಕಾಲದಿ ಶಂಕರ್‌ನಾಗ್ ಹೀಗೆ ಹೇಳಿದ್ರು 10
6. ಅಂಬಿ, ಶಶಿ, ವಿನಯ, ನಿವೇದಿತಾ ಜೈನ್ ಅಭಿನಯದ ಕುಟುಂಬ 5
8. ಸಂಗೀತದ ಲಯಬದ್ಧ ತುಣುಕು 3
9. ಮೈ ಆಟೋಗ್ರಾಫ್ ಚಿತ್ರದ ಹಾಡಿನ ಆರಂಭ ಪ್ರೇಮ್ ಚಿತ್ರವಿದೆ 7
12. ನರನ ಜೊತೆ ರಕ್ಕಸನೂ ಇದ್ದಾನೆ 6
13. ಅಂಬರೀಷ್ – ಗೀತಾ ಕಂಡ ಬ್ರಹ್ಮಾಂಡ 4
16. ವಿಶ್ರಾಂತ್ – ವಿದ್ಯಾಳ ಸಂಯೋಗ 4
17. ವಿಷ್ಣುವರ್ಧನ್ – ಖುಷ್ಬೂ ಹಾಡಿದ ಹಾಡು 5
18. ಶ್ರೀನಿವಾಸಮೂರ್ತಿ – ಶ್ರೀಲಲಿತ ಅಭಿನಯಕ್ಕೆ ಗೀತಪ್ರಿಯ ನಿರ್ದೇಶಕ 4

ಮೇಲಿನಿಂದ ಕೆಳಕ್ಕೆ

1. ಉದಯ್ ಕುಮಾರ್ – ಶೈಲಶ್ರೀ ಅಭಿನಯಕ್ಕೆ ಎ.ವಿ.ಶೇಷಗಿರಿರಾವ್ ನಿರ್ದೇಶನವಿದೆ 9
2. ಅಭಿಜಿತ್ – ಶೃತಿಯ ಸೂರ್ಯ ಕಿರಣ 2
3. ವಿಷ್ಣುವರ್ಧನ್ ಯಜಮಾನಿಕೆಯ ಅವಿಭಕ್ತ ಕುಟುಂಬವಿರುವ ಚಿತ್ರ 5
4. ಬಸವರಾಜ್ ಗುಡಿಗೇರಿ – ಜಯಂತಿ ಅಭಿನಯದಲ್ಲಿ ಪರಿಶುದ್ಧಳಾದವಳು 6
5. ಗಣೇಶ ಸುಬ್ರಮಣ್ಯ ಚಿತ್ರದ ನಾಯಕಿ 3
7." _ _ _ ನೂರು ಮನದಲಿ ಮರೆಯಲಾರೆ ಬದುಕಲಿ... ", 3
10. ದಂಗೆ ಎದ್ದ ಹೆಂಗಸಿಗೆ ಚಕ್ರವರ್ತಿ ನಿರ್ದೇಶಕ 6
11. ರಾಜ್‌ಕುಮಾರ್ ಅಭಿನಯದ ಹಣೆ ಬರಹ 5
14. ರವಿಚಂದ್ರನ್ ಅಭಿನಯದ ಕೈಲಾಸವಾಸಿ 5
15. ಮಹಾಪುರುಷ ಚಿತ್ರದ ನಾಯಕಿ 3

ಸಿನಿ ಪದಬಂಧ 591ರ ಉತ್ತರ

	ಇಂ	ಚ	ರ		ಸು	ಮ	ಲ	ತಾ		
	ದು				ಜಾ		ಲಿ			ಪಂ
	ಶೇ		ಸಂ		ತ		ತಾ		ಕುಂ	ಚ
ಸು	ಖ	ಸಂ	ಸಾ	ರ				ಲಾ		ಮ
	ರ್		ರ		ನ	ನ್ನಾ	ಸೆ	ಯ	ಹೂ	ವೇ
			ನೌ		ಗಾ			ರ್		ದ
ಚಿ	ನ್ನ		ಕೆ	ಸ	ರಿ	ನ	ಕ	ಮ	ಲ	
ನ್ನಾ		ಈ		ತ್ಯಾ				ಗ		ಗೆ
ರಿ		ಸುಂ	ದ	ರ	ಸ್ವ	ಪ್ನ	ಗ	ಳು		ಜ್ಜೆ
ಮು	ಕುಂ	ದ					ನ			ನಾ
ತ್ತಾ		ರ	ವಿ	ನೀ	ನು	ಆ	ಗ	ಸ	ದಿಂ	ದ

ವಿಜೇತರು: ಅಮೃತಾ ಶೆಣೈ, #206, ಮಿಸ್ಟಿ ವುಡ್ಸ್, ಕೆ.ಸಿ.ನಗರ, ಮೈಸೂರು-570011

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು–570 015

ಅಪರೂಪದ ಅತಿಥಿಯಿಂದ ಕುಂಟೆಬಿಲ್ಲೆ ಟ್ರೈಲರ್



ಸಾಮಾನ್ಯವಾಗಿ ಸ್ಟಾರ್ ಅಥವಾ ವಿಐಪಿಗಳಿಂದ ಸಿನಿಮಾದ ಟ್ರೈಲರ್, ಟೀಸರ್ ಬಿಡುಗಡೆ ಮಾಡಿಸುತ್ತಾರೆ. ಆದರೆ ಕುಂಟೆಬಿಲ್ಲೆ ಚಿತ್ರತಂಡ ತಮ್ಮ ಸಿನಿಮಾ ಟ್ರೈಲರನ್ನು ಸ್ನಾಪಿ ಎಂಬ ಶ್ವಾನದಂತೆ ಓಡಾಡುವ ರೋಬೋಟ್ ಕೈಲಿ ರಿಲೀಸ್ ಮಾಡಿಸಿದೆ. ಈ ಹಿಂದೆ ದಕ್ಷಯಜ್ಞ, ತರ್ಲೆ ವಿಲೇಜ್, ಋತುಮತಿ, ಹೂವಿನಹಾರ ಚಿತ್ರಗಳನ್ನು ನಿರ್ದೇಶಿಸಿದ ಸಿದ್ದೇಗೌಡ ಅವರ ಸಾರಥ್ಯದ ಎಂಟನೇ ಚಿತ್ರ ಕುಂಟೆಬಿಲ್ಲೆ. ಜೀವಿತ ಕ್ರಿಯೇಶನ್ಸ್ ಮೂಲಕ ಕುಮಾರ್‌ಗೌಡ ಜಿ. ಮತ್ತು ಶಿವು ಎಸ್.ಬಿ. ಅವರು ಜಂಟಿಯಾಗಿ ಕುಂಟೆಬಿಲ್ಲೆ ಚಿತ್ರವನ್ನು ನಿರ್ಮಿಸಿದ್ದಾರೆ.

ನಾಯಕಿ ಮೇಘಶ್ರೀ ಸೇರಿದಂತೆ ಚಿತ್ರದ ಬಹುತೇಕ ಕಲಾವಿದರು ಗೈರಾದ ಬಗ್ಗೆ ಬೇಸರ ವ್ಯಕ್ತಪಡಿಸುತ್ತಲೇ ಸ್ನಾಪಿಗೆ ಧನ್ಯವಾದ ತಿಳಿಸಿದ ನಿರ್ದೇಶಕ ಸಿದ್ದೇಗೌಡ, ಇದುವರೆಗೂ ನಾನು ಗ್ರಾಮೀಣ ಜನಜೀವನದ ಮೇಲೆ ಬೆಳಕು ಚೆಲ್ಲುವ ಸಿನಿಮಾಗಳನ್ನೇ ಮಾಡಿಕೊಂಡು ಬಂದಿದ್ದೇನೆ. ಕುಂಟೆಬಿಲ್ಲೆ ಕೂಡ ಹಳ್ಳಿಸೊಗಡಿನ ಕಥೆಯಾಗಿದ್ದು, ಒಂದು ತಪ್ಪು ಮಾಡಿ ನಮ್ಮ ಕೈಯಾರೆ ನಾವೇ ನಮ್ಮ ಪ್ರೀತಿಯನ್ನು ಹೇಗೆ ಹಾಳು ಮಾಡಿಕೊಳ್ಳುತ್ತೇವೆ ಎಂಬುದನ್ನು ಚಿತ್ರದಲ್ಲಿ ತೋರಿಸಿದ್ದೇವೆ, ಈಗಾಗಲೇ ಶೂಟಿಂಗ್, ಪೋಸ್ಟ್ ಪ್ರೊಡಕ್ಷನ್ ಮುಗಿದಿದ್ದು, ಚಿತ್ರವೀಗ ಸೆನ್ಸಾರ್ ಹಂತದಲ್ಲಿದೆ ಎಂದರು. ರಾಮನಗರ, ಎಚ್.ಡಿ.ಕೋಟೆಯ ಸುತ್ತಮುತ್ತ ಚಿತ್ರದ ಚಿತ್ರೀಕರಣ ನಡೆಸಲಾಗಿದ್ದು, ಚಿತ್ರದ ಮೂರು ಹಾಡುಗಳಿಗೆ ಹರಿಕಾವ್ಯ ಸಂಗೀತ ಸಂಯೋಜಿಸಿದ್ದಾರೆ, ಮುಂಜಾನೆ ಮಂಜು ಕ್ಯಾಮರಾ ವರ್ಕ್ ನಿಭಾಯಿಸಿದ್ದಾರೆ.

ಕುಮಾರ್‌ಗೌಡ ಮಾತನಾಡುತ್ತಾ, 30 ವರ್ಷಗಳ ಹಿಂದೆ ಸಿನಿಮಾ ನಟನಾಗಬೇಕೆಂದು ಬೆಂಗಳೂರಿಗೆ ಬಂದಿದ್ದೆ. ಆದರೆ, ಆಗ ನನಗೆ ಯಾರೂ ಪರಿಚಯವಿರಲಿಲ್ಲ. ಅವಕಾಶ ಸಿಗದೆ ವಾಪಸ್ ಊರಿಗೆ ಹೋದೆ ಇದೀಗ ಕುಂಟೆಬಿಲ್ಲೆ ಚಿತ್ರದ ಮೂಲಕ ನಿರ್ಮಾಪಕನಾಗಿ ಬಂದಿದ್ದೇನೆ, ಅಲ್ಲದೆ ನನ್ನ ಮಗ ಯದು ನಾಯಕನಾಗಿ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡುತ್ತಿದ್ದಾನೆ ಎಂದು ಹೇಳಿದರು. ಮತ್ತೊಬ್ಬ ನಿರ್ಮಾಪಕ ಎಸ್‌ಬಿ ಶಿವು ಮಾತನಾಡಿ, ಇದು ನಾನು ನಿರ್ಮಿಸುತ್ತಿರುವ ಆರನೇ ಚಿತ್ರ. ನಿರ್ದೇಶಕ ಜೋಗಿ ಪ್ರೇಮ್ ಅವರ ಕೈಲಿ ಒಂದು ಹಾಡನ್ನು ಹಾಡಿಸೋಕೆ ಅವರ ಅಸಿಸ್ಟೆಂಟ್ ದಶಾವರ ಚಂದ್ರು ಬಳಿ ಕೇಳಿದರೆ, ಐದು ಲಕ್ಷ ದುಡ್ಡು ತನ್ನಿ ಎಂದರು ಎಂದು ಬೇಸರ ವ್ಯಕ್ತಪಡಿಸಿದರು.

ನಾಯಕ ಯದು ಮಾತನಾಡಿ, ಕೋಳಿ ಫಾರಂನಲ್ಲಿ ಕೆಲಸ ಮಾಡುವ ಬಡ ಹುಡುಗನ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ. ಪ್ರೀತಿಯನ್ನು ಉಳಿಸಿಕೊಳ್ಳಲು ಆತ ಹೇಗೆಲ್ಲ ಕಷ್ಟ ಪಡುತ್ತಾನೆ ಎನ್ನುವುದು ಚಿತ್ರದ ಒನ್‌ಲೈನ್ ಸ್ಟೋರಿ ಎಂದರು. ಮತ್ತೊಬ್ಬ ನಟ ಧೀರಜ್ ನಾಯಕನ ಗೆಳೆಯನಾಗಿ ಕಾಣಿಸಿಕೊಂಡಿದ್ದಾರೆ. ಸುಚೇಂದ್ರ ಪ್ರಸಾದ್, ಶಂಕರ್ ಅಶ್ವಥ್, ಸುಧಾ ಬೆಳವಾಡಿ ಮತ್ತು ಭವಾನಿಪ್ರಕಾಶ್ ಉಳಿದ ತಾರಾಗಣದಲ್ಲಿದ್ದಾರೆ, ಕುಂಟೆಬಿಲ್ಲೆ ಚಿತ್ರ ಸೆ.26ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದೆ.

ನಂ.ಗೂಡಲ್ಲಿ ನೇರವಾಗಿ ರೈಲ್ವೆ ಮೇಲ್ಸೇತುವೆ ನಿರ್ಮಿಸಲು ತೀರ್ಮಾನ

2 ತಿಂಗಳಲ್ಲಿ ಕಾಮಗಾರಿ ಆರಂಭವಾಗಿ 2026ಕ್ಕೆ ಪೂರ್ಣ: ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ

ನಂಜನಗೂಡು, ಸೆ.4– ನಗರದ ರಾಷ್ಟ್ರಪತಿ ರಸ್ತೆ ಭಾರ್ಗವಿ ಚಿತ್ರಮಂದಿರದ ಬಳಿ ನಿರ್ಮಿಸಲು ಉದ್ದೇಶಿಸಿರುವ ರೈಲ್ವೆ ಮೇಲ್ಸೇತುವೆಯನ್ನು ನೇರವಾಗಿ ನಿರ್ಮಿಸಲು ತೀರ್ಮಾನಿಸಲಾಗಿದೆ. 2 ತಿಂಗಳಲ್ಲಿ ರೈಲ್ವೆ ಮೇಲ್ಸೇತುವೆ ಕಾಮಗಾರಿ ಆರಂಭವಾಗಿ 2026ರಲ್ಲಿ ಪೂರ್ಣಗೊಂಡು ಸೇವೆಗೆ ಲಭ್ಯವಾಗಲಿದೆ ಎಂದು ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು.

ಗುರುವಾರ ಬೆಳಗ್ಗೆ ನಗರಕ್ಕೆ ಆಗಮಿಸಿ ಉದ್ದೇಶಿತ ರೈಲ್ವೆ ಮೇಲ್ಸೇತುವೆ ನಿರ್ಮಾಣಗೊಳ್ಳಲಿರುವ ರಾಷ್ಟ್ರಪತಿ ರಸ್ತೆಯ ಅಗ್ರಹಾರದಿಂದ ಭಾರ್ಗವಿ ಚಿತ್ರಮಂದಿರದವರೆಗೆ ಪಾದಯಾತ್ರೆ ನಡೆಸಿ, ಜನರ ಅಹವಾಲು ಆಲಿಸಿ ನಂತರ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಮೇಲ್ಸೇತುವೆ ನಿರ್ಮಾಣ ವಿಚಾರವಾಗಿ ಜನರ ಅಹವಾಲು ಆಲಿಸಿದ್ದೇನೆ. ಉದ್ದೇಶಿತ ರೈಲ್ವೆ ಮೇಲ್ಸೇತುವೆ "ಕೊಂಕಣ ಸುತ್ತಿ ಮೈಲಾರಕ್ಕೆ ಬಂದರು" ಎಂಬಂತಾಗದೆ ಮೊದಲಿನ ನಕ್ಷೆಯಂತೆ ನೇರವಾಗಿ ರಾಷ್ಟ್ರಪತಿ ರಸ್ತೆಯ 4ನೇ ತಿರುವಿನಿಂದ ಆರಂಭಗೊಂಡು ಬ್ರಾಹ್ಮಣ ಸಂಘದ ಕಚೇರಿ ಮುಂಭಾಗ ಮುಕ್ತಾಯಗೊಳ್ಳಲಿದೆ. ಇದರೊಂದಿಗೆ ನಗರದ ಜನತೆಯ ಹಲವು ವರ್ಷದ ಬೇಡಿಕೆ ಈಡೇರಿದಂತಾಗುತ್ತದೆ ಎಂದರು.

ರೈಲ್ವೆ ಅಂಡರ್ ಪಾಸ್ ಸಮಸ್ಯೆ ನಿವಾರಣೆಗೆ ಕ್ರಮ: ನಗರದ ಮಹಾತ್ಮಾಗಾಂಧಿ ರಸ್ತೆಯಲ್ಲಿ ಈ ಹಿಂದೆ ರೈಲ್ವೆ ಕೆಳಸೇತುವೆ (ಅಂಡರ್ ಪಾಸ್) ನಿರ್ಮಿಸಿ ತೊಂದರೆಯಾಗಿರುವ ಬಗ್ಗೆ ಅರಿವಿದೆ. ಅದನ್ನು ಸರಿಪಡಿಸುವಂತೆ ಜನರು ಒತ್ತಾಯಿಸಿದ್ದಾರೆ. ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಶೀಘ್ರ ಅಧಿಕಾರಿಗಳ ತಂಡ ಕಳುಹಿಸಿ ಕೆಳಸೇತುವೆಯಲ್ಲಿ ನೀರು ನಿಲ್ಲದಂತೆ ದುರಸ್ತಿ ಕಾಮಗಾರಿ ನಡೆಸಲಾಗುವುದು. ಒಂದು ವೇಳೆ ದುರಸ್ತಿ ನಡೆಸಲು ಕಷ್ಟವಾದರೆ ಶಾಶ್ವತ ಪರಿಹಾರ ಒದಗಿಸಲು ಮೇಲ್ಸೇತುವೆ ನಿರ್ಮಿಸಲು ಯೋಜನೆ ಸಿದ್ಧಪಡಿಸಲಾಗುವುದು ಎಂದು ಭರವಸೆ ನೀಡಿದರು.

ನರೇಂದ್ರ ಮೋದಿ ಅವರು ಪ್ರಧಾನಿಯಾದ ಮೇಲೆ ದೇಶಾದ್ಯಂತ ರೈಲ್ವೆ ಲೆವಲ್ ಕ್ರಾಸಿಂಗ್‌ಗಳನ್ನು ಕೇಂದ್ರ ಸರ್ಕಾರ ಸಂಪೂರ್ಣ ವೆಚ್ಚ ಭರಿಸಿ ನಿರ್ಮಿಸುತ್ತಿದೆ. ಬೆಂಗಳೂರಿನ 100 ಕಿಮೀ ವ್ಯಾಪ್ತಿಯ 175 ಲೆವೆಲ್ ಕ್ರಾಸಿಂಗ್‌ಗಳನ್ನು ರೈಲ್ವೆ ಮೇಲ್ಸೇತುವೆಯಾಗಿ ಮಾರ್ಪಡಿಸುವ ತೀರ್ಮಾನ ಮಾಡಲಾಗಿದೆ. ನಾನು ರಾಜ್ಯ ರೈಲ್ವೆ ಸಚಿವನಾದ ಒಂದು ವರ್ಷದಲ್ಲಿ ದೇಶದ ಹಲವು ರೈಲ್ವೆ ಯೋಜನೆಗಳನ್ನು ಕಂಡಿದ್ದೇನೆ. ತುಮಕೂರು ಜಿಲ್ಲೆಯಲ್ಲಿ ರೈಲ್ವೆ ಮೇಲ್ಸೇತುವೆಗಳನ್ನು ಬಾಕಿ ಇಲ್ಲದಂತೆ ನಿರ್ಮಿಸಲಾಗಿದೆ. ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರೈಲ್ವೆ ಲೆವೆಲ್ ಕ್ರಾಸಿಂಗ್ ತಪ್ಪಿಸಿ ರೈಲ್ವೆ ಮೇಲ್ಸೇತುವೆ ನಿರ್ಮಿಸಲು ಕ್ರಮ ವಹಿಸಲಾಗಿದೆ. ನಮ್ಮ ಚಿಂತನೆ ಅಭಿವೃದ್ಧಿ ಕಡೆಗಿದ್ದು ಅಭಿವೃದ್ಧಿಪಡಿಸುವುದು ನಮ್ಮ ಆದ್ಯ ಕರ್ತವ್ಯ ಎಂದರು.

ರೈತ ಸಂಘದ ಜಿಲ್ಲಾಧ್ಯಕ್ಷ ವಿದ್ಯಾಸಾಗರ್ ಹಾಗೂ ನಗರಸಭಾ ಸದಸ್ಯ ಗಂಗಾಧರ್ ಮಾತನಾಡಿ, ತಾಲೂಕಿನ ದಸಂಸ, ಜನಸಂಗ್ರಾಮ ಪರಿಷತ್, ಯುವ ಬ್ರಿಗೇಡ್ ಸಂಘಟನೆಗಳು ಮತ್ತು ಸರಸ್ವತಿ ಕಾಲೋನಿ ಮತ್ತು ರಾಜಾಜಿ ಕಾಲೋನಿ ನಿವಾಸಿಗಳ ಮುಖಂಡರೊಂದಿಗೆ ಸಚಿವ ವಿ.ಸೋಮಣ್ಣನವರಿಗೆ ರಾಷ್ಟ್ರಪತಿ ರಸ್ತೆಯಲ್ಲಿ ಹಿಂದಿನ ನಕ್ಷೆಯಂತೆ ನೇರವಾಗಿ ರೈಲ್ವೆ ಮೇಲ್ಸೇತುವೆ ನಿರ್ಮಿಸುವಂತೆ ಮನವಿ ಸಲ್ಲಿಸಲಾಗಿದೆ. ಸಚಿವರು ಜನರ ಭಾವನೆಗಳಿಗೆ ಸ್ಪಂದಿಸದೆ, ತಮ್ಮ ವಾಣಿಜ್ಯ ಕಟ್ಟಡ ಉಳಿಸಿಕೊಳ್ಳಲು ಕೆಲವು ಪಟ್ಟಭದ್ರ ಹಿತಾಸಕ್ತಿಗಳು, ಸಚಿವರ ಹಿಂಬಾಲಕರು ನಡೆಸಿರುವ ಕುತಂತ್ರಕ್ಕೆ ಬೆಂಬಲ ನೀಡಿ, ನೇರವಾಗಿ ಮೇಲ್ಸೇತುವೆ ನಿರ್ಮಿಸುವ ಬದಲಾಗಿ ಹೊಸ ನಕ್ಷೆಯನ್ನು ಮಾನ್ಯ ಮಾಡಿದರೆ ತೀವ್ರ ಹೋರಾಟ ಎದುರಿಸಬೇಕಾಗುತ್ತದೆ. ಶತಾಯಗತಾಯ ನೇರವಾಗಿ ರೈಲ್ವೆ ಮೇಲ್ಸೇತುವೆ ನಿರ್ಮಿಸಲೇಬೇಕು. ಯಾವುದೇ ಬೆಲೆ ತೆತ್ತದರೂ ಜನರ ಪರವಾಗಿ ಸಂಘಟನೆಗಳು ಹೋರಾಟ ರೂಪಿಸುತ್ತವೆ ಎಂದರು.

ಈ ವೇಳೆ ಸಂಸದ ಸುನೀಲ್ ಬೋಸ್, ಶಾಸಕ ಶ್ರೀವತ್ಸ, ಮಾಜಿ ಸಂಸದ ಪ್ರತಾಪ್ ಸಿಂಹ, ಮಾಜಿ ಶಾಸಕರಾದ ಬಿ.ಹರ್ಷವರ್ಧನ್, ಕೇಶವಮೂರ್ತಿ, ಬಾಲರಾಜು, ನಗರಸಭೆ ಅಧ್ಯಕ್ಷ ಶ್ರೀಕಂಠಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷ ಕುಂಬ್ರಹಳ್ಳಿ ಸುಬ್ಬಣ್ಣ, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಕೆ.ಮಾರುತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ.ಶಂಕರ್, ಶ್ರೀಕಂಠನಾಯಕ, ಬಿಜೆಪಿ ಮಂಡಲ ಅಧ್ಯಕ್ಷ ಕೆಂಡಗಣ್ಣಪ್ಪ, ನಗರಾಧ್ಯಕ್ಷ ಸಿದ್ದರಾಜು, ಶ್ರೀಕಂಠೇಶ್ವರ ದೇವಾಲಯ ವ್ಯವಸ್ಥಾಪನಾ ಸಮಿತಿ ಮಾಜಿ ಅಧ್ಯಕ್ಷ ಇಂಧನ್ ಬಾಬು, ಮುಖಂಡರಾದ ಎನ್.ಟಿ.ಗಿರೀಶ್ ಗಿರೀಶ್, ಕುಳ್ಳಯ್ಯ, ವಿನಯ್ ಕುಮಾರ್, ಮಧುರಾಜ್, ಜಿಪಂ ಮಾಜಿ ಸದಸ್ಯ ಕೆ.ಬಿ.ಸ್ವಾಮಿ, ತಾಪಂ ಮಾಜಿ ಸದಸ್ಯ ಹೆಚ್.ಎಸ್.ಮೂಗಶೆಟ್ಟಿ, ಬಿ.ಎಸ್.ರಾಮು, ಯುವ ಕಾಂಗ್ರೆಸ್ ತಾಲೂಕು ಅಧ್ಯಕ್ಷ ವಿಜಯಕುಮಾರ್, ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ನಗರಸಭಾ ಆಯುಕ್ತ ವಿಜಯ್, ಜನಸಂಗ್ರಾಮ ಪರಿಷತ್ ರಾಜ್ಯಾಧ್ಯಕ್ಷ ವಿಜಯ್ ಕುಮಾರ್, ಶಂಕರಪುರ ಸುರೇಶ್, ಯಶವಂತ್ ಕುಮಾರ್, ನಗರಸಭೆ ಸದಸ್ಯರಾದ ಗಂಗಾಧರ್, ಕಪಿಲೇಶ್, ಮಹೇಶ್, ಗಾಯಿತ್ರಿ, ನಗರಸಭೆ ಮಾಜಿ ಉಪಾಧ್ಯಕ್ಷ ದೊರೆಸ್ವಾಮಿ ಸೇರಿದಂತೆ ಹಲವರಿದ್ದರು.



ರೈಲ್ವೆ ಮೇಲ್ಸೇತುವೆ ನಿರ್ಮಾಣಗೊಳ್ಳಲಿರುವ ರಾಷ್ಟ್ರಪತಿ ರಸ್ತೆಯ ಅಗ್ರಹಾರದಿಂದ ಭಾರ್ಗವಿ ಚಿತ್ರಮಂದಿರದವರೆಗೆ ಪಾದಯಾತ್ರೆ ನಡೆಸಿದ ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಸ್ಥಳ ಪರಿಶೀಲನೆ ನಡೆಸಿದರು.

> ರೈಲ್ವೆ ಸಚಿವ ವಿ.ಸೋಮಣ್ಣರವರು ಕಾಮಗಾರಿ ನಡೆಯುವ ಸ್ಥಳಗಳನ್ನು ಪರಿ ಶೀಲಿಸಿದ್ದಾರೆ. ಜನಸಾಮಾನ್ಯರಿಗೆ ತೊಂದರೆಯಾಗದಂತೆ ನೇರವಾಗಿ ಮತ್ತು ಶೀಘ್ರ ರೈಲ್ವೆ ಮೇಲ್ಸೇತುವೆ ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಮನವರಿಕೆ ಮಾಡಲಾಗಿದೆ. ಈ ರೈಲ್ವೆ ಮೇಲ್ಸೇತುವೆ ನಿರ್ಮಾಣದಿಂದ ನಗರದಲ್ಲಿನ ಸಂಚಾರ ದಟ್ಟಣೆ ಕಡಿಮೆಯಾಗಿ ಜನಸಾಮಾನ್ಯರಿಗೆ ಅನುಕೂಲವಾಗಲಿದೆ. – **ದರ್ಶನ್, ಶಾಸಕ.**

ಶ್ರೀಕಂಠೇಶ್ವರಸ್ವಾಮಿ ದರ್ಶನ ಪಡೆದ ಸಚಿವ ವಿ.ಸೋಮಣ್ಣ



ಶ್ರೀಕಂಠೇಶ್ವರಸ್ವಾಮಿ ದೇವಾಲಯಕ್ಕೆ ಸಚಿವ ವಿ.ಸೋಮಣ್ಣ ಭೇಟಿ ನೀಡಿ ದೇವರ ದರ್ಶನ ಪಡೆದರು.

ನಂಜನಗೂಡು, ಸೆ.4– ನಗರದ ಶ್ರೀ ಕಂಠೇಶ್ವರಸ್ವಾಮಿ ದೇವಾಲಯಕ್ಕೆ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಅವರು ಸಂಸದ ಸುನೀಲ್ ಬೋಸ್ ಮತ್ತು ಶಾಸಕ ದರ್ಶನ್ ಅವರೊಂದಿಗೆ ಭೇಟಿ ನೀಡಿ ಶ್ರೀಕಂಠೇಶ್ವರ ಸ್ವಾಮಿ ದರ್ಶನ ಪಡೆದರು. ಇದೇ ವೇಳೆ ದೇವಾಲಯದ ವತಿಯಿಂದ ಸೋಮಣ್ಣ ಅವರಿಗೆ ಶೇಷವಸ್ತ್ರ ಮತ್ತು ಫಲ ತಾಂಬೂಲಗಳನ್ನು ನೀಡಿ ಗೌರವಿಸಲಾಯಿತು.

ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ ಶಾಲಾ ಶೈಕ್ಷಣಿಕ ಪ್ರಗತಿ ಸಭೆ

ಹೆಚ್.ಡಿ.ಕೋಟೆ, ಸೆ.4– ತಾಲೂಕಿನಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಕುಂಠಿತವಾಗುತ್ತಿದೆ ಎಂಬ ಆರೋಪ ಕೇಳಿ ಬರುತ್ತಿತ್ತು. ಆದರೆ ನಮ್ಮ ಸರ್ಕಾರಿ ಆದರ್ಶ ವಿದ್ಯಾಲಯ ಎಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಫಲಿತಾಂಶದೊಂದಿಗೆ ತಾಲೂಕಿಗೆ ಪ್ರಥಮ ಸ್ಥಾನ ಗಳಿಸಿರುವುದು ಹೆಮ್ಮೆಯ ಸಂಗತಿ ಎಂದು ಶಾಸಕ ಅನಿಲ್ ತಿಳಿಸಿದರು.

ಪಟ್ಟಣದ ಗದ್ದಿಗೆ ವೃತ್ತ ಬಳಿಯ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಶಾಲಾ ಶೈಕ್ಷಣಿಕ ಪ್ರಗತಿ ಸಭೆಯಲ್ಲಿ ಮಾತನಾಡಿದ ಅವರು, ಆದರ್ಶ ಶಾಲೆಯ ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಈ ಬಾರಿ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಫಲಿತಾಂಶ ಬರುವಂತೆ ಮಾಡಿದ್ದಾರೆ ಎಂದು ಮುಖ್ಯ ಶಿಕ್ಷಕ ರವೀಂದ್ರ ಬಾಬು ಮತ್ತು ಶಿಕ್ಷಕರಿಗೆ ಅಭಿನಂದನೆ ಸಲ್ಲಿಸಿದರು.

ಮುಂದಿನ ದಿನಗಳಲ್ಲಿ ತಾಲೂಕಿನ ಎಲ್ಲಾ ಸರ್ಕಾರಿ ಶಾಲೆ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಉತ್ತಮ ಫಲಿತಾಂಶ ಪಡೆಯಲು ಕ್ಷೇತ್ರ ಶಿಕ್ಷಣಾಧಿಕಾರಿ ರಾಜು ಜವಾಬ್ದಾರಿ ವಹಿಸಬೇಕು ಎಂದರು.

ಇಲ್ಲಿನ ಆದರ್ಶ ಶಾಲೆಯಲ್ಲಿ 6 ರಿಂದ 10ನೇ ತರಗತಿವರೆಗೆ 510, ಪದವಿಪೂರ್ವ ಕಾಲೇಜಿನಲ್ಲಿ 40 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಇಲ್ಲಿ ಕೆಲವು ಮೂಲ ಸೌಕರ್ಯಗಳ ಕೊರತೆ ಇದ್ದು, ಮುಂದಿನ ದಿನಗಳಲ್ಲಿ ಮೂಲ ಸೌಕರ್ಯ ಒದಗಿಸಿಕೊಡುವ ಭರವಸೆ ನೀಡಿದರು.

ಈ ವೇಳೆ ಮುಖ್ಯ ಶಿಕ್ಷಕ ರಾಜೇಂದ್ರ ಬಾಬು, ಎಸ್‌ಡಿಎಂಸಿ ಅಧ್ಯಕ್ಷ ಗೋವಿಂದೇಗೌಡ ಅವರು ಶಾಲಾ ಆಸ್ತಿ ನೋಂದಣಿ, ಪ್ರತ್ಯೇಕ ಅಡುಗೆ ಮನೆ, ಮಕ್ಕಳು ಊಟ ಮಾಡಲು ಡೈನಿಂಗ್ ಹಾಲ್, ಹೈಟೆಕ್ ಶೌಚಾಲಯ, ಶಾಶ್ವತ ಶುದ್ಧ ಕುಡಿಯುವ ನೀರು, ಕಾಂಪೌಂಡ್ ನಿರ್ಮಾಣ, ಪಟ್ಟಣದ ಬಸ್‌ಸ್ಟ್ಯಾಂಡ್‌ನಿಂದ ಶಾಲೆಗೆ ಬೆಳಗ್ಗೆ, ಸಂಜೆ ಬಸ್ ವ್ಯವಸ್ಥೆ ಕಲ್ಪಿಸುವುದು, ಚರಂಡಿ ಸೇರಿದಂತೆ ಮೂಲ ಸೌಕರ್ಯ ಕಲ್ಪಿಸುವಂತೆ ಶಾಸಕ ಅನಿಲ್‌ಗೆ ಮನವಿ ಸಲ್ಲಿಸಿದರು.

ಆದರ್ಶ ಪದವಿಪೂರ್ವ ಕಾಲೇಜಿನ ಸಿಡಿಸಿ ಅಧ್ಯಕ್ಷ ಹೆಚ್.ಸಿ.ನರಸಿಂಹಮೂರ್ತಿ, ಸರಗೂರು ಪಪಂ ಸದಸ್ಯ ಶ್ರೀನಿವಾಸ್, ಕೋಟೆ ಪುರಸಭಾ ಸದಸ್ಯ ರಾಜು, ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಹನುಮಂತರಾಜ್, ಎಸ್‌ಡಿಎಂಸಿ ಉಪಾಧ್ಯಕ್ಷೆ ಶ್ವೇತಾಶ್ರೀ, ಸದಸ್ಯರಾದ ಗಣೇಶ್, ಶಿವಣ್ಣನಾಯಕ, ದಿನೇಶ, ಸುಬ್ರಹ್ಮಣ್ಯ, ನಾಗರಾಜು, ಸವಿತಾ, ರಾಧ, ತಾರ, ಸಂಗೀತ, ಗೋವಿಂದ ರಾಜು, ರೇಖಾ, ವರಲಕ್ಷ್ಮಿ, ಯುವ ಕಾಂಗ್ರೆಸ್ ಅಧ್ಯಕ್ಷ ಶಿವರಾಜು, ಮುಖಂಡ ಉಮೇಶ, ಶಿಕ್ಷಕರಾದ ಸುರೇಶ್, ಮಂಜು, ರವಿಚಂದ್ರ ಸುಜನ, ಯಶೋಧರ, ಶಿವಕುಮಾರ್, ತಂಬ್ರಿನ್, ಸರೋಜಮ್ಮ, ಮಣಿಕಂಠ, ಪಾಪಣ್ಣ, ವಜ್ರಕುಮಾರಿ, ಋತ್ವಿಕ್, ಶಶಿಕಲಾ ಇನ್ನಿತರರಿದ್ದರು.



ಶಾಲಾ ಪ್ರಗತಿ ಸಭೆಯಲ್ಲಿ ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿದರು.

ಖಾಸಗಿ ಬಸ್ ಏಜೆಂಟರ ಸಂಘದಿಂದ ಗಣೇಶೋತ್ಸವ


ತಿ.ನರಸೀಪುರ, ಸೆ.4– ಪಟ್ಟಣದ ಖಾಸಗಿ ಬಸ್ ಏಜೆಂಟರ ಸಂಘದಿಂದ 30ನೇ ಗಣೇಶೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಕಳೆದ 30 ವರ್ಷಗಳಿಂದ ಪಟ್ಟಣದ ಖಾಸಗಿ ಬಸ್ ಏಜೆಂಟರ ಸಂಘ ಬಸ್ ನಿಲ್ದಾಣದಲ್ಲಿ ಗಣೇಶೋತ್ಸವ ಆಚರಿಸುತ್ತಾ ಬಂದಿದ್ದು, ಪ್ರತಿ ಬಾರಿ ವಿಶೇಷವಾಗಿ ಗಣಪತಿಯನ್ನು ಪೂಜಿಸುತ್ತಾ ಬರಲಾಗುತ್ತಿದೆ. ಗಣೇಶೋತ್ಸವ ಆಚರಣೆ ಹಿನ್ನೆಲೆಯಲ್ಲಿ ಪ್ರತಿದಿನ ಸಂಜೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ನಾಟಕ, ನೃತ್ಯ, ಗಾಯನ ಮತ್ತು ಆರ್ಕೆಸ್ಟ್ರಾ, ಹರಿ ಕಥೆ ಸೇರಿದಂತೆ ವಿವಿಧ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿತ್ತು. ಪ್ರತಿ ವರ್ಷ ಸಾವಿರಾರು ಭಕ್ತರಿಗೆ ಸಿಹಿ ಊಟದ ವ್ಯವಸ್ಥೆ ಮಾಡಲಾಗುತ್ತಿತ್ತಾದರೂ, ಈ ಬಾರಿ ತರಕಾರಿ ಬಾತ್ ವಿತರಿಸಿ ಗಣೇಶನಿಗೆ ಪೂಜೆ ಸಲ್ಲಿಸಲಾಯಿತು.

ಅನ್ನಸಂತರ್ಪಣೆಗೆ ಚಾಲನೆ ನೀಡಿ ಮಾತನಾಡಿದ ಹಿರಿಯ ಮುಖಂಡ ಹಾಗೂ ಬಸ್ ಮಾಲೀಕ ಪಿ.ಸ್ವಾಮಿನಾಥಗೌಡ, ಕಳೆದ 30 ವರ್ಷಗಳಿಂದಲೂ ಗಣೇಶೋತ್ಸವನ್ನು ಖಾಸಗಿ ಬಸ್ ಏಜೆಂಟರ ಸಂಘದಿಂದ ಏರ್ಪಡಿಸುತ್ತಾ ಬರಲಾಗಿದೆ. ಮುಂದೆಯೂ ಈ ಸಂಪ್ರದಾಯ ಮುಂದುವರೆಸಲಾಗುತ್ತದೆ ಎಂದರು.

ಗಣೇಶ ಚತುರ್ಥಿಯಂದು ಪ್ರತಿಷ್ಠಾಪಿಸಿರುವ ಗಣೇಶನಿಗೆ ನಿತ್ಯ ಪೂಜೆ ನಡೆಯುತ್ತಿದ್ದು, ಭಕ್ತರಿಗೆ ಪ್ರಸಾದದ ವ್ಯವಸ್ಥೆ ಮಾಡಲಾಗುತ್ತಿದೆ. ಸೆ.7 ರಂದು ಸಂಜೆ ಗಣೇಶ ಮೂರ್ತಿಯನ್ನು ಪಟ್ಟಣದ ವಿವಿಧ ಬೀದಿಗಳಲ್ಲಿ ಮೆರವಣಿಗೆ ಮಾಡಿ ನಂತರ ನದಿಯಲ್ಲಿ ವಿಸರ್ಜನೆ ಮಾಡಲಾಗುತ್ತದೆ ಎಂದು ಬಸ್ ಏಜೆಂಟರ ಸಂಘದ ಅಧ್ಯಕ್ಷ ತಿರುಮಕೂಡಲು ಶ್ರೀನಿವಾಸ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಘದ ಗೌರವಾಧ್ಯಕ್ಷ ಹೋಟೆಲ್ ರಾಜಣ್ಣ, ಕಾರ್ಯದರ್ಶಿ ರಾಜಣ್ಣ, ಉಪಾಧ್ಯಕ್ಷ ಕೆ.ಕುಮಾರ್, ಆರ್‌ಟಿಓ ಶಿವಣ್ಣ, ಮಲ್ಲಣ್ಣ, ಶೃಂಗಾರ್ ಉಮೇಶ್ ಶೆಟ್ಟಿ, ಚೆನ್ನೇಗೌಡ, ಹಲಸಹಳ್ಳಿ ಮಹದೇವಸ್ವಾಮಿ, ಬಸ್ ಮಾಲೀಕರಾದ ಜೆ.ರಮೇಶ್, ನಾಗರಾಜು, ಸಂಘದ ನಿರ್ದೇಶಕರಾದ ಮಾಧು, ಮಹದೇವ್, ಲೋಕೇಶ್, ಶೇಷಾದ್ರಿ, ಮಹೇಶ್, ಜಯರಾಮು, ಮಂಜುನಾಥ್, ಗಿರೀಶ್, ಸೂರಿ, ಮಂಜು ಮತ್ತಿತರರಿದ್ದರು.



ಗಣೇಶೋತ್ಸವ ಕಾರ್ಯಕ್ರಮದಲ್ಲಿ ಅನ್ನ ದಾಸೋಹಕ್ಕೆ ಚಾಲನೆ ನೀಡಲಾಯಿತು.

ನಮ್ಮ ಬಾಳಲ್ಲೂ ಅಚ್ಛೆದಿನ್ ಬರುತ್ತಿರಬಹುದು...

ಜಿಎಸ್‌ಟಿ ಕಡಿತಕ್ಕೆ ಬಡವರು, ಮಧ್ಯಮ ವರ್ಗ, ವ್ಯಾಪಾರಿಗಳ ವಿಶ್ವಾಸದ ನುಡಿ

ಮೈಸೂರು, ಸೆ.4– ಕೇಂದ್ರ ಸರ್ಕಾರದ ಜಿಎಸ್‌ಟಿ ಪರಿಷ್ಕರಣೆ ಬಗ್ಗೆ ಮೆಚ್ಚುಗೆ ವ್ಯಕ್ತವಾಗುತ್ತಿದೆ. ದಿನನಿತ್ಯ ಬಳಕೆಯ ಆಹಾರ ಪದಾರ್ಥಗಳಿಗೆ ಜಿಎಸ್‌ಟಿ ವಿಧಿಸದಿರುವುದು, ಅಗತ್ಯ ವಸ್ತುಗಳ ಮೇಲಿನ ಜಿಎಸ್‌ಟಿ ಪ್ರಮಾಣವನ್ನು ಕಡಿಮೆ ಮಾಡಿರುವುದು ಬಡ ಹಾಗೂ ಮಧ್ಯಮ ವರ್ಗದ ಜನಜೀವನ ಸುಧಾರಣೆಗೆ ಸಹಕಾರಿಯಾಗಿದೆ ಎಂದು ಮೈಸೂರಿನ ನಾಗರಿಕರು ಅಭಿಪ್ರಾಯಿಸಿದ್ದಾರೆ.



ಶ್ಲಾಘನೀಯ ಸುಧಾರಣೆ

ಮೋದಿ 2.0 ಸರ್ಕಾರದ ಅತ್ಯಂತ ಅಗತ್ಯವಾದ ಸುಧಾರಣೆಗಳು ಶ್ಲಾಘನೀಯ ಮತ್ತು ಪರಿಣಾಮಕಾರಿ. 12 ಲಕ್ಷದವರೆಗಿನ ಆದಾಯ ತೆರಿಗೆ ವಿನಾಯಿತಿ ನೀಡುವ ನಿರ್ಧಾರ ಮತ್ತು ಇತ್ತೀಚಿನ ಜಿಎಸ್‌ಟಿ ಸುಧಾರಣೆಗಳು, ನಾಗರಿಕರು ಮತ್ತು ವ್ಯವಹಾರಗಳನ್ನು ಬೆಂಬಲಿಸುವ ಸರ್ಕಾರದ ಬದ್ಧತೆಯನ್ನು ಪ್ರದರ್ಶಿಸುತ್ತವೆ.

–**ಡಾ.ಮನು ಶಿವರಾಮ್, ಅರ್ಥಶಾಸ್ತ್ರ ಉಪನ್ಯಾಸಕರು**

ಜಿಎಸ್‌ಟಿ ಭಯ ಸ್ವಲ್ಪ ದೂರವಾಗಿದೆ

ಎಲ್ಲಿ ಹೋದರೂ, ಯಾವುದೇ ವಸ್ತು ಖರೀದಿಸಿದರೂ ಜಿಎಸ್‌ಟಿ ಎಷ್ಟು ಹಾಕುತ್ತಾರೋ ಎಂಬ ಭಯವಿತ್ತು. ಸದ್ಯ ಚಪಾತಿ, ಪರಾಠಗಳಂತಹ ಆಹಾರ ಪದಾರ್ಥಗಳನ್ನು ತೆರಿಗೆ ವ್ಯಾಪ್ತಿಯಿಂದ ಹೊರಗಿಡಲಾಗಿದೆ. ಹಲವು ಅಗತ್ಯ ವಸ್ತುಗಳ ಜಿಎಸ್‌ಟಿ ಪ್ರಮಾಣವನ್ನು ಗಣನೀಯವಾಗಿ ಕಡಿಮೆ ಮಾಡಲಾಗಿದೆ. ಇದರಿಂದ ಬಡವರು ನಿಟ್ಟುಸಿರು ಬಿಡುವಂತಾಗಿದೆ

– ಪ್ರದ್ಯುಮ್ನ, ಹೆಬ್ಬಾಳು

ಸಣ್ಣ ವ್ಯಾಪಾರಿಗಳು ಬಚಾವ್

ಮಾಂಸ, ಸಕ್ಕರೆ ಮಿಠಾಯಿ, ಕರಿದ ಪದಾರ್ಥಗಳು, ಎಳನೀರು ಇನ್ನಿತರ ಪದಾರ್ಥಗಳ ಜಿಎಸ್‌ಟಿ ಪ್ರಮಾಣವನ್ನು ಶೇ.18ರಿಂದ ಶೇ.5ಕ್ಕೆ ಇಳಿಕೆ ಮಾಡಿರುವುದರಿಂದ ತಿಂಡಿ–ತಿನಿಸು ಮಾರಾಟ ಮಾಡಿ ಜೀವನ ನಡೆಸುವ ಸಣ್ಣ ವ್ಯಾಪಾರಿಗಳು ಬಚಾವ್ ಆಗಲಿದ್ದಾರೆ. ಜಿಎಸ್‌ಟಿ ಇಳಿಕೆಯೊಂದಿಗೆ ಬೆಲೆಯೂ ಕಡಿಮೆಯಾಗುವುದರಿಂದ ವ್ಯಾಪಾರ ಸುಧಾರಿಸುತ್ತದೆ.

– ಮಹಾದೇವ, ವ್ಯಾಪಾರಿ

ವಿದ್ಯಾರ್ಥಿಗಳತ್ತ ಗಮನ

ನಕ್ಷೆ, ಚಾರ್ಟ್, ಗ್ಲೋಬ್, ಪೆನ್ಸಿಲ್, ಶಾರ್ಪ್‌ನರ್, ಕ್ರಯಾನ್, ನೋಟ್‌ಬುಕ್, ಎರೇಜರ್ ಇನ್ನಿತರ ಕಲಿಕಾ ಸಾಮಗ್ರಿಗಳ ಮೇಲೂ ಸದ್ಯ ಶೇ.12ರಷ್ಟು ಜಿಎಸ್‌ಟಿ ವಿಧಿಸಲಾಗುತ್ತಿತ್ತು. ಸದ್ಯ ಈಗಿನ ಪರಿಷ್ಕರಣೆಯಲ್ಲಿ ಕಲಿಕಾ ಸಾಮಗ್ರಿಗಳಿಗೆ ಶೂನ್ಯ ಜಿಎಸ್‌ಟಿ ವ್ಯಾಪ್ತಿಗೆ ತರಲಾಗಿದೆ. ಇದರಿಂದ ಬಡ ವಿದ್ಯಾರ್ಥಿಗಳ ಪೋಷಕರಿಗೆ ಸ್ವಲ್ಪ ಉಳಿತಾಯವಾಗಬಹುದು. ಅವಶ್ಯಕತೆ ಇದ್ದವರಿಗೆ ಒಂದು ರೂಪಾಯಿ ಕೂಡ ದೊಡ್ಡದು.

–ಶಶಿಧರ್, ಶಿಕ್ಷಕ

ಸಮಾಧಾನ ತಂದಿದೆ

ಟೂತ್‌ಪೇಸ್ಟ್, ಟೂತ್‌ಪೌಡರ್, ಟೂತ್‌ಬ್ರಶ್, ಸೋಪು, ಹೇರ್ ಆಯಿಲ್, ಶಾಂಪೂ, ಟಾಲ್ಕಮ್ ಪೌಡರ್‌ಗಳು ಸೇರಿದಂತೆ ಪ್ರತಿಯೊಬ್ಬರೂ ದಿನನಿತ್ಯ ಬಳಸುತ್ತೇವೆ. ಈ ವಸ್ತುಗಳಿಗೆ ಶೇ.12ರಿಂದ 18ರಷ್ಟಿದ್ದ ಜಿಎಸ್‌ಟಿಯನ್ನು ಶೇ.5ಕ್ಕೆ ಇಳಿಕೆ ಮಾಡಲಾಗಿದೆ ಎಂದು ಪತ್ರಿಕೆಗಳಲ್ಲಿ ಓದಿದೆ. ಇದು ನಿಜಕ್ಕೂ ಸಂತೋಷದ ಸಂಗತಿ. ನಿತ್ಯ ಬಳಕೆ ವಸ್ತುಗಳ ಬೆಲೆ ಕಡಿಮೆಯಾದರೆ ನಮ್ಮಂತಹ ಬಡವರಿಗೆ ಅನುಕೂಲವಾಗುತ್ತದೆ.

–ಪ್ರಾರ್ಥನಾ, ವಿದ್ಯಾರ್ಥಿನಿ

ಸಿಮೆಂಟ್ ಜೊತೆಗೆ ಕಬ್ಬಿಣದ ತೆರಿಗೆ ಇಳಿಸಬೇಕಿತ್ತು

ಸಿಮೆಂಟ್ ಮೇಲಿನ ಜಿಎಸ್‌ಟಿಯನ್ನು ಶೇ.28ರಿಂದ ಶೇ.18ಕ್ಕೆ ಇಳಿಕೆಯಾಗಿರುವುದು ಖುಷಿಯ ವಿಚಾರ. ಹಾಗೆಯೇ ಕಬ್ಬಿಣ ಇನ್ನಿತರ ನಿರ್ಮಾಣ ಸಾಮಗ್ರಿಗಳ ಮೇಲಿನ ತೆರಿಗೆಯನ್ನೂ ಕಡಿಮೆ ಮಾಡಿದರೆ ಸ್ವಂತ ಸೂರಿನ ಕನಸು ಹೊತ್ತಿರುವ ಹಲವರಿಗೆ ಅನುಕೂಲವಾಗಲಿದೆ. ವೆಚ್ಚ ಕಡಿಮೆಯಾಗುವುದಾದರೆ ನಿರ್ಮಾಣ ಕಾರ್ಯಕ್ಕೆ ಧೈರ್ಯವಾಗಿ ಮುಂದಾಗುತ್ತಾರೆ.

–ವಸಂತ ಕುಮಾರ್, ಮೇಸ್ತ್ರಿ

ವಾಹನ ಕೊಳ್ಳುವ ಕನಸಿಗೆ ಒತ್ತಾಸೆ

ಖಾಸಗಿ ವಲಯದ ನೌಕರರು, ಸಣ್ಣ ಪುಟ್ಟ ವ್ಯಾಪಾರ ಇಲ್ಲವೇ ಕೂಲಿ ಮಾಡುವ ಜನರಿಗೆ ಜೀವನದಲ್ಲಿ ಒಂದು ವಾಹನ ಕೊಳ್ಳುವುದೂ ಮಹತ್ವದ ಕನಸಾಗಿರುತ್ತದೆ. ಇಂತಹವರಿಗೆ 1200 ಸಿಸಿಗಿಂತ ಕಡಿಮೆ ಸಾಮರ್ಥ್ಯದ ಹಾಗೂ 4 ಸಾವಿರ ಎಂಎಂಗಿಂತ ಹೆಚ್ಚು ಉದ್ದ ಇರದ ಪೆಟ್ರೋಲ್, ಎಲ್‌ಪಿಜಿ ಹಾಗೂ ಸಿಎನ್‌ಜಿ ವಾಹನಗಳು, 350 ಸಿಸಿವರೆಗಿನ ಮೋಟಾರ್ ಸೈಕಲ್‌ಗಳ ಮೇಲಿನ ತೆರಿಗೆಯನ್ನು ಶೇ.28ರಿಂದ ಶೇ.18ಕ್ಕೆ ಇಳಿಕೆ ಮಾಡಿರುವುದು ಸಹಾಯವಾಗಬಹುದು. ಟಿವಿ ಸೇರಿದಂತೆ ಗೃಹಬಳಕೆ ಎಲೆಕ್ಟ್ರಾನಿಕ್ಸ್ ಸರಕುಗಳ ತೆರಿಗೆಯನ್ನೂ ಶೇ.10ರಷ್ಟು ಕಡಿಮೆ ಮಾಡಿರುವುದು ಉತ್ತಮವಾಗಿದೆ.

–ಶಾಶ್ವತ್, ಆಟೋಮೊಬೈಲ್ ಅಂಗಡಿ ವ್ಯಾಪಾರಿ

ವಿಮೆ ತೆರಿಗೆ ಇಳಿಕೆ ಸ್ವಾಗತಾರ್ಹ

ವೈಯಕ್ತಿಕ ಆರೋಗ್ಯ ಮತ್ತು ಜೀವ ವಿಮೆ ಮೇಲಿನ ಜಿಎಸ್‌ಟಿಯನ್ನು ಶೇ.18ರಿಂದ ಶೇ.5ಕ್ಕೆ ಇಳಿಕೆ ಮಾಡಿರುವುದು ಸ್ವಾಗತಾರ್ಹವಾಗಿದೆ. ಈ ಮೂಲಕ ವಿಮೆ ಖರೀದಿಗೆ ಜನರನ್ನು ಪ್ರೋತ್ಸಾಹಿಸಿದಂತಾಗಿದೆ. ಅಡುಗೆ ಮನೆ ಸಲಕರಣೆಗಳು, ಬಂಬೂವಿನಿಂದ ತಯಾರಿಸಿದ ಫರ್ನಿಚರ್, ಬೆಣ್ಣೆ ತುಪ್ಪ, ಒಣ ಹಣ್ಣುಗಳು, ಸಾಂದ್ರೀಕರಿಸಿದ ಹಾಲು, 20 ಲೀ. ಬಾಟಲ್‌ಗಳಲ್ಲಿ ಸಂಗ್ರಹಿಸಿದ ಕುಡಿಯುವ ನೀರು, ಹಣ್ಣಿನ ರಸ, ಐಸ್‌ಕ್ರೀಂ, ಪೇಸ್ಟ್ರಿ, ಬಿಸ್ಕತ್ತುಗಳು, ಕಾರ್ನ್‌ಫ್ಲೇಕ್ಸ್‌ಗಳ ಮೇಲಿನ ತೆರಿಗೆಯನ್ನು ಶೇ.18ರಿಂದ ಶೇ.5ಕ್ಕೆ ಇಳಿಸಿರುವುದು ಅಭಿನಂದನಾರ್ಹ.

– ರಾಜಶೇಖರಮೂರ್ತಿ, ಖಾಸಗಿ ಕಂಪನಿ ಉದ್ಯೋಗಿ

ಹುಣಸೂರು ನಗರಸಭೆಗೆ ಮಾಲೀಕ್ ಪಾಷ ಅಧ್ಯಕ್ಷ

ಚುನಾವಣೆಯಲ್ಲಿ ಸಾಮಾಜಿಕ ನ್ಯಾಯಕ್ಕೆ ಒತ್ತು ನೀಡಲಾಗಿದೆ: ಶಾಸಕ ಜಿ.ಡಿ.ಹರೀಶ್‌ಗೌಡ

ಹುಣಸೂರು, ಸೆ.4– ಇಲ್ಲಿನ ನಗರಸಭೆ ನೂತನ ಅಧ್ಯಕ್ಷರಾಗಿ 12ನೇ ವಾರ್ಡ್ ಪಕ್ಷೇತರ ಸದಸ್ಯ ಮಾಲೀಕ್ ಪಾಷ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷ ಗಣೇಶ್ ಕುಮಾರಸ್ವಾಮಿ ಅವರ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಗುರುವಾರ ನಗರಸಭೆ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ಮಾಲೀಕ್ ಪಾಷ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಉಪವಿಭಾಗಾಧಿಕಾರಿ ವಿಜಯಕುಮಾರ್ ಘೋಷಿಸಿದರು. ಚುನಾವಣೆಯಲ್ಲಿ ಜೆಡಿಎಸ್‌ನ 7, ಬಿಜೆಪಿ 3, ನಾಲ್ವರು ಪಕ್ಷೇತರರು ಹಾಗೂ ಎಸ್‌ಡಿಪಿಐನ ಇಬ್ಬರು ಸದಸ್ಯರು ಭಾಗವಹಿಸಿದ್ದರೇ, ಕಾಂಗ್ರೆಸ್ ಸದಸ್ಯರು ಗೈರು ಹಾಜರಾಗಿದ್ದರು.

ಶಾಸಕ ಜಿ.ಡಿ.ಹರೀಶ್‌ಗೌಡ ಮಾತನಾಡಿ, ನಗರಸಭೆ ಚುನಾವಣೆ ನಡೆದು 1 ವರ್ಷ ತಡವಾಗಿ ಮೀಸಲಾತಿ ಪ್ರಕಟವಾದರೂ, ಸಾಮಾಜಿಕ ನ್ಯಾಯದ ಪರಿಕಲ್ಪನೆಯಲ್ಲಿ ಎಲ್ಲಾ ವರ್ಗ ಮತ್ತು ಸಮುದಾಯಗಳಿಗೆ ಸ್ಥಾನಮಾನ ಕಲ್ಪಿಸುವ ನಿಟ್ಟಿನಲ್ಲಿ ಮೊದಲ ಅವಧಿಗೆ ಗಾಣಿಗ ಸಮುದಾಯದ ಶರವಣ, ಎರಡನೇ ಅವಧಿಗೆ ಕುರುಬ ಸಮುದಾಯದ ಗಣೇಶ್ ಕುಮಾರಸ್ವಾಮಿ ಹಾಗೂ ಮೂರನೇ ಅವಧಿಗೆ ಪಕ್ಷೇತರ ಸದಸ್ಯ ಮುಸ್ಲಿಂ ಸಮುದಾಯದ ಮಾಲೀಕ್ ಪಾಷ ಅವರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡುವ ಮೂಲಕ ನುಡಿದಂತೆ ನಡೆದಿದ್ದೇನೆ ಎಂದರು.

ನೂತನ ಅಧ್ಯಕ್ಷರು ಎಲ್ಲಾ ಸದಸ್ಯರ ಸಹಕಾರ ಪಡೆದು ಜನತೆಗೆ ಮೂಲ ಸೌಕರ್ಯ ಕಲ್ಪಿಸುವ ಮೂಲಕ ಹುಣಸೂರಿನ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಬೇಕು. ನಾನು ಶಾಸಕನಾಗಿ ಬಂದ ಮೇಲೆ ಕ್ಷೇತ್ರದಲ್ಲಿ ಶಾಂತಿ ನೆಲೆಸಿದ್ದು, ಯಾವುದೇ ಕೋಮು ಗಲಭೆಗಳು ಆಗದೇ ಎಲ್ಲಾ ಆಚರಣೆಗಳು ಸೌಹಾರ್ದತೆಯಿಂದ ನಡೆಯುತ್ತಿವೆ ಎಂದರು.

ನಗರದ ಬಹುತೇಕ ರಸ್ತೆಗಳು ಹಾಳಾಗಿ ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗಿದೆ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಶಾಸಕ ಜಿ.ಡಿ.ಹರೀಶ್‌ಗೌಡ ಈ ಬಗ್ಗೆ ಸದನದಲ್ಲಿ ಮಾತನಾಡಿದಾಗ ಸಂಬಂಧಿಸಿದ ಸಚಿವರು 1.6 ಕೋಟಿ ಅನುದಾನ ನೀಡಿದ್ದು, ಶೀಘ್ರ ಟೆಂಡರ್ ಕರೆದು ನಗರದ ಪ್ರಮುಖ ರಸ್ತೆಗಳ ಮರು ಡಾಂಬರೀಕರಣ ಮತ್ತು ಕೆಲವು ರಸ್ತೆಗಳನ್ನು ದುರಸ್ತಿ ಮಾಡಲಾಗುವುದು ಎಂದರು.


ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಾಲೂಕಿನ ಕಟ್ಟೆಮಳಲವಾಡಿ ಅಣೆಕಟ್ಟೆ ಮತ್ತು ವಡಿಕೆಟ್ಟೆ ನಾಲೆಗಳ ಅಭಿವೃದ್ಧಿಗೆ 139 ಕೋಟಿ ಅನುದಾನ ನೀಡಿದ್ದಾರೆ. ಅಲ್ಲದೇ ಮರೂರ್ ನಾಲೆ ಅಭಿವೃದ್ಧಿಗೆ 9 ಕೋಟಿ ನೀಡಿದ್ದು, ಕಾಮಗಾರಿಗಳು ನಡೆಯುತ್ತಿವೆ. ಅಲ್ಲದೇ ಇತ್ತೀಚೆಗೆ ಬಿಡುಗಡೆಯಾದ 10 ಕೋಟಿ ಅನುದಾನದಿಂದ ಕ್ಷೇತ್ರದಲ್ಲಿ ಆದ್ಯತೆ ಮೇರೆಗೆ ಕೆಲಸಗಳನ್ನು ಮಾಡಲಾಗುತ್ತದೆ ಎಂದರು.

ಇದೇ ವೇಳೆ ನೂತನ ಅಧ್ಯಕ್ಷ ಮಾಲೀಕ್ ಪಾಷ ಅವರನ್ನು ಸದಸ್ಯರು ಅಭಿನಂದಿಸಿದರು. ಬಳಿಕ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಸಭೆಯಲ್ಲಿ ಪೌರಾಯುಕ್ತೆ ಮಾನಸ, ಉಪಾಧ್ಯಕ್ಷೆ ಆಶಾ, ಸಾಮಾಜಿಕ ನ್ಯಾಯ ಸಮಿತಿ ಅಧ್ಯಕ್ಷ ಹರೀಶ್, ಹುಡಾ ಸದಸ್ಯ ಹೆಚ್.ಪಿ.ಸತೀಶ್, ಮಾಜಿ ಅಧ್ಯಕ್ಷರಾದ ಶರವಣ, ಗಣೇಶ್ ಕುಮಾರಸ್ವಾಮಿ ಸೇರಿದಂತೆ ಸದಸ್ಯರು ಹಾಜರಿದ್ದರು.



ಶಾಸಕ ಜಿ.ಡಿ.ಹರೀಶ್ ಗೌಡ ಹಾಗೂ ನಗರಸಭೆ ನೂತನ ಅಧ್ಯಕ್ಷ ಮಾಲಿಕ್ ಪಾಷಾ ಅವರನ್ನು ಸನ್ಮಾನಿಸಲಾಯಿತು.

ಚನ್ನಂಗೆರೆ ಪಿಎಸಿಎಸ್‌ಗೆ ಸಿ.ವೈ.ಅಭಿಲಾಷ್ ಅಧ್ಯಕ್ಷ



ಚೆನ್ನಂಗೆರೆ ಪಿಎಸಿಎಸ್ ಅಧ್ಯಕ್ಷರಾಗಿ ಸಿ.ವೈ.ಅಭಿಲಾಷ್ ಆಯ್ಕೆಯಾದರು.

ಚುಂಚನಕಟ್ಟೆ ಸೆ.4– ಸಾಲಿಗ್ರಾಮ ತಾಲೂಕಿನ ಚನ್ನಂಗೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಸಿ.ವೈ.ಅಭಿಲಾಷ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ಹಿಂದಿನ ಅಧ್ಯಕ್ಷ ವೈ.ಎಸ್.ನಟರಾಜು ಅವರ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಸಂಘದ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ಸಿ.ವೈ.ಅಭಿಲಾಷ್ ಅವರನ್ನು ಹೊರತುಪಡಿಸಿ ಬೇರೆ ಯಾರು ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಕೆ.ಆರ್.ನಗರ ಸಹಕಾರ ಇಲಾಖೆಯ ಸಿಡಿಓ ಎಸ್.ರವಿ ಅವಿರೋಧ ಆಯ್ಕೆಯನ್ನು ಪ್ರಕಟಿಸಿದರು. ಚುನಾವಣೆಗೆ ಸಂಘದ ಸಿಇಓ ಆರ್.ಮಂಜುನಾಥ್ ಸಹಕಾರ ನೀಡಿದರು.

ಚುನಾವಣಾ ಸಭೆಯಲ್ಲಿ ಜಿಲ್ಲಾ ಬ್ಯಾಂಕ್ ಮೇಲ್ವಿಚಾರಕ ಮೂಡಲಕೊಪ್ಪಲು ದಿನೇಶ್, ಸಂಘದ ಉಪಾಧ್ಯಕ್ಷ ಶಂಕರನಾಯಕ, ನಿರ್ದೇಶಕರಾದ ಉಷಾಸಂಜಯ್, ಸಿ.ಹೆಚ್.ಕುಮಾರ್, ಚೆಲುವಯ್ಯ, ತಮ್ಮೇಗೌಡ, ಪುಟ್ಟೇಗೌಡ, ಸಿ.ಕೆ.ಮಲ್ಲಿಕಾರ್ಜುನ, ಸೈಯದ್ ಇಸ್ರಾರ್ ಇದ್ದರು.

ನೂತನ ಅಧ್ಯಕ್ಷ ಸಿ.ವೈ.ಅಭಿಲಾಷ್ ಮಾತನಾಡಿ, ಸಂಘದ ಷೇರುದಾರರ ಸಂಖ್ಯೆಯನ್ನು ಹೆಚ್ಚಿಸುವುದಲ್ಲದೇ ರೈತರಿಗೆ ಅಗತ್ಯವಾದ ರಸಗೊಬ್ಬರ ಮತ್ತು ಭತ್ತದ ಬಿತ್ತನೆ ಬೀಜ ವಿತರಣೆಗೆ ಕ್ರಮ ಕೈಗೊಳ್ಳುವುದರ ಜೊತೆಗೆ ಸಕಾಲದಲ್ಲಿ ಸಾಲ ವಿತರಣೆಗೆ ಒತ್ತು ನೀಡುವುದಾಗಿ ತಿಳಿಸಿದರು.

ಈ ವೇಳೆ ಹೆಚ್.ಟಿ.ರಾಜೇಶ್, ನಾರಾಯಣ್‌ಗೌಡ, ಕಾಂತರಾಜು, ಸದಸ್ಯೆ ರಾಜೇಶ್ವರಿ, ಬಾಪು, ಬೋರೇಗೌಡ, ಪ್ರಕಾಶ್, ಅರವಿಂದ, ಪುಟ್ಟರಾಜ, ಜಗಣ್ಣ, ಲೋಹಿತ್ ಸೇರಿದಂತೆ ಮತ್ತಿತರರು ಅಭಿನಂದಿಸಿದರು.

ಪಿ.ಡಿ.ಮನೋಹರ್ ನಿಧನ



ನಂಜನಗೂಡು, ಸೆ.4– ನಗರದ ಹೆಸರಾಂತ ಪುಟ್ಬಾಲ್ ಆಟಗಾರ, ಕಾಂಗ್ರೆಸ್ ಮುಖಂಡ, ಎಸ್‌ಯುಎಫ್‌ಸಿ ಪುಟ್ಬಾಲ್ ಕ್ಲಬ್ ಪ್ರಧಾನ ಕಾರ್ಯದರ್ಶಿ ಪಿ.ಡಿ.ಮನೋಹರ್ (76) ಗುರುವಾರ ನಿಧನರಾದರು. ಮೃತರು ಪತ್ನಿ, ಶಿಕ್ಷಕಿ ಲತಾ, ಪುತ್ರ ದೀವಿಜ್ ಬಾಲಾಜಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ಮಧ್ಯಾಹ್ನ ನಗರದ ಸ್ಮಶಾನದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶಾಸಕ ದರ್ಶನ್ ಮೃತರ ಅಂತಿಮ ದರ್ಶನ ಪಡೆದು ಮಾತನಾಡಿ, ನಗರದಲ್ಲಿ ಹಲವು ಬಾರಿ ಮೋಟೋಕ್ರಾಸ್ ಬೈಕ್ ರೇಸ್, ರಾಜ್ಯಮಟ್ಟದ ಪುಟ್ಬಾಲ್ ಪಂದ್ಯಾವಳಿ ಆಯೋಜಿಸಿದ್ದ ಮೃತರ ನಿಧನದಿಂದ ಕ್ರೀಡಾಕ್ಷೇತ್ರ ಬಡವಾಗಿದೆ ಎಂದರು.

ಎಂ.ಎನ್.ಭೀಮರಾಜು



ಸರಗೂರು, ಸೆ.4– ತಾಲೂಕು ನಾಮಧಾರಿಗೌಡ ಸಮಾಜದ ಅಧ್ಯಕ್ಷರು, ಕಾಂಗ್ರೆಸ್ ಮುಖಂಡ ಬಿ.ಮಟಕೆರೆ ಎಂ.ಎನ್.ಭೀಮರಾಜು (75) ಬುಧವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಗುರುವಾರ ಮೃತರ ತೋಟದಲ್ಲಿ ಅಂತ್ಯಕ್ರಿಯೆ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಮಿತ್ರ

ಶುಕ್ರವಾರ 5 ಸೆಪ್ಟೆಂಬರ್ 2025

ಮೈಸೂರು ದಸರಾ ಮಹೋತ್ಸವಕ್ಕೆ ಗಣ್ಯರಿಗೆ ಆಹ್ವಾನ











ಮೈಸೂರು ಜಿಲ್ಲಾಡಳಿತದಿಂದ ಗೃಹ ಸಚಿವ ಡಾ. ಜಿ.ಪರಮೇಶ್ವರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಸಚಿವರಾದ ಕೆ.ಜೆ.ಜಾರ್ಜ್, ಕೆ.ವೆಂಕಟೇಶ್, ಬೈರತಿ ಸುರೇಶ್, ಸತೀಶ್ ಜಾರಕಿಹೊಳಿ, ಪ್ರಿಯಾಂಕ್ ಖರ್ಗೆ, ಎನ್.ಚೆಲುವರಾಯಸ್ವಾಮಿ, ರಾಮಲಿಂಗಾರೆಡ್ಡಿ, ಶಾಸಕ ಎ.ಆರ್.ಕೃಷ್ಣಮೂರ್ತಿ ಅವರಿಗೆ ದಸರಾ ಮಹೋತ್ಸವದ ಆಹ್ವಾನ ನೀಡಲಾಯಿತು.

ಅದ್ಧೂರಿ ಮೆರವಣಿಗೆ ಮೂಲಕ 1021 ಗಣಪತಿಗಳ ಸಾಮೂಹಿಕ ವಿಸರ್ಜನೆ

ಮೈಸೂರು, ಸೆ.4(ವಿವಿಹೆಚ್)– ಮೈಸೂರಿನ ಬೃಂದಾವನ ಬಡಾವಣೆ ಶ್ರೀ ಮಹಾಗಣಪತಿ ದೇವಸ್ಥಾನದ ಆವರಣದಲ್ಲಿ ವಿಜೃಂಭಣೆಯ ಬೃಂದಾವನ ಗಣೇಶೋತ್ಸವದಲ್ಲಿ ಪ್ರತಿಷ್ಠಾಪನೆ ಮಾಡಲಾಗಿದ್ದ ಬರೋಬ್ಬರಿ '1021 ಗಣಪತಿ ಮೂರ್ತಿಗಳ ವಿಸರ್ಜನಾ ಮೆರವಣಿಗೆ ಅದ್ದೂರಿಯಾಗಿ ನಡೆಯಿತು.

ಮೈಸೂರು ಬೃಂದಾವನ ಬಡಾವಣೆ ನಾಗರಿಕರ ಹಿತರಕ್ಷಣಾ ವೇದಿಕೆ ವತಿಯಿಂದ ಮೊದಲ ಬಾರಿಗೆ 1021 ಗಣಪತಿ ಮೂರ್ತಿ ಪ್ರತಿಷ್ಠಾಪಿಸಿ ಸತತ 9 ದಿನಗಳ ಕಾಲ ವಿವಿಧ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿತ್ತು. ಅಂತಿಮವಾಗಿ ಗುರುವಾರ (ಸೆ.4) ಸಂಭ್ರಮ ಸಡಗರದ ಗಣಪತಿ ವಿಸರ್ಜನಾ ಉತ್ಸವ ಸಂಪನ್ನಗೊಂಡಿತು.



1021 ಗಣಪತಿ ಮೂರ್ತಿಗಳ ವಿಸರ್ಜನಾ ಮೆರವಣಿಗೆಯಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ ಭಾಗವಹಿಸಿದ್ದರು.

1021 ಗಣಪತಿ ಮೂರ್ತಿ ವಿಸರ್ಜನಾ ಮೆರವಣಿಗೆಗೆ ಮಾಜಿ ಸಂಸದ ಪ್ರತಾಪ್ ಸಿಂಹ ಸಾಥ್ ನೀಡಿದರು. ಶ್ರೀ ಮಹಾ ಗಣಪತಿ ದೇವಸ್ಥಾನದ ಆವರಣದಲ್ಲಿ ಜೀಪಿನಲ್ಲಿದ್ದ ಉತ್ಸವ ಮೂರ್ತಿಗೆ ಅವರು ಪುಷ್ಪಾರ್ಚನೆ ಮಾಡಿದರು. ವಿಶೇಷ ಕಾರ್ಯಕ್ರಮದ ಮೂಲಕ ನಮ್ಮ ಸಂಸ್ಕೃತಿಯನ್ನು ಮತ್ತಷ್ಟು ವಿಸ್ತರಿಸುವ ಕೆಲಸ ಆಗುತ್ತಿದ್ದು, ಈ ಕಾರ್ಯವನ್ನು ಮುಂದುವರೆಸುವಂತೆಯೂ ಅದಕ್ಕೆ ಅಗತ್ಯ ಸಹಕಾರ ನೀಡುವ ಭರವಸೆಯನ್ನು ಅವರು ನೀಡಿದರು.

ಒಂದು ಅಡಿ ಎತ್ತರದಿಂದ ಹಿಡಿದು ಆರೇಳು ಅಡಿ ಎತ್ತರದವರೆಗಿನ ಅತ್ಯಾಕರ್ಷಕ ಗಣಪತಿಗಳನ್ನು ಈ ಬಾರಿ ಪ್ರತಿಷ್ಠಾಪಿಸಲಾಗಿತ್ತು. ಇವು ನೋಡುಗರಿಗೆ ಅತೀವ ಭಕ್ತಿ ಭಾವ ಮೂಡಿಸುವಂತಿತ್ತು. ಗಣಪನ ಜೊತೆಗೆ ಶಿವಪಾರ್ವತಿ, ಸುಬ್ರಹ್ಮಣ್ಯರ ಮೂರ್ತಿಗಳು ನಯನ ಮನೋಹರವಾದ ಮೂರ್ತಿಗಳನ್ನು ಎರಡು ಬೃಹದಾಕಾರದ ಲಾರಿಗಳು, ಮೂರು ಗೂಡ್ಸ್ ಆಟೋಗಳು, ಒಂದು ಟ್ರ್ಯಾಕ್ಟರ್‌ಗಳನ್ನು ಬಳಸಿ, ವಾಹನದ ಒಳಭಾಗದಲ್ಲಿ ಹುಲ್ಲು ಹಾಸಿನ ಮೇಲೆ, ಸುಮಾರು 10 ಕ್ಕೂ ಹೆಚ್ಚು ಮಂದಿ ಸತತ 4 ಗಂಟೆಗಳ ಕಾಲ ಅಚ್ಚುಕಟ್ಟಾಗಿ ಗಣಪನ ಮೂರ್ತಿ ಜೋಡಿಸುವ ಕೆಲಸ ಮಾಡಿದರು. ವಿಶೇಷವಾಗಿ ಮೆರವಣಿಗೆಗಾಗಿ ಇರಿಸಲಾಗಿದ್ದ ಗಣಪನ ಮೂರ್ತಿಗೆ ಪ್ರತ್ಯೇಕ ಜೀಪಿನ ವ್ಯವಸ್ಥೆ ಮಾಡಲಾಗಿತ್ತು.

ಬೃಹದಾಕಾರದ ಗಣಪನ ಮೂರ್ತಿಯನ್ನು ಇರಿಸಿದ್ದ ಜೀಪು, ಜೊತೆಗೆ ಗಣಪನ ಮೂರ್ತಿಗಳಿದ್ದ ಟ್ರ್ಯಾಕ್ಟರ್ ಹಾಗೂ ಗೂಡ್ಸ್ ವಾಹನಗಳು ಬೃಂದಾವನ ಬಡಾವಣೆ ಪ್ರತಿಯೊಂದು ರಸ್ತೆಯಲ್ಲಿ ಸಾಗಿದವು. ಬಡಾವಣೆಯ ನಿವಾಸಿಗಳು ಗಣೇಶನಿಗೆ ಹೂವು-ಹಣ್ಣು ನೀಡಿ, ಪೂಜೆ ಸಲ್ಲಿಸಿ ತಮ್ಮ ಭಕ್ತಿ ಮೆರೆದರು. ಈ ಮೆರವಣಿಗೆ ಜೊತೆಯಲ್ಲಿ ಡೊಳ್ಳು, ಚಂಡೆ, ನಾದಸ್ವರ ಮೇಳೈಸಿದವು.

ವಿಸರ್ಜನೆ: ಬೃಂದಾವನ ಬಡಾವಣೆಯಿಂದ ಮೇಟಗಳ್ಳಿ ಮೂಲಕ ರಿಂಗ್ ರಸ್ತೆ, ಕೆಆರ್‌ಎಸ್ ರಸ್ತೆಯಲ್ಲಿ ಸಾಗಿ ಮಂಟಿ ಬಳಿ ವರುಣ ನಾಲೆಯಲ್ಲಿ ಸಾಮೂಹಿಕ ಗಣಪ ವಿಸರ್ಜನೆ ಮಾಡಲಾಯಿತು.

ಈ ವೇಳೆ ಬೃಂದಾವನ ಬಡಾವಣೆ ನಾಗರಿಕರ ಹಿತರಕ್ಷಣಾ ವೇದಿಕೆ ಗೌರವಾಧ್ಯಕ್ಷ ಪಿ.ಎಸ್.ನಟರಾಜು, ಅಧ್ಯಕ್ಷ ಎಂ.ಜೀವನ್ ಪ್ರಕಾಶ್, ಉಪಾಧ್ಯಕ್ಷರಾದ ಬಿ.ಮೀನಾಕ್ಷಿ, ಐ.ಕೆ.ಜ್ಯೋತಿ, ಪ್ರಧಾನ ಕಾರ್ಯದರ್ಶಿ ಎನ್.ರಾಘವೇಂದ್ರ, ಜಂಟಿ ಕಾರ್ಯದರ್ಶಿಗಳಾದ ಎಸ್.ವಿವೇಕಾನಂದ, ಎಸ್.ರೋಹಿತ್, ಸಂಘಟನಾ ಕಾರ್ಯದರ್ಶಿ ಎಂ.ಅಲ್ಲಮಪ್ರಭು, ಖಜಾಂಚಿ ಆರ್.ವಿ.ಕುಮಾರ್, ನಿರ್ದೇಶಕರುಗಳಾದ ಆರ್.ದೇವರಾಜ್, ಬಿ.ಸಿ.ವಿಜಯ್‌ಕುಮಾರ್, ಎಂ.ಜೆ.ಲೋಕೇಶ್, ಕೆ.ಎನ್.ನಟೇಶ್, ಎಸ್.ಮಹೇಶ್‌ರಾಜೇ ಅರಸ್, ಪ್ರವೀಣ್ ಶೆಟ್ಟಿ, ಎಂ.ಎಸ್.ಲೀಲಾ, ಕೆ.ಆರ್.ಶ್ಯಾಮಲ, ವಿ.ರಂಗರಾಜು, ಬಡಾವಣೆ ನಿವಾಸಿಗಳು ಇತರರು ಉಪಸ್ಥಿತರಿದ್ದರು.

ಜಿಎಸ್‌ಟಿ ಕಡಿತದಿಂದ ಹೋಟೆಲ್ ಉದ್ಯಮಕ್ಕೆ ಬಹಳಷ್ಟು ಅನುಕೂಲ

ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಪ್ರತಿಕ್ರಿಯೆ


ಮೈಸೂರು, ಸೆ.4(ಬಿಎಲ್‌ಯು)– ಹಲವು ವಸ್ತುಗಳಿಗೆ ಜಿಎಸ್‌ಟಿ ಕಡಿಮೆ ಮಾಡಿರುವುದರಿಂದ ಹೋಟೆಲ್ ಉದ್ಯಮಕ್ಕೆ ಬಹಳಷ್ಟು ಅನುಕೂಲಗಳಾಗಿದೆ ಎಂದು ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.



ನಿನ್ನೆ ನಡೆದ 56ನೇ ಜಿಎಸ್‌ಟಿ ಕೌನ್ಸಿಲ್ ಸಭೆಯಲ್ಲಿ ಜಿಎಸ್‌ಟಿ ಸುಧಾರಣೆ ಸಂಬಂಧ ತೆಗೆದುಕೊಂಡ ಹಲವು ಮಹತ್ವದ ನಿರ್ಧಾರಗಳಿಂದ ದೇಶದ ಆರ್ಥಿಕತೆ ಚೈತನ್ಯ ಪಡೆಯಲಿದೆ ಎಂದು ಹೇಳಿದ್ದಾರೆ.

ಹೋಟೆಲ್ ವಸತಿ ಗೃಹಗಳ ಕೊಠಡಿಗಳಿಗೆ ವಿಧಿಸುತ್ತಿದ್ದ ಶೇಕಡ 12 ಜಿಎಸ್‌ಟಿಯನ್ನು ಶೇಕಡ 5ಕ್ಕೆ ಇಳಿಕೆ ಮಾಡಲಾಗಿದೆ. ಕೊಠಡಿಗಳ ಬಾಡಿಗೆಯನ್ನು 7,500 ರೂಪಾಯಿಗೆ ಮಿತಿಗೊಳಿಸಿರುವುದರಿಂದ ಕೋಟ್ಯಾಂತರ ಜನರಿಗೆ ಅನುಕೂಲವಾಗಿದೆ. ಅದರಲ್ಲೂ ಸಣ್ಣ ಮತ್ತು ಮಧ್ಯಮ ವರ್ಗ ಉದ್ಯಮಗಳು, ಗ್ರಾಹಕರು, ಪ್ರವಾಸಿಗರಿಗೆ ಪ್ರಯೋಜನಕಾರಿಯಾಗಿದೆ ಎಂದು ತಿಳಿಸಿದ್ದಾರೆ. ಐಸ್‌ಕ್ರೀಂ ಹಾಗೂ ಬೇಕರಿ ಪದಾರ್ಥಗಳಿಗೆ ಈ ಮೊದಲಿದ್ದ ಶೇಕಡ 18 ಜಿಎಸ್‌ಟಿಯನ್ನು ಶೇಕಡ 5ಕ್ಕೆ ಇಳಿಸಲಾಗಿದೆ. ಜಿಎಸ್‌ಟಿ ಕೌನ್ಸಿಲ್ ಸಭೆಯಲ್ಲಿ ಹೀಗೆ ಕೈಗೊಂಡ ಹಲವು ಮಹತ್ವದ ನಿರ್ಧಾರದಿಂದ ಹೋಟೆಲ್ ಮಾತ್ರವಲ್ಲದೆ ಇತರೆ ಉದ್ಯಮ ಕ್ಷೇತ್ರ ಬೆಳವಣಿಗೆ ಹೊಂದಲು ಸಾಧ್ಯವಾಗುತ್ತದೆ ಎಂದು ನಾರಾಯಣಗೌಡ ಹೇಳಿದ್ದಾರೆ.

ಕೇಂದ್ರ ಸಚಿವ ಸೋಮಣ್ಣಗೆ ಲಾಗೈಡ್ ಅಭಿನಂದನೆ



ಮೈಸೂರಿನ ಕೆ.ಆರ್.ಮೊಹಲ್ಲಾದಲ್ಲಿರುವ ಲಾಗೈಡ್ ಕನ್ನಡ ಕಾನೂನು ಮಾಸಪತ್ರಿಕೆ ಗೌರವ ಸಂಪಾದಕರೂ ಆದ ಹಿರಿಯ ವಕೀಲ ಹೆಚ್.ಎನ್.ವೆಂಕಟೇಶ್ ಅವರ ನಿವಾಸಕ್ಕೆ ಗುರುವಾರ ಕೇಂದ್ರ ಸಚಿವ ವಿ.ಸೋಮಣ್ಣ ಭೇಟಿ ನೀಡಿದ್ದರು. ಈ ವೇಳೆ ಅವರಿಗೆ ವೆಂಕಟೇಶ್ ಅವರು ಮೈಸೂರು ಪೇಟ ತೊಡಿಸಿ, ರುದ್ರಾಕ್ಷಿ ಹಾರ ಹಾಕಿ, ರೇಷ್ಮೆ ಶಾಲು ಹೊದಿಸಿ ಆತ್ಮೀಯವಾಗಿ ಸನ್ಮಾನಿಸಿದರು. ಇದೇ ವೇಳೆ ವಕೀಲರ ಸಂಘದ ಅಧ್ಯಕ್ಷ ಎಸ್.ಲೋಕೇಶ್ ಕೂಡ ಹೂಗುಚ್ಛ ನೀಡಿ, ಅಭಿನಂದಿಸಿದರು. ಹಿರಿಯ ವಕೀಲ ಎಂ.ಡಿ.ಹರೀಶ್ ಕುಮಾರ್ ಹೆಗ್ಡೆ ಮತ್ತಿತರರು ಉಪಸ್ಥಿತರಿದ್ದರು.

ಒಳ ಮೀಸಲಾತಿ ಒಂದು ಕುತಂತ್ರ; ಸೆ.7, 'ದುಂಡುಮೇಜಿನ ಸಭೆ'

ಮೈಸೂರು, ಸೆ.4(ಎಸ್‌ಪಿಎನ್)– ಮೈಸೂರು ನಜರ್‌ಬಾದ್‌ನ ಲೋಕೋಪಯೋಗಿ ಇಲಾಖೆ ಅತಿಥಿ ಗೃಹದಲ್ಲಿ ಸೆ.7ರಂದು ಬೆಳಗ್ಗೆ 11 ಗಂಟೆಗೆ 'ಒಳ ಮೀಸಲಾತಿ ಒಂದು ಕುತಂತ್ರ ಮತ್ತು ಬಲಗೈ ಸಮುದಾಯದ ಸಾಂವಿಧಾನಿಕ ಹಕ್ಕು ಬಾಧ್ಯತೆಗಳ ರಕ್ಷಣೆ' ಕುರಿತಾದ 'ದುಂಡುಮೇಜಿನ ಸಭೆ'ಯನ್ನು ಕರ್ನಾಟಕ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ಮತ್ತು ಬೆಂಗಳೂರಿನ ಜೈಭೀಮ್ ಸಾಮಾಜಿಕ ಪರಿವರ್ತನಾ ವೇದಿಕೆ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದೆ ಎಂದು ಸಂರಕ್ಷಣಾ ಸಮಿತಿಯ ರಾಜ್ಯಾಧ್ಯಕ್ಷ ಎನ್.ಭಾಸ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ.9; ಆರೋಗ್ಯ ತಪಾಸಣಾ ಶಿಬಿರ

ಮೈಸೂರು, ಸೆ.4–ಎನ್.ಜೆ.ಎಸ್. ಚಾರಿಟಬಲ್ ಟ್ರಸ್ಟ್, ಮೈಸೂರು ವೀರಶೈವ ಸಜ್ಜನ ಸಂಘದ ಸಂಯುಕ್ತಾಶ್ರಯದಲ್ಲಿ ಸೆ.9(ಮಂಗಳವಾರ) ರಂದು ಬೆಳಗ್ಗೆ 9.30ರಿಂದ ಮಧ್ಯಾಹ್ನ 2ರವರೆಗೆ ಮಂಡಿ ಮೊಹಲ್ಲಾದ ಕಬೀರ್ ರಸ್ತೆ, ಮಂಡಿ ಪೊಲೀಸ್ ಸ್ಟೇಷನ್ ಹತ್ತಿರವಿರುವ ಕಂಠಿ ಮಲ್ಲಣ್ಣನವರ ಕಲ್ಯಾಣ ಮಂದಿರದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 94487 53597, 99161 55453 ಸಂಪರ್ಕಿಸಬಹುದು.



ಮಾವುತರು, ಕಾವಾಡಿಗಳು, ಕುಟುಂಬದವರಿಗೆ ಪಂಚಕರ್ಮ ಚಿಕಿತ್ಸಾ ಯೋಗ

• ಮಂಡಿ, ಸೊಂಟ, ಮೈ-ಕೈ ನೋವಿಗೆ ಮಸಾಜ್ • ಚರ್ಮರೋಗ, ಸಂಧಿವಾತ, ಸ್ತ್ರೀರೋಗಗಳಿಗೂ ಚಿಕಿತ್ಸೆ



ಅರಮನೆಯ ಆವರಣದಲ್ಲಿ ದಸರಾ ಆನೆಗಳ ಮಾವುತರು ಮತ್ತು ಕಾವಾಡಿಗಳಿಗಾಗಿ ತೆರೆದಿರುವ ಆಯುರ್ವೇದ ಚಿಕಿತ್ಸಾ ಕೇಂದ್ರದಲ್ಲಿ ಗಜಪಡೆಯ ಮಾವುತರು, ಕಾವಾಡಿಗಳಿಗೆ ಚಿಕಿತ್ಸೆ ನೀಡುತ್ತಿರುವುದು.

> ದಸರಾ ಗಜಪಡೆಯ ಮಾವುತರು, ಕಾವಾಡಿಗಳು ಶ್ರಮಪಟ್ಟು ಕೆಲಸ ಮಾಡುತ್ತಾರೆ. ಅವರಿಗೆ ಮಂಡಿ, ಸೊಂಟ ನೋವು ಸಾಮಾನ್ಯ. ಈ ಹಿನ್ನೆಲೆಯಲ್ಲಿ ಪಂಚಕರ್ಮ ಚಿಕಿತ್ಸಾ ಕೇಂದ್ರದಲ್ಲಿ ಸೊಂಟ ನೋವಿಗೆ ಕಟಿ ಅಭ್ಯಂಗ, ಮಂಡಿ ನೋವಿಗೆ ಜಾನು ಅಭ್ಯಂಗ ಚಿಕಿತ್ಸೆ ನೀಡಲಾಗುತ್ತದೆ. ಮೈ ಕೈ, ಮೊಣಕೈ, ಭುಜ ನೋವು ನಿವಾರಣೆಗೆ ಔಷಧಿಯುಕ್ತ ಎಣ್ಣೆಯಿಂದ ಮಸಾಜ್ ಮಾಡಲಾಗುತ್ತದೆ. ಇದರಿಂದ ತಾತ್ಕಾಲಿಕ ನೋವು ನಿವಾರಣೆಯಾಗುತ್ತದೆ. ಮಹಿಳೆಯರಿಗೆ ಸ್ತ್ರೀರೋಗ ಸಂಬಂಧಿಸಿದ ಔಷಧಿಯನ್ನು ನೀಡಲಾಗುತ್ತಿದೆ. ಈ ಪಂಚಕರ್ಮ ಚಿಕಿತ್ಸಾ ಕೇಂದ್ರ ಒಂದು ತಿಂಗಳು ಕಾರ್ಯನಿರ್ವಹಿಸಲಿದ್ದು, ಪ್ರತಿದಿನ 9ರಿಂದ ಸಂಜೆ 4.30ರವರೆಗೆ ಚಿಕಿತ್ಸಾ ಸೌಲಭ್ಯ ದೊರೆಯುತ್ತದೆ. ಈಗಾಗಲೇ ಅಗತ್ಯವಾಗಿರುವ ಔಷಧಿಗಳನ್ನು ದಾಸ್ತಾನು ಮಾಡಲಾಗಿದೆ. ಜಿಲ್ಲೆಯ ಬೇರೆ ಬೇರೆ ಆಸ್ಪತ್ರೆಯಲ್ಲಿ ಕೆಲಸ ಮಾಡುವ 8 ಮಂದಿ ವೈದ್ಯರನ್ನು ನೇಮಕ ಮಾಡಲಾಗಿದೆ.
>
> – **ಡಾ.ಸಿ.ರೇಣುಕಾದೇವಿ,** ಜಿಲ್ಲಾ ಆಯುಷ್ ಅಧಿಕಾರಿ

ಮೈಸೂರು, ಸೆ.4(ಎಂಟಿವೈ)– ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ದಸರಾ ಗಜಪಡೆಯೊಂದಿಗೆ ಬಂದು ಅರಮನೆ ಆವರಣದಲ್ಲಿ ಬೀಡುಬಿಟ್ಟಿರುವ ಮಾವುತರು, ಕಾವಾಡಿಗಳು ಹಾಗೂ ಅವರ ಕುಟುಂಬ ಸದಸ್ಯರಿಗಾಗಿ ಆಯುಷ್ ಇಲಾಖೆ ಪಂಚಕರ್ಮ ಚಿಕಿತ್ಸಾ ಕೇಂದ್ರ ಆರಂಭಿಸಿದ್ದು, ಮೈ-ಕೈ ನೋವು ನಿವಾರಣೆ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗೆ ಆಯುರ್ವೇದ ಔಷಧೋಪಚಾರ ಮಾಡಲಾಗುತ್ತಿದೆ.

ಅರಣ್ಯ ಇಲಾಖೆಯ ಕೋರಿಕೆಯ ಮೇರೆಗೆ ಜಿಲ್ಲಾ ಆಯುಷ್ ಇಲಾಖೆಯು ಅರಮನೆಯ ಆವರಣದಲ್ಲಿ ಪಂಚಕರ್ಮ ಚಿಕಿತ್ಸಾ ಕೇಂದ್ರವನ್ನು ತೆರೆದು ದಸರಾ ಆನೆಗಳ ಮಾವುತರು, ಕಾವಾಡಿಗಳು ಹಾಗೂ ಅವರ ಕುಟುಂಬದ ಸದಸ್ಯರ, ಅರಮನೆ ಹಾಗೂ ಅರಣ್ಯ ಇಲಾಖೆಯ ಸಿಬ್ಬಂದಿಯ ಒತ್ತಡ ನಿವಾರಣೆ, ಮಂಡಿ ನೋವು, ಕಾಲು ನೋವು, ಬೆನ್ನು ನೋವು ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳಿಗೆ ಆಯುರ್ವೇದ ಪದ್ಧತಿಯ ಚಿಕಿತ್ಸೆ ನೀಡಲು ಮುಂದಾಗಿದೆ. ಸೆ.4ರಿಂದ ಆರಂಭವಾಗಿರುವ ಪಂಚಕರ್ಮ ಚಿಕಿತ್ಸಾ ಕೇಂದ್ರವನ್ನು ಈ ವಾರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಉದ್ಘಾಟಿಸಲಿದ್ದಾರೆ ಆದರೆ, ಈಗಾಗಲೇ ಚಿಕಿತ್ಸಾ ಸೌಲಭ್ಯ ಆರಂಭವಾಗಿದೆ

ಎಂಟು ವೈದ್ಯರು, ನಾಲ್ವರು ಸಹಾಯಕರು: ದಸರಾ ಗಜಪಡೆಯ ಮಾವುತರು, ಕಾವಾಡಿಗರು ಹಾಗೂ ಕುಟುಂಬದವರು ಇಂಗ್ಲೀಷ್ ಮೆಡಿಸಿನ್‌ನಿಂದ ಅಂತರ ಕಾಯ್ದುಕೊಳ್ಳುವ ಮನಸ್ಥಿತಿ ಹೊಂದಿದ್ದು, ಆಯುರ್ವೇದ ಔಷಧಿಯನ್ನು ಹೆಚ್ಚಾಗಿ ಬಳಸುತ್ತಾರೆ. ಈ ಹಿನ್ನೆಲೆಯಲ್ಲಿ ಮಾವುತರು, ಕಾವಾಡಿಗಳಿಗೆ ವಾರದ ಎಲ್ಲಾ ದಿನಗಳಲ್ಲೂ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಸಿ.ರೇಣುಕಾದೇವಿ, ಪಂಚಕರ್ಮ ಚಿಕಿತ್ಸಾ ಕೇಂದ್ರಕ್ಕೆ ಓರ್ವ ಪುರುಷ ವೈದ್ಯರು, ಆರು ಮಂದಿ ಮಹಿಳಾ ವೈದ್ಯರು, ಇಬ್ಬರು ಸಹಾಯಕರು, ಓರ್ವ ಪುರುಷ, ಒಬ್ಬರು ಮಸಾಜ್ ಸಿಬ್ಬಂದಿಯನ್ನು ನಿಯೋಜಿಸಿದ್ದಾರೆ. ದಿನಕ್ಕೊಬ್ಬ ಮಹಿಳಾ ವೈದ್ಯರು ಈ ಚಿಕಿತ್ಸಾ ಕೇಂದ್ರದಲ್ಲಿ ಕಾರ್ಯ ನಿರ್ವಹಿಸಲಿದ್ದಾರೆ. ವೈದ್ಯರಾದ ಡಾ.ಎಂ.ಸಂದೀಪ್, ಡಾ.ಮಮತಾ, ಡಾ.ಸ್ವರ್ಣಲತಾ, ಡಾ.ಶ್ವೇತಾ, ಡಾ.ರೇಖಾ, ಡಾ.ಪಲ್ಲವಿ, ಡಾ.ದಿವ್ಯಾ, ಡಾ.ರಂಜಿತಾ ಮಾವುತರು, ಕಾವಾಡಿಗಳು ಹಾಗೂ ಅವರ ಕುಟುಂಬ ಸದಸ್ಯರಿಗೆ ಪಂಚಕರ್ಮ ಪದ್ಧತಿಯಲ್ಲಿ ಚಿಕಿತ್ಸೆ ನೀಡಲಿದ್ದಾರೆ.

ಯಾವ ಯಾವ ಸಮಸ್ಯೆಗೆ ಚಿಕಿತ್ಸೆ?: ಮಂಡಿ, ಸೊಂಟ, ಕೈ-ಕಾಲು, ಮೊಣಕೈ, ಬೆನ್ನು ನೋವು, ಚರ್ಮ ರೋಗ, ಸಂಧಿವಾತ, ಶ್ವಾಸಕೋಶದ ಸಮಸ್ಯೆ, ಜ್ವರ, ಸ್ತ್ರೀರೋಗಗಳು, ಕೆಮ್ಮು ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳಿಗೆ ಪಂಚಕರ್ಮ, ಸ್ವೇದ(ಸ್ಟೀಮ್) ಮತ್ತು ಆಯುರ್ವೇದದ ಮೂಲಕ ಚಿಕಿತ್ಸೆ ನೀಡಲು ಜಿಲ್ಲಾ ಆಯುಷ್ ಇಲಾಖೆ ಸಕಲ ಸಿದ್ಧತೆ ಮಾಡಿಕೊಂಡು ಅಗತ್ಯವುಳ್ಳವರಿಗೆ ಚಿಕಿತ್ಸೆ ನೀಡಿ ಉಚಿತವಾಗಿ ಔಷಧಿಯನ್ನು ಸಹ ನೀಡಲಾಗುತ್ತಿದೆ.

ಈ ಚಿಕಿತ್ಸಾ ಶಿಬಿರದಲ್ಲಿ ಸ್ನೇಹ ಪಾನ, ಅಭ್ಯಂಗ, ಮಹಾನಾರಾಯಣ(ನೋವು ನಿವಾರಕ ತೈಲ), ಕ್ಷೀರತೈಲ, ಹೆಡ್ ಮಸಾಜ್, ಅಸಾವಾ(ಕಷಾಯ), ಹರಿಷ್ಟಗಳು(ಮೂಲ ಔಷಧಿಯ ದ್ರಾವಣ) ಸೇರಿದಂತೆ ವಿವಿಧ ಆಯುರ್ವೇದ ಗಿಡ ಮೂಲಿಕೆಗಳಿಂದ ತಯಾರಿಸಿರುವ ದ್ರಾವಣ, ಚೂರ್ಣ, ಪೌಡರ್ ಸೇರಿದಂತೆ ಔಷಧಿಗಳನ್ನು ನೀಡಲಾಗುತ್ತದೆ. ಪ್ರಮುಖವಾಗಿ ಒತ್ತಡ ನಿವಾರಣೆಗೆ ಪಂಚಕರ್ಮ ಚಿಕಿತ್ಸೆ ನೀಡಲು ಉದ್ದೇಶಿಸಲಾಗಿರುವುದರಿಂದ ಕೇಂದ್ರದಲ್ಲಿ ಒಂದು ಪಂಚಕರ್ಮ ಟೇಬಲ್, ಸ್ಟೀಮ್ ಯಂತ್ರ, ಡ್ರೆಸ್ಸಿಂಗ್ ಮೆಟೀರಿಯಲ್, ತೂಕ ಮತ್ತು ಅಳತೆಯ ಸಾಧನ, ರಕ್ತದೊತ್ತಡ ಪರೀಕ್ಷಾ ಯಂತ್ರ ಸೇರಿದಂತೆ ರೋಗಿಗಳ ತಪಾಸಣೆಗೆ ಬೇಕಾದ ಉಪಕರಣಗಳ ವ್ಯವಸ್ಥೆ ಮಾಡಲಾಗಿದೆ.

ಮಸಾಜ್ ಸೌಲಭ್ಯವೂ ಲಭ್ಯ: ಈ ಕೇಂದ್ರದಲ್ಲಿ ಮಾವುತರು, ಕಾವಾಡಿಗಳಿಗೆ ಮಸಾಜ್ ಸೌಲಭ್ಯವನ್ನೂ ಕಲ್ಪಿಸಲಾಗಿದೆ. ಅಲ್ಲದೆ ಬಿದ್ದು ಕಾಲು ಅಥವಾ ಕೈ ಉಳುಕಿಸಿಕೊಂಡರೆ, ಕತ್ತು ಉಳುಕಿದರೂ ಮಸಾಜ್ ಮಾಡುವ ಮೂಲಕ ಸರಿ ಮಾಡಲಾಗುತ್ತಿದೆ ಇದಕ್ಕಾಗಿ ಸ್ಟೀಮ್ ಬಾಕ್ಸ್, ಮಸಾಜ್‌ಗೆ ಮಂಚವನ್ನು ಕೇಂದ್ರದಲ್ಲಿಡಲಾಗಿದೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮದ್ರಾಸಿ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಮದರಾಸಿ(ತ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಬಾಘಿ-4 (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಉಸಿರು (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕೂಲಿ (ಕ)	4 ಪ್ರದರ್ಶನಗಳು
ರಾಜಕಮಲ್	
ಘಾಟಿ (ತ+ತೆ)	2+2 ಪ್ರದರ್ಶನಗಳು
ಸಂಗಂ	
ಸು ಫ್ರಮ್ ಸೋ (ಕ)	4 ಪ್ರದರ್ಶನಗಳು
ಲಿಡೋ	
ನಾನು ಮತ್ತು ಗುಂಡ-2 (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ರುಧಿರಂ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕೂಲಿ (ತ): ಬೆ.7ಕ್ಕೆ, ಮ.3ಕ್ಕೆ, ರಾ.10.15ಕ್ಕೆ, ವಾರ್ –2 (ಹಿಂ): ಬೆ.10.45ಕ್ಕೆ, ಸಂ.6.40ಕ್ಕೆ.
ಸ್ಕ್ರೀನ್ 2	ಕೂಲಿ (ತ): ಬೆ.7ಕ್ಕೆ, ಸು ಫ್ರಂ ಸೋ (ಕ): ಬೆ.10.20ಕ್ಕೆ, ಮ.1.15ಕ್ಕೆ, ಸಂ.4.10ಕ್ಕೆ, ರಾ.7ಕ್ಕೆ, ವಾರ್ –2 (ಹಿಂ): ರಾ.9.50ಕ್ಕೆ.
ಸ್ಕ್ರೀನ್ 3	ಕೂಲಿ (ತ): ಬೆ.7.05ಕ್ಕೆ, ರಾ.8.15ಕ್ಕೆ, ಕೂಲಿ (ಕ): ಬೆ.10.30ಕ್ಕೆ, ಮಹಾವತಾರ ನರಸಿಂಹ (3ಡಿ)(ಕ): ಮ.1.50ಕ್ಕೆ, ವಾರ್ –2 (ಹಿಂ): ಸಂ.4.35ಕ್ಕೆ.
ಸ್ಕ್ರೀನ್ 4	ಕೂಲಿ (ತ): ಬೆ.7ಕ್ಕೆ, ಬೆ.11.55ಕ್ಕೆ, ಮ.3.25ಕ್ಕೆ, ಸಂ.6.45ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಸು ಫ್ರಂ ಸೋ (ಕ): ಬೆ.10ಕ್ಕೆ, ಮ.3.55ಕ್ಕೆ, ವಾರ್–2 (ಹಿಂ): ಮ.12.40ಕ್ಕೆ, ಕೂಲಿ (ಕ): ಸಂ.6.35ಕ್ಕೆ, ಕೂಲಿ (ತ): ರಾ.9.40ಕ್ಕೆ
ಸ್ಕ್ರೀನ್ 2	ಕೂಲಿ (ತ): ಬೆ.6.45ಕ್ಕೆ, ಬೆ.10ಕ್ಕೆ, ಸಂ.4.35ಕ್ಕೆ, ರಾ.7.50ಕ್ಕೆ, ವಾರ್–2 (ಹಿಂ): ಮ.1.15ಕ್ಕೆ.
ಸ್ಕ್ರೀನ್ 3	ವಾರ್–2 (ಹಿಂ): ಬೆ.10.05ಕ್ಕೆ, ಸು ಫ್ರಂ ಸೋ (ಕ): ಮ.1.20ಕ್ಕೆ, ರಾ.7.10ಕ್ಕೆ, ಕೂಲಿ (ಕ): ಸಂ.4ಕ್ಕೆ, ಕೂಲಿ (ತ): ರಾ.9.50ಕ್ಕೆ.
ಸ್ಕ್ರೀನ್ 4	ಕೂಲಿ (ತ): ಬೆ.7ಕ್ಕೆ, ಮಹಾವತಾರ ನರಸಿಂಹ (3ಡಿ)(ಕ): ಬೆ.10.15ಕ್ಕೆ, ಸಂ.4ಕ್ಕೆ, ಕೂಲಿ (ಕ): ಮ.12.45ಕ್ಕೆ, ವಾರ್–2 (ಹಿಂ): ಸಂ.6.35ಕ್ಕೆ, ರಾ.9.55ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ಮಾನ್ಸೂನ್ ರೇಸ್

2ನೇ ದಿನ, ಶುಕ್ರವಾರ, 05–09–2025

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ

I. ವಿರಿಜ ಪ್ಲೇಟ್–1100 ಮೀ. ರೇಟೆಡ್ 00 ರಿಂದ 25. (ಮೈಸೂರ್ ಬೇಸ್ಡ್ ಹಾರ್ಸ್) — ಮ.2.00ಕ್ಕೆ
1 ನಿಂಬಲ್ ಸ್ಪಿರಿಟ್ 2. ದಿ ಗೋಲ್ಡನ್ ಕಪ್

II. ಪೂಣೆ ಪ್ಲೇಟ್–1100 ಮೀ. 3 ವರ್ಷ (ಟರ್ಮ್ಸ್). — ಮ.2.30ಕ್ಕೆ
1 ಸ್ಪ್ಲೆಂಡಿಡ್ ಗೋಲ್ಡ್ 2. ಮಿಡ್ ಲೈಟ್ ಬ್ಲೂ

III. ಸೋಮನಾಥಪುರ ಪ್ಲೇಟ್ ಡಿII–1400 ಮೀ. ರೇಟೆಡ್ 20 ರಿಂದ 45. — ಮ.3.00ಕ್ಕೆ
1 ಪವರ್ ಆಫ್ ಗೋಲ್ಡ್ 2 ಕಾರ್ ಟೇರ್

IV. J.H.ಪಾಲಿ ಮೆಮೋರಿಯಲ್ ಟ್ರೋಫಿ–1600 ಮೀ. ರೇಟೆಡ್ 40 ರಿಂದ 65. — ಮ.3.30ಕ್ಕೆ
1. ಎಲ್‌ಫಿನ್ ನೈಟ್ 2. ವಿನ್‌ಫೀಲ್ಡ್

V. H.H. ಶ್ರೀ ಕೃಷ್ಣರಾಜ ಒಡೆಯರ್ ಮೆಮೋರಿಯಲ್ ಟ್ರೋಫಿ–1400 ಮೀ. 4 ವರ್ಷ (ಟರ್ಮ್ಸ್). — ಸಂ.4.00ಕ್ಕೆ
1 ಆಫ್ರಿಕನ್ ಗೋಲ್ಡ್ 2. ಚಾಂಪಿಯನ್ಸ್ ವೇ

VI. ಲವಸ ಪ್ಲೇಟ್–1400 ಮೀ. ರೇಟೆಡ್ 60 ಮತ್ತು ಮೇಲ್ಪಟ್ಟ. — ಸಂ.4.30ಕ್ಕೆ
1. ಡಾನ್ ಕಾರ್‌ಲೋಸ್ 2. ಕ್ರಾಸ್ ವಾಟರ್

VII. ಸೋಮನಾಥಪುರ ಪ್ಲೇಟ್ ಡಿI–1400 ಮೀ. ರೇಟೆಡ್ 20 ರಿಂದ 45. — ಸಂ.5.00ಕ್ಕೆ
1. ಕಾರ್ಟ್ ಲವ್ 2. ಮಾಂಟೇರಿಯೊ

ದಿನದ ಅತ್ಯುತ್ತಮ	ಪವರ್ ಆಫ್ ಗೋಲ್ಡ್
ಡಬ್ಬಲ್	ಎಲ್‌ಫಿನ್ ನೈಟ್, ಆಫ್ರಿಕನ್ ಗೋಲ್ಡ್
ಜಾಕ್‌ಪಾಟ್	3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್	4, 5, 6 ಮತ್ತು 7
I ಟ್ರೆಬಲ್	2, 3 ಮತ್ತು 4
II ಟ್ರೆಬಲ್	5, 6 ಮತ್ತು 7
ಎಕ್ಸ್‌ಆಕ್ಟ್	1 ರಿಂದ 7

ಟಿಪ್‌ಸ್ಟರ್ ಪಿಜಿಸಿ

ನಾಳೆ ಮೂರು ಕಿರು ಚಿತ್ರಗಳ ಪ್ರದರ್ಶನ

ಮೈಸೂರು, ಸೆ 4– ಮೈಸೂರು ಸಿನಿಮಾ ಸೊಸೈಟಿ ವತಿಯಿಂದ ಸೆಪ್ಟೆಂಬರ್ 6ರಂದು ಸಂಜೆ ಮೂರು ಕಿರುಚಿತ್ರಗಳ ವಿಶೇಷ ಪ್ರದರ್ಶನವನ್ನು ಸರಸ್ವತಿಪುರಂನ ಮೈಸೂರು ಸಿನಿಮಾ ಸೊಸೈಟಿ, ಸುಮಾಶ್ರೀ ಆರ್ಕೇಡ್, 2ನೇ ಮಹಡಿ ಇಲ್ಲಿ ಏರ್ಪಡಿಸಲಾಗಿದೆ. ಅಂದು ಸಂಜೆ 7 ರಿಂದ 8 ಗಂಟೆಯವರೆಗೆ ಕಾದಿರುವೆ, ಲಾಸ್ಟ್ ಇನ್ ಟೆಲಿಪೋರ್ಟೇಶನ್ ಮತ್ತು ತಿಂಡಿಬಿಟ್ಟು ಕೇಟರಿಂಗ್ ಸರ್ವೀಸ್ ಚಿತ್ರಗಳ ಪ್ರದರ್ಶನ ನಡೆಯಲಿದೆ. ವಿವರಗಳಿಗೆ 99805 96824 ಸಂಪರ್ಕಿಸಬಹುದು.

ಯೂಟ್ಯೂಬರ್ ಸಮೀರ್ ಮನೆ ಮೇಲೆ ಪೊಲೀಸರ ದಾಳಿ

ಮಹತ್ವದ ಸಾಕ್ಷ್ಯಗಳು ವಶಕ್ಕೆ

ಬೆಂಗಳೂರು, ಸೆ.4– ಧರ್ಮಸ್ಥಳ ಕ್ಷೇತ್ರದ ಬಗ್ಗೆ ತಪ್ಪು ಮಾಹಿತಿ ನೀಡಿ ಸಾರ್ವಜನಿಕರನ್ನು ಪ್ರಚೋದಿಸಿದ ಆರೋಪಕ್ಕೆ ಸಂಬಂಧಿಸಿದಂತೆ ಯೂಟ್ಯೂಬರ್ ಎಂ. ಡಿ. ಸಮೀರ್ ವಿರುದ್ಧ ಧರ್ಮಸ್ಥಳ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣ ಸಂಬಂಧ ಇಂದು ಬೆಳ್ತಂಗಡಿ ಪೊಲೀಸರು ಸಮೀರ್ ಮನೆ ಶೋಧ ನಡೆಸಿದ್ದು, ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದಿದ್ದಾರೆ.



ಬೆಳ್ತಂಗಡಿ ಸಿವಿಲ್ ನ್ಯಾಯಾಲಯದಿಂದ ಸರ್ಚ್ ವಾರಂಟ್ ತಂದಿದ್ದ ಬೆಳ್ತಂಗಡಿ ಗ್ರಾಮಾಂತರ ಠಾಣೆ ಸರ್ಕಲ್ ಇನ್ಸ್‌ಪೆಕ್ಟರ್ ನಾಗೇಶ್ ಮಧ್ಯಾಹ್ನ 12 ಗಂಟೆ ಸುಮಾರಿಗೆ ಸಮೀರ್ ಮನೆ ಬಡಿದಿದ್ದಾರೆ. ಯಾವುದೇ ರಿಪ್ಲೆ ಬಾರದಿದ್ದಾಗ ಸಮೀರ್‌ಗೆ ಕರೆ ಮಾಡಿ ಕೋರ್ಟ್ ಸರ್ಚ್ ವಾರಂಟ್ ಇದ್ದು, ಸಹಕಾರಕ್ಕೆ ಸೂಚಿಸಿದ್ದಾರೆ.

ಕೆಲ ಹೊತ್ತಿನಲ್ಲಿಯೇ ಹಾಜರಾದ ಸಮೀರ್ ಮನೆಯಲ್ಲಿ ಪೊಲೀಸರು ಸ್ಥಳ ಮಹಜರ್ ನಡೆಸಿದ್ದಾರೆ. ಧರ್ಮಸ್ಥಳ ಎಐ ಆಡಿಯೋ ಕ್ರಿಯೇಟ್ ಮಾಡಿದ ಸ್ಥಳ, ಬಳಸಿದ ಎಲೆಕ್ಟ್ರಾನಿಕ್ ಸಾಧನಗಳು, ಆ್ಯಪ್‌ಗಳು, ಲ್ಯಾಪ್‌ಟಾಪ್, ಕಂಪ್ಯೂಟರ್, ಹಾರ್ಡ್ ಡಿಸ್ಕ್, ಮೊಬೈಲ್ ಸೇರಿದಂತೆ ಅನೇಕ ಸಾಕ್ಷ್ಯಗಳನ್ನು ಪತ್ತೆ ಮಾಡಿದ್ದು, ಪಂಚರ ಸಮ್ಮುಖದಲ್ಲಿ ಸೀಜ್ ಮಾಡಿದ್ದಾರೆ.

ಧರ್ಮಸ್ಥಳ ಸಂಬಂಧ ಎಐ ವಿಡಿಯೋ ಸೃಷ್ಟಿಗೆ ಮಾಹಿತಿ ನೀಡಿ ಸಹಕರಿಸಿದ ವ್ಯಕ್ತಿಗಳು, ಅವರು ನೀಡಿದ ವಿಡಿಯೋ, ಆಡಿಯೋ, ಫೋಟೋ ಸೇರಿದಂತೆ ದಾಖಲೆಗಳ ಬಗ್ಗೆ ವಿಚಾರಣೆ ನಡೆಸಿದ್ದಾರೆ. ಇದೆಲ್ಲದಕ್ಕೂ ಮುಖ್ಯವಾಗಿ ಎಲೆಕ್ಟ್ರಾನಿಕ್ ಉಪಕರಣಗಳ ಖರೀದಿ, ವಿಡಿಯೋ ಸೃಷ್ಟಿಗೆ ಕೆಲಸ ಮಾಡಿದವರ ಸಂಬಳದ ಮೂಲ ಸೇರಿದಂತೆ ಅಕ್ಕಪಕ್ಕದ ಮನೆಯವರ ಬಳಿಯು ಪೊಲೀಸರು ಯೂಟ್ಯೂಬರ್ ಸಮೀರ್ ಬಗ್ಗೆ ಮಾಹಿತಿ ಕಲೆ ಹಾಕಿದ್ದಾರೆ. ಸಾಲದಕ್ಕೆ ವ್ಯಕ್ತಿಯೊಬ್ಬನನ್ನು ಕರೆತಂದು ವಿಚಾರಣೆ ಕೂಡ ನಡೆಸಿದ್ದಾರೆ.

IN THE COURT OF THE PRINCIPAL DISTRICT & SESSION JUDGE AT MYSORE
Commercial O.S. No. 229/2024

Plaintiff : CANARA BANK
V/s
Defendant : Sri. B.L.Girish

To, Defendant : Sri. B.L.Girish S/o L. Lingegowda R/at No.890, 4th Main, 7th Cross, E&F Block, Ramakrishna Nagara, Mysore-22

SUMMONS TO DEFENDANT UNDER ORDER V RULE 20 OF C.P.C BY NEWS PAPER PUBLICATION

WHEREAS, the Plaintiff Canara Bank, Vivekanda Nagara Branch, Mysore has instituted the above Suit against you as Defendant for recovery of a Sum of Rs. 16,26,827/ with interest and Costs. You are hereby summoned to appear either in person or by a Pleader duly instructed by you on 15/10/2025 at 11.00 A.M, before the Hon'ble court to answer the said claim, in default the above suit will be determined ex-parte.

Given under my hand and seal this Court dated this 23/08/2025 at Mysore

By Order of the Court
Sd/- Chief Administrative Officer
District & Sessions Court, Mysuru

Advocate for Plaintiff
Sd/- D.B. PRAVEEN. B.A.L.L.B.
Advocate, KAR 2085/2007
#178/1, 1st Floor, 11th Main,
5th Cross, Near Javaregowda Park,
Saraswathipuram, Mysore.
Place: Mysore Date: 23-08-2025

ಸಾರ್ವಜನಿಕ ಪ್ರಕಟಣೆ

ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತನ್ನು, ನನ್ನ ಕಕ್ಷಿದಾರರು ಅದರ ಇಂದಿನ ಮಾಲೀಕರಿಂದ ಖರೀದಿಸಲು ಉದ್ದೇಶಿಸಿರುತ್ತಾರೆ,

ಷೆಡ್ಯೂಲ್ ಸ್ವತ್ತಿನ ಮೇಲೆ ಯಾರಿಗಾದಾರೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಭಾಗಾಂಶ, ಋಣ, ವ್ಯಾಜ್ಯ, ಬಾಧ್ಯತೆಗಳು ಇದ್ದಲ್ಲಿ, ಇಂದಿನಿಂದ ಏಳು (07) ದಿನಗಳ ಒಳಗೆ ತಮ್ಮ ಲಿಖಿತ ತಕರಾರು ಮತ್ತು ಪೂರಕ ದಾಖಲಾತಿಗಳನ್ನು ಈ ಕೆಳಗೆ ಸಹಿ ಮಾಡಿದವರಿಗೆ ಸಲ್ಲಿಸತಕ್ಕದ್ದು. ಒಂದು ವೇಳೆ ಈ ಅವಧಿಯಲ್ಲಿ ಯಾವುದೇ ತಕರಾರುಗಳು ಈ ಕೆಳಗೆ ಸಹಿ ಮಾಡಿದವರಿಗೆ ಬಾರದಿದ್ದಲ್ಲಿ, ಷೆಡ್ಯೂಲ್ ಸ್ವತ್ತಿನ ಮೇಲೆ ಇತರ ಯಾರಿಗೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಭಾಗಾಂಶ, ಋಣ, ವ್ಯಾಜ್ಯ, ಬಾಧ್ಯತೆಗಳು ಇರುವುದಿಲ್ಲ ಮತ್ತು ಷೆಡ್ಯೂಲ್ ಸ್ವತ್ತನ್ನು ಮಾರಾಟ ಮಾಡಲು ಸ್ವತ್ತಿನ ಮಾಲೀಕರು ಪೂರ್ಣ ಹಕ್ಕುಳ್ಳವರಾಗಿರುತ್ತಾರೆ ಎಂದು ಪರಿಗಣಿಸಿ ಕ್ರಯದ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು. ಆನಂತರ ಬರುವ ಮೇಲ್ಕಂಡ ಯಾವುದೇ ರೀತಿಯ ಆಕ್ಷೇಪಣೆಗಳಿಗೆ ನನ್ನ ಕಕ್ಷಿದಾರರು ನಿರ್ಬಂಧಿತರಾಗುವುದಿಲ್ಲ.

ಷೆಡ್ಯೂಲ್

ಮೈಸೂರು ನಗರ, ನಜರ್‌ಬಾದ್ ಮೊಹಲ್ಲಾ, ಸಿದ್ಧಾರ್ಥನಗರ, ಬುದ್ಧ ಮಾರ್ಗ, ಇಲ್ಲಿರುವ ಪೂರ್ವ–ಪಶ್ಚಿಮ: 9.144018 ಮೀಟರ್; ಉತ್ತರ–ದಕ್ಷಿಣ: 15.240030 ಮೀಟರ್ ; ಒಟ್ಟು ವಿಸ್ತೀರ್ಣ: 139.3551 ಚದರ ಮೀಟರ್ ಅಳತೆಯ ಆಸ್ತಿ ಸಂಖ್ಯೆ: 67/B. (ನಮೂನೆ–2: ಸ್ವತ್ತಿನ ಸಂಖ್ಯೆ: 63-2-556-326) ಮತ್ತು ಇದರಲ್ಲಿ ಕಟ್ಟಿರುವ 92.903 ಚದರ ಮೀಟರ್ ಅಳತೆಯ ಕಟ್ಟಡ, ಇದಕ್ಕೆ ಚಕ್ಕುಬಂದಿ: ಪೂರ್ವಕ್ಕೆ: ನಿವೇಶನ ಸಂಖ್ಯೆ: 68/B ; ಪಶ್ಚಿಮಕ್ಕೆ: ನಿವೇಶನ ಸಂಖ್ಯೆ: 66/B ; ಉತ್ತರಕ್ಕೆ: ರಸ್ತೆ ; ದಕ್ಷಿಣಕ್ಕೆ: ನಿವೇಶನ ಸಂಖ್ಯೆ: 53/A.

Sd/- M.N. Prakash Kalappa,
Advocate,
KAR-1996-2000, Advocate & Legal Consultant, #2-3, First Floor, PRI Complex, New Sayyaji Rao Road, Fort Mohalla, Mysore-570 004.
Mob: 9343112535. Email: mnprakashkalappa@gmail.com
ಮೈಸೂರು, ದಿನಾಂಕ: 4–9–2025

PUBLIC NOTICE

The public at large is hereby notified that my client Sri RAGHAVENDRA.S.N, S/o. Sri.Narayanaswamy, intends to purchase the schedule mentioned property from Sri RAJE GOWDA urf Kittegowda and others. And the said Sri.RAJE GOWDA urf Kittegowda and others have executed a registered Sale Agreement with possession dated: 22-08-2025 in favour of my client Sri RAGHAVENDRA.S.N and the same has been duly registered as document No.SRP-1-0368-2025-26 of Book-1 stored at Electronic form of Data Cell, Sub Registrar, Srirangapatna and in connecting to the said registered Sale Agreement, a registered General Power of Attorney dated: 22-08-2025 has been executed Sri.RAJE GOWDA urf Kittegowda and others in favour of my client Sri.RAGHAVENDRA.S.N and the same has been duly registered as document No.MYE-4-00453-2025-26 of Book-4 stored at Electronic form of Data Cell, Sub Registrar, Mysore East, Mysore That If any person/s has/have any kind of right, title, interest, objections or claims over the schedule property, they may lodge their claims/objections with the undersigned within 7 days from the date of this notification with the supporting documents by registered post acknowledgement due failing which, my client will take it for granted that there are no claims/ charges from whom so ever. Any claims/ objections received after this stipulated period of 7 days will be considered as no claim and the same will be ignored and my client shall proceed to complete the sale transaction.

SCHEDULE

All that piece and parcel of the Khuski agricultural land bearing survey number 233 total measuring to an extent of 77 acres 39 Guntas out of Which 1.39.00.00 Acres which belongs to Sri RAJE GOWDA urf Kittegowda (as RTC Holder) situated at Dinka Village, Chinakurali Hobli, Pandavapura Taluk, Mandya District and bounded on the: East by: Land belongs to Chennegowda (ಒತ್ತುವರಿ ಜಮೀನು) ; West by: Dinka-Shettahalli Road ; North by: Land belongs to Sri Ramegowda and ಒತ್ತುವರಿ ಜಮೀನು ; South by: Land belongs to Sri Cheluvaiah.

Sd/- Sridhar L. Holla, B.Sc., L.L.B., Advocate
#237, Kshetraiah Road, K.r. Mohalla, Mysore-570 024. Mob: 9844258544, 9902613515. Email: sridharholla@gmail.com
Place: Mysore, Date: 4-9-2025

ಕೊಡಗು ಜಿಲ್ಲಾ ಪಂಚಾಯತ್

ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ

ಅಲ್ಪಾವಧಿ ಟೆಂಡರ್ ಪ್ರಕಟಣೆ 01/2025–26

ಕ್ರ.ಸಂ.ಉನಿಕೊ.. ಯೋಜನೆ /ದ್ರ.ಸಾ.ಜ,ಸಾ/ವಾ.ಬಾ/2025–26
ಮಡಿಕೇರಿ ದಿನಾಂಕ 5–09–2025

ಜಿಲ್ಲೆಯ 74 ಪಶು ವೈದ್ಯ ಸಂಸ್ಥೆಗಳಿಗೆ **M/s Gadag Oxygen Private ltd Gadag** ಇವರಿಂದ ದ್ರವಸಾರಜನಕ ಸರಬರಾಜಗುತ್ತಿರುವ ಪುತ್ತೂರು ತಾಲ್ಲೂಕು ಕೋಳ್ತಿಗೆ ಸೈಲೋ ಕೇಂದ್ರದಿಂದ ಅಕ್ಟೋಬರ್ 2025 ಮಾಹೆಯಿಂದ ಸೆಪ್ಟೆಂಬರ್ 2026ರ ಮಾಹೆಯವರೆಗೆ ಪ್ರತೀ ತಿಂಗಳು ದ್ರವಸಾರಜನಕವನ್ನು ವಾಹನದಲ್ಲಿ ಸಾಗಾಣಿಕೆ ಕೆಲಸಕ್ಕಾಗಿ ಟೆಂಡರ್ ಆಹ್ವಾನಿಸಲಾಗಿದೆ.

1) ದ್ರವಸಾರಜನಕ ಸಾಗಾಣಿಕೆ ಇಟ್ಟ ಅಂದಾಜು ಮೊತ್ತ ರೂ: 4.90 ಲಕ್ಷ. **EMD** ರೂ. 9800=00

2) ಟೆಂಡರ್ ನಮೂನೆ ಪಡೆಯಲು ಕೊನೆಯ ದಿನಾಂಕ 20–9–2025 ಅಪರಾಹ್ನ 12.00 ಗಂಟೆ ವರೆಗೆ ಟೆಂಡರ್ ಪ್ರತಿಗಳ ಬೆಲೆ ರೂ. 500–00 ಮಾತ್ರ.

3) ಭರ್ತಿ ಮಾಡಿದ ಟೆಂಡರ್ ನಮೂನೆ ಸಲ್ಲಿಸಲು ಕೊನೆಯ ದಿನಾಂಕ 20.9.2025 ಅಪರಾಹ್ನ 1.00 ಗಂಟೆ.

4) ಟೆಂಡರ್ ತೆರೆಯುವ ದಿನಾಂಕ 23–9–2025 ಅಪರಾಹ್ನ 3.00 ಗಂಟೆಗೆ

5) ಹೆಚ್ಚಿನ ವಿವರಗಳಿಗಾಗಿ ಈ ಕೆಳಗೆ ಸಹಿ ಮಾಡಿದವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

ಸಹಿ/– (ಡಾ: ಲಿಂಗರಾಜ್ ಹೆಚ್ ದೊಡ್ಡಮನಿ), ಉಪ ನಿರ್ದೇಶಕರು
ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಕೊಡಗು ಜಿಲ್ಲೆ, ಮಡಿಕೇರಿ

ಸ್ಥಾಪನೆ: 2015 Regd. No: 42540 Ph: 8904771073

ದಿ ಭಾವಸಾರ ಕ್ಷತ್ರಿಯ ಹೌಸಿಂಗ್ ಕೋ–ಆಪರೇಟಿವ್ ಸೊಸೈಟಿ ಲಿ.,

ನಂ. 279, ಬೆಂಕಿನವಾಬ ರಸ್ತೆ, ಮಂಡಿ ಮೊಹಲ್ಲಾ, ಮೈಸೂರು – 570 021

ಆಹ್ವಾನ ಪತ್ರಿಕೆ

ಮೇಲ್ಕಂಡ ನಮ್ಮ ಸಂಘದ 2024–2025ನೇ ಸಾಲಿನ 10ನೇ ವಾರ್ಷಿಕ ಮಹಾಸಭೆಯನ್ನು, ದಿನಾಂಕ: 7–9–2025ನೇ ಭಾನುವಾರ ಸಂಜೆ 6 ಗಂಟೆಗೆ ಲಷ್ಕರ್ ಮೊಹಲ್ಲಾದ ಕಬೀರ್ ರಸ್ತೆಯಲ್ಲಿರುವ "ಶ್ರೀ ಪಾಂಡುರಂಗ ವಿಠ್ಠಲ ಸ್ವಾಮಿ" ದೇವಸ್ಥಾನದ ಆವರಣ, ಮೈಸೂರು ಇಲ್ಲಿ ಸಂಘದ ಅಧ್ಯಕ್ಷ ರಾದ ಶ್ರೀ ಆರ್.ವಿ. ಶಿವಾಜಿರಾವ್ ರಂಪೂರೆ ರವರ ಘನ ಅಧ್ಯಕ್ಷತೆಯಲ್ಲಿ ನಡೆಸಲು ತೀರ್ಮಾನಿಸಿದೆ. ಎಲ್ಲಾ ಸದಸ್ಯರಿಗೂ ಆಹ್ವಾನ ಪತ್ರಿಕೆಯನ್ನು ಕಳುಹಿಸಲಾಗಿದ್ದು ಪತ್ರಿಕೆ ತಲುಪದೇ ಇದ್ದಲ್ಲಿ ಇದೇ ಆಹ್ವಾನ ಪತ್ರಿಕೆ ಎಂದು ತಿಳಿದು ದಯಮಾಡಿ ಸದರಿ ಮಹಾಸಭೆಯಲ್ಲಿ ಭಾಗವಹಿಸಬೇಕಾಗಿ ವಿನಂತಿ.

ಆಡಳಿತ ಮಂಡಳಿಯ ಆದೇಶದ ಮೇರೆಗೆ
ಸಹಿ/– ಕಾರ್ಯದರ್ಶಿ ಸಹಿ/– ಶ್ರೀ ಆರ್.ವಿ. ಶಿವಾಜಿರಾವ್ ರಂಪೂರೆ, ಅಧ್ಯಕ್ಷರು.

ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು

ಜೆ.ಎಲ್.ಬಿ ರಸ್ತೆ, ಮೈಸೂರು – 570005, ದೂರವಾಣಿ/ಫ್ಯಾಕ್ಸ್: 0821–2420624

ಸಂಖ್ಯೆ: ಮೈಅಪ್ರಾ/ಅಅ/ಪಿಬಿ/ಟಿಎನ್/12/2025–26 ದಿನಾಂಕ: 01.09.2025

ಅಲ್ಪಾವಧಿ ಇ–ಟೆಂಡರ್ ಪ್ರಕಟಣೆ

(ಕರ್ನಾಟಕ ಸರ್ಕಾರದ ಕೆಪಿಪಿಪಿ ಪೋರ್ಟಲ್ ಮುಖಾಂತರ ಮಾತ್ರ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದ್ಯಾದೇಶ 1999–2000ರ ಪ್ರಕಾರ ಆಕ್ಟ್ 2000 ರ ನಿಯಮದಂತೆ ಸ್ಟಾಂಡರ್ಡ್ ಟೆಂಡರ್ ಡಾಕ್ಯುಮೆಂಟ್ ನಿಯಮದನ್ವಯ ಕೆಪಿಪಿಪಿ ಪೋರ್ಟಲ್ ಮುಖಾಂತರ ರೂ.19.00 ರಿಂದ 25.00 ಲಕ್ಷಗಳ ಅಂದಾಜು ಮೊತ್ತದ ಒಟ್ಟು 04 ಸಂಖ್ಯೆ ಕಾಮಗಾರಿಗಳಿಗೆ ಟೆಂಡರ್ ಅನ್ನು ಆಹ್ವಾನಿಸಲಾಗಿದೆ. ಕೆಪಿಪಿಪಿ ಪೋರ್ಟಲ್‌ನಲ್ಲಿ ದಿನಾಂಕ: **01.09.2025** ರಿಂದ ಪಡೆಯಬಹುದಾಗಿದ್ದು, ಟೆಂಡರ್ ಸಲ್ಲಿಸಲು ದಿನಾಂಕ: **10.09.2025** ರ ಸಂಜೆ **17.30** ಗಂಟೆಯವರೆಗೆ ಸಮಯವನ್ನು ನಿಗಧಿಪಡಿಸಿದ್ದು, ತಾಂತ್ರಿಕ ಬಿಡ್ ನ್ನು ಕ್ರಮವಾಗಿ ದಿನಾಂಕ: **11.09.2025** ರ ಸಂಜೆ **17.30** ರ ನಂತರ ತೆರೆಯಲಾಗುವುದು.

ಅರ್ಹ ನೋಂದಾಯಿತ ಸಿವಿಲ್ ಗುತ್ತಿಗೆದಾರರು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ **http://KPPP.karnataka.gov.in** ಮುಖಾಂತರ ನಿಯಮಾವಳಿಯಂತೆ ಟೆಂಡರ್ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಈ ಕಛೇರಿಯ ದೂರವಾಣಿ ಸಂಖ್ಯೆ **0821–2420624** ರಿಂದ ಹಾಗೂ ಪ್ರಾಧಿಕಾರದ ವೆಬ್ ಸೈಟ್ **www.mudamysore.gov.in** ನಲ್ಲಿ ಪ್ರಕಟಣೆಯ ಮಾಹಿತಿಯನ್ನು ಪಡೆಯಬಹುದು.

ಟಿಪ್ಪಣಿ: ಟೆಂಡರ್ ಸಲ್ಲಿಸುವ ದಿನಾಂಕಗಳು ಬದಲಾಣೆ ಇದ್ದಲ್ಲಿ ಇ–ಪ್ರೊಕ್ಯೂರ್‌ಮೆಂಟ್ ಮುಖಾಂತರ ಇರುವ ದಿನಾಂಕಗಳನ್ನೆ ಪರಿಗಣಿಸುವುದು, ಮತ್ತೆ ದಿನ ಪತ್ರಿಕೆಗಳಲ್ಲಿ ಪ್ರಕಟಿಸುವುದಿಲ್ಲ.

ಸಹಿ/– ಅಧೀಕ್ಷಕ ಅಭಿಯಂತರರು,
ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು.

ವಾಸಾಸಂಇ/ಮೈಸೂರು/902/ಎಸ್‌ಎಸ್‌ಸಿ/2025–26